ಸಂಪುಟ: 04 ಸಂಚಿಕೆ: 292 ಪುಟಗಳು: 08 ಶನಿವಾರ 04 ಜನವರಿ 2025
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833
9448225696 +91 8035841833 ₹5

**ಮುಂಜಾನೆ ಮಾತು**
ಪ್ರಪಂಚದ ಎಲ್ಲಾ ಜ್ಞಾನವನ್ನು ನೀವು ತೆಗೆದುಕೊಳ್ಳಬೇಕು. ನೀವು ಅದನ್ನು ತಲುಪಿ ಹಿಡಿಯಬೇಕು.

# ಉದಯ ವಾಹಿನಿ
UV ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ಮಟನ್ 100 ರೂಪಾಯಿ ಇದ್ದದ್ದು 500 ರೂಪಾಯಿ ಆದ್ರೆ ತಗೋತೀರ



**ಟಿಕೆಟ್ ದರ ಏರಿಕೆ ಬಗ್ಗೆ ಚಲುವರಾಯಸ್ವಾಮಿ ಪ್ರತಿಕ್ರಿಯೆ**

• **ಉದಯವಾಹಿನಿ, ಬೆಂಗಳೂರು**

ಡಿಸೇಲ್, ಅಕ್ಕಿ, ಬಟ್ಟೆಗೆ ಜಾಸ್ತಿ ಆದ್ರೆ ದುಡ್ಡು ಕೊಡ್ತೀರಾ.. ಮಟನ್ 100 ರೂ. ಇದ್ದದ್ದು 500 ರೂ. ಆದ್ರೆ ತಗೋತೀರ ಒಂದು ಸರ್ಕಾರದ ತೀರ್ಮಾನಕ್ಕೆ ಈ ರೀತಿ ಮಾತಾಡೋದು ಸರಿನಾ ಎಂದು ಸಚಿವ ಚಲುವರಾಯಸ್ವಾಮಿ ಪ್ರಶ್ನಿಸಿದ್ದಾರೆ.ಬಸ್ ಟಿಕೆಟ್ ದರ ಏರಿಕೆ ಕುರಿತು ಬೆಂಗಳೂರಿನಲ್ಲಿಂದು ಮಾಧ್ಯ ಮಗಳೊಂದಿಗೆ ಮಾತನಾಡಿದ ಅವರು, ಶಕ್ತಿ ಯೋಜನೆಗೂ ಟಿಕೆಟ್ ದರ ಏರಿಕೆಗೂ ಸಂಬಂಧ ಇಲ್ಲ. ದರ ಪರಿಷ್ಕರಣೆ ಆಗಿ 10 ರಿಂದ 15 ವರ್ಷ ಆಗಿದೆ. ನೀವು ಡೀಸೆಲ್, ಅಕ್ಕಿ, ಬಟ್ಟೆಗೆ ಜಾಸ್ತಿ ಆದ್ರೆ ದುಡ್ಡು ಕೊಡ್ತೀರಾ.. ಮಟನ್ 100 ರೂಪಾಯಿ ಇದ್ದದ್ದು, 500 ರೂಪಾಯಿ ಆದ್ರೆ ತಗೋತೀರ, ಬೇಳೆ, ಎಣ್ಣೆ ತಗೋತೀರ.. ಹಾಗೆ ಸರ್ಕಾರ ಒಂದು ಸಂಸ್ಥೆಗೆ ಎಷ್ಟು ಅಂತ ಸಹಾಯಧನ ಕೊಡೋಕೆ ಆಗುತ್ತೆ ಎಂದು ಪ್ರಶ್ನಿಸಿದ್ದಾರೆ.

ಆಂಧ್ರ, ಕೇರಳ, ತೆಲಂಗಾಣದಲ್ಲಿ ನಮಗಿಂತಲೂ ಹೆಚ್ಚಾಗಿ ಏರಿಕೆ ಮಾಡಿ ಮಾಡಿದ್ದಾರೆ. ಆದ್ರೆ ನಮ್ಮಲ್ಲಿ 10-15 ವರ್ಷಗಳಿಂದ ಪರಿಷ್ಕರಣೆ ಆಗಿಲ್ಲ.

ಅಲ್ಲದೇ 7ನೇ ವೇತನ ಆಯೋಗದಲ್ಲಿ ನೌಕರರಿಗೆ ವೇತನ ಹೆಚ್ಚಳ ಮಾಡಲಾಗಿದೆ. ಹೀಗೆ ಮಾಡಿದಾಗ, ಸಂಸ್ಥೆ ಚೆನ್ನಾಗಿ ನಡೆಯಬೇಕು ಅಂದ್ರೆ, ಗ್ರಾಮೀಣ ಪ್ರದೇಶಕ್ಕೆ ಸೇವೆ ಒದಗಿಸಬೇಕು, ಸಂಸ್ಥೆಗೆ ಮೂಲ ಸೌಕರ್ಯ ಕೊಡಬೇಕು ಅಂದ್ರೆ ದರ ಏರಿಕೆ ಅನಿವಾರ್ಯ. 2-3 ವರ್ಷಕ್ಕೊಮ್ಮೆ ಹೆಚ್ಚಳ ಮಾಡಬೇಕು ಎಂದು ಸಚಿವರು ಹೇಳಿದ್ದಾರೆ.

## ಬೆಳೆ ವಿಮೆ ನ್ಯೂನತೆ ನಿವಾರಿಸಲು ಕ್ರಮ: ಪಲ್ಲಾದ ಜೋಶಿ

• **ಉದಯವಾಹಿನಿ, ಮಂಗಳೂರು**

'ಬೆಳೆ ವಿಮೆಯ ಸರ್ವೆಯ ಅನುಷ್ಠಾನದಲ್ಲಿ ಕೆಲವೊಂದು ನ್ಯೂನತೆಗಳಿವೆ. ತಂತ್ರಜ್ಞಾನದ ನೆರವಿನಿಂದ ಅದನ್ನು ಸರಿಪಡಿಸಿ ಈ ವ್ಯವಸ್ಥೆಯನ್ನು ಇನ್ನಷ್ಟು ರೈತಸ್ನೇಹಿಯನ್ನಾಗಿಸಲು ಕ್ರಮ ವಹಿಸುತ್ತೇವೆ' ಎಂದು ಕೇಂದ್ರದ ಆಹಾರ, ನಾಗರಿಕ ಸರಬರಾಜು, ಗ್ರಾಹಕ ವ್ಯವಹಾರಗಳು, ಹೊಸ ಮತ್ತು ನವೀಕರಿಸಬಲ್ಲ ಇಂಧನ ಸಚಿವ ಪ್ರಲ್ಹಾದ ವಿ. ಜೋಶಿ ಹೇಳಿದರು. ಇ 'ಬೆಳೆ ವಿಮೆ ಹಾಗೂ ಡಿಎಪಿ ರಸಗೊಬ್ಬರಗಳಿಗೆ ನೀಡುವ ಸಬ್ಸಿಡಿಯನ್ನು ಮುಂದುವರಿಸುವ ಮಹತ್ವ ತೀರ್ಮಾನವನ್ನು ಕೇಂದ್ರ ಸರ್ಕಾರವು ಹೊಸವರ್ಷದ ಆರಂಭದಲ್ಲಿ ಕೈಗೊಂಡಿದೆ' ಎಂದರು. 'ರಾಜ್ಯದಲ್ಲಿ ದುರಾಡಳಿತ ಹಾಗೂ ಭ್ರಷ್ಟಾಚಾರ ತೀವ್ರಸ್ವರೂಪ ಪಡೆದಿದೆ. ಹಿಂದೆ ರಾಹುಲ್ ಗಾಂಧಿಯವರು ಗ್ಯಾರಂಟಿ ಯೋಜನೆಯ ಹಣ ಕಟಾಕಟ್ ಎಂದು ಫಲಾನುಭವಿಗಳ ಖಾತೆಗೆ ಹಾಕುತ್ತೇವೆ ಎಂದಿದ್ದರು. ಇಲ್ಲಿನ ನಾಯಕರು ಈಗ ಜನರ ಹಣವನ್ನು ನುಂಗಿ ಹಾಕುತ್ತಿದ್ದಾರೆ. ವಿಶೇಷ ಘಟಕ ಯೋಜನೆ ಮತ್ತು ಬುಡಕಟ್ಟು ಉಪಯೋಜನೆಗೆ (ಎಸ್‌ಪಿ-ಟಿಎಸ್‌ಪಿ) ಮೀಸಲಿಟ್ಟ ಅನುದಾನವನ್ನೂ ಗ್ಯಾರಂಟಿಗೆ ಬಳಸುತ್ತಿದ್ದಾರೆ ಎಂದರು.



## ಯಾವುದೇ ಹಂತದಲ್ಲಿ ಸರ್ಕಾರ ಪತನ: ಶೆಟ್ಟರ್ ಭವಿಷ್ಯ

• **ಉದಯವಾಹಿನಿ, ಬೆಳಗಾವಿ**

'ರಾಜ್ಯದಲ್ಲಿ ಮುಖ್ಯಮಂತ್ರಿ ಮತ್ತು ಉಪಮುಖ್ಯಮಂತ್ರಿ ಮಧ್ಯೆ ಆಂತರಿಕ ತಿಕ್ಕಾಟ ಶುರುವಾಗಿದೆ. ಯಾವುದೇ ಹಂತದಲ್ಲಿ ಅಸಮಾಧಾನ ಸ್ಫೋಟವಾಗಿ ಸರ್ಕಾರ ಪತನವಾಗಬಹುದು' ಎಂದು ಸಂಸದ ಜಗದೀಶ ಶೆಟ್ಟರ್ ಹೇಳಿದರು. 'ಈ ಆಂತರಿಕ ತಿಕ್ಕಾಟ ಇಂದಲ್ಲ,ಸರ್ಕಾರದ ಮೇಲೆ ಪರಿಣಾಮ ಬೀರುತ್ತದೆ ಎಂದು ಮೊದಲೇ ಹೇಳಿದ್ದೆ. ಈಗ ಡಿ.ಕೆ. ಶಿವಕುಮಾರ್ ವಿದೇಶ ಪ್ರವಾಸಕ್ಕೆ ಹೋದಾಗ, ಸತೀಶ ಜಾರಕಿಹೊಳಿ ಮನೆಗೆ ಸಿದ್ದರಾಮಯ್ಯ ಹೋಗಿದ್ದಾರೆ.

ಕೆಪಿಸಿಸಿ ಅಧ್ಯಕ್ಷರು ಬದಲಾಗಬೇಕು ಎಂದು ಸತೀಶ ಹೇಳಿದ್ದಾರೆ. ಅವರು ಹೇಳಿಕೆ ಕೊಡುವುದು ಔತಣಕೂಟ ಆಯೋಜಿಸುವುದು, ಅದಕ್ಕೆ ಡಿಸಿಎಂ ಗೈರು ಆಗುವುದನ್ನು ಗಮನಿಸಿದರೆ, ರಾಜ್ಯ ಸರ್ಕಾರ ಉತ್ತಮ ರೀತಿಯಲ್ಲಿ ನಡೆಯುತ್ತಿಲ್ಲ ಎಂಬುದು ಸಾಬೀತಾಗುತ್ತದೆ' ಎಂದರು. 'ಬಹುಮತ ಇದೆ ಎಂಬ ಕಾರಣಕ್ಕೆ ಕಾಂಗ್ರೆಸ್ ಸರ್ಕಾರ ಹೇಗೋ ನಡೆದಿದೆ. ಆದರೆ, ಸ್ವತಃ ಕಾಂಗ್ರೆಸ್‌ನ ಶಾಸಕರೇ ಸರ್ಕಾರದ ವಿರುದ್ಧ ಅಸಮಾಧಾನಗೊಂಡಿದ್ದಾರೆ. ಅಭಿವೃದ್ಧಿ ಕೆಲಸ ನಿಂತುಹೋಗಿದೆ. ಹತ್ತಾರು ಸಾವಿರ ಕೋಟಿ ರೂಪಾಯಿ ಬಿಲ್ ಪಾವತಿಯಾಗದೆ ಗುತ್ತಿಗೆದಾರರು ಒತ್ತಡದಲ್ಲಿದ್ದಾರೆ' ಎಂದು ದೂರಿದರು.

## ಕಾಂಗ್ರೆಸ್ ಜಿಲ್ಲಾಧ್ಯಕ್ಷ ನೇಮಕ; ಲಾಬಿ ಇಲ್ಲ: ಸತೀಶ ಜಾರಕಿಹೊಳಿ

• **ಉದಯವಾಹಿನಿ, ಬೆಳಗಾವಿ**

'ಕಾಂಗ್ರೆಸ್ ಬೆಳಗಾವಿ ಗ್ರಾಮೀಣ ಜಿಲ್ಲಾ ಘಟಕದ ಅಧ್ಯಕ್ಷ ಸ್ಥಾನಕ್ಕೆ ಯಾವುದೇ ಲಾಬಿ ಇಲ್ಲ. ನಾವು ಒಬ್ಬರ ಹೆಸರನ್ನೇ ಅಂತಿಮಗೊಳಿಸಿ ಹೈಕಮಾಂಡ್‌ಗೆ ಕಳುಹಿಸಿದ್ದೇವೆ. ಎಲ್ಲಾ ನಾಯಕರೂ ಸೇರಿಕೊಂಡು ಒಂದೇ ಹೆಸರು ಪ್ರಸ್ತಾಪ ಮಾಡಿದ್ದೇವೆ' ಎಂದು ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ ಹೇಳಿದರು. 'ಜಿಲ್ಲಾಧ್ಯಕ್ಷರ ನೇಮಕದಲ್ಲಿ ಯಾವುದೇ ಭಿನ್ನಾಭಿಪ್ರಾಯ ಇಲ್ಲ. ಬೆಳಗಾವಿ ಅಧ್ಯಕ್ಷರ ನೇಮಕ ಪ್ರಕ್ರಿಯೆಯನ್ನು ಯಾರೂ ತಡೆಹಿಡಿದಿಲ್ಲ. ರಾಜ್ಯದಲ್ಲಿ 20 ಜಿಲ್ಲಾ ಘಟಕದ ಅಧ್ಯಕ್ಷರ ನೇಮಕ ಪ್ರಕ್ರಿಯೆ ಬಾಕಿ ಉಳಿದಿದೆ' ಎಂದು ಅವರು ನಗರದಲ್ಲಿ ಶುಕ್ರವಾರ ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದರು.





## ಬಣ ಬಡಿದಾಟ ಶಮನಕ್ಕೆ ಪಿಕಲಾಟ



**ಕಡಿವಾಣ ಹಾಕಿ**

ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಹಾಗೂ ಇತರ ನಾಯಕರುಗಳು ಪ್ರತ್ಯೇಕ ವಕ್ಫ್ ಹೋರಾಟ ನಡೆಸುತ್ತಿರುವ ಭಿನ್ನರ ಬಗ್ಗೆ ದೂರು ನೀಡಿದ್ದು, ಭಿನ್ನರ ಪ್ರತ್ಯೇಕ ಹೋರಾಟಗಳಿಂದ ಪಕ್ಷ ಸಂಘಟನೆಗೆ ಅಡ್ಡಿಯಾಗುತ್ತಿದೆ. ಇದಕ್ಕೆ ಕಡಿವಾಣ ಹಾಕಿ ಎಂದು ಮನವಿ ಮಾಡಿದರು ಎನ್ನಲಾಗಿದೆ. ರಾಜ್ಯ ಬಿಜೆಪಿಯಲ್ಲಿನ ಬೆಳವಣಿಗೆಗಳ ಬಗ್ಗೆ ಎಲ್ಲಾ ಮಾಹಿತಿಯು ನನ್ನಲ್ಲಿದೆ. ಪಕ್ಷ ಮುಖ್ಯ. ಪಕ್ಷದ ಹಿತವನ್ನು ಗಮನದಲ್ಲಿಟ್ಟುಕೊಂಡು ಎಲ್ಲವನ್ನು ಇತ್ಯರ್ಥಪಡಿಸುತ್ತೇನೆ ಎಂಬ ಭರವಸೆಯನ್ನು ಜೆ.ಪಿ. ನಡ್ಡಾ ನೀಡಿದ್ದಾರೆ ಎನ್ನಲಾಗಿದೆ.

- ಬಣ ಬಡಿದಾಟ ಶಮನಕ್ಕೆ ಕಸರತ್ತು
- ಅಮಿತ್ ಶಾ ಭೇಟಿಯಾದ ವಿಜಯೇಂದ್ರ
- ರಾಜ್ಯ ರಾಜಕೀಯದ ಬಗ್ಗೆ ಚರ್ಚೆ
- ಭಿನ್ನಮತೀಯರ ಕಡಿವಾಣಕ್ಕೆ ಮನವಿ
- ಬೆಂಗಳೂರಿಗೆ ದೌಡಾಯಿಸಿ ಬಂದ ಜೆ.ಪಿ. ನಡ್ಡಾ
- ರಾಜ್ಯ ಬಿಜೆಪಿ ನಾಯಕರ ಭಿನ್ನಮತಕ್ಕೆ ಸಿಗಲಿದೆಯೇ ಮುಲಾಮು
- ಬಣ ಬಡಿದಾಟಕ್ಕೆ ಬ್ರೇಕ್

1 ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ. ನಡ್ಡಾ ರಾಜ್ಯ ಪ್ರವಾಸ
2 ನಡ್ಡಾ ಜೊತೆ ಪ್ರತ್ಯೇಕ ಸಭೆ ನಡೆಸಿದ ರಾಜ್ಯಾಧ್ಯಕ್ಷ ಬಿವೈವಿ
3 ಕುತೂಹಲ ಕೆರಳಿಸಿದ ನಡ್ಡಾ-ವಿಜಯೇಂದ್ರ ಪ್ರತ್ಯೇಕ ಮಾತುಕತೆ

**ಬಣ ಬಡಿದಾಟಕ್ಕೆ ಬೀಳುತ್ತಾ ಬ್ರೇಕ್..**

• **ಉದಯವಾಹಿನಿ, ಬೆಂಗಳೂರು**

ಬೆಂಗಳೂರಿನ ಕೆಂಪೇಗೌಡ ವಿಮಾನ ನಿಲ್ದಾಣಕ್ಕೆ ಆಗಮಿಸಿದ ನಡ್ಡಾ ಅವರನ್ನು ಪ್ರತಿಪಕ್ಷ ನಾಯಕ ಆರ್ ಅಶೋಕ್, ಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಮತ್ತು ಯುವ ಮೋರ್ಚಾ ಅಧ್ಯಕ್ಷ ಧೀರಜ್ ಆತ್ಮೀಯವಾಗಿ ಬರಮಾಡಿಕೊಂಡರು. ಬಳಿಕ ವಿಮಾನ ನಿಲ್ದಾಣದ ವಿಐಪಿ ಲಾಂಜ್‌ನಲ್ಲಿ ನಡ್ಡಾ ಅವರು, ರಾಜ್ಯ ಬಿಜೆಪಿ ನಾಯಕನ ಜೊತೆ ನಡ್ಡಾ ಮಾತುಕತೆ ನಡೆಸಿದರು. ಕರ್ನಾಟಕದಲ್ಲಿ ಗ್ಯಾರಂಟಿ ಯೋಜನೆಗಳು ಹೇಗೆ ನಡೆಯುತ್ತಿವೆ ಎಂದು ವಿವರ ಕೇಳಿದರು. ಇದೇ ವೇಳೆ ಪ್ರತಿಕ್ರಿಯಿಸಿದ ರಾಜ್ಯ ಬಿಜೆಪಿ ನಾಯಕರು, ಕಾಂಗ್ರೆಸ್ ಸರ್ಕಾರಕ್ಕೆ ಯೋಜನೆಗಳನ್ನು ಮುಂದುವರಿಸುವುದು ಕಷ್ಟವಾಗುತ್ತಿದೆ ಎಂದು ವಿವರಿಸಿದ್ದಾರೆ. ಇದಲ್ಲದೆ ಬಸ್ ದರ ಹೆಚ್ಚಳದ ಬಗ್ಗೆಯೂ ಮಾಹಿತಿ ನೀಡಿದರು.

ನಂತರ ನಡ್ಡಾ ಅವರು ವಿಮಾನ ನಿಲ್ದಾಣದಿಂದ ಕೆಕೆ ಗೆಸ್ಟ್ ಹೌಸ್‌ನತ್ತ ಪ್ರಯಾಣ ಬೆಳೆಸಿದರು. ಏರ್‌ಪೋರ್ಟ್‌ನಿಂದ ತೆರಳುವ ವೇಳೆ ವಿಜಯೇಂದ್ರ ಅವರನ್ನು ನಡ್ಡಾ ತಮ್ಮ ಜೊತೆ ಕಾರಿನಲ್ಲಿ ಕರೆದೊಯ್ದರು. ಇತರ ನಾಯಕರ ಬಳಿ ಶುಕ್ರವಾರ ಮಾತುಕತೆ ನಡೆಸಿದರು. ಈ ವೇಳೆ ವಿವಿಧ ರಾಜ್ಯ ನಾಯಕರು ಪ್ರತ್ಯೇಕವಾಗಿ ನಡ್ಡಾ ಅವರನ್ನು ಭೇಟಿ ಮಾಡಿದರು. ಬಿಜೆಪಿ ರಾಷ್ಟ್ರೀಯ ಅಧ್ಯಕ್ಷರೂ ಆದ ಕೇಂದ್ರ ಸಚಿವ ಜೆ.ಪಿ.ನಡ್ಡಾ ಬೆಂಗಳೂರಿಗೆ ಆಗಮಿಸಿದ್ದು, ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರೊಂದಿಗೆ ಕೆಲಹೊತ್ತು ಪ್ರತ್ಯೇಕವಾಗಿ ಚರ್ಚೆ ನಡೆಸಿರುವುದು ಕುತೂಹಲ ಮೂಡಿಸಿದೆ.

ರಾಜ್ಯ ಬಿಜೆಪಿಯಲ್ಲಿನ ಬಣ ರಾಜಕೀಯವನ್ನು ಅಂತ್ಯಗೊಳಿಸುವ ನಿಟ್ಟಿನಲ್ಲಿ ಏನೆಲ್ಲಾ ಕ್ರಮಗಳಾಗಬೇಕು, ಪಕ್ಷದ ಆಂತರಿಕ ಸಮಸ್ಯೆಗೆ ಯಾವ ಮದ್ದನ್ನು ಪ್ರಯೋಗಿಸಬೇಕು ಎಂಬ ಬಗ್ಗೆ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ. ನಡ್ಡಾ ರಾಜ್ಯ ಬಿಜೆಪಿ ನಾಯಕರುಗಳ ಜತೆ ಸಮಾಲೋಚನೆ ನಡೆಸಿದರು.

ಬೆಂಗಳೂರಿಗೆ ಆಗಮಿಸಿರುವ ಜೆ.ಪಿ. ನಡ್ಡಾ ಅವರು, ಬಿಜೆಪಿಯ ಬಣ ರಾಜಕೀಯಕ್ಕೆ ಅಂತ್ಯ ಹಾಡಿ ಸಮಸ್ಯೆಗಳಿಗೂ ಪರಿಹಾರವನ್ನು ಹುಡುಕಲು ಏನೆಲ್ಲಾ ಮಾಡಬೇಕು, ಪಕ್ಷದ ಮಟ್ಟದಲ್ಲಿ ಯಾವ ತೀರ್ಮಾನಗಳು ಆಗಬೇಕು, ಯಾವ ರೀತಿ ಪಕ್ಷದಲ್ಲಿನ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಬೇಕು ಎಂಬೆಲ್ಲಾ ವಿಚಾರವಾಗಿ ರಾಜ್ಯ ಬಿಜೆಪಿಯ ಪ್ರಮುಖ ಮುಖಂಡರ ಜತೆ ಸುದೀರ್ಘ ಚರ್ಚೆ ನಡೆಸಿದ್ದಾರೆ.

ಬೆಂಗಳೂರಿನ ಖಾಸಗಿ ಹೋಟೆಲ್‌ನಲ್ಲಿ ವಾಸ್ತವ್ಯ ಹೂಡಿರುವ ಜೆ.ಪಿ. ನಡ್ಡಾ ಅವರನ್ನು ರಾಜ್ಯ ಬಿಜೆಪಿಯ ಹಲವು ನಾಯಕರು ಭೇಟಿ ಮಾಡಿ ಬಿಜೆಪಿಯಲ್ಲಿನ ಬಣ ರಾಜಕೀಯದಿಂದ ಪಕ್ಷ ಸಂಘಟನೆಗೆ ತೊಂದರೆಯಾಗಿದೆ. ಪಕ್ಷದ ವರ್ಚಸ್ಸಿಗೂ ಧಕ್ಕೆಯಾಗಿದೆ. ಇದಕ್ಕೆ ಪರಿಹಾರ ದೊರಕಿಸಿ ಎಂಬ ಮನವಿ ಮಾಡಿದ್ದು, ನಾಯಕರುಗಳ ಅಹವಾಲುಗಳನ್ನು ಆಲಿಸಿರುವ ಜೆ.ಪಿ. ನಡ್ಡಾ ಅವರು ಬಣ ರಾಜಕೀಯಕ್ಕೆ ಪರಿಹಾರ ಕಲ್ಪಿಸುವ ಭರವಸೆ ನೀಡಿದ್ದಾರೆ ಎನ್ನಲಾಗಿದೆ.

**ಜೆ.ಪಿ.ನಡ್ಡಾ ಭೇಟಿ ಮಾಡದ ಭಿನ್ನರು**

ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡಾ ಅವರು ರಾಜ್ಯಕ್ಕೆ ಭೇಟಿ ನೀಡಿದ್ದರೂ ರಾಜ್ಯ ಬಿಜೆಪಿಯಲ್ಲಿನ ಭಿನ್ನ ನಾಯಕರು ನಡ್ಡಾ ಅವರನ್ನು ಭೇಟಿ ಮಾಡಿಲ್ಲ. ಪಕ್ಷದ ರಾಷ್ಟ್ರೀಯ ಅಧ್ಯಕ್ಷರು ರಾಜ್ಯಕ್ಕೆ ಬಂದಿದ್ದರೂ ಭಿನ್ನ ನಾಯಕರು ಮಾತ್ರ ಅವರನ್ನು ಭೇಟಿ ಮಾಡದಿರುವುದು ನಾನಾ ವ್ಯಾಖ್ಯಾನಗಳಿಗೆ ಕಾರಣವಾಗಿದೆ. ಪಕ್ಷದ ರಾಷ್ಟ್ರೀಯ ಅಧ್ಯಕ್ಷ ನಡ್ಡಾ ಅವರನ್ನು ಬಿಜೆಪಿಯ ಎಲ್ಲಾ ಪ್ರಮುಖ ನಾಯಕರುಗಳು ಭೇಟಿ ಮಾಡಿದ್ದರೂ ಭಿನ್ನರ ಗುಂಪಿನಲ್ಲಿ ಗುರುತಿಸಿಕೊಂಡಿರುವ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್, ರಮೇಶ್ ಜಾರಕಿಗೊಳಿ, ಅರವಿಂದ ಬೆಲ್ಲದ್, ಕುಮಾರ್ ಬಂಗಾರಪ್ಪ ಸೇರಿದಂತೆ ಯಾವುದೇ ನಾಯಕರು ರಾಷ್ಟ್ರೀಯ ಅಧ್ಯಕ್ಷರನ್ನು ಭೇಟಿಯಾಗಿಲ್ಲ.

**ಖರ್ಗೆಯವರ ವಿರುದ್ಧವೂ ಬಿಜೆಪಿ ಹೋರಾಟ**

ರಾಜ್ಯ ಬಿಜೆಪಿ ಸರ್ಕಾರದ ವಿರುದ್ಧ ಯಾವ ರೀತಿ ಹೋರಾಟ ನಡೆಸಿದೆ, ಯಾವೆಲ್ಲಾ ವಿಚಾರಗಳನ್ನು ಮುಂದಿಟ್ಟುಕೊಂಡು ಹೋರಾಟ ನಡೆಸಲಾಗುತ್ತಿದೆ ಎಂಬುದನ್ನು ಈ ನಾಯಕರುಗಳು ಜೆ.ಪಿ. ನಡ್ಡಾ ಅವರ ಗಮನಕ್ಕೆ ತಂದಿದ್ದು, ಸಚಿವ ಪ್ರಿಯಾಂಕ ಖರ್ಗೆಯವರ ವಿರುದ್ಧವೂ ಬಿಜೆಪಿ ನಡೆಸುತ್ತಿರುವ ಹೋರಾಟದ ಬಗ್ಗೆಯೂ ಮಾಹಿತಿ ನೀಡಿದರು.

## ಕಾಂಗ್ರೆಸ್ಸಿಗರ ಆಪರೇಷನ್ ಹಸ್ತ ವರ್ಕ್ ಆಗಲ್ಲ: ಹೆಚ್ಚಿಕೆ

• **ಉದಯವಾಹಿನಿ, ಬೆಂಗಳೂರು**

ಸರ್ಕಾರದಿಂದ ಆಪರೇಷನ್ ಹಸ್ತ ನಡೆಯುತ್ತಿದ್ದು, ಕಾಂಗ್ರೆಸ್ಸಿವರ ಆಪರೇಷನ್ ಹಸ್ತ ಯಾವುದೂ ವರ್ಕ್ ಆಗೋಲ್ಲ ಎಂದು ಕೇಂದ್ರದ ಬೃಹತ್ ಕೈಗಾರಿಕೆ ಹಾಗೂ ಉಕ್ಕು ಖಾತೆ ಸಚಿವ ಹೆಚ್.ಡಿ.ಕುಮಾರಸ್ವಾಮಿ ತಿಳಿಸಿದರು. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜೆಡಿಎಸ್ ಮುಗಿಸಬೇಕೆಂದು 12 ಜನ ಕರೆದುಕೊಂಡು ಬನ್ನಿ, 13 ಜನ ಕರೆದುಕೊಂಡು ಬನ್ನಿ ಎಂಬುದು ನಡೆಯುತ್ತಿದೆ.



ಇದೆಲ್ಲವೂ ನನಗೆ ಗೊತ್ತಿದೆ. ನಮ್ಮ ಯಾವ ಶಾಸಕರೂ ಪಕ್ಷ ಬಿಟ್ಟು ಹೋಗುವ ಪರಿಸ್ಥಿತಿಗಳು ಇಲ್ಲ ಎಂದರು. ನಮ ಎಲ್ಲಾ ಶಾಸಕರು ಏನೇನು ರಾಜಕೀಯ ನಡೆಯುತ್ತಿದೆ ಎಂಬುದನ್ನು ನನ್ನ ಬಳಿ ಹೇಳಿದ್ದಾರೆ. ಜೆಡಿಎಸ್ ಯಾವುದೇ ಶಾಕ್ ಕೊಡಲು, ದುರ್ಬಲ ಮಾಡಲು ಆಗೋಲ್ಲ ಎಂದು ಅವರು ಹೇಳಿದರು.

ಕಾಂಗ್ರೆಸ್‌ನವರು ಏನೇನು ಮಾಡುತ್ತಿದ್ದಾರೆ ಎಂಬುದು ಗೊತ್ತಿದೆ. ಕಾಂಗ್ರೆಸ್ನವರ ಪಾಪದ ಕೊಡ ತುಂಬಿದೆ. ದೇವರೇ ಕಾಂಗ್ರೆಸ್‌ನವರಿಗೆ ಶಿಕ್ಷೆ ಕೊಡುತ್ತಾನೆ ಎಂಬುದು ನನ್ನ ಅಭಿಪ್ರಾಯ ಎಂದು ನುಡಿದರು. ಸಂಕ್ರಾಂತಿ ನಂತರ ರಾಜ್ಯ ರಾಜಕೀಯದಲ್ಲಿ ಕ್ರಾಂತಿ ಆಗುತ್ತಾ ಎಂಬ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಕ್ರಾಂತಿ, ವಾಂತಿ ಬಗ್ಗೆ, ನಾನು ಹೇಳುವುದಿಲ್ಲ. ಈಗಾಗಲೇ ನೋಡಿ ಆಗಿದೆ. ನಾನು ಇದ್ಯಾವುದರ ಬಗ್ಗೆಯೂ ಹೇಳುವುದಿಲ್ಲ ಎಂದರು. ನಾನು ಕಾಂಗ್ರೆಸ್ ಶಾಸಕರಿಗೆ ಮನವಿ ಮಾಡುತ್ತೇನೆ. ನಿಮೆಲ್ಲರಿಗೂ ಆತಸಾಕ್ಷಿ ಅನ್ನೋದು ಇದ್ದರೆ ನೀವು ಬೆಂಬಲ ಕೊಟ್ಟ ಸರ್ಕಾರ ಹೋಗುತ್ತಿರುವ ಮಾರ್ಗ ಏನು ಜನರಿಗೆ ಯಾವ ವಚನ ಕೊಟ್ಟು ಬಂದಿದ್ದೀರಿ ಯೋಚನೆ ಮಾಡಿ. ನಿಮ್ಮ ಗ್ಯಾರಂಟಿಗಳು ಬೇರೆ, ದೇಶದಲ್ಲಿ ಗ್ಯಾರಂಟಿ ಕೊಡಲು ಪೈಪೋಟಿ ನಡೆಯುತ್ತಿದೆ. ಗ್ಯಾರಂಟಿ ಯೋಜನೆ ಕೊಟ್ಟಿದ್ದ ಹಿಮಾಲಯ ಪ್ರದೇಶ ಇವತ್ತು ಏನಾಗಿದೆ ಎಂದು ಪ್ರಶ್ನಿಸಿದರು.

## ಕೆಆರ್‌ಎಸ್ ರಸ್ತೆಗೆ ಅವರ ಹೆಸರಿಡುವುದು ಸೂಕ್ತವೇ

• **ಉದಯವಾಹಿನಿ, ಮೈಸೂರು**

ಮುಡಾ ಹಾಗೂ ವಾಲೀಕಿ ಹಗರಣಗಳಲ್ಲಿ ಸಿಎಂ ಸಿದ್ದರಾಮಯ್ಯ ಅವರ ಹೆಸರಿದ್ದು, ತನಿಖೆ ನಡೆಯುತ್ತಿದೆ. ಈ ಸಮಯದಲ್ಲಿ ಮೈಸೂರಿನ ಕೆಆರ್‌ಎಸ್ ರಸ್ತೆಗೆ ಅವರ ಹೆಸರನ್ನು ಇಡಲು ಮುಂದಾಗಿರುವುದು ಎಷ್ಟು ಸೂಕ್ತ ಎಂದು ಕಾಂಗ್ರೆಸ್‌ನವರೇ ಪ್ರಶ್ನೆ ಮಾಡಿಕೊಳ್ಳಬೇಕು ಎಂದು ಸಂಸದ ಯದುವೀರ್ ಒಡೆಯರ್ ಹೇಳಿದ್ದಾರೆ.



ಅವರು ಮೈಸೂರು ಮಹಾನಗರ ಪಾಲಿಕೆಯ ಆಯುಕ್ತ ಅಸಾದ್ ಉರ್ ರಹಮಾನ್ ಶರೀಫ್ ಭೇಟಿ ಮಾಡಿ ಕೆಆರ್‌ಎಸ್ ರಸ್ತೆಗೆ ಪ್ರಿನ್ಸಸ್ ರಸ್ತೆ ಎಂಬ ಹೆಸರು ಹಿಂದಿನಿಂದಲೂ ಇದೆ ಇದಕ್ಕೆ ದಾಖಲೆಗಳೊಂದಿಗೆ ಮನವಿ ಪತ್ರ ಸಲ್ಲಿಸಿದ್ದು ಪರಿಶೀಲನೆ ನಡೆಸಬೇಕು ಎಂದು ಕೋರಿದರು. ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಒಡೆಯರ್, ಕೆಆರ್‌ಎಸ್ ರಸ್ತೆಗೆ ಪ್ರಿನ್ಸೆಸ್ ರಸ್ತೆ ಎಂಬ ಹೆಸರಿರುವ ಬಗ್ಗೆ ಯಾವುದೇ ದಾಖಲಾತಿಗಳು ಪಾಲಿಕೆಯಲ್ಲಿ ಇಲ್ಲ ಎಂದು ಆಯುಕ್ತರು ಹೇಳಿದ್ದರು. ಇದಕ್ಕೆ ನಾವೇ ಆ ರಸ್ತೆಗೆ ಹಿಂದಿನಿಂದಲೂ ಪ್ರಿನ್ ರಸ್ತೆ ಇತ್ತು ಎಂಬ ಬಗ್ಗೆ ದಾಖಲೆಗಳನ್ನು ಸಂಗ್ರಹ ಮಾಡಿ ಕೊಟ್ಟಿದ್ದೇವೆ. ಈ ಬಗ್ಗೆ ಆಯುಕ್ತರು ಪುನರ್ ಪರಿಶೀಲನೆ ಮಾಡುತ್ತೇವೆ ಎಂದು ಹೇಳಿದ್ದಾರೆ. ಅಲ್ಲದೇ ಆ ಭಾಗದ ಆಧಾರ್ ಕಾರ್ಡ್ ರೈಲ್ವೆ ಮ್ಯೂಸಿಯಂ, ಎಲ್ಲ ಕಡೆ ಪ್ರಿನ್ಸಸ್ ರಸ್ತೆ ಅಂತ ಇದೆಯೆಂದು ದಾಖಲೆಗಳಿವೆ. ಅದನ್ನು ನೀಡಿದ್ದೇವೆ ಒಡೆಯರ್ ಎಂದು ಹೇಳಿದರು.

## ಬಸ್ ದರ ಏರಿಕೆ ಖಂಡಿಸಿ ಬಿಜೆಪಿಗರ ಪ್ರತಿಭಟನೆಗೆ ಪೊಲೀಸರ ಅಡ್ಡಿ

• ಬೆಂಗಳೂರು ನಗರ ಮತ್ತು ಬೆಂಗಳೂರು ಗ್ರಾಮಾಂತರದ ಪದಾಧಿಕಾರಿಗಳ ನೇತೃತ್ವದಲ್ಲಿ ನಗರದ ಮೆಜೆಸ್ಟಿಕ್ ಬಸ್ ನಿಲ್ದಾಣದಲ್ಲಿ ಪ್ರತಿಭಟನೆ

• **ಉದಯವಾಹಿನಿ, ಬೆಂಗಳೂರು**

ಬಸ್ ದರ ಏರಿಕೆ ಮಾಡಿರುವ ಸರ್ಕಾರದ ಕ್ರಮವನ್ನು ವಿರೋಧಿಸಿ ಪ್ರತಿಭಟನೆ ನಡೆಸಲು ಮುಂದಾಗಿದ್ದ ಬಿಜೆಪಿ ನಾಯಕರಿಗೆ ಪೊಲೀಸರು ಅಡ್ಡಿಪಡಿಸಿದ ಪ್ರಸಂಗ ಮೆಜೆಸ್ಟಿಕ್ ಬಸ್ ನಿಲ್ದಾಣದಲ್ಲಿ ನಡೆಯಿತು. ಪೊಲೀಸರ ಈ ಕ್ರಮವನ್ನು ತೀವ್ರವಾಗಿ ವಿರೋಧಿಸಿದ ವಿಧಾನಸಭೆಯ ಪ್ರತಿಪಕ್ಷದ ನಾಯಕ ಆರ್ ಅಶೋಕ್ ಅಕ್ಷರಶಃ ಸಹನೆ ಕಳೆದುಕೊಂಡು ಅವರ ವಿರುದ್ಧವೇ ಹಿಗ್ಗಾಮುಗ್ಗಾ ತರಾಟೆಗೆ ತೆಗೆದುಕೊಂಡ ಘಟನೆಯೂ ಜರುಗಿತು. ಆರ್.ಅಶೋಕ್, ಛಲವಾದಿ ನಾರಾಯಣಸ್ವಾಮಿ, ಎನ್.ರವಿಕುಮಾರ್ ಸೇರಿದಂತೆ ಬೆಂಗಳೂರು ನಗರ ಮತ್ತು ಬೆಂಗಳೂರು ಗ್ರಾಮಾಂತರದ ಪದಾಧಿಕಾರಿಗಳ ನೇತೃತ್ವದಲ್ಲಿ ನಗರದ ಮೆಜೆಸ್ಟಿಕ್ ಬಸ್ ನಿಲ್ದಾಣದಲ್ಲಿ ಪ್ರತಿಭಟನೆ ಹಮಿಕೊಳ್ಳಲಾಗಿತ್ತು ಬೆಳಗ್ಗೆ 11.30ಕ್ಕೆ ಮೆಜೆಸ್ಟಿಕ್ಕಲ್ಲಿ ಅಶೋಕ್ ಅವರು ಪ್ರತಿಭಟನೆ ನಡೆಸಲು ಮುಂದಾಗುತ್ತಿದ್ದಂತೆ ಪೊಲೀಸರು ಅಡ್ಡಿಪಡಿಸಿ ನಾವು ಅವಕಾಶ ಕೊಡುವುದಿಲ್ಲ ಎಂದು ಅಡ್ಡಿಪಡಿಸಿದರು. ಸಾಮಾನ್ಯವಾಗಿ ಎಂದೂ ಸಹನೆ ಕಳೆದುಕೊಳ್ಳದೆ ಇನ್ನೊಬ್ಬರ ವಿರುದ್ಧ ರೇಗಾಡದ ಅಶೋಕ್, ಪೊಲೀಸರು ಪ್ರತಿಭಟನೆಗೆ ತಡೆ ಹಾಕಿದ್ದರಿಂದ ರೌದ್ರಾವತಾರ ತಾಳಿದರು. ಒಂದು ಹಂತದಲ್ಲಿ ಪೊಲೀಸರು ಬಂಧಿಸಲು ಮುಂದಾದಾಗ ಸಹನೆ ಕಳೆದುಕೊಂಡ ಅವರು, ತಾಕತ್ತಿದ್ದರೆ ನಮನ್ನು ಬಂಧಿಸಿ ನಾನು ಕೂಡ ರಾಜ್ಯದ ಗೃಹಸಚಿವನಾಗಿ ಕೆಲಸ ಮಾಡಿದ್ದೇನೆ. ನಾವೇನು ಪ್ರಯಾಣಿಕರಿಗೆ ಅಡ್ಡಿಪಡಿಸಿಲ್ಲ ಎಂದು ತಮ್ಮ ಪ್ರತಿಭಟನೆಯನ್ನು ಸಮರ್ಥನೆ ಮಾಡಿಕೊಳ್ಳಲು ಮುಂದಾದರು. ನೀವು ಮುಟ್ಟಿ ನೋಡಿ. ಇಲ್ಲಿ ಯಾರಿಗೂ ತೊಂದರೆ ಕೊಡುವಂತಿಲ್ಲ. ಪ್ರತಿಭಟನೆ ನಡೆಸುವುದು ನಮ ಹಕ್ಕು ಆದರೆ ಇಲ್ಲಿ ನಾವು ಪ್ರತಿಭಟನೆ ಮಾಡುತ್ತಿಲ್ಲ. ಜನರಿಗೆ ಹೂವು ನೀಡುತ್ತಿದ್ದೇವೆ. ಅದಕ್ಕೂ ಅಡ್ಡಿಪಡಿಸಿದರೆ ನಿಮ್ಮ ಮೇಲೆ ಕೇಸ್ ಹಾಕಿ ಕೋರ್ಟ್ನಲ್ಲಿ ನಿಲ್ಲಿಸಿ ಜೈಲಿಗೆ ಕಳುಹಿಸಬೇಕಾಗುತ್ತದೆ ಹುಷಾರ್! ಎಂದು



ಎಚ್ಚರಿಸಿದರು. ನೀವೇನು ಇಲ್ಲಿಯೇ ಇರುವುದಿಲ್ಲ, ನಾವು ಅಧಿಕಾರಕ್ಕೆ ಬಂದರೆ ಸುಮ್ಮನೆ ಬಿಡುವುದಿಲ್ಲ, ನಮಗೂ ರಾಜಕಾರಣ ಮಾಡಲು ಬರುತ್ತದೆ. ಪ್ರತಿಭಟನೆ ನಡೆಸುವುದು ನಮ ಹಕ್ಕು. ನಾವು ಇದಕ್ಕೆ ಸಂಬಂಧಪಟ್ಟ ಅಧಿಕಾರಿಗಳಿಗೆ ಮಾಹಿತಿಯನ್ನು ಕೊಟ್ಟಿದ್ದೇವೆ. ಈಗ ಯಾವ ನಿರ್ದೇಶನದ ಮೇರೆಗೆ ಅಡ್ಡಿಪಡಿಸುತ್ತಿದ್ದೀರಿ ಎಂದು ಅಶೋಕ್ ತರಾಟೆಗೆ ತೆಗೆದುಕೊಂಡರು. ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಕರ್ನಾಟಕದ 7 ಕೋಟಿ ಜನರು ಹೊಸ ವರ್ಷಕ್ಕೆ ಉಡುಗೊರೆಗೆ ಕಾಯುತ್ತಿದ್ದೆವು. ಮೋದಿಯವರು ಹೊಸ ವರ್ಷಕ್ಕೆ ನಿಜವಾದ ಗಿಫ್ಟ್ ಕೊಟ್ಟಿದ್ದಾರೆ.

ರಾಜ್ಯ ಸರ್ಕಾರ, ದಿ ಗ್ರೇಟ್ 14 ಬಜೆಟ್ ಚಾಂಪಿಯನ್ ಸಿದ್ದರಾಮಯ್ಯನವರು ಬಸ್ ದರ ಏರಿಕೆಯ ಉಡುಗೊರೆ ನೀಡಿದ್ದಾರೆ ಎಂದು ಟೀಕಿಸಿದರು. ಈ ಸರಕಾರ ಅಧಿಕಾರಕ್ಕೆ ಬಂದ ಬಳಿಕ ಪ್ರತಿದಿನ ತೆರಿಗೆ ಹೆಚ್ಚಳ, ಟ್ಯಾಕ್ಸ್ ಏರಿಕೆಯದೇ ಸಾಧನೆ ಮಾಡುತ್ತಿದೆ. ರಾಜ್ಯ ಸರಕಾರವು ಅಭಿವೃದ್ಧಿ ವಿಚಾರದಲ್ಲಿ ಶೂನ್ಯ ಸಾಧನೆ ಮಾಡಿದೆ. ಆದರೆ, ಬೆಲೆ ಏರಿಕೆ ನಿರಂತರವಾಗಿ ಸಾಗಿದೆ ಎಂದು ಆಕ್ಷೇಪ ವ್ಯಕ್ತಪಡಿಸಿದರು.

**ಅಭಿವೃದ್ಧಿ ಒಂದು ಬಿಟ್ಟು ತಲೆ ಬೋಳಿಸುವ ಸರಕಾರ**

ಹೆಣ್ಮಕ್ಕಳಿಗೆ ಉಚಿತ ಪ್ರಯಾಣದರ ನೀಡಿ, ಗಂಡಸರಿಗೆ ಬರೆ ಹಾಕುವ ಸರಕಾರ ಎಂದು ಆಕ್ಷೇಪ ವ್ಯಕ್ತಪಡಿಸಿದರು. ಗ್ಯಾರಂಟಿ ಕಾರಣಗಳಿಂದ ಇವತ್ತು ಜನರು ದುಬಾರಿ ಬೆಲೆಯನ್ನು ತೆರಬೇಕಾಗಿದೆ. ಹಾಲಿನ ದರ ಏರಿಸಿದ್ದೀರಿ. ವಿದ್ಯುತ್ ದರ ಏರಿಕೆ ಮಾಡಿದ್ದೀರಿ. ಸ್ಟಾಂಪ್ ಡ್ಯೂಟಿ, ರಿಜಿಸ್ಟ್ರೇಶನ್ ಶುಲ್ಕ ಮಾತ್ರವಲ್ಲದೆ ವಿವಿಧ ತೆರಿಗೆಗಳನ್ನೂ ಹೆಚ್ಚಿಸಲಾಗಿದೆ ಎಂದು ಖಂಡಿಸಿದರು. ಅಭಿವೃದ್ಧಿ ಒಂದು ಬಿಟ್ಟು ತಲೆ ಬೋಳಿಸುವ ಕೆಲಸ ಮಾಡುವ ಸರಕಾರ ಇದಾಗಿದೆ ಎಂದು ಆರೋಪಿಸಿದರು. ಕಾಂಗ್ರೆಸ್ ಸರಕಾರದ ಖಜಾನೆ ಪೂರ್ತಿ ಖಾಲಿಯಾಗಿದೆ. ದಿನ ದೂಡಲು ಬರೆ ಹಾಕುವ ಕೆಲಸ ಮಾಡಿದ್ದಾರೆ. ಮೂರನೇ ದಿನಕ್ಕೆ ಮೂರು ನಾಮ ಹಾಕುವ ಕೆಲಸವನ್ನು ಸರಕಾರ ಮಾಡಿದೆ ಎಂದು ಟೀಕಿಸಿದರು.ಪ್ರತಿಭಟನೆಯಲ್ಲಿ ಕೆಲವು ಕಾರ್ಯಕರ್ತರು ಮುಖ್ಯಮಂತ್ರಿ ಮತ್ತು ಉಪ ಮುಖ್ಯಮಂತ್ರಿಯವರ ಮುಖವಾಡ ಧರಿಸಿದ್ದರು. ಪುರುಷ ಪ್ರಯಾಣಿಕರಿಗೆ ಗುಲಾಬಿ ಹೂ ನೀಡಲಾಯಿತು.

**ಈ ದಿನದ ದರ** ಪೆಟ್ರೋಲ್: 103.50 ₹/L | ಡೀಸೆಲ್ : 90.03 ₹/L | ಬಂಗಾರ: ₹7,920/Gram24ct ₹7,260/Gram22ct | ಬೆಳ್ಳಿ: ₹92.50/Gram



## ಸಿದ್ಧಸೂಕ್ತಿ

**ಡಾ ಆರೂಢಭಾರತೀ ಸ್ವಾಮೀಜಿ**
**ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ**
**ರಾಮೋಹಳ್ಳಿ**

## ನಚೈ ಚ್ಛತ್ ಪಿತುರಾದೇಶಾತ್

ವಾಲ್ಮೀಕಿ ರಾಮಾಯಣದ ಮಾತು. ಇನ್ನೇನು ರಾಜ್ಯಾಭಿಷೇಕ ನಡೆದು ಹೋಗಬೇಕಾದ ಹಂತದಲ್ಲಿ ಚಿಕ್ಕಮ್ಮ ಕೈಕೇಯಿಯ ಹಠಕ್ಕೆ ಮಣಿದ ತಂದೆ ದಶರಥನ ಮಾತಿನಂತೆ ರಾಮನು ಕಾಡಿಗೆ ಹೋದ. ಆತ ಚಿತ್ರಕೂಟ ತಲುಪುತ್ತಲೇ ಇತ್ತ ದಶರಥ ರಾಮನನ್ನು ನೆನೆಯುತ್ತಲೇ ಪ್ರಾಣ ಬಿಟ್ಟ. ಕೂಡಲೇ ವಸಿಷ್ಠ ಮುಂತಾದ ಗುರು ಹಿರಿಯರು ಕೈಕೇಯಿಯ ಬಯಕೆಯಂತೆ ಭರತನಿಗೆ ಪಟ್ಟಾಭಿಷೇಕ ಮಾಡಲು ಮುಂದಾದರು. ಆದರೆ ಭರತ ಒಪ್ಪಲಿಲ್ಲ. ಬದಲಾಗಿ ರಾಮನಿದ್ದಲ್ಲಿಗೆ ಹುಡುಕಿ ಹೋಗಿ ಹಿಂದಿರುಗಿ ಬಂದು ರಾಜ್ಯ ಆಳಬೇಕೆಂದು ರಾಮನಲ್ಲಿ ಭಕ್ತಿ ಭಾವದಿಂದ ವಿನಂತಿಸಿದನು. ಆದರೆ ರಾಮನು ಸುತರಾಂ ಒಪ್ಪಲಿಲ್ಲ. ತಂದೆಯ ಆದೇಶವನ್ನು ಪಾಲಿಸಿಯೇ ಹಿಂದಿರುಗುವೆ ಎಂದ. ಇಲ್ಲಿ ಇವರೀರ್ವರ ಅಧಿಕಾರ ನಿರ್ಲಿಪ್ತತೆ ಗಮನಾರ್ಹ. ಹಣ ಅಧಿಕಾರವನ್ನು ಹಿಂಬಾಲಿಸುವ ಈ ಕಾಲದಲ್ಲಿ ಇಂಥ ಆದರ್ಶ ಅತ್ಯಂತ ಅಪರೂಪ!

## ಜನತೆಗೆ ಮತ್ತೊಂದು ಶಾಕ್: ಶೀಘ್ರವೇ ನೀರಿನ ದರ ಪರಿಷ್ಕರಣೆ, ಜಲಮಂಡಳಿ ಸುಳಿವು

• ಉದಯವಾಹಿನಿ, ಬೆಂಗಳೂರು

ದಿನೇ ದಿನೇ ಅಗತ್ಯ ವಸ್ತುಗಳ ಬೆಲೆ ಏರಿಕೆಯಿಂದ ಜನರು ತತ್ತರಿಸಿ ಹೋಗಿದ್ದಾರೆ. ನಿನ್ನೆಯಷ್ಟೇ ರಾಜ್ಯ ಸಚಿವ ಸಂಪುಟ ಸಭೆಯಲ್ಲಿ ಸಾರಿಗೆ ಬಸ್ಸುಗಳ ಪ್ರಯಾಣ ದರ ಏರಿಕೆಗೂ ಅನುಮತಿ ನೀಡಲಾಗಿದೆ. ಈ ಬೆನ್ನಲ್ಲೇ ಬೆಂಗಳೂರಲ್ಲಿ ಕಾವೇರಿ ನೀರಿನ ದರ ಪರಿಷ್ಕರಣೆ ಮುಂದಾಗಿದೆ. ಈ ಮೂಲಕ ಶೀಘ್ರವೇ ನೀರಿನ ದರ ಹೆಚ್ಚಳದ ಶಾಕ್ ನೀಡಲು ಸರ್ಕಾರ ಮುಂದಾಗಿರುವ ಸುಳಿವನ್ನು ಜಲಮಂಡಳಿ ನೀಡಿದೆ.ಬೆಂಗಳೂರಲ್ಲಿ ಕಾವೇರಿ ನೀರಿನ ದರ ಪರಿಷ್ಕರಣೆಗೆ ಸರ್ಕಾರ ಮುಂದಾಗಿ ಎನ್ನಲಾಗುತ್ತಿದೆ. ಈ ಸಂಬಂಧ ಬೆಂಗಳೂರು ಜಿಲ್ಲಾ ಉಸ್ತುವಾರಿ ಸಚಿವ ಹಾಗೂ ಡಿಸಿಎಂ ಡಿ.ಕೆ ಶಿವಕುಮಾರ್ ನೇತೃತ್ವದಲ್ಲಿ ಬಿಡಬ್ಲ್ಯೂ ಎಸ್ ಎಸ್ ಬಿ ಸಭೆ ನಡೆಯೋ ಸಾಧ್ಯತೆ ಇದೆ. ಡಿಸಿಎಂ ನೇತೃತ್ವದ ಜಲಮಂಡಳಿ ಸಭೆಯಲ್ಲಿ ಕಾವೇರಿ ನೀರಿನದ ದರ ಹೆಚ್ಚಳದ ಕುರಿತಂತೆ ಚರ್ಚಿಸಲಾಗುತ್ತಿದೆ. ಆ ಬಳಿಕ ಬೆಂಗಳೂರಲ್ಲಿ ನೀರಿನ ದರ ಪರಿಷ್ಕರಣೆ ಅಧಿಕೃತ ಆದೇಶ ಹೊರ ಬೀಳೂ ಸಾಧ್ಯತೆ ಇದೆ. ಅಂದಹಾಗೆ ನೀರು ಸರಬರಾಜು ವೆಚ್ಚ, ವಿದ್ಯುತ್ ಬಳಕೆ ವೆಚ್ಚ ಸೇರಿದಂತೆ ಇತರೆ ವೆಚ್ಚಗಳನ್ನು ಸರಿ ದೂಗಿಸಲು ಬೆಂಗಳೂರಲ್ಲಿ ನೀರಿನ ದರ ಪರಿಷ್ಕರಣೆಗೆ ಮುಂದಾಗಿದೆ ಎನ್ನಲಾಗುತ್ತಿದೆ. ಆ ಬಗ್ಗೆ ಕಾದು ನೋಡಬೇಕಿದೆ.

## ಸಿ.ಟಿ.ರವಿ ಅಶ್ಲೀಲ ಪದ ಬಳಕೆ ವಿಚಾರ: ತನಿಖಾ ತಂಡಕ್ಕೆ ಘಟನೆ ಮಾಹಿತಿ ನೀಡಿದ ಲಕ್ಷ್ಮೀ ಹೆಬ್ಬಾಳ್ಕರ್

• ಉದಯವಾಹಿನಿ, ಬೆಂಗಳೂರು

ತನಿಖಾ ತಂಡಕ್ಕೆ ಘಟನೆಯ ಕುರಿತು ಸಂಪೂರ್ಣ ಮಾಹಿತಿ ನೀಡಿದ್ದೇನೆ. ಕಾನೂನು ಚೌಕಟ್ಟಿನಲ್ಲಿ ಕ್ರಮ ಆಗಲಿದೆ ಎನ್ನುವ ವಿಶ್ವಾಸವಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳ್ಕರ್ ಪ್ರತಿಕ್ರಿಯಿಸಿದ್ದಾರೆ.ಬೆಳಗಾವಿಯಲ್ಲಿ



ನಡೆದ ಚಳಿಗಾಲದ ಅಧಿವೇಶನದ ಕಲಾಪದ ವೇಳೆ ಸಚಿವರ ವಿರುದ್ಧ ಬಿಜೆಪಿಯ ವಿಧಾನ ಪರಿಷತ್ ಸದಸ್ಯರಾದ ಸಿ.ಟಿ.ರವಿ ಅಶ್ಲೀಲ ಪದ ಬಳಿಸಿದ್ದರು.ಈ ಕುರಿತು ಸಿಒಡಿ ತನಿಖೆಗೆ ರಾಜ್ಯ ಸರ್ಕಾರ ಆದೇಶಿಸಿತ್ತು. ಇದರ ಭಾಗವಾಗಿ ಸಿಒಡಿ ಅಧಿಕಾರಿಗಳಿಗೆ ಮಾಹಿತಿ ನೀಡಿದ ಬಳಿಕ ಮಾಧ್ಯಮಗಳಿಗೆ ಪ್ರತಿಕ್ರಿಯಿಸಿದ ಸಚಿವರು, ಅಧಿಕಾರಿಗಳ ಎದುರು ಘಟನೆ ಬಗ್ಗೆ ವಿವರಣೆ ನೀಡಿರುವೆ ಎಂದರು. ಪ್ರಕರಣದ ಬಗ್ಗೆ ಕಾನೂನು ಚೌಕಟ್ಟಿನಲ್ಲಿ ಏನಾಗಬೇಕು ಅದು ಆಗುತ್ತೆ. ನನಗೆ ಅನ್ಯಾಯ ಆಗಿದೆ, ಇದು ಇಡೀ ಮನುಕುಲಕ್ಕೆ ಆಗಿರುವ ಅನ್ಯಾಯ. ನನ್ನ ಜೊತೆ ಎಲ್ಲರೂ ನಿಂತುಕೊಳ್ಳಬೇಕು ಎಂದು ಸಚಿವ ಲಕ್ಷ್ಮೀ ಹೆಬ್ಬಾಳ್ಕರ್ ಹೇಳಿದರು.ಪ್ರಕರಣವನ್ನು ಪ್ರತಿಷ್ಠೆಯಾಗಿ, ರಾಜಕೀಯವಾಗಿ ತೆಗೆದುಕೊಂಡಿಲ್ಲ. ನನಗೆ ಅನ್ಯಾಯ ಆಗಿದೆ. ಇದು ನನ್ನ ಸ್ವಾಭಿಮಾನದ ಪ್ರಶ್ನೆ. ತನಿಖೆ ಈಗಷ್ಟೇ ಆರಂಭವಾಗಿದೆ. ತನಿಖೆ ಸೂಕ್ತ ರೀತಿಯಲ್ಲಿ ನಡೆಯಲಿ. ಈ ಹಂತದಲ್ಲಿ ಹೆಚ್ಚು ಮಾತನಾಡುವುದು ಸರಿಯಲ್ಲ ಎಂದು ಸಚಿವರು ತಿಳಿಸಿದರು.

## ಸುಪ್ರೀಂ ಕೋರ್ಟ್‌ನಲ್ಲಿ ಶೃಂಗೇರಿ ಶಾಸಕ ರಾಜೇಗೌಡಗೆ ಹಿನ್ನಡೆ

• ಉದಯವಾಹಿನಿ, ಬೆಂಗಳೂರು

ಸುಪ್ರೀಂ ಕೋರ್ಟ್ ಗೆ ಶೃಂಗೇರಿ ಶಾಸಕ ಸಲ್ಲಿಸಿದ್ಯಂತ ಗೆಲುವು ಪ್ರಶ್ನಿಸಿ ಜೀವರಾಜ್ ಸಲ್ಲಿಸಿದ್ದಂತ ಅರ್ಜಿಯ ವಿಚಾರಣೆಗೆ ನಕಾರ ವ್ಯಕ್ತಪಡಿಸಿದೆ. ಈ ಮೂಲಕ ಸುಪ್ರೀಂ ಕೋರ್ಟ್ ನಲ್ಲಿ ಶೃಂಗೇರಿ ಶಾಸಕ ಡಿ.ಟಿ ರಾಜೇಗೌಡಗೆ ಹಿನ್ನಡೆಯುಂಟಾಗಿ



ದೆ.ಶೃಂಗೇರಿ ಶಾಸಕ ಡಿ.ಟಿ ರಾಜೇಗೌಡ ಅವರು ಗೆಲುವು ಪ್ರಶ್ನಿಸಿ ಜೀವರಾಜ್ ಸಲ್ಲಿಸಿದ್ದಂತ ಅರ್ಜಿಯ ಮೇಲ್ಮನವಿಯ ಕುರಿತಂತೆ ಸುಪ್ರೀಂ ಕೋರ್ಟ್ ಗೆ ಅರ್ಜಿ ಸಲ್ಲಿಸಿದ್ದರು. ಅಲ್ಲದೇ ಗೆಲುವು ಪ್ರಶ್ನಿಸಿ ಜೀವ ರಾಜ್ ಅರ್ಜಿಯಲ್ಲಿ ಅಸ್ಪಷ್ಟ ಆರೋಪ ಕೂಡ ಮಾಡಲಾಗಿತ್ತು ಮತದಾನದ ವೇಳೆ ಕಪ್ಪು ಹಣ ಬಳಕೆ ಬಗ್ಗೆ ಅಸ್ಪಷ್ಟತೆ ಆರೋಪವನ್ನು ಮಾಡಿ ಅರ್ಜಿ ವಜಾಗೆ ಸುಪ್ರೀಂ ಕೋರ್ಟ್ ಗೆ ಮನವಿ ಮಾಡಲಾಗಿತ್ತು. ಆದರೇ ಯಾವುದೇ ಸಾಕ್ಷ್ಯಗಳಿಲ್ಲದೇ ಗೆರುವು ಪ್ರಶ್ನಿಸಿದ್ದಾರೆಂದು ಸಲ್ಲಿಸಿದ್ದಂತ ಶೃಂಗೇರಿ ಶಾಸಕ ಡಿ.ಟಿ ರಾಜೇಗೌಡ ಅವರ ಅರ್ಜಿಯನ್ನು ಸುಪ್ರೀಂ ಕೋರ್ಟ್ ವಿಚಾರಣೆ ನಡೆಸಲು ನಕಾರ ವ್ಯಕ್ತ ಪಡಿಸಿದೆ. ಸುಪ್ರೀಂ ಕೋರ್ಟ್ ನ ನ್ಯಾಯಮೂರ್ತಿ ಸೂರ್ಯಕಾಂತ್, ನ್ಯಾಯಮೂರ್ತಿ ಉಜ್ಜಲ್ ಭುಯಾನ್ ಅವರ ಪೀಠದಿಂದ ನಕಾರ ವ್ಯಕ್ತ ಪಡಿಸಲಾಗಿದೆ.

## ಡಬ್ಬಲ್ ಶಾಕ್: ಶೀಘ್ರವೇ ಮೆಟ್ರೋ ಟಿಕೆಟ್, ನೀರಿನ ದರ ಏರಿಕೆ ಸಾಧ್ಯತೆ

• ಉದಯವಾಹಿನಿ, ಬೆಂಗಳೂರು

ಸಾರಿಗೆ ಬಸ್ ಟಿಕೆಟ್ ದರವನ್ನು ಶೇ.15ರಷ್ಟು ಹೆಚ್ಚಳಕ್ಕೆ ರಾಜ್ಯ ಸಚಿವ ಸಂಪುಟ ಸಭೆಯಲ್ಲಿ ಒಪ್ಪಿಗೆ ಸೂಚಿಸಲಾಗಿದೆ. ಈ ಬೆನ್ನಲ್ಲೇ ಬೆಂಗಳೂರಿಗರಿಗೆ ಮತ್ತೊಂದು ಶಾಕ್ ಎನ್ನುವಂತೆ ಮೆಟ್ರೋ ಟಿಕೆಟ್ ದರ, ನೀರಿನ ದರ ಏರಿಕೆಯ ಸುಳುವು ಹೊರ ಬಿದ್ದಿದೆ. ಬೆಂಗಳೂರಿನ ನಮ್ಮ ಮೆಟ್ರೋ ಟಿಕೆಟ್ ದರ ಏರಿಕೆಗೆ ಬಿಎಂಆರ್ ಸಿಎಲ್ ಮುಂದಾಗಿದೆ. ಈ ಸಂಬಂಧ ಜನವರಿ 2ನೇ ವಾರ ಅಥವಾ 3ನೇ ವಾರದಲ್ಲಿ ಬೋರ್ಡ್ ಮೀಟಿಂಗ್ ನಡೆಯಲಿದೆ. ಈ ಸಭೆಯಲ್ಲಿ ಮೆಟ್ರೋ ಟಿಕೆಟ್ ದರ ಏರಿಕೆ ಸಂಬಂಧ ಚರ್ಚೆ ನಡೆಸಲಾಗುತ್ತದೆ. ಈಗಾಗಲೇ ಮೆಟ್ರೋ ಟಿಕೆಟ್ ದರ ಹೆಚ್ಚಳಕ್ಕೆ ಸಾರ್ವಜನಿಕರಿಂದ ಆಕ್ಷೇಪಣೆಗಳನ್ನು ಬಿಎಂಆರ್ ಸಿಎಲ್ ಆಹ್ವಾನಿಸಿತ್ತು ಎನ್ನಲಾಗಿದೆ. ಆಕ್ಷೇಪಣೆಗಳ ನಡುವೆಯೂ ಶೀಘ್ರವೇ ನಮ್ಮ ಮೆಟ್ರೋ ಟಿಕೆಟ್ ದರ ಏರಿಕೆ ಮಾಡಲಾಗುವಂತ ಸುಳಿವನ್ನು ಬಿಎಂಆರ್ ಸಿಎಲ್ ಉನ್ನತ ಮೂಲಗಳಿಂದ ತಿಳಿದು ಬಂದಿದೆ. ಕಾವೇರಿ ನೀರಿನ ದರವೂ ಪರಿಷ್ಕರಣೆ ಇನ್ನೂ ನಮ್ಮ ಮೆಟ್ರೋ ಟಿಕೆಟ್ ದರ ಅಷ್ಟೇ ಅಲ್ಲದೇ ಬೆಂಗಳೂರು ಜನತೆಗೆ ಬಿಗ್ ಶಾಕ್ ಎನ್ನುವಂತೆ ಕಾವೇರಿ ನೀರಿನ ದರವನ್ನು ಪರಿಷ್ಕರಣೆಗೆ ಸರ್ಕಾರ ಮುಂದಾಗಿದೆ ಎಂಬುದಾಗಿ ಹೇಳಲಾಗುತ್ತಿದೆ. ನೀರಿನ ಸರಬರಾಜು ವೆಚ್ಚ, ವಿದ್ಯುತ್ ದರದ ಹೆಚ್ಚುವರಿ ಹೊರೆಯನ್ನು ತಗ್ಗಿಸಲು ನೀರಿನ ದರ ಪರಿಷ್ಕರಣೆಯ ಸುಳಿವನ್ನು ಜಲಮಂಡಳಿ ನೀಡಿದೆ.ಶೀಘ್ರವೇ ಬೆಂಗಳೂರಿನ ಜನತೆಗೆ ಡಬ್ಬಲ್ ಶಾಕ್ ಸಿಗೋದು ಗ್ಯಾರಂಟಿ ಎನ್ನಲಾಗುತ್ತಿದೆ.

# ಕುತೂಹಲ ಮೂಡಿಸಿದೆ ಡಿಕೆಶಿ ಅನುಪಸ್ಥಿತಿಯಲ್ಲಿ ನಡೆದ ಸಿದ್ದು ಬಣದ ಔತಣಕೂಟ

### ಸಚಿವ ಸಂಪುಟ ಸಭೆಯ ಬಳಿಕ ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಅವರ ಸರ್ಕಾರಿ ಬಂಗಲೆಯಲ್ಲಿ ಸಭೆ

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ಕೆಪಿಸಿಸಿ ಅಧ್ಯಕ್ಷರ ಬದಲಾವಣೆ, ಹೆಚ್ಚುವರಿ ಉಪಮುಖ್ಯಮಂತ್ರಿ ಹುದ್ದೆಗಳ ಸೃಷ್ಟಿ, ಸಚಿವ ಸಂಪುಟ ಪುನರ್ ರಚನೆ, ಬಜೆಟ್‌ನಲ್ಲಿ ಘೋಷಿಸಬೇಕಾದ ಹೊಸ ಯೋಜನೆಗಳು ಹಾಗೂ ಬಸ್ ಪ್ರಯಾಣ ದರ ಹಾಗೂ ಇತರ ಬೆಲೆ ಏರಿಕೆಗಳ ಸಮರ್ಥನೆ ಸೇರಿದಂತೆ ಹಲವು ಮಹತ್ವದ ವಿಚಾರಗಳು ನಿನ್ನೆ ನಡೆದ ಔತಣಕೂಟದಲ್ಲಿ ಚರ್ಚೆಯಾಗಿವೆ. ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ವಿದೇಶ ಪ್ರವಾಸದಲ್ಲಿದ್ದ ವೇಳೆಯಲ್ಲಿ ಹೊಸ ವರ್ಷಾಚರಣೆಯ ನೆಪದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಬಣದ ಸಚಿವರು ನಿನ್ನೆ ಸಭೆ ನಡೆಸಿದ್ದು ಔತಣಕೂಟದಲ್ಲೂ ಭಾಗಿಯಾಗಿದ್ದಾರೆ.

ಸಚಿವ ಸಂಪುಟ ಸಭೆಯ ಬಳಿಕ ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಅವರ ಸರ್ಕಾರಿ ಬಂಗಲೆಯಲ್ಲಿ ಸಭೆ ನಡೆಸಲಾಗಿದೆ. ನೂತನ ವರ್ಷದ ಸಂಭ್ರಮಾಚರಣೆ ಕಾರಣಕ್ಕೆ ಒಂದೆಡೆ ಸೇರಿದ್ದು, ತಮದೆ, ಆದ ತಂತ್ರಗಾರಿಕೆಯನ್ನು ರೂಪಿಸಲಾಗುತ್ತಿದೆ. ಕಾಂಗ್ರೆಸ್‌ನಲ್ಲಿ ಒಬ್ಬ ವ್ಯಕ್ತಿ ಹಾಗೂ ಒಂದು ಹುದ್ದೆ ನಿಯಮವನ್ನು ಕಡ್ಡಾಯವಾಗಿ ಜಾರಿಗೆ ತರುವಂತೆ ಹೈಕಮಾಂಡ್ ಮೇಲೆ ಒತ್ತಡ ಹೆಚ್ಚಿಸಲು ಮುಖ್ಯಮಂತ್ರಿ ಸಿದ್ದರಾಮಯ್ಯ ಬಣ ಮುಂದಾಗಿದೆ.

**ಚುನಾವಣೆ ಬಳಿಕ ನಡೆದ ಮುಖ್ಯಮಂತ್ರಿ ಆಯ್ಕೆ**

ಪಕ್ಷ ನಿಷ್ಠೆ ಹಾಗೂ ಅವಿರತವಾಗಿ ಹಗಲಿರುಳು ಚುನಾವಣೆಗಾಗಿ ತನು-ಮನ-ಧನ ಪೂರ್ವಕವಾಗಿ ಶ್ರಮಿಸಿದ್ದಕ್ಕೆ ಕೂಲಿ ಕೊಡಿ ಎಂದು ಹೈಕಮಾಂಡ್ ಮುಂದೆ ಹಕ್ಕು ಪ್ರತಿಪಾದನೆ ಮಾಡಿದ್ದರು. ಆ ವೇಳೆ ಮೌನಕ್ಕೆ ಶರಣಾಗಿದ್ದ ಸಿದ್ದರಾಮಯ್ಯ ಅವರಿಗೆ ರಾಹುಲ್ಗಾಂಧಿ ಅವರ ಕೃಪಾಕಟಾಕ್ಷದಿಂದ ಮುಖ್ಯಮಂತ್ರಿ ಹುದ್ದೆ ದೊರೆತಿತ್ತು.

ಜಾತಿವಾರು ಉಪಮುಖ್ಯಮಂತ್ರಿ ಹುದ್ದೆಗಳನ್ನು ನೀಡಿದರೆ ಲೋಕಸಭಾ ಚುನಾವಣೆಯಲ್ಲಿ ಪಕ್ಷಕ್ಕೆ ರಾಜಕೀಯವಾಗಿ ಲಾಭವಾಗಲಿದೆ ಎಂದು ಬಹಿರಂಗ ಚರ್ಚೆಗಳು ನಡೆದಿದ್ದವು. ಅದಕ್ಕೆ ಹೈಕಮಾಂಡ್ ಸೊಪ್ಪು ಹಾಕಲಿಲ್ಲ.ಅನಂತರ ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ನಿರೀಕ್ಷಿಸಿದಷ್ಟು ಸ್ಥಾನಗಳೂ ಸಿಗಲಿಲ್ಲ. ಕಾಂಗ್ರೆಸೆ, ಮೂಲ ಮತಬ್ಯಾಂಕ್ಗಳಾದ ಪರಿಶಿಷ್ಟ ಜಾತಿ, ಪಂಗಡ, ಅಲ್ಪಸಂಖ್ಯಾತರಿಗೆ ಕಡ್ಡಾಯವಾಗಿ ಉಪಮುಖ್ಯಮಂತ್ರಿ ಹುದ್ದೆ ನೀಡಬೇಕು. ಜೊತೆಯಲ್ಲಿ ಮಹಿಳೆಯರು ಮತ್ತು ಲಿಂಗಾಯತ ಸಮುದಾಯವನ್ನು ಪರಿಗಣಿಸಿ ಐದು ಹೆಚ್ಚುವರಿ ಉಪಮುಖ್ಯಮಂತ್ರಿ ಹುದ್ದೆಗಳನ್ನು ಸೃಷ್ಟಿಸಬೇಕು ಎಂಬ ಚರ್ಚೆಗಳು ನಡೆದಿದ್ದವು. ಈಗ ಮತ್ತೆ ಅದೇ ಚರ್ಚೆಗೆ ಚಾಲನೆ ನೀಡಲು ವೇದಿಕೆ ಸಿದ್ದಗೊಳ್ಳುತ್ತಿದೆ.

ಡಿ.ಕೆ.ಶಿವಕುಮಾರ್ ಬಣದಿಂದ ನಾಯಕತ್ವದ ಬದಲಾವಣೆ ಕುರಿತ ಹೇಳಿಕೆಗಳು ಕೇಳಿ ಬಂದರೆ ಸಿದ್ದರಾಮಯ್ಯ ಬಣ ಒಬ್ಬ ವ್ಯಕ್ತಿ ಒಂದು ಹುದ್ದೆ ಮತ್ತು ಹೆಚ್ಚುವರಿ ಉಪಮುಖ್ಯಮಂತ್ರಿ ಹುದ್ದೆಗಳ ಸೃಷ್ಟಿ ಕುರಿತು ಪ್ರತ್ಯಾಸ್ತ್ರ ಹೂಡಲು ಸಿದ್ಧತೆ ನಡೆಸಿದೆ. ಸಚಿವ ಸಂಪುಟ ಪುನರ್ ರಚನೆಗೆ ಡಿ.ಕೆ.ಶಿವಕುಮಾರ್ ವಿರೋಧ ವ್ಯಕ್ತ ಪಡಿಸಿದ್ದಾರೆ ಎನ್ನಲಾಗಿದೆ.

ಒಂದು ವೇಳೆ ಪುನರ್ ರಚನೆಯಾದರೆ ಡಿ.ಕೆ.ಶಿವಕುಮಾರ್ ಬಳಿ ಇರುವ ಜಲಸಂಪನ್ಮೂಲ ಖಾತೆಯನ್ನು ಕಸಿದುಕೊಳ್ಳಲು ಹಲವು ನಾಯಕರು ಹವಣಿಸುತ್ತಿದ್ದಾರೆ. ಅದಕ್ಕಾಗಿ ಸದ್ಯಕ್ಕೆ ಪುನರ್ ರಚನೆಯ ಪ್ರಸ್ತಾಪವೇ ಬೇಡ ಎಂದು ಹೈಕಮಾಂಡ್ ಮೇಲೆ ಡಿ.ಕೆ.ಶಿವಕುಮಾರ್ ಪಟ್ಟು ಹಿಡಿದಿದ್ದಾರೆ, ಖಾಲಿ ಇರುವ ಒಂದು ಸ್ಥಾನಕ್ಕೆ ಮಾತ್ರ ಸಂಪುಟವನ್ನು ವಿಸ್ತರಣೆ ಮಾಡಿದರೆ ಸಾಕು. ಎರಡೂವರೆ ವರ್ಷಗಳ ಬಳಿಕ ಪುನರ್ ರಚನೆಗೆ ಚಿಂತನೆ ನಡೆಸಬಹುದು ಎಂದು ಪ್ರತಿಪಾದಿಸುತ್ತಿದ್ದಾರೆ ಎನ್ನಲಾಗಿದೆ.

> ಎರಡೂವರೆ ವರ್ಷಗಳ ಬಳಿಕ ನಾಯಕತ್ವ ಬದಲಾವಣೆಯಾಗಲಿದೆ ಎಂಬ ಅಲಿಖಿತ ಚರ್ಚೆಗಳು ಕಾಂಗ್ರೆಸ್ ಒಳವಲಯದಲ್ಲಿ ವ್ಯಾಪಕವಾಗಿವೆ. ಈಗಾಗಲೇ ಎರಡು ವರ್ಷ ಸಮೀಪಿಸುತ್ತಿದ್ದು, ಅಧಿಕಾರ ಹಂಚಿಕೆಯ ಸೂತ್ರ ಜಾರಿಯ ಸಮಯ ಹತ್ತಿರದಲ್ಲಿದೆ ಎಂಬ ಚರ್ಚೆಗಳಾಗುತ್ತಿವೆ. ಈ ಹಂತದಲ್ಲಿ ಸಿದ್ದರಾಮಯ್ಯ ಅವರ ಬಣ ಚುರುಕಾಗಿದೆ. ಸಚಿವರಾದ ಸತೀಶ್ ಜಾರಕಿಹೊಳಿ, ಕೆ.ಎನ್.ರಾಜಣ್ಣ, ಡಾ.ಜಿ.ಪರಮೇಶ್ವರ್ ಸೇರಿದಂತೆ ಅನೇಕ ಸಚಿವರು ಸಭೆಗಳ ಮೇಲೆ ಸಭೆಗಳನ್ನು ನಡೆಸುತ್ತಿದ್ದಾರೆ.

> ವಿಧಾನಸಭೆ ಚುನಾವಣೆ ಬಳಿಕ ನಡೆದ ಮುಖ್ಯಮಂತ್ರಿ ಆಯ್ಕೆಯ ಸಂಧಾನದ ಭಾಗವಾಗಿ ಡಿ.ಕೆ.ಶಿವಕುಮಾರ್ ಅವರನ್ನು ಕೆಪಿಸಿಸಿ ಅಧ್ಯಕ್ಷ ಹುದ್ದೆಯಲ್ಲಿ ಮುಂದುವರೆಸಿದ್ದು, ಉಪಮುಖ್ಯಮಂತ್ರಿ ಸ್ಥಾನವನ್ನು ಹುದ್ದೆಯಲ್ಲಿ ಮುಂದುವರೆಸಿದ್ದು, ಉಪಮುಖ್ಯಮಂತ್ರಿ ಸ್ಥಾನವನ್ನು ನೀಡಲಾಗಿತ್ತು. ಡಿ.ಕೆ.ಶಿವಕುಮಾರ್ ಅವರಿಗೆ ಉಪಮುಖ್ಯಮಂತ್ರಿ ಹುದ್ದೆ ಎಂಬುದು ಮಾಡಿದ ಕೆಲಸಕ್ಕೆ ದೊರೆತ ಪ್ರತಿಫಲವಾಗಿದೆ.

## ಸಾರಿಗೆ ದರ ಏರಿಕೆ ಸಮರ್ಥಿಸಿಕೊಂಡ ಸಚಿವ ರಾಮಲಿಂಗಾರೆಡ್ಡಿ

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ನಾವು ಬಸ್ ದರ ಹೆಚ್ಚಿಸಿರುವುದು ಎಲ್ಲದಕ್ಕಿಂತ ಕಡಿಮೆ. ಬೇರೆ ರಾಜ್ಯಗಳಿಗೆ ಹೋಲಿಸಿದರೆ ನೋಡಿದರೆ ನಮ ರಾಜ್ಯದಲ್ಲೇ ಕಡಿಮೆ ಇದೆ ಹಾಗೂ ಉತ್ತಮ ಸಾರಿಗೆ ವ್ಯವಸ್ಥೆಯಲ್ಲಿ ಇಡೀ ದೇಶದಲ್ಲಿ ಕರ್ನಾಟಕ ರಾಜ್ಯ ನಂಬರ್ 1 ಎಂದು ಸಾರಿಗೆ ಸಚಿವ ರಾಮಲಿಂಗ ರೆಡ್ಡಿ ಅವರು ಬಸ್ ದರ ಹೆಚ್ಚಳವನ್ನು ಬಲವಾಗಿ ಸಮರ್ಥಿಸಿಕೊಂಡಿದ್ದಾರೆ.

ಬೆಲೆ ಏರಿಕೆ ಖಂಡಿಸಿ ಬಿಜೆಪಿ ಪ್ರತಿಭಟನೆ ನಡೆಸುತ್ತಿರುವುದಕ್ಕೆ ತಿರುಗೇಟು ನೀಡಿರುವ ರಾಮಲಿಂಗಾರೆಡ್ಡಿ ಅವರು, ಬಿಜೆಪಿಯವರು ಮಾಡಿರುವ ಆಡಳಿತ ಲೋಪದಿಂದ ಈಗ ತಲೆ ಮೇಲೆ 5900 ಕೋಟಿ ಸಾಲ ಇಟ್ಟು ಹೋಗಿದ್ದಾರೆ ಎಂದು ವಾಗ್ದಾಳಿ ನಡೆಸಿದ್ದಾರೆ. ಬಿಜೆಪಿಯವರು ಜನರಿಗೆ ದಾರಿತಪ್ಪಿಸುವ ಕೆಲಸ ಮಾಡುತ್ತಿದ್ದಾರೆ. ಅಧಿಕಾರದಲ್ಲಿದ್ದಾಗ ಜನರನ್ನು ಅಭಿವೃದ್ಧಿಯನ್ನು ಮರೆತ್ತಿದ್ದರು. ಕೇಂದ್ರ ಸರ್ಕಾರದಲ್ಲಿರುವ ಬಿಜೆಪಿ ಡಾಲರ್ ಬೆಲೆ ಕಡಿಮೆಯಾದರೂ ಪೆಟ್ರೋಲ್, ಡೀಸೆಲ್ ಬೆಲೆ ಕಳೆದ 9 ವರ್ಷಗಳಿಂದ ಕಡಿಮೆ ಮಾಡಿಲ್ಲ. ಇದೇ ಬಿಜೆಪಿ ತಾನು ಆಡಳಿತದಲ್ಲಿದ್ದಾಗ 2020ರಲ್ಲಿ ಬಸ್ ದರ ಹೆಚ್ಚಳ ಮಾಡಿದರು. ಆಗ ಅವರಿಗೆ ಜನರ ತೊಂದರೆ ತಿಳಿಯಲಿಲ್ಲವೇ ? ಎಂದು ಪ್ರಶ್ನೆ ಮಾಡಿದ್ದಾರೆ. ಡಾಲರ್ ಬೆಲೆ ಕಡಿಮೆಯಾದರೂ ಪೆಟ್ರೋಲ್ ಡೀಸೆಲ್ ಬೆಲೆ ಕಡಿಮೆ ಮಾಡಲಿಲ್ಲ. ಆಗ ಜನರ ಕಷ್ಟ ಬಿಜೆಪಿಯವರಿಗೆ ತಿಳಿಯಲಿಲ್ಲವೇ. ಬಡಜನರ ಗ್ಯಾಸ್ ಸಬ್ಸಿಡಿಯನ್ನು ನಿಲ್ಲಿಸಿದರು. ಆಗ ಬಿಜೆಪಿ ಅವರಿಗೆ ಜನರ ಕಷ್ಟ ತಿಳಿಯಲಿಲ್ಲವೇ? ಎಂದು ಕಿಡಿಕಾರಿದ್ದಾರೆ. ಬಿಜೆಪಿಯವರಿಗೆ ಮುಂಚೆನೇ ತಿಳಿದಿತ್ತೋ ಏನೋ 2023ರ ಚುನಾವಣೆಯಲ್ಲಿ ಕರ್ನಾಟಕ ದಲ್ಲಿ ಯಾವುದೇ ಕಾರಣಕ್ಕೂ ಅಧಿಕಾರಕ್ಕೆ ಬರುವುದಿಲ್ಲವೆಂದು ಈ ರೀತಿಯ ಎಲ್ಲಾ ಕೆಟ್ಟ ಆಡಳಿತ ನಡೆಸಿ ನಮ ತಲೆ ಮೇಲೆ ಕಟ್ಟಿದ್ದಾರೆ ಎಂದು ದೂರಿದ್ದಾರೆ.

ಈಗಲಾದರೂ ಬಿಜೆಪಿಯವರು ಸುಳ್ಳು ಹೇಳಿ ತನ್ನ ಫೇಕ್ ವಾಟ್ಸಾಪ್ ಸೋಷಿಯಲ್ ಮೀಡಿಯಾ ಯೂನಿವರ್ಸಿಟಿಯಿಂದ ಜನರ ದಾರಿ ತಪ್ಪಿಸುವುದನ್ನು ಬಿಡಬೇಕು ಎಂದು ಸಚಿವ ರಾಮಲಿಂಗಾ ರೆಡ್ಡಿ ಅವರು ಪತ್ರಿಕಾ ಪ್ರಕಟಣೆಯಲ್ಲಿ ಆಗ್ರಹಿಸಿದ್ದಾರೆ.

> ಅಧಿಕಾರದಲ್ಲಿದ್ದಾಗ ಒಳ್ಳೆ ಆಡಳಿತ ನೀಡಿ ನಾಲ್ಕೂ ನಿಗಮಗಳನ್ನು ಅಭಿವೃದ್ಧಿ ಮಾಡಲು ಪ್ರಯತ್ನಿಸಿದ್ದರೆ ಈ ತೊಂದರೆ ನಮಗೆ ಬರುತ್ತಿರಲಿಲ್ಲ ಎಂದು ಬಿಜೆಪಿಯನ್ನು ಕಿಚಾಯಿಸಿದ್ದಾರೆ. ಬಸ್ ಖರೀದಿ, ವೇತನ ಪರಿಷ್ಕರಣೆ ನೇಮಕಾತಿ, ಎಲ್ಲವನ್ನೂ ಸಮಯ ತಕ್ಕನಾಗಿ ಮಾಡಿದರೆ ಇವಾಗ ಈ ಪರಿಸ್ಥಿತಿ ಬರುತ್ತಿರಲಿಲ್ಲ ಎಂದು ಹೇಳಿದ್ದಾರೆ.

## ಸರ್ಕಾರದ ವಿರುದ್ಧ ಹೋರಾಟ: ಹಾಸ್ಯಾಸ್ಪದ

• ಉದಯವಾಹಿನಿ, ಬೆಂಗಳೂರು



ಗುಂಪುಗಾರಿಕೆ ಹಾಗೂ ಆಂತರಿಕ ಕಚ್ಚಾಟದಿಂದ ಕೆಂಗೆಟ್ಟು ಬೌದ್ಧಿಕವಾಗಿ ದಿವಾಳಿಯಾಗಿರುವ ಬಿಜೆಪಿಯು ರಾಜ್ಯದ ಜನಪರ ಕಾಂಗ್ರೆಸ್ ಸರ್ಕಾರದ ವಿರುದ್ಧ ಹೋರಾಟ ಮಾಡಲು ಹೊರಟಿರುವುದು ಹಾಸ್ಯಾಸ್ಪದ ಎಂದು ವಸತಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವ ಜಮೀರ್ ಅಹಮದ್ ಖಾನ್ ಹೇಳಿದ್ದಾರೆ. ಈ ಕುರಿತು ಹೇಳಿಕೆ ನೀಡಿರುವ ಅವರು, ರಾಜ್ಯದಲ್ಲಿ ಎಂದೂ ಜನರಿಂದ ಬಹುಮತ ಪಡೆಯದ ಬಿಜೆಪಿ ವಾಮ ಮಾರ್ಗದ ಮೂಲಕ ಅಧಿಕಾರ ಹಿಡಿದು ಹತ್ತಾರು ಹಗರಣ ಮಾಡಿ 40 ಪರ್ಸೆಂಟ್ ಸರ್ಕಾರ ಎಂಬ ಕುಖ್ಯಾತಿ ಪಡೆದು ಜನರಿಂದ ತಿರಸ್ಕೃತ ವಾಗಿದೆ. ಪ್ರತಿ ಪಕ್ಷ ಸ್ಥಾನದ ಜವಾಬ್ದಾರಿ ಯನ್ನೂ ಸರಿಯಾಗಿ ನಿಭಾಯಿಸದೆ ವಿಫಲಗೊಂಡು ಇದೀಗ ರಾಜ್ಯ ಸರ್ಕಾರದ ವಿರುದ್ಧ ಹೋರಾಟ ಎಂಬ ಹೊಸ ನಾಟಕ ಆರಂಭಿಸಿದೆ ಎಂದು ಆಕ್ರೋಶ ವ್ಯಕ್ತ ಪಡಿಸಿದ್ದಾರೆ. ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆ ಅನುಷ್ಠಾನ ಹಾಗೂ ಜನಪರ ತೀರ್ಮಾನ ಗಳನ್ನು ಬಿಜೆಪಿ ಗೆ ಸಹಿಸಲು ಆಗುತ್ತಿಲ್ಲ, ಹೀಗಾಗಿ ಅನಗತ್ಯ ವಿಷಯ ಮುಂದಿಡುತ್ತಿದೆ. ಮೊದಲಿಗೆ ಮುಡಾ ಆಯ್ತು ನಂತರ ವಕ್ಫ್ ಆಯ್ತು, ಇದೀಗ ಗುತ್ತಿಗೆದಾರ ಸಚಿನ್ ಪಂಚಾಳ್ ಆತ್ಮಹತ್ಯೆ ಪ್ರಕರಣ ದಲ್ಲಿ ಹೋರಾಟ ಎಂದು ಹೇಳಿದೆ. ರಾಜಕೀಯವಾಗಿ ಪ್ರಿಯಾಂಕ್ ಖರ್ಗೆ ಅವರನ್ನು ಎದುರಿಸಲು ಸಾಧ್ಯವಾಗದೆ ಅವರಿಗೆ ಸಂಬಂಧವೇ ಇಲ್ಲದ ಅವರ ಪಾತ್ರವೇ ಇರದ ಸಚಿನ್ ಆತ್ಮಹತ್ಯೆ ಪ್ರಕರಣ ದಲ್ಲಿ ರಾಜೀನಾಮೆ ಕೇಳುತ್ತಿರುವುದು ಬಿಜೆಪಿಯವರ ಎಳಸುತನಕ್ಕೆ ಸಾಕ್ಷಿ ಎಂದು ಜಮೀರ್ ಅಹಮದ್ ಖಾನ್ ಲೇವಡಿ ಮಾಡಿದ್ದಾರೆ. ವಖ್ ವಿಚಾರದಲ್ಲಿ ಅಧಿವೇಶನದಲ್ಲಿ ಎರಡೂ ಸದನಗಳಲ್ಲಿ ಸಮರ್ಪಕ ಉತ್ತರ ನೀಡಲಾಗಿದೆ. ಆಗ ಗಪ್ ಚುಪ್ ಆಗಿ ಯಾರೂ ಏನೂ ಮಾತನಾಡಲಿಲ್ಲ. ವಿಧಾನ ಸಭೆಯಲ್ಲಿ ಉತ್ತರ ನೀಡುವಾಗ ಬಸನಗೌಡ ಪಾಟೀಲ್ ಯತ್ನಾಳ್ ಅವರು ತಪ್ಪಿಸಿಕೊಂಡು ಹೋದರು. ಅಂದು ನಾಪತ್ತೆ ಆಗಿದ್ದವರು ಈಗ ಮತ್ತೆ ಕಂಪ್ಲಿ ಯಿಂದ ಹೋರಾಟ ಎಂದು ಹೊರಟಿದ್ದಾರೆ. ರಾಜ್ಯದ ಜನತೆಯನ್ನು ದಿಕ್ಕು ತಪ್ಪಿಸುವ ಕೆಲಸ ಮಾಡುತ್ತಿರುವ ಅವರಿಗೆ ಸರಿಯಾದ ಪಾಠ ಕಲಿಸಲಿದ್ದಾರೆ. ಬಿಜೆಪಿಯವರು ಎಷ್ಟೇ ಬಟ್ಟೆ ಹರಿದುಕೊಂಡು ಅರಚಿದರೂ ಸಿದ್ದರಾಮಯ್ಯ, ಡಿಕೆ ಶಿವಕುಮಾರ್ ನೇತೃತ್ವದ ಕಾಂಗ್ರೆಸ್ ಸರ್ಕಾರ ವನ್ನು ಅಲ್ಲಾಡಿಸಲು ಸಾಧ್ಯವಿಲ್ಲ. ಅಭಿವೃದ್ಧಿ ವಿಚಾರದಲ್ಲಿ ಬಹಿರಂಗ ಚರ್ಚೆಗೆ ಬರಲಿ ಎಂದು ಜಮೀರ್ ಅಹಮದ್ ಖಾನ್ ಅವರು ಸವಾಲು ಹಾಕಿದ್ದಾರೆ.

## ಕೆಎಸ್‌ಆರ್‌ಟಿಸಿ ಸಿಬ್ಬಂದಿಗಳಿಗೆ ನಗದು ರಹಿತ ಚಿಕಿತ್ಸೆಗಾಗಿ ಆರೋಗ್ಯ ಯೋಜನೆ ಜಾರಿ

• ಉದಯವಾಹಿನಿ, ಬೆಂಗಳೂರು




ಉದಯವಾಹಿನಿ ಚಿತ್ರ

ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ಅಧಿಕಾರಿಗಳು, ನೌಕರರು ಹಾಗೂ ಅವರ ಕುಟುಂಬದ ಅವಲಂಬಿತ ಸದಸ್ಯರಿಗೆ ನೂತನ ನಗದು ರಹಿತ ವೈದ್ಯಕೀಯ ಚಿಕಿತ್ಸಾ ಸೌಲಭ್ಯವನ್ನು ಒದಗಿಸಲು ಕೆ ಎಸ್ ಆರ್ ಟಿಸಿ ಆರೋಗ್ಯ ಯೋಜನೆಯನ್ನು ಜಾರಿಗೊಳಿಸಲಾಗುತ್ತಿದೆ. ಈ ಮೂಲಕ ಕೆ ಎಸ್ ಆರ್ ಟಿಸಿ ಅಧಿಕಾರಿ, ಸಿಬ್ಬಂದಿಗಳಿಗೆ ಸಿಹಿಸುದ್ದಿ ನೀಡಲಾಗಿದೆ.ಈ ಕುರಿತಂತೆ ಕೆ ಎಸ್ ಆರ್ ಟಿಸಿಯ ವ್ಯವಸ್ಥಾಪಕ ನಿರ್ದೇಶಕರು ಸುತ್ತೋಲೆ ಹೊರಡಿಸಿದ್ದಾರೆ. ಅದರಲ್ಲಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ಅಧಿಕಾರಿಗಳು/ನೌಕರರು ಹಾಗೂ ಅವರ ಕುಟುಂಬದ ಅವಲಂಬಿತ ಸದಸ್ಯರಿಗೆ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ನೌಕರರ ವೈದ್ಯಕೀಯ ಚಿಕಿತ್ಸೆಯ ನಿಬಂಧನೆಗಳು-1970 ರನ್ವಯ ಹಾಗೂ ಸರ್ಕಾರದ ಮಾರ್ಗಸೂಚಿಗಳನ್ವಯ ವೈದ್ಯಕೀಯ ಚಿಕಿತ್ಸಾ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ.

**ಮಂಜೂರು ಮಾಡುವ ಕ್ರಮ ಜಾರಿ**

ನಿಗಮದ ಅಧಿಕಾರಿಗಳು/ನೌಕರರು ಹಾಗೂ ಅವರ ಕುಟುಂಬದ ಅವಲಂಬಿತ ಸದಸ್ಯರು ಸರ್ಕಾರದ ಮಾನ್ಯತೆ ಹೊಂದಿರುವ ಸರ್ಕಾರಿ ಹಾಗೂ ಖಾಸಗಿ ಆಸ್ಪತ್ರೆಗಳಲ್ಲಿ ಒಳರೋಗಿ ಹೊರ ರೋಗಿಯಾಗಿ ಪಡೆದ ವೈದ್ಯಕೀಯ ಚಿಕಿತ್ಸೆಯ ವೆಚ್ಚವನ್ನು ಅಉಊಖ 2014 ರ ದರಪಟ್ಟಿಯನ್ವಯ ಮರುಪಾವತಿ ಮಾಡಲಾಗುತ್ತಿದೆ. ಅಲ್ಲದೇ,ಅಧಿಕಾರಿಗಳು/ನೌಕರರು, ಅವರ ಅವಲಂಬಿತ ಸದಸ್ಯರ ತುರ್ತು ಚಿಕಿತ್ಸೆಗೆ ಅನುಕೂಲವಾಗುವಂತೆ ಆಸ್ಪತ್ರೆಗಳಿಂದ ನೀಡುವ ಅಂದಾಜು ಪಟ್ಟಿಯನ್ವಯ ವೈದ್ಯಕೀಯ ಮುಂಗಡವನ್ನು ಮಂಜೂರು ಮಾಡುವ ಕ್ರಮ ಜಾರಿಯಲ್ಲಿರುತ್ತದೆ ಎಂದಿದ್ದಾರೆ. ಈಗಿರುವ ವ್ಯವಸ್ಥೆಯಲ್ಲಿ ಖಾಸಗಿ ಆಸ್ಪತ್ರೆಗಳು ಕೆಎಸ್‌ಆರ್‌ಟಿಸಿ ದರಗಳಿಗಿಂತ ಹೆಚ್ಚಿನ ದರಗಳನ್ನು ಅಂದರೆ, ಆಸ್ಪತ್ರೆಯ ದರಗಳನ್ನು ವಿಧಿಸುತ್ತಿರುತ್ತವೆ. ತತ್ಸಂಬಂಧ ನೌಕರರು ವೈದ್ಯಕೀಯ ಚಿಕಿತ್ಸೆಗಾಗಿ ಭರಿಸಿದ ಮೊತ್ತವು ಪೂರ್ಣ ಪ್ರಮಾಣದಲ್ಲಿ ಮರುಪಾವತಿಯಾಗುವುದಿಲ್ಲ. ಇದರಿಂದಾಗಿ ನೌಕರರು ಆರ್ಥಿಕ ಸಮಸ್ಯೆ ಎದುರಿಸುತ್ತಿರುವ ಹಿನ್ನೆಲೆಯಲ್ಲಿ ಸಂಸ್ಥೆಯು ನೌಕರರು ಹಾಗೂ ಅವರ ಅವಲಂಬಿತ ಕುಟುಂಬ ಸದಸ್ಯರಿಗೆ ಉತ್ತಮ ವೈದ್ಯಕೀಯ ಸೌಲಭ್ಯವನ್ನು ಕಲ್ಪಿಸುವ ಸದುದ್ದೇಶವನ್ನು ಈ ಹೊಂದಿರುತ್ತದೆ. ಅಲ್ಲದೇ, ನಗದು ರಹಿತ ವೈದ್ಯಕೀಯ ವ್ಯವಸ್ಥೆಯನ್ನು ಜಾರಿಗೆ ತರುವುದು ನೌಕರರ ಬಹುದಿನಗಳ ಬೇಡಿಕೆ ಆಗಿರುತ್ತದೆ. ತತ್ಸಂಬಂಧ ಎಲ್ಲಾ ನೊಂದಾಯಿತ ಕಾರ್ಮಿಕ ಸಂಘಟನೆಗಳು ನೌಕರರ ವಂತಿಕೆಯೊಂದಿಗೆ ಉತ್ತಮ ನಗದು ರಹಿತಾ ವೈದ್ಯಕೀಯ ಚಿಕಿತ್ಸಾ ಯೋಜನೆಯನ್ನು ಜಾರಿಗೆ ತರುವಂತೆ ನಿರಂತರವಾಗಿ ಒತ್ತಾಯಿಸುತ್ತಿರುತ್ತವೆ ಎಂದು ಹೇಳಿದ್ದಾರೆ.

## ಹೆಬ್ಬಗೋಡಿಯ 4 ಗಾರ್ಮೆಂಟ್ಸ್ ಗೋದಾಮಿಗೆ ಬೆಂಕಿ: ಭಾರಿ ನಷ್ಟ

• ಉದಯವಾಹಿನಿ, ಆನೇಕಲ್



ಉದಯವಾಹಿನಿ ಚಿತ್ರ

ತಾಲ್ಲೂಕಿನ ಹೆಬ್ಬಗೋಡಿಯಲ್ಲಿ ಗಾರ್ಮೆಂಟ್ಸ್ ಗೋದಾಮಿಗೆ ಆಕಸ್ಮಿಕ ಬೆಂಕಿ ತಗುಲಿ ಕೋಟ್ಯಾಂತರ ಮೌಲ್ಯದ ಬಟ್ಟೆ, ಲೆದರ್ ಸಾಮಗ್ರಿಗಳು ಬೆಂಕಿ ಆಹುತಿಯಾಗಿದೆ.

ಬೆಂಕಿ ನೋಡುತ್ತಿದ್ದಂತೆ ಗೋದಾಮಿನಲ್ಲಿದ್ದ ಕಾರ್ಮಿಕರು, ಸಿಬ್ಬಂದಿ ಹೊರ ಬಂದಿದ್ದರಿಂದ ಯಾವುದೇ ಪ್ರಾಣಾಪಾಯ ಸಂಭವಿಸಿಲ್ಲ.

ತಾಲ್ಲೂಕಿನ ಹೆಬ್ಬಗೋಡಿ ಕೈಗಾರಿಕ ಪ್ರದೇಶ ವ್ಯಾಪ್ತಿಯ ಸೀವಿಂಗ್ ಸಿಸ್ಟಮ್ ಪ್ರೈವೇಟ್ ಲಿಮಿಟೆಡ್, ಐಐಜಿಎಂ ಒರಿಯನ್ ಆಪರೇಲ್ ಟ್ರಿಮ್ಸ್ ಮತ್ತು ಇಂಡಿಯಾ ಏಜೆನ್ಸಿಸ್ ಸೇರಿದಂತೆ ನಾಲ್ಕು ಕಂಪನಿಗಳಿಗೆ ಸೇರಿದ ಗೋದಾಮುಗಳು ಒಂದೆಡೆ ಇದೆ.

ಎಲ್ಲಾ ಗೋದಾಮುಗಳು ಬೆಂಕಿಗೆ ಆಹುತಿಯಾಗಿವೆ. ಕೋಟ್ಯಾಂತರ ರೂಪಾಯಿ ಬೆಲೆ ಬಾಳುವ ವಸ್ತುಗಳು ಸುಟ್ಟು ಕರಕಲಾಗಿವೆ. ಗುರುವಾರ ಸಂಜೆ 5ರ ಸುಮಾರಿನಲ್ಲಿ ಗೋದಾಮಿನಲ್ಲಿ ಇದ್ದಕ್ಕಿದ್ದಂತೆ ಬೆಂಕಿ ಕಾಣಿಸಿಕೊಂಡಿತು. ರಾಸಾಯನಿಕ, ಬಟ್ಟೆಗಳು ಸೇರಿದಂತೆ ಸುಲಭವಾಗಿ ಬೆಂಕಿ ಹೊತ್ತುಕೊಳ್ಳುವ ವಸ್ತುಗಳು ಇದ್ದುದ್ದರಿಂದ ನೋಡ ನೋಡುತ್ತಿದ್ದಂತೆ ಬೆಂಕಿಯ ಕೆನ್ನಾಲಿಗೆ ಎಲ್ಲೆಡೆ ವ್ಯಾಪಿಸಿತು. ಪಕ್ಕದಲ್ಲಿಯೇ ಹಲವಾರು ಕೈಗಾರಿಕೆಗಳಿವೆ. ಬೆಂಕಿಯ ಹೊಗೆಯು ಸುತ್ತಮುತ್ತಲಿನ ಪ್ರದೇಶವನ್ನು ಆವರಿಸಿಕೊಂಡು ಪ್ರದೇಶವೇ ಕಾಣದಂತಹ ಪರಿಸ್ಥಿತಿ ನಿರ್ಮಾಣವಾಯಿತು.ಒಂದು ಗಂಟೆಗೂ ಹೆಚ್ಚು ಕಾಲ ಆರು ಅಗ್ನಿಶಾಮಕ ವಾಹನಗಳು ಬೆಂಕಿ ನಂದಿಸುವಲ್ಲಿ ನಿರತವಾದವು. ಏರಿಯಲ್ ಲ್ಯಾಡರ್ ಪ್ಲಾಟ್ ಫಾರ್ಮ್ ಬಳಸಿ 50 ಅಡಿ ಎತ್ತರದಲ್ಲಿ ಫಾಮ್ ಮಿಶ್ರಿತ ನೀರನ್ನು ಹಾಕುವ ಮೂಲಕ ಬೆಂಕಿಯನ್ನು ನಂದಿಸಲು ಹರಸಾಹಸಪಟ್ಟರು.

## ಮಾನಸಿಕ ರೋಗಿಗಳ ಬಗ್ಗೆ ಹೆಚ್ಚಿನ ನಿಗಾ ವಹಿಸಲು ರಾಷ್ಟ್ರಪತಿ ಮುರ್ಮು ಕರೆ

• ಉದಯವಾಹಿನಿ, ಬೆಂಗಳೂರು




ಉದಯವಾಹಿನಿ ಚಿತ್ರ

ಮಾನಸಿಕ ಆರೋಗ್ಯ ಸಮಸ್ಯೆ ಉಳ್ಳವರನ್ನು ನಿರ್ಲಕ್ಷ್ಯ ಮಾಡದೆ ಅವರನ್ನು ಮುಖ್ಯ ವಾಹಿನಿಗೆ ತರಬೇಕು ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಕರೆ ನೀಡಿದರು.

ರಾಷ್ಟ್ರೀಯ ಆರೋಗ್ಯ, ನರವಿಜ್ಞಾನ ಸಂಸ್ಥೆ (ನಿಮಾನ್ಸ್ )ಸುವರ್ಣ ಮಹೋತ್ಸವ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಮಾತನಾಡಿದ ಅವರು, ಮಾನಸಿಕ ಆರೋಗ್ಯ ಸಮಸ್ಯೆಗೆ ಒಳಗಾದವರ ಬಗ್ಗೆ ಹೆಚ್ಚಿನ ಕಾಳಜಿ ವಹಿಸಬೇಕಾದ ಅಗತ್ಯವಿದೆ ಎಂದು ಹೇಳಿದರು.ಹಿರಿಯ ನಾಗರಿಕರು ಸಾಕಷ್ಟು ಸಮಸ್ಯೆಗೆ ಒಳಗಾಗುತ್ತಾರೆ. ಒತ್ತಡ, ಖಿನ್ನತೆ ಅವರನ್ನು ಬಾಧಿಸುತ್ತದೆ. ಅಂಥವರ ಬಗ್ಗೆಯೂ ಹೆಚ್ಚಿನ ಈ ಮುತುವರ್ಜಿ ವಹಿಸಬೇಕಾಗುತ್ತದೆ ಎಂದರು. ಮಾನಸಿಕ ಸಮಸ್ಯೆಗಳಿಂದ ಬಳಲುವವರ ನೆರವಿಗಾಗಿ ಟೆಲಿ ಮಾನಸ್ ಎಂಬ ಸಹಾಯವಾಣಿ ಆರಂಭಿಸಲಾಗಿದೆ. ದೇಶಾದ್ಯಂತ 53 ಕೇಂದ್ರಗಳಲ್ಲಿ ಕಾರ್ಯ ನಿರ್ವಹಿಸಲಾಗುತ್ತಿದೆ. ಟೆಲಿ ಕೌನ್ಸಿಲಿಂಗ್ ಮೂಲಕವೇ ನೆರವು ನೀಡಲಾಗುತ್ತದೆ. ಇದರ ಪ್ರಯೋಜನವನ್ನು ಮಾನಸಿಕ ಸಮಸ್ಯೆ ಇದ್ದವರು ಪಡೆದುಕೊಳ್ಳಬೇಕು ಎಂದು ತಿಳಿಸಿದರು.

ಆರೋಗ್ಯಕರ ಜೀವನ, ಮನಸ್ಸು ಇದ್ದಾಗ ಒಳ್ಳೆಯ ಸಮಾಜ ನಿರ್ಮಾಣ ಮಾಡಲು ಸಾಧ್ಯವಾಗುತ್ತದೆ ಎಂದ ಅವರು, ದೇಶದ 200 ಆಸ್ಪತ್ರೆಗಳಲ್ಲಿ ನಿಮ್ಹಾನ್ಸ್ ಕೂಡ ಒಂದಾಗಿದ್ದು, ಶಿಕ್ಷಣ, ಮಾನಸಿಕ ಆರೋಗ್ಯ ಸೇವೆಯ ಮೂಲಕ ಅಗ್ರಸ್ಥಾನದಲ್ಲಿ ಇದೆ. ಇದು ಜಾಗತಿಕ ಮಟ್ಟದಲ್ಲೂ ಗುರುತಿಸುವಂತೆ ಮುನ್ನಡೆಯಬೇಕೆಂದು ಸಲಹೆ ಮಾಡಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ, ಕೇಂದ್ರ ಆರೋಗ್ಯ, ಕುಟುಂಬ ಕಲ್ಯಾಣ ಸಚಿವ ಜಗತ್ ಪ್ರಕಾಶ್ ನಡ್ಡಾ, ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣಪ್ರಕಾಶ್ ಪಾಟೀಲ್, ಸಂಸದರಾದ ತೇಜಸ್ವಿ ಸೂರ್ಯ, ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ಪಿ.ಸಿ.ಮೋಹನ್, ಡಾ.ಸಿ.ಎನ್.ಮಂಜುನಾಥ್, ನಿಮ್ಹಾನ್ಸ್ ನಿರ್ದೇಶಕಿ ಡಾ.ಪ್ರತಿಮಾ ಮೂರ್ತಿ ಮೊದಲಾದ ಗಣ್ಯರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

# ಸಾರಿಗೆ ಬಸ್ ಪ್ರಯಾಣ ಏರಿಕೆಗೆ ಕೇಂದ್ರ ಸಚಿವ ಹೆಚ್‌ಡಿಕೆ ಕಿಡಿ

### ರಾಜ್ಯ ಕಾಂಗ್ರೆಸ್ ಸರಕಾರ ಬಸ್ ಪ್ರಯಾಣ ದರವನ್ನು ಶೇಕಡಾ 15ರಷ್ಟು ಹೆಚ್ಚಳ ಮಾಡಿರುವುದಕ್ಕೆ ತೀವ್ರ ಆಕ್ರೋಶ

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ರಾಜ್ಯ ಕಾಂಗ್ರೆಸ್ ಸರಕಾರ ಬಸ್ ಪ್ರಯಾಣ ದರವನ್ನು ಶೇಕಡಾ 15ರಷ್ಟು ಹೆಚ್ಚಳ ಮಾಡಿರುವುದಕ್ಕೆ ತೀವ್ರ ಆಕ್ರೋಶ ವ್ಯಕ್ತಪಡಿ ಸಿದ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರು, ಅಧಿಕಾರಕ್ಕೆ ಬಂದಾಗಿನಿಂದ ಈ ಸರಕಾರ ಜನರ ಮೇಲೆ ಬರೆ ಎಳೆಯುವುದು, ಅದನ್ನು ಜನರೂ ಭರಿಸಿಕೊಂಡು ಹೋಗುವುದು ಮಾಮೂಲಿ ಆಗಿಬಿಟ್ಟಿದೆ ಎಂದು ಹರಿಹಾಯ್ದರು. ಈ ಬಗ್ಗೆ ಮಾಧ್ಯಮಗಳು ಕೇಳಿದ ಪ್ರಶ್ನೆಗಳಿಗೆ ಉತ್ತರ ಕೊಟ್ಟ ಕೇಂದ್ರ ಸಚಿವರು, ಈ ರಾಜ್ಯದಲ್ಲಿ ಸರಕಾರ ಎನ್ನುವುದು ಇದೆಯಾ? ಇದನ್ನು ಸರಕಾರ ಎಂದು ಕರೆಯುತ್ತಾರಾ? ಈ ಸರಕಾರ ಬಂದಾಗಿನಿಂದ ಬರೀ ಬೆಲೆ ಏರಿಕೆ ಮಾಡುವುದೇ ಆಗಿದೆ ಎಂದು ಅವರು ಕಿಡಿಕಾರಿದರು.

ಗ್ಯಾರಂಟಿ ಸಂತೋಷದಲ್ಲಿ ಜನರು ಆಕ್ರೋಶ ವ್ಯಕ್ತಪಡಿಸುತ್ತಿಲ್ಲ ಇದೇ ಕಾಂಗ್ರೆಸ್ ಸರಕಾರ ಡಿಸೇಲ್, ಪೆಟ್ರೋಲ್ ಮೇಲೆ ಸೆಸ್ ಹಾಕಿತ್ತು.ಜನರು ಪ್ರತಿಭಟನೆ ಮಾಡಿದರೆ? ಇಲ್ಲ, ಅದಕ್ಕೆ ಅಡ್ಜೆಸ್ಟ್ ಆದರು. ಮುದ್ರಾಂಕ ಶುಲ್ಕ ಹೆಚ್ಚಳ ಮಾಡಿದರು. ಗೈಡ್ ಲೈನ್ಸ್ ವ್ಯಾಲ್ಯೂ, ಮದ್ಯದ ದರವನ್ನು ಏರಿಕೆ ಮಾಡಿದರು. ಹಾಲಿನ ದರವನ್ನು ಏರಿಕೆ ಮಾಡುತ್ತಾರಂತೆ. ಈಗ ನೀರಿನ ದರವೂ ಏರಿಕೆ ಆಗುತ್ತದೆ ಎನ್ನುವ ಮಾಹಿತಿ ಬರುತ್ತಿದೆ.

ಎಲ್ಲಾ ದರಗಳನ್ನು ಸರಕಾರ ಏರಿಕೆ ಮಾಡುತ್ತಿದೆ. ಆದರೆ, ಗ್ಯಾರಂಟಿ ಸಂತೋಷದಲ್ಲಿ ಜನರು ಆಕ್ರೋಶ ವ್ಯಕ್ತಪಡಿಸುತ್ತಿಲ್ಲ. ಪ್ರತಿಭಟನೆ ಮಾಡುತ್ತಿಲ್ಲ. ಬೆಲೆ ಏರಿಕೆಗೆ ಜನರ ಸಮ್ಮತಿ ಇದೆ ಎಂದು ಸರಕಾರ ಭಾವಿಸಿದಂತಿದೆ ಎಂದು ಕುಮಾರಸ್ವಾಮಿ ಅವರು ಬೇಸರ ವ್ಯಕ್ತಪಡಿಸಿದರು. ಅನಿವಾರ್ಯ ಇದ್ದಾಗ ಮಾತ್ರ ಬೆಲೆ ಏರಿಕೆ ಮಾಡುವುದನ್ನು ನೋಡಿದ್ದೇವೆ. ಹಿಂದಿನ ಸರಕಾರಗಳ ಅವಧಿಯಲ್ಲಿ ಅನಿವಾರ್ಯವಿದ್ದಾಗ ಬೆಲೆ ಏರಿಕೆ ಮಾಡುವುದು, ಕಡಿಮೆ ಮಾಡುವುದು ಸಾಮಾನ್ಯ. ಆದರೆ, ಇವರು ಮಾಡಿರುವ ತಪ್ಪಿಗೆ ಜನರ ಮೇಲೆ ಬರೆ ಎಳೆಯುತ್ತಿದ್ದಾರೆ.

ಎಲ್ಲಾ ಸಮಸ್ಯೆಗಳನ್ನೂ ಸರಕಾರವೇ ಮೈ ಮೇಲೆ ಎಳೆದುಕೊಂಡಿದೆ ಎಂದು ಅವರು ಟೀಕಿಸಿದರು. ವಿದ್ಯುತ್ ಇಲಾಖೆ ಏನಾಗುತ್ತದೋ ಎಲ್ಲೆಲ್ಲಿ ಸಾಧ್ಯವೋ ಅಲ್ಲೆಲ್ಲಾ ಬೆಲೆ ಏರಿಕೆ ಮಾಡಲಾಗುತ್ತಿದೆ. ವಿದ್ಯುತ್ ಇಲಾಖೆ ಏನಾಗುತ್ತದೋ ನೋಡಬೇಕು. ಸರಕಾರದ ಅಸಮರ್ಪಕ ನಿರ್ವಹಣೆಯಿಂದ ಇಲಾಖೆ ಹಾಳಾಗುತ್ತಿದೆ. ಗ್ಯಾರಂಟಿಗಳಲ್ಲಿ ಯುವನಿಧಿ ಯೋಜನೆ ಮಾಡಿದ್ದಾರೆ.

ಇದುವರೆಗೆ ಎಷ್ಟು ಯುವ ಜನರಿಗೆ ಹಣ ಹೋಗಿದೆ. ಈ ಸರಕಾರ ಸ್ವೇಚ್ಛಾಚ್ಚರವಾಗಿ ಹಣ ಖರ್ಚು ಮಾಡುತ್ತಿದೆ. ಸಾರ್ವಜನಿಕರ ತೆರಿಗೆ ಹಣ ದುರ್ಬಳಕೆ ಮಾಡಿಕೊಳ್ಳುತ್ತಿದೆ. ಜನರು ಇದರ ಬಗ್ಗೆ ಅರ್ಥ ಮಾಡಿಕೊಳ್ಳಬೇಕು ಎಂದು ಕೇಂದ್ರ ಸಚಿವರು ಕಿವಿಮಾತು ಹೇಳಿದರು.ಒಂದು ಕೈಯಲ್ಲಿ ಗ್ಯಾರಂಟಿ ಕೊಟ್ಟು ಇನ್ನೊಂದು ಕೈಯಲ್ಲಿ ಕಿತ್ತುಕೊಳ್ಳುತ್ತಿದೆ ಸರಕಾರ. ಈ ಸರಕಾರ ಬಂದ ದಿನದಿಂದ ಇದೇ ನಡೆಯುತ್ತಿದೆ. ಹೀಗೆ ಹೇಳುತ್ತಾ ಹೋದರೆ ಬಹಳಷ್ಟು ಹೇಳಬಹುದು. ಸಂಕ್ರಾಂತಿ ಕಳೆಯಲಿ, ಆಮೇಲೆ ಈ ಸರಕಾರದ ಬಗ್ಗೆ ಚರ್ಚೆ ಮಾಡುತ್ತೇನೆ ಎಂದು ಅವರು ಪ್ರಶ್ನೆಯೊಂದಕ್ಕೆ ಉತ್ತರ ಕೊಟ್ಟರು.

> ನಮ್ಮ ರಾಜ್ಯದಲ್ಲಿ ದರ ಏರಿಕೆ, ಬೆಲೆ ಏರಿಕೆ ಎನ್ನುವುದು ಅಚ್ಚರಿಯ ವಿಷಯ ಅಲ್ಲ. ಸರಕಾರ ಪ್ರಯಾಣ ದರವನ್ನು ಶೇಕಡಾ 15ರಷ್ಟು ಏರಿಕೆ ಮಾಡಿ ಜನರ ಮೇಲೆ ದೊಡ್ಡ ಬರೆ ಹಾಕಿದೆ. ಜನರೂ ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ. ಜನರಿಗೂ ಅಭ್ಯಾಸವಾಗಿ ಹೋಗಿದೆ. ಎರಡು ದಿನ ಆಕ್ರೋಶ ವ್ಯಕ್ತಪಡಿಸಿ ಮೂರನೇ ದಿನ ಮರೆತು ಹೋಗಿ ಪ್ರಯಾಣ ದರ ಏರಿಕೆಗೇ ಅಡ್ಜೆಸ್ಟ್ ಆಗುತ್ತಾರೆ. ಇದು ನೈಜ ಪರಿಸ್ಥಿತಿ ಎಂದು ಕೇಂದ್ರ ಸಚಿವರು ಬೇಸರ ವ್ಯಕ್ತಪಡಿಸಿದರು.

> ಹೊಸ ವರ್ಷದಲ್ಲಿ ರಾಜ್ಯ ಸರಕಾರ ಅಭಿವೃದ್ಧಿಗೆ ಹೊಸ ಕಾರ್ಯಕ್ರಮ ಘೋಷಣೆ ಮಾಡಬೇಕಿತ್ತು. ಆದರೆ, ಬೆಲೆ ಏರಿಕೆ ಘೋಷಣೆ ಮಾಡಿದೆ. ಬೆಲೆ ಏರಿಕೆಗೆ ವರ್ಷಪೂರ್ತಿ ತಯಾರಾಗಿ ಎಂದು ಸರ್ಕಾರ ಜನರಿಗೆ ಸಂದೇಶ ಕೊಡುತ್ತಿದೆ ಎಂದು ಕೇಂದ್ರ ಸಚಿವರು ಲೇವಡಿ ಮಾಡಿದರು.

# ಜನಪ್ರತಿನಿಧಿಗಳು ಮತ್ತು ರೈತರ ಮುಖಾಮುಖಿ ಕಾರ್ಯಕ್ರಮ

## ರೈತ ಸಂಘ ಮತ್ತು ಹಸಿರು ಸೇನೆಯ ರಾಜ್ಯ ಸಂಘಟನೆಗಳ ಏಕೀಕರಣದ ರಾಜ್ಯ ಮುಖಂಡ ಪಚ್ಚೆ ನಂಜುಂಡಸ್ವಾಮಿ ಕರೆ

• **ಉದಯವಾಹಿನಿ, ನಂಜನಗೂಡು**

ಜ.23ರಂದು ತಾಂಡವಪುರ ಗ್ರಾಮದಲ್ಲಿ ಈ ಭಾಗದ ಶಾಸಕರು, ಸಂಸದರೊಂದಿಗೆ ಮುಖಮುಖಿ ಕಾರ್ಯಕ್ರಮವನ್ನು ಆಯೋಜನೆ ಮಾಡಲಾಗಿದ್ದು ಹೆಚ್ಚಿನ ಸಂಖ್ಯೆಯಲ್ಲಿ ರೈತರು ಭಾಗವಹಿಸುವಂತೆ ಕರ್ನಾಟಕ ರಾಜ್ಯ ರೈತ ಸಂಘ, ಹಸಿರು ಸೇನೆಯ ರಾಜ್ಯ ಸಂಘಟನೆಗಳ ಏಕೀಕರಣದ ರಾಜ್ಯ ಮುಖಂಡ ಪಚ್ಚೆ ನಂಜುಂಡಸ್ವಾಮಿ ಕರೆ ನೀಡಿದರು.


ಉದಯವಾಹಿನಿ ಚಿತ್ರ

ಪಟ್ಟಣದ ಎಪಿಎಂಸಿ ಸಭಾಂಗಣದಲ್ಲಿ ನಡೆದ ಪೂರ್ವಭಾವಿ ಸಭೆಯಲ್ಲಿ ಮಾತನಾಡುತ್ತಾ, ಬೆಳಗಾವಿಯಲ್ಲಿ ನವೆಂಬರ್ ತಿಂಗಳಿನಲ್ಲಿ ಸುಮಾರು 25 ಸಾವಿರ ಜನ ಮುತ್ತಿಗೆ ಹಾಕಲಾಗಿತ್ತು.

ಇದು ಇನ್ನೂ ವಿಸ್ತರಿಸಬೇಕು. 80ರ ದಶಕದ ನೆನಪು ಮತ್ತೆ ಮರುಕಳಿಸುವಂತೆ ಮಾಡುತ್ತೇನೆ. ಇದೇ ತಿಂಗಳ 23ರಂದು ತಾಂಡವಪುರ ಗ್ರಾಮದಲ್ಲಿ ಸುಮಾರು 5000 ಜನಸಂಖ್ಯೆ ಸೇರುವ ನಿರೀಕ್ಷೆಯಿದ್ದು,ಮೈಸೂರು, ಚಾಮರಾಜನಗರ, ನಂಜನಗೂಡು, ಗುಂಡ್ಲುಪೇಟೆ, ಕೊಡಗು, ಕೆ ಆರ್ ನಗರ, ಮಂಡ್ಯ ಶಾಸಕರು ಮತ್ತು ಸಂಸದರೊಂದಿಗೆ ರೈತರ ಕಷ್ಟ ಮತ್ತು ನೋವುಗಳನ್ನು ಗಮನಕ್ಕೆ ತಂದು ರೈತರ ಸಮಸ್ಯೆಗಳಿಗೆ ಪರಿಹಾರವನ್ನು ಕೊಂಡುಕೊಳ್ಳುವ ಸಭೆ ಇದಾಗಿದೆ. ಜನಪ್ರತಿನಿಧಿಗಳೊಂದಿಗೆ ಕೇವಲ ವಿರೋಧವನ್ನು ಕಟ್ಟಿಕೊಳ್ಳದೆ, ಸ್ನೇಹ ಸಂಪಾದನೆ ಮಾಡಬೇಕು. ಅವರು ಎಡವಿದಾಗ ವಿರೋಧ ವ್ಯಕ್ತವಾಗುತ್ತದೆ. ಕಬ್ಬಿನ ಕಾರ್ಖಾನೆಗಳು ಒಂದು ಟನ್ ಕಬ್ಬಿನಿಂದ 40,000ಕ್ಕೂರೂ ಹೆಚ್ಚು ಗಳಿಸುತ್ತಿದ್ದಾರೆ.

**ಕರ್ನಾಟಕದಲ್ಲಿ 5500 ಗಳನ್ನು ನಿಗದಿ**

> **ಕಾಡು ಪ್ರಾಣಿಗಳ ಹಾವಳಿಯಿಂದ ಪ್ರಾಣ ಕಳೆದುಕೊಂಡ ಕುಟುಂಬಗಳಿಗೆ ಒಂದು ಕೋಟಿ ಪರಿಹಾರ ನೀಡಬೇಕು ಸೇರಿದಂತೆ ಹಲವು ವಿಚಾರಗಳನ್ನು ಜನಪ್ರತಿನಿಧಿಗಳಿಗೆ ಗಮನಕ್ಕೆ ತಂದು ರೈತರಿಗೆ ಅನುಕೂಲ ಮಾಡಿಕೊಡುವುದು ಸೇರಿದಂತೆ ಇನ್ನೂ ಹತ್ತು ಹಲವು ಸಮಸ್ಯೆಗಳನ್ನು ಪರಿಹರಿಸಿ ಕೊಡುವಂತೆ ಸಭೆಯ ಉದ್ದೇಶವಾಗಿದೆ ಎಂದರು.**

ಆದರೆ ರೈತರಿಗೆ ಸಿಗುತ್ತಿರುವುದು ಕೇವಲ 2800 ರಿಂದ 3,100 ರೂ ಗಳು. ಗುಜರಾತ್, ಮಹಾರಾಷ್ಟ್ರಗಳಲ್ಲಿ ಒಂದು ಟನ್ ಕಬ್ಬಿಗೆ ಆರು ಸಾವಿರ ಇದೆ.

ಕರ್ನಾಟಕದಲ್ಲಿ 5500 ಗಳನ್ನು ನಿಗದಿ ಮಾಡಬೇಕು. ಕ್ವಿಂಟಲ್ ಭತ್ತಕ್ಕೆ ಕಳೆದ ವರ್ಷ 3380 ಇತ್ತು. ಈ ಬಾರಿ ಒಂದು ಸಾವಿರ ರೂಗಳು ಕಡಿಮೆಯಾಗಿದ್ದು ರೈತರು ಸಾಕಷ್ಟು ನಷ್ಟವನ್ನ ಅನುಭವಿಸಿದ್ದಾರೆ. ರಾಜ್ಯದ ಪ್ರಮುಖ ಜಲಾಶಯಗಳಲ್ಲಿ ಹೂ ಳು ತುಂಬಿಕೊಂಡಿದ್ದು , ಹೂಳು ತೆಗೆಸಿದರೆ ಮಾತ್ರ ಹೆಚ್ಚಿನ ನೀರಿನ ಸಂಗ್ರಹವಾಗುತ್ತದೆ.

> **ಶಾಸಕ ದರ್ಶನ್ ಪುಟ್ಟಣ್ಣಯ್ಯ ಸೇರಿದಂತೆ ಕೆಲವು ಶಾಸಕರು ರೈತರ ಸಮಸ್ಯೆಗಳ ಬಗ್ಗೆ ಧ್ವನಿ ಎತ್ತಿದ್ದಾರೆ. ಮತ್ತಷ್ಟು ಶಾಸಕರು ಈ ಬಗ್ಗೆ ಗಮನಹರಿಸಿಲ್ಲ ಹಾಗೂ ಬಗರ್ ಹುಕುಂ ಸಾಗುವಳಿ ಆಗಬೇಕು. ಸಾಗುವಳಿ ಚೀಟಿ ಬಂದಿದೆ. ದುರಸ್ತಿ ಕಾರ್ಯ ಇನ್ನೂ ಆಗಿಲ್ಲ. ವಕ್ಫ್ ವಿಚಾರ ಹಾಗೂ ಮುಜರಾಯಿ ಜಮೀನುಗಳನ್ನು ಬೇರೆಯವರು ಅನುಭವ ಮಾಡುತ್ತಿದ್ದಾರೆ. ಹಾಗೆ ಹಗಲಿನ ಸಮಯದಲ್ಲಿ ರೈತರಿಗೆ ವಿದ್ಯುತ್ ನೀಡಬೇಕು.**

ಎಲ್ಲಾ ಸಮಸ್ಯೆಗಳನ್ನು ಈ ಭಾಗದ ಜನಪ್ರತಿನಿಧಿಗಳಿಗೆ ತಲುಪಿಸುವ ಕೆಲಸವನ್ನು ಮಾಡುತ್ತೇವೆ ಎಂದರು.ನಂತರ ಮೈಸೂರು ಜಿಲ್ಲಾಧ್ಯಕ್ಷ ವಿದ್ಯಾ ಸಾಗರ್ ಮಾತನಾಡಿ, ಕಳೆದ ಬೆಳಗಾವಿ ಅಧಿವೇಶನದಲ್ಲಿ ಮೈಸೂರು, ನಂಜನಗೂಡು, ಗುಂಡ್ಲುಪೇಟೆ, ಸೇರಿದಂತೆ ಹಲವು ಶಾಸಕರುಗಳಿಗೆ ರೈತರ ಸಮಸ್ಯೆ ಗಳನ್ನ ಸದನದಲ್ಲಿ ಧ್ವನಿ ಎತ್ತುವಂತೆ ಮನವಿ ಮಾಡಲಾಗಿತ್ತು.

# 8 ತಿಂಗಳಲ್ಲಿ 365 ಬಾಣಂತಿಯರ ಸಾವು; ಬೆಳಗಾವಿಯಲ್ಲೇ ಅತಿ ಹೆಚ್ಚು

• **ಉದಯವಾಹಿನಿ, ಮಡಿಕೇರಿ**

ರಾಜ್ಯದಲ್ಲಿ ಕಳೆದ ಏಪ್ರಿಲ್‌ನಿಂದ ನವೆಂಬರ್ ಅಂತ್ಯದವರೆಗೆ, ಎಂಟು ತಿಂಗಳ ಅವಧಿಯಲ್ಲಿ 365 ಬಾಣಂತಿಯರು ಮೃತಪಟ್ಟಿದ್ದು, ಬೆಳಗಾವಿಯಲ್ಲಿ ಅತಿ ಹೆಚ್ಚು ಸಾವುಗಳಾಗಿವೆ. 2 Checkout ಶಿವಮೊಗ್ಗ ಉನ್ನತ ದರ್ಜೆಯ ಆಸ್ಪತ್ರೆಗಳುಳ್ಳ ರಾಜ್ಯದ ರಾಜಧಾನಿ ಬೆಂಗಳೂರು ನಗರ ಹಾಗೂ ಕಲ್ಯಾಣ ಕರ್ನಾಟಕದ ಕೇಂದ್ರ ಸ್ಥಾನವಾದ ಕಲಬುರ್ಗಿ ದ್ವಿತೀಯ ಸ್ಥಾನದಲ್ಲಿವೆ. ಶೇ 62ರಷ್ಟು ವೈದ್ಯರು ಹಾಗೂ ಸಿಬ್ಬಂದಿ ಕೊರತೆಯನ್ನು ಎದುರಿಸುತ್ತಿರುವ ಕೊಡಗಿನಲ್ಲಿ ಹಾಗೂ ಚಾಮರಾಜನಗರ ಹಾಗೂ ಚಿಕ್ಕಮಗಳೂರು ಜಿಲ್ಲೆಯಲ್ಲಿ ಈ ಅವಧಿಯಲ್ಲಿ ಎಲ್ಲಾ ಬಾಣಂತಿಯರೂ ಸುರಕ್ಷಿತರಾಗಿ ಮನೆ ಸೇರಿದ್ದಾರೆ. ಹೆರಿಗೆಗೆಂದೇ ಹೊರ ಜಿಲ್ಲೆಗಳಿಂದಲೂ ಕೊಡಗಿಗೆ ಬರುತ್ತಿದ್ದಾರೆ. ಚಾಮರಾಜನಗರ ಹಾಗೂ ಚಿಕ್ಕಮಗಳೂರಿನಲ್ಲಿ ಸಾವು ಸಂಭವಿಸದಿದ್ದರೂ, ಈ ಜಿಲ್ಲೆಗಳ ಬಾಣಂತಿಯರು ಬೇರೆ ಜಿಲ್ಲೆಯ


ಉದಯವಾಹಿನಿ ಚಿತ್ರ

ಉನ್ನತ ಆಸ್ಪತ್ರೆಗಳಲ್ಲಿ ಮೃತಪಟ್ಟಿದ್ದಾರೆ. ಆದರೆ, ಕೊಡಗು ಜಿಲ್ಲೆಯ ಯಾರೊಬ್ಬರೂ ರಾಜ್ಯದ ಯಾವುದೇ ಆಸ್ಪತ್ರೆಯಲ್ಲೂ ಮೃತಪಟ್ಟಿಲ್ಲ. ಕೊಡಗಿನ ಸರ್ಕಾರಿ ಆಸ್ಪತ್ರೆಗಳಲ್ಲಿ 3,530 ಹಾಗೂ ಖಾಸಗಿ ಆಸ್ಪತ್ರೆಗಳಲ್ಲಿ 540 ಸೇರಿದಂತೆ ಒಟ್ಟು 4,070 ಹೆರಿಗೆಗಳಾಗಿದ್ದು ಎಲ್ಲವೂ ಸುಸೂತ್ರವಾಗಿ ನಡೆದಿರುವುದು ವಿಶೇಷ. 2,734 ಸಹಜ ಹಾಗೂ 1,336 ಮಾತ್ರ ಸಿಸೇರಿಯನ್ ಹೆರಿಗೆಗಳಾಗಿದ್ದು, ಸಿಸೇರಿಯನ್ ಹೆರಿಗೆಗಳು ಹೆಚ್ಚುತ್ತಿರುವ ಹೊತ್ತಿನಲ್ಲಿ ಜಿಲ್ಲೆಯ ವೈದ್ಯರು ಸಹಜ ಹೆರಿಗೆಗೇ ಒತ್ತು ನೀಡುತ್ತಿದ್ದಾರೆ.

> **ಜಿಲ್ಲೆಯ 8 ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ದಿನದ 24 ಗಂಟೆಗಳ ಕಾಲ ಹೆರಿಗೆಗೆ ಅವಕಾಶ ಕಲ್ಪಿಸಲಾಗಿದೆ. 7 ಸಮುದಾಯ ಆರೋಗ್ಯ ಕೇಂದ್ರಗಳು, 2 ಸಾರ್ವಜನಿಕರ ಆಸ್ಪತ್ರೆಗಳು , 1 ಕೊಡಗು ವೈದ್ಯಕೀಯ ವಿಜ್ಞಾನಗಳ ಸಂಸ್ಥೆಗೆ ಸೇರಿದ ಬೋಧಕ ಆಸ್ಪತ್ರೆಯಲ್ಲಿ ಹೆರಿಗೆಗಳಾಗುತ್ತಿವೆ. 'ಜಿಲ್ಲೆಯಲ್ಲಿ ಆರೋಗ್ಯ ಇಲಾಖೆ, ಕೊಡಗು ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಎಲ್ಲಾ ಸಿಬ್ಬಂದಿಯು ಗುಣಮಟ್ಟದ ಚಿಕಿತ್ಸೆ, ಆರೈಕೆ ನೀಡುತ್ತಿರುವುದರಿಂದಲೇ ಇದು ಸಾಧ್ಯವಾಗಿದೆ' ಎಂದು ಜಿಲ್ಲಾ ಸಂತಾನೋತ್ಪತ್ತಿ ಮತ್ತು ಮಕ್ಕಳ ಆರೋಗ್ಯ ಕಾರ್ಯಕ್ರಮ ಅಧಿಕಾರಿ ಡಾ.ಎ.ಆರ್. ಮಧುಸೂದನ್ ತಿಳಿಸಿದರು.**

# 4 ವರ್ಷದಿಂದ ದಲಿತರಿಂದಲೇ ಬಹಿಷ್ಕಾರ

• **ಉದಯವಾಹಿನಿ, ಮೈಸೂರು**

ದಲಿತರಿಗೆ ಅನ್ಯ ಕೋಮಿನ ಜನ ಬಹಿಷ್ಕಾರ ಹಾಕಿದ ಅನಿಷ್ಟ ಘಟನೆಗಳನ್ನು ನೋಡಿದ್ದೇವೆ. ಆದರೆ ಇಲ್ಲೊಂದು ಊರಿನಲ್ಲಿ ದಲಿತರ ಮಾದಿಗ ಸಮುದಾಯದ ಕುಟುಂಬಕ್ಕೆ ಅದೇ ಮಾದಿಗ ಸಮುದಾಯದವರು ಸೇರಿ ನಾಲ್ಕು ವರ್ಷದಿಂದ ಬಹಿಷ್ಕಾರ ಹಾಕಿದ್ದಾರೆ. ಈ ಘಟನೆ ಸಿಎಂ ಹುಟ್ಟೂರು ಸಿದ್ದರಾಮನ ಹುಂಡಿ ಗ್ರಾಮದಿಂದ ಕೂಗಳತೆ ದೂರದಲ್ಲಿನ ಶ್ರೀನಿವಾಸಪುರದಲ್ಲಿ ನಡೆದಿದೆ.

ಶ್ರೀನಿವಾಸಪುರ ಗ್ರಾಮದಲ್ಲಿ ಇರುವುದೆಲ್ಲಾ ಮಾದಿಗ ಸಮುದಾಯದ ಜನ. ಸುರೇಶ್ ಕುಟುಂಬಕ್ಕೆ ಅವರದೇ ಮಾದಿಗ ಸಮುದಾಯದ ಜನರು ನಾಲ್ಕು ವರ್ಷದಿಂದ ಬಹಿಷ್ಕಾರ ಹಾಕಿದ್ದಾರೆ. ಗ್ರಾಮದಲ್ಲಿ ನಡೆದ ಗಲಾಟೆಯ ಹಿನ್ನೆಲೆಯಲ್ಲಿ ಸುರೇಶ್‌ಗೆ ಗ್ರಾಮದ ಹಿರಿಯರು 16,000 ರೂ. ದಂಡ ಹಾಕಿದ್ದರು.

ದಂಡ ಕಟ್ಟಲು ಶಕ್ತಿ ಇಲ್ಲದ ಸುರೇಶ್ ದಂಡ ಕಟ್ಟಲು ಸಾಧ್ಯವಿಲ್ಲ ಎಂದಿದ್ದಾರೆ. ಇಷ್ಟಕ್ಕೇ ಈ ಕುಟುಂಬಕ್ಕೆ ಬಹಿಷ್ಕಾರ ಹಾಕಿದ್ದಾರೆ.


ಉದಯವಾಹಿನಿ ಚಿತ್ರ

**ಗ್ರಾಮದ ಹಿರಿಯರು 16,000 ರೂ. ದಂಡ**

ಊರಿನ ದೇವಸ್ಥಾನಕ್ಕೆ ಈ ಕುಟುಂಬಕ್ಕೆ ಪ್ರವೇಶವಿಲ್ಲ. ಊರ ದೇವರ ಮೆರವಣಿಗೆ ವೇಳೆ ದೇವರ ಉತ್ಸವ ಇವರ ಮನೆ ಮುಂದೆ ನಿಲ್ಲುವಂತಿಲ್ಲ. ಗ್ರಾಮದಲ್ಲಿ ಯಾರೂ ಈ ಕುಟುಂಬದವರನ್ನು ಮಾತನಾಡಿಸುವಂತಿಲ್ಲ. ಕೂಲಿಗೆ ಕರೆಯುವಂತಿಲ್ಲ. ಮನೆಯಲ್ಲಿ ಯಾರಾದರೂ ಸತ್ತರೆ ಹೆಣ ಹೊರಲು ಯಾರೂ ಹೋಗುವಂತಿಲ್ಲ ಎಂದು ನಿಯಮ ಜಾರಿ ಮಾಡಿ ಬಹಿಷ್ಕಾರ ಹಾಕಿದ್ದಾರೆ.

# ಬಾಣಂತಿಯರ ಸಾವು ಪ್ರಕರಣ: ಕ್ರಮ ಕೈಗೊಳ್ಳಲು ಕೇಂದ್ರಕ್ಕೆ ಪತ್ರ ಬರೆದ ಸಂಸದ ಸುಧಾಕರ್

• **ಉದಯವಾಹಿನಿ, ಚಿಕ್ಕಬಳ್ಳಾಪುರ**

ರಾಜ್ಯದಲ್ಲಿ ಹೆಚ್ಚುತ್ತಿರುವ ಬಾಣಂತಿಯರ ಸಾವಿಗೆ ನ್ಯಾಯ ಕೊಡಿಸಲು, ಕೇಂದ್ರ ಸರ್ಕಾರ ಮಧ್ಯ ಪ್ರವೇಶಿಸಬೇಕು ಹಾಗೂ ಕೇಂದ್ರ ಸರ್ಕಾರದಿಂದ ಸಂಶೋಧನಾ ತಂಡವನ್ನು ಕಳುಹಿಸಿ ಪರಿಶೀಲಿಸಬೇಕೆಂದು ಸಂಸದ ಡಾ.ಕೆ ಸುಧಾಕರ್ ಅವರು ಕೇಂದ್ರ ಆರೋಗ್ಯ ಸಚಿವ ಜೆ.ಪಿ.ನಡ್ಡಾ ಅವರಿಗೆ ಮನವಿ ಮಾಡಿದ್ದಾರೆ. ಈ ಕುರಿತು ಅವರು ಸಚಿವರಿಗೆ ಪತ್ರ ಬರೆದಿರುವ ಸುಧಾಕರ್, ಕಳೆದ ಕೆಲವು ತಿಂಗಳಿಂದ ರಾಜ್ಯದ ಸರ್ಕಾರಿ ಆಸ್ಪತ್ರೆಗಳಲ್ಲಿ ಬಾಣಂತಿಯರು ಮೃತಪಡುವ ಘಟನೆ ವರದಿಯಾಗುತ್ತಿದೆ. 2024ರ ನವೆಂಬರ್‌ವರೆಗೆ 348 ತಾಯಂದಿರು ಮೃತಪಟ್ಟಿದ್ದಾರೆ. ಆಗಸ್ಟ್‌ನಿಂದ ನವೆಂಬರ್ ವರೆಗೆ ಕೇವಲ 4 ತಿಂಗಳಲ್ಲಿ 217 ಪ್ರಕರಣ ವರದಿಯಾಗಿದೆ. ಈ


ಉದಯವಾಹಿನಿ ಚಿತ್ರ

217 ಪ್ರಕರಣಗಳಲ್ಲಿ 179 ಪ್ರಕರಣಗಳು ಸರ್ಕಾರಿ ಆಸ್ಪತ್ರೆಗಳಿಗೆ ಸಂಬಂಧಿಸಿದ್ದಾಗಿದೆ. ಹೆಚ್ಚಿನವು ಪಿಪಿಎಚ್ ಹಾಗೂ ಎಫ್‌ಇ, ಅನೀಮಿಯ ಹಾಗೂ ನಿರ್ವಹಣೆಯಲ್ಲಿ ಲೋಪಕ್ಕೆ ಸಂಬಂಧಿಸಿದೆ.

ಆಂಟಿಬಯೋಟಿಕ್ ಕೊರತೆ, ತರಬೇತಿ ಹೊಂದಿರುವ ಸಿಬ್ಬಂದಿ ಕೊರತೆ ಮೊದಲಾದವು ಕೂಡ ಇದಕ್ಕೆ ಕಾರಣ ಎಂದು ಅವರು ಪತ್ರದಲ್ಲಿ ವಿವರಿಸಿದ್ದಾರೆ. ಇದರಲ್ಲಿ ರಿಂಜರ್ಸ್ ಲ್ಯಾಕ್ಟೇಟ್ ದ್ರಾವಣದಲ್ಲಿ ದೋಷ ಕೂಡ ಕಾರಣ ಎನ್ನಲಾಗುತ್ತಿದೆ. ಈ ಕುರಿತು ಸಮಗ್ರವಾದ ಪರಿಶೀಲನೆ ನಡೆಯುವ ಅಗತ್ಯವಿದೆ. ಮೊದಲಿಗೆ, ತಾಯಂದಿರ ಮರಣಕ್ಕೆ ಕಾರಣ ಪತ್ತೆ ಮಾಡಲು ತುರ್ತಾಗಿ ಕಾರ್ಯಯೋಜನೆ ರೂಪಿಸಬೇಕಿದೆ. ಜೊತೆಗೆ ಕೇಂದ್ರ ಸರ್ಕಾರದಿಂದ ಸಂಶೋಧನಾ ತಂಡವನ್ನು ಕಳುಹಿಸಿ, ಕಾರಣ ಪತ್ತೆ ಜೊತೆಗೆ, ಪರಿಹಾರ ಶಿಫಾರಸು ಮಾಡಬೇಕಿದೆ. ಗರ್ಭಿಣಿಯರ ಆರೈಕೆ ಹಾಗೂ ಹೆರಿಗೆ ಸಮಯದಲ್ಲಿ ಉತ್ತಮ ಸೇವೆ ನೀಡಲು ಸರ್ಕಾರಿ ಆಸ್ಪತ್ರೆ ಸಿಬ್ಬಂದಿಗೆ ಸೂಕ್ತ ತರಬೇತಿ ನೀಡಬೇಕಿದೆ. ಕಬ್ಬಿಣಾಂಶದ ಆಹಾರ ಸೇವನೆ, ತುರ್ತು ಆರೈಕೆ,

> **ದೇಶದ ಭವಿಷ್ಯದ ದೃಷ್ಟಿಯಿಂದ ನವಜಾತ ಶಿಶು ಹಾಗೂ ತಾಯಂದಿರ ಜೀವ ಕಾಪಾಡುವುದು ಬಹಳ ಅಗತ್ಯ. ಆದ್ದರಿಂದ ತಾವು ಈ ಸಮಸ್ಯೆ ನಿವಾರಣೆಗೆ ಕ್ರಮ ಕೈಗೊಳ್ಳುವ ಮೂಲಕ ಕರ್ನಾಟಕದಲ್ಲಿ ಹಾಗೂ ಭಾರತದ ಯಾವುದೇ ಭಾಗದಲ್ಲಿ ತಾಯಂದಿರು ಮೃತಪಡದಂತೆ ಎಚ್ಚರ ವಹಿಸಲು ಸಾಧ್ಯವಾಗುತ್ತದೆ. ಈ ಎಲ್ಲಾ ಕಾರ್ಯಗಳಿಗೆ ನಾನು ಸಂಪೂರ್ಣ ಸಹಕಾರ ಹಾಗೂ ಬೆಂಬಲ ನೀಡುತ್ತೇನೆ ಎಂದು ಅವರು ಪತ್ರದಲ್ಲಿ ತಿಳಿಸಿದ್ದಾರೆ.**

ಪ್ರತಿ ದಿನ ಆರೋಗ್ಯ ತಪಾಸಣೆ ಸೇರಿದಂತೆ ವಿವಿಧ ವಿಷಯಗಳ ಬಗ್ಗೆ ಗರ್ಭಿಣಿಯರಿಗೆ ಮಾಹಿತಿ ನೀಡಿ ಅರಿವು ಮೂಡಿಸಬೇಕು ಎಂದು ಅವರು ಪತ್ರದಲ್ಲಿ ಕೋರಿದ್ದಾರೆ.

# ತುಮಕೂರಿನ ಮಧುಗಿರಿ ಡಿವೈಎಸ್ಪಿ ಸಸ್ಪೆಂಡ್

• **ಉದಯವಾಹಿನಿ, ತುಮಕೂರು**

ಜಮೀನು ವ್ಯಾಜ್ಯಕ್ಕೆ ಸಂಬಂಧಪಟ್ಟಂತೆ ಮಹಿಳೆ ಒಬ್ಬಳು ದೂರು ನೀಡಲು ಠಾಣೆಯ ಮೆಟ್ಟಿಲು ಏರಿದ್ದಾಳೆ. ಆದರೆ ಠಾಣೆಯಲ್ಲಿದ್ದ ಡಿವೈಎಸ್ಪಿ ಅಧಿಕಾರಿ ಒಬ್ಬ ಮಹಿಳೆಯ ಮೇಲೆ ಲೈಂಗಿಕ ದೌರ್ಜನ್ಯ ಎಸಗಿರುವ ಘಟನೆ ಗೃಹ ಸಚಿವ ಡಾ.ಜಿ ಪರಮೇಶ್ವರ್ ಕ್ಷೇತ್ರ ತುಮಕೂರು ಜಿಲ್ಲೆಯ ಮಧುಗಿರಿಯಲ್ಲಿ ನಡೆದಿತ್ತು.


ಉದಯವಾಹಿನಿ ಚಿತ್ರ

**ರಾಸಲೀಲೆ ವೀಡಿಯೋ ವೈರಲ್**

ಅಲ್ಲದೇ ಡಿವೈಎಸ್ಪಿ ರಾಸಲೀಲೆ ವೀಡಿಯೋ ವೈರಲ್ ಆಗಿತ್ತು. ಈ ಹಿನ್ನಲೆಯಲ್ಲಿ ತುಮಕೂರಿನ ಮಧುಗಿರಿ ಡಿವೈಎಸ್ಪಿಯನ್ನು ಅಮಾನತುಗೊಳಿಸಿ ಐಜಿ ಮತ್ತು ಐಜಿಪಿ ಆದೇಶಿಸಿದ್ದಾರೆ. ಪಾವಗಡದ ಮಹಿಳೆಯೊಬ್ಬರು ಜಮೀನು ವ್ಯಾಜ್ಯದ ಬಗ್ಗೆ ದೂರು ನೀಡಲು ಮಹಿಳೆ ಪಾವಗಡದಿಂದ ಡಿವೈಎಸ್ಪಿ ಕಚೇರಿಗೆ ಬಂದಿದ್ದರು.

ಮಹಿಳೆಯನ್ನು ಏಕಾಂತ ಕೊಠಡಿಗೆ ಕರೆದುಕೊಂಡು ಹೋದ ಡಿವೈಎಸ್‌ಪಿ ರಾಮಚಂದ್ರಪ್ಪ ಲೈಂಗಿಕ ಕಿರುಕುಳ ನೀಡಿದ್ದಾರೆ. ಲೈಂಗಿಕ ದೌರ್ಜನ್ಯ ಎಸಗಿರುವ ವೀಡಿಯೋ ಸದ್ಯ ಎಲ್ಲೆಡೆ ವೈರಲ್ ಆಗಿತ್ತು. ಈ ವಿಡಿಯೊ ವೈರಲ್ ಆಗುತ್ತಿದ್ದಂತೆ ರಾಮಚಂದ್ರಪ್ಪ ತಲೆಮರೆಸಿಕೊಂಡಿದ್ದಾನೆ.

ಗೃಹ ಸಚಿವ ಜಿ. ಪರಮೇಶ್ವರ್ ಅವರ ಜಿಲ್ಲೆಯಲ್ಲಿಯೇ ಇಂತಹ ಘಟನೆ ನಡೆದಿದ್ದು ಇದು ಇಡೀ ಪೊಲೀಸ್ ಇಲಾಖೆಯ ತಲೆ ತಗ್ಗಿಸುವಂತಹ ಘಟನೆಯಾಗಿತ್ತು. ಡಿವೈಎಸ್ಪಿ ಕಚೇರಿಗೆ ಮಹಿಳೆಯ ಜೊತೆ ಆಗಮಿಸಿದ್ದ ಅನಿಲ್ ಎಂಬಾತನು ವಿಡಿಯೋ ಸೆರೆ ಹಿಡಿದಿದ್ದಾರೆ ಎಂದು ಶಂಕಿಸಲಾಗಿದೆ.

ಬಳಿಕ, ಬಳಿಕ ವಾಟ್ಸ್ ಅಪ್ ಮೂಲಕ ವಿಡಿಯೋ ವೈರಲ್ ಮಾಡಿದ್ದಾರೆ ಎಂಬ ಆರೋಪ ಕೇಳಿಬಂದಿದೆ. ಇನ್ನು ವಿಡಿಯೋ ವೈರಲ್ ಆಗುತ್ತಿದ್ದಂತೆ ಡಿವೈಎಸ್ಪಿ ರಾಮಚಂದ್ರಪ್ಪ ತಲೆಮರೆಸಿಕೊಂಡಿದ್ದರು.ಈ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿರುವಂತ ಡಿಜಿ ಮತ್ತು ಐಜಿಪಿಯವರು ತುಮಕೂರಿನ ಮಧುಗಿರಿಯ ಡಿವೈಎಸ್ಪಿ ರಾಮಚಂದ್ರಪ್ಪ ಅವರನ್ನು ಅಮಾನತುಗೊಳಿಸಿ ಆದೇಶಿಸಿದ್ದಾರೆ.

# ಕಾಡುಕೊತ್ತನಹಳ್ಳಿಯಲ್ಲಿ ಕಾನೂನು ಅರಿವು ಜಾಥಾ

• **ಉದಯವಾಹಿನಿ,ಭಾರತೀನಗರ**

ಜನರಲ್ಲಿ ಕಾನೂನು ಬಗ್ಗೆ ಅರಿವು ಕಡಿಮೆಯಿದ್ದು,ಕಾನೂನುಗಳ, ಅಪರಾಧಗಳನ್ನು ಕುರಿತಂತೆ ತಿಳಿಸುವ ಪ್ರಯತ್ನ ಮಾಡಿದಲ್ಲಿ ಅಪರಾಧ ಪ್ರಕರಣಗಳು ಕಡಿಮೆಯಾಗಲಿವೆ' ಎಂದು ಡಿವೈಎಸ್ಪಿ ವಿ.ಕೃಷ್ಣಪ್ಪ ಹೇಳಿದರು.ಸಮೀಪದ ಕಾಡುಕೊತ್ತನಹಳ್ಳಿ ಗ್ರಾಮದಲ್ಲಿ ಅಪರಾಧ ಮಾಸಾಚರಣೆ-2024 ರ ಅಂಗವಾಗಿ ನಡೆದ ಕಾನೂನು ಅರಿವು ಜಾಥಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.ಗ್ರಾಮೀಣ ಪ್ರದೇಶಗಳಲ್ಲಿ ಅಪರಾಧಗಳು ಹೆಚ್ಚಾಗುತ್ತಿದ್ದು ಇದನ್ನು ತಡೆಯಲು ಪೊಲೀಸ್ ಇಲಾಖೆ ಸಾಕಷ್ಟು ಜಾಗೃತಿ ವಹಿಸಿದೆ. ಇಲ್ಲಿಯವರೆಗೆ ಹಲವಾರು ಜಾಗೃತಿ ಕಾರ್ಯಕ್ರಮಗಳನ್ನು ಗ್ರಾಮೀಣ ಪ್ರದೇಶಗಳಲ್ಲಿ ನಡೆಸಲಾಗಿದ್ದು, ಇದರಿಂದಾಗಿ ಸ್ವಲ್ಪ ಮಟ್ಟಿಗಿನ ಪ್ರಯೋಜನ ಕಂಡಿದೆ ಸಾರ್ವಜನಿಕರು ಸಹಕಾರ ನೀಡಿದಲ್ಲಿ ಕಾರ್ಯಕ್ರಮ ಯಶಸ್ವಿಯಾಗಲಿದೆ


ಉದಯವಾಹಿನಿ ಚಿತ್ರ

ಎಂದು ಹೇಳಿದರು. 'ಇತ್ತೀಚೆಗೆ ಒಂಟಿ ಮಹಿಳೆಯರು ರಸ್ತೆಯಲ್ಲಿ ಹೋಗುವಾಗ ಸರಗಳ್ಳತನ ಯಾರೂ ಇಲ್ಲದ ಮನೆಗಳಲ್ಲಿ ದರೋಡೆ ಪ್ರಕರಣಗಳು ಹೆಚ್ಚಾಗುತ್ತಿದ್ದು ಇಂಥ ಪ್ರಕರಣಗಳನ್ನು ತಡೆಯಲು ಬೀಟ್ ಪೊಲೀಸರಿಂದ ಅಪರಾಧ ಮಾಸಾಚರಣೆ ಕಾರ್ಯಕ್ರಮವನ್ನು ಪ್ರತಿ ಗ್ರಾಮಗಳಲ್ಲೂ ನಡೆಸಲಾಗುತ್ತಿದೆ' ಎಂದರು.

ಇನ್‌ಸ್ಪೆಕ್ಟರ್ ಆನಂದ್ ಮಾತನಾಡಿ, ಮೊಬೈಲ್ ಪ್ರಪಂಚ ನಿರ್ಮಾಣವಾಗಿದ್ದು ಇದರಿಂದಲೂ ಹೆಚ್ಚು ಸೈಬರ್ ಅಪರಾಧಗಳು ಹೆಚ್ಚುತ್ತಿವೆ. ಸಾರ್ವಜನಿಕರು ಯಾವುದೇ ಅಪರಿಚಿತ ಕರೆಗಳು ಬಂದರೆ ನಿಮ್ಮ ಬ್ಯಾಂಕ್ ಖಾತೆ ಮನವಿಳಾಸ, ಸೇರಿದಂತೆ ಇನ್ನಿತರೆ ಯಾವುದೇ ವೈಯುಕ್ತಿಕ ಮಾಹಿತಿಗಳನ್ನು ಕೇಳಿದಲ್ಲಿ ನೀಡಬಾರದು' ಎಂದು ಎಚ್ಚರಿಸಿದರು. ಗ್ರಾ.ಪಂ ಅಧ್ಯಕ್ಷ ವೀರಭದ್ರಪ್ಪ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಅಶ್ವಿನಿ, ಗ್ರಾ.ಪಂ ಉಪಾಧ್ಯಕ್ಷ ಲೋಕೇಶ್, ಬೀಟ್ ಪೊಲೀಸ್ ಪೇದೆಗಳಾದ ಆರ್.ಪ್ರಭುಸ್ವಾಮಿ, ವಿ.ಸುಬ್ರಹ್ಮಣ್ಯ, ವಕೀಲ ಶ್ರೀಕಂಠಸ್ವಾಮಿ, ಗ್ರಾ.ಪಂ. ಸದಸ್ಯರು ಉಪಸ್ಥಿತರಿದ್ದರು.

# ಮೈಸೂರಿನಲ್ಲಿ ಅಧಿಕೃತ ಭಾಷಾ ಸಮ್ಮೇಳನ ನಿಯತಕಾಲಿಕೆ ಬಿಡುಗಡೆ

• **ಉದಯವಾಹಿನಿ, ಮೈಸೂರು**

ಕೆಎಸ್‌ಒಯು ಘಟಿಕೋತ್ಸವ ಭವನದಲ್ಲಿ ಅಧಿಕೃತ ಭಾಷೆ ಹಿಂದಿಯ ಪ್ರಾದೇಶಿಕ ಸಮ್ಮೇಳನ ಹಾಗೂ ಪ್ರಶಸ್ತಿ ಪ್ರದಾನವು ಜ.4ರಂದು ಬೆಳಿಗ್ಗೆ 10.15ಕ್ಕೆ ನಡೆಯಲಿದೆ' ಎಂದು ಕೇಂದ್ರ ಗೃಹ ಸಚಿವಾಲಯದ ಅಧಿಕೃತ ಭಾಷಾ ವಿಭಾಗದ ಜಂಟಿ ನಿರ್ದೇಶಕ ರಾಜೇಶ್ ಕುಮಾರ್ ಶ್ರೀವಾತ್ಸವ ತಿಳಿಸಿದರು. ನಗರದ ಭಾರತೀಯ ಭಾಷಾ ಸಂಸ್ಥಾನದಲ್ಲಿ (ಸಿಐಐಎಲ್) ಶುಕ್ರವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, 'ಸಚಿವಾಲಯವು ಆಯೋಜಿಸಿರುವ ದಕ್ಷಿಣ ಹಾಗೂ ನೈರುತ್ಯ ವಿಭಾಗದ ಪ್ರಾದೇಶಿಕ ಸಮ್ಮೇಳನವನ್ನು ಬಿಹಾರ ರಾಜ್ಯಪಾಲ ಆರಿಫ್ ಮೊಹಮ್ಮದ್ ಖಾನ್ ಉದ್ಘಾಟಿಸುವರು' ಎಂದರು. 'ಕೇಂದ್ರ ಗೃಹ ಖಾತೆ ರಾಜ್ಯ ಸಚಿವ ನಿತ್ಯಾನಂದ ರೈ ಅಧ್ಯಕ್ಷತೆ ವಹಿಸಲಿದ್ದು, ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್, ಪಂಜಾಬ್ ನ್ಯಾಷನಲ್ ಬ್ಯಾಂಕ್‌ನ ಕಾರ್ಯನಿರ್ವಾಹಕ ನಿರ್ದೇಶಕ ಬಿನೋದ್ ಕುಮಾರ್, ತಮಿಳುನಾಡು ಕೇಂದ್ರೀಯ ವಿಶ್ವವಿದ್ಯಾಲಯದ ಕುಲಪತಿ ಪ್ರೊ.ಎಂ.ಕೃಷ್ಣನ್, ಕೆಎಸ್‌ಒಯು ಕುಲಪತಿ ಪ್ರೊ.ಶರಣಪ್ಪ ವಿ.ಹಲಸೆ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು' ಎಂದು ಮಾಹಿತಿ ನೀಡಿದರು. 'ಆಂಧ್ರಪ್ರದೇಶ, ಕರ್ನಾಟಕ, ತೆಲಂಗಾಣ, ಕೇರಳ, ತಮಿಳುನಾಡು, ಪಾಂಡಿಚೇರಿ, ಲಕ್ಷದ್ವೀಪದಲ್ಲಿ ಅಧಿಕೃತ ಭಾಷೆಯಾದ ಹಿಂದಿ ಅನುಷ್ಠಾನದಲ್ಲಿ ಆಗಿರುವ ಪ್ರಗತಿ ವರದಿ ಮಂಡಿಸಲಾಗುವುದು. ಇಲ್ಲಿನ ಕೇಂದ್ರ ಸರ್ಕಾರದ ಕಚೇರಿಗಳು, ಬ್ಯಾಂಕ್‌ಗಳಲ್ಲಿ ಭಾಷಾ ಅನುಷ್ಠಾನಗೊಳಿಸಿದ 32 ಉತ್ತಮ ಅಧಿಕಾರಿಗಳು ಹಾಗೂ ಸಿಬ್ಬಂದಿಯನ್ನು ಸನ್ಮಾನಿಸಿ, ಪ್ರಮಾಣ ಪತ್ರ ನೀಡಲಾಗುತ್ತಿದೆ' ಎಂದು ತಿಳಿಸಿದರು.ವಿಭಾಗದ ಉಪ ಕಾರ್ಯದರ್ಶಿ ಅನಿಲ್ ಕುಮಾರ್, ಬೆಂಗಳೂರು ವಿಭಾಗೀಯ ನಿರ್ದೇಶಕ ಅನಿರ್ಬನ್ ಕುಮಾರ್ ಬಿಸ್ವಾಸ್, ಸಿಐಐಎಲ್ ನಿರ್ದೇಶಕ ಪ್ರೊ.ಶೈಲೇಂದ್ರ ಮೋಹನ್, ಎಸ್‌ಬಿಐ ಮುಖ್ಯ ವ್ಯವಸ್ಥಾಪಕಿ ಗಿರಿಜಾ ಕಂಬಾರ್ ಪಾಲ್ಗೊಂಡಿದ್ದರು.'ಕೆಐಒಸಿಎಲ್ (ಕುದುರೆಮುಖ ಕಬ್ಬಿಣದ ಅದಿರು ಕಂಪನಿ ಲಿಮಿಟೆಡ್)ನ 'ಶ್ರೀಗಂಧ', ಕೇಂದ್ರ ಕಾಫಿ ಮಂಡಳಿಯ 'ಕಾಫಿ ಶಾನ್‌ಭಾಗ್' ನಿಯತಕಾಲಿಕೆ ಬಿಡುಗಡೆ ಮಾಡಲಾಗುತ್ತಿದೆ' ಎಂದು ರಾಜೇಶ್ ಶ್ರೀವಾತ್ಸವ ತಿಳಿಸಿದರು.

# ಭೀಮ ಕೋರೆಂಗಾವ್ ವಿಜಯೋತ್ಸವ ಹಿಂದೆ ಸಾಕಷ್ಟು ವಿಚಾರಗಳಿವೆ

## ಭೀಮ ಕೋರೆಂಗಾವ್ ಆಚರಣೆಯ ಬಗ್ಗೆ ಪ್ರತಿಯೊಬ್ಬರು ತಿಳಿದುಕೊಳ್ಳಬೇಕು ಎಂದು ಚರ್ಚ್ ಫಾದರ್ ಟೆನ್ನಿಕುರಿಯನ್ ಹೇಳಿಕೆ

• **ಉದಯವಾಹಿನಿ, ಹನೂರು**

ಭೀಮ ಕೋರೆಂಗಾವ್ ವಿಜಯೋತ್ಸವವನ್ನು ಆಚರಣೆ ಮಾಡುತ್ತಿರುವುದು ತುಂಬಾ ಸಂತೋಷ ವಾಗಿದೆ. ವಿಜಯೋತ್ಸವ ಹಿಂದೆ ಸಾಕಷ್ಟು ವಿಚಾರಗಳಿವೆ. ಭೀಮ ಕೋರೆಂಗಾವ್ ಆಚರಣೆಯ ಬಗ್ಗೆ ಪ್ರತಿಯೊಬ್ಬರು ತಿಳಿದುಕೊಳ್ಳಬೇಕು ಎಂದು ಚರ್ಚ್ ಫಾದರ್ ಟೆನ್ನಿಕುರಿಯನ್ ಅವರು ತಿಳಿಸಿದರು.

ತಾಲ್ಲೂಕಿನ ಮಾರ್ಟಳ್ಳಿ ಗ್ರಾಮದ ಸೆಂಟ್ ತೇರೆಸ್ಸಾ ಚರ್ಚ್ ಅವರಣದ ಸಮುದಾಯ ಭವನದಲ್ಲಿ ಮೈಸೂರು ವಿಭಾಗ, ಚಾಮರಾಜನಗರ ಜಿಲ್ಲೆ ಕರ್ನಾಟಕ ದಲಿತ ಸಂಘರ್ಷ ಸಮಿತಿ ವತಿಯಿಂದ ಹಮ್ಮಿಕೊಂಡಿದ್ದ 207ನೇ ಭೀಮ ಕೋರೆಂಗಾವ್ ವಿಜಯೋತ್ಸವ ಕಾರ್ಯಕ್ರಮವನ್ನು ದೀಪ ಬೆಳಗಿಸಿ ಉದ್ಘಾಟಿಸಿದರು. ನಂತರ ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಗೌರವ ಸಲ್ಲಿಸಿ ನಂತರ ಮಾತನಾಡಿದರು. ನಂತರ ಕೊಳ್ಳೇಗಾಲ ಡಾ. ಬಿ.ಆರ್ ಅಂಬೇಡ್ಕರ್ ಪ್ರತಿಮೆ ನಿರ್ಮಾತೃ ಹಾಗೂ ಪ್ರಥಮ ದರ್ಜೆ ಗುತ್ತಿಗೆದಾರ ಓಲೆ ಮಾದೇವ ಅವರು ಮಾತನಾಡಿ ಭೀಮ ಕೋರಂಗಾವ್ ವಿಜಯೋತ್ಸವ ಆಚರಣೆಯ ವಿಚಾರವನ್ನು


ಉದಯವಾಹಿನಿ ಚಿತ್ರ

ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಸಚಿವರಾದ ಮಹದೇವಪ್ಪ ಅವರ ಗಮನಕ್ಕೆ ತಂದು ಜನವರಿ ಒಂದರ ಭೀಮ ಕೊರಂಗಾವ್ ಆಚರಣೆಯಂದು ರಜಾದಿನವನ್ನಾಗಿ ಘೋಷಣೆಯನ್ನಾಗಿ ಮಾಡಬೇಕು ಎಂದು ತಿಳಿಸಿದರು.

206 ವರ್ಷಗಳ ಹಿಂದೆ ಪೇಶ್ವೆಯ 25ಸಾವಿರ ಸೈನಿಕರ ವಿರುದ್ಧ ಐನೂರು ಮಂದಿ ದಲಿತ ಮಹಾರ್ ಸೈನಿಕರು ಹೋರಾಡಿದ ಜನವರಿ ಒಂದನ್ನು ದಲಿತರು ನಾವು ಅನುಭವಿಸಿದ ಅಸ್ಪೃಶ್ಯತೆಯ ನೋವು ಸಂಕಟಗಳ ಪ್ರತಿರೋಧ ದಿನವನ್ನಾಗಿ ದೇಶ್ಯಾದ್ಯಂತ ಆಚರಿಸಲಾಗುತ್ತದೆ. ಸಂವಿಧಾನದ ಅಡಿಯಲ್ಲಿ ನಮ್ಮ ಹಕ್ಕುಗಳನ್ನು ಪಡೆದು ಕೊಳ್ಳಬೇಕು ಎಂದು ತಿಳಿಸಿದರು.

> **ದಲಿತರನ್ನು ಆಸ್ಪಕ್ತತೆಯಿಂದ ನೋಡುತ್ತಿದ್ದರು. ದಲಿತರು ಸಮಾಜದಲ್ಲಿ ಶೈಕ್ಷಣಿಕವಾಗಿ ಹಿಂದುಳಿದ್ದರು. ಅಂಬೇಡ್ಕರ್ ಅವರ ಸಂವಿಧಾನದ ಕೊಡುಗೆಯಿಂದ ಇವತ್ತು ಸಮಾಜದಲ್ಲಿ ಸಮಾನತೆ ಸ್ವಾತಂತ್ರ್ಯ ಬಂದಿದೆ. ನಮ್ಮ ದೇಶಕ್ಕೆ ಅಮೂಲ್ಯವಾದ ಸಂವಿಧಾನವನ್ನು ಕೊಡುಗೆಯಾಗಿ ನೀಡಿದ ಮಹಾನ್ ನಾಯಕರು ಡಾಕ್ಟರ್ ಬಿ.ಆರ್ ಅಂಬೇಡ್ಕರ್ ಅವರ ತತ್ವ ಆದರ್ಶಗಳ ಬಗ್ಗೆ ತಿಳಿದುಕೊಂಡು. ಶಿಕ್ಷಣ ಕೊಡಿಸುವ ನಿಟ್ಟಿನಲ್ಲಿ ಸಮಾಜದಲ್ಲಿ ಬೆಳೆಯುವಂತಾಗಬೇಕು.**

ಫಾದರ್ ಟೆನ್ನಿಕುರಿಯನ್ ಅವರು ಭೀಮ ಕೊರಂಗಾವ್ ಪುಸ್ತಕವನ್ನು ಬಿಡುಗಡೆ ಮಾಡಿದರು. ಚಾಮರಾಜನಗರ ಜಿಲ್ಲಾ ಎಸ್.ಸಿ ಎಸ್.ಟಿ ಗುತ್ತಿಗೆದಾರ ಸಂಘದ ಅಧ್ಯಕ್ಷ ಎಂ.ಎಸ್ ಮಾದಯ್ಯ, ಡಾ.ಬಿಆರ್ ಅಂಬೇಡ್ಕರ್ ನ್ಯಾಷನಲ್ ಫಿಲೋಸಫಿ

> **ಬಾಬಾ ಸಾಹೇಬ್ ಡಾಕ್ಟರ್ ಬಿ.ಆರ್ ಅಂಬೇಡ್ಕರ್ ಅವರು ಭಾರತಕ್ಕೆ ಸಂವಿಧಾನವನ್ನು ಕೊಡುಗೆಯಾಗಿ ನೀಡಿದ್ದಾರೆ, ಭಾರತದಲ್ಲಿ ಜೀವಿಸುವ ಎಲ್ಲರಿಗೂ ಜನರು ಸಮಾಜದಲ್ಲಿ ಸರಿ ಸಮಾನ ಸ್ಥಾನ ಮಾನ ಸಿಗಬೇಕು ಎನ್ನುವ ನಿಟ್ಟನಲ್ಲಿ ಎಲ್ಲರ ವರ್ಗದ ಜನರಿಗೆ ಜಾತಿ ಜನಾಂಗಕ್ಕೆ ಸೇರಿದ ಸಂವಿಧಾನ ನೀಡಿದ್ದಾರೆ. ಅದನ್ನು ಅರ್ಥ ಮಾಡಿಕೊಳ್ಳಬೇಕು ಎನ್ನುವ ಸಂದೇಶವನ್ನು ನೀಡಿದ್ದಾರೆ. ಸಮಾಜ ಮುಂದೆ ಬರ ಬೇಕಾದರೆ ವಿದ್ಯಾವಂತರಾಗಬೇಕು.**

ಪ್ರಶಸ್ತಿ ಪುರಸ್ಕೃತರು ರಾಮಲಿಂಗಂ ಅವರಿಗೆ ನಿಂಪುವಾರ್ತೆ ಪತ್ರಿಕೆ ಸಂಪಾದಕ ರಾಜೇಶ್ ಅವರು ಸನ್ಮಾನಿಸಿದರು. ಮೊದಲು ಮಾರ್ಟಳ್ಳಿ ಗ್ರಾಮದಲ್ಲಿ ನಡೆದ ಭೀಮ ಕೋರೆಂಗಾವ್ ವಿಜಯೋತ್ಸವ ಆಚರಣೆಯ ವಿಶೇಷ.ಗ್ರಾಮದ ಮುಖ್ಯ ರಸ್ತೆಯಲ್ಲಿ ಜೈ ಭೀಮ್ ಬಾವುಟ ಹಿಡಿದು ಘೋಷಣೆ ಕೂಗುತ್ತ ಮೆರವಣಿಗೆ ಮಾಡಲಾಯಿತು.

# ಮಿನಿ ನ್ಯೂಸ್

## ನ್ಯೂ ಇಯರ್ ಪಾರ್ಟಿ ವೇಳೆ ವ್ಯಕ್ತಿಯನ್ನು ಕೊಂದು ಬಾವಿಗೆ ಎಸೆದ ದುರುಳರು!

• **ಉದಯವಾಹಿನಿ, ರಾಮನಗರ**

ಹೊಸ ವರ್ಷಕ್ಕೆ ಎಂದು ಪಾರ್ಟಿ ಮಾಡಲು ತೆರಳಿದ್ದ ವ್ಯಕ್ತಿಯನ್ನು ಭೀಕರವಾಗಿ ಕೊಂದು ದುಷ್ಕರ್ಮಿಗಳು ಬಾವಿಗೆ ಎಸೆದಿರುವ ಘಟನೆ ರಾಮನಗರ ಜಿಲ್ಲೆಯ ಚನ್ನಪಟ್ಟಣ ತಾಲ್ಲೂಕಿನ ಮಳೂರಿನಲ್ಲಿ ನಡೆದಿದೆ.ಮೃತ ವ್ಯಕ್ತಿಯನ್ನು ಚನ್ನಪಟ್ಟಣ ತಾಲ್ಲೂಕಿನ ಮಳೂರು ಪಟ್ಟಣ ಗ್ರಾಮದ ವಾಟರ್ ಮನ್ ಮಧುಕುಮಾರ್ (31) ಎಂದು ಗುರುತಿಸಲಾಗಿದ್ದು. ಮಧು ಕುಮಾರ್ ನನ್ನು ಕೊಲೆಮಾಡಿ ಬಾವಿಗೆ ಎಸೆಯಲಾಗಿದೆ.ಜನವರಿ 1ರಂದು ಈ ಒಂದು ಕೊಲೆ ನಡೆದಿದ್ದು, ಎಂದು ತಡವಾಗಿ ಬೆಳಕಿಗೆ ಬಂದಿದೆ. ಹೊಸವರ್ಷದ ಪಾರ್ಟಿ ಮಾಡಲೆಂದು ಹೆಂಡತಿಯ ದೊಡ್ಡಪ್ಪನ ಮಗ ಸಾಗರ್ ಎಂಬಾತನ ಜೊತೆ ತೆರಳಿದ್ದ ಮಧು, ಎರಡು ದಿನವಾದರೂ ಮನೆಗೆ ಬಾರದ ಹಿನ್ನೆಲೆ ಪೊಲೀಸ್ ಠಾಣೆಯಲ್ಲಿ ನಾಪತ್ತೆ ದೂರು ದಾಖಲು ಮಾಡಲಾಗಿತ್ತು. ಬೆಳಿಗ್ಗೆ ಕೊಣ್ಣೂರು ತೊರೆ ಬಳಿ ಬಾವಿಯಲ್ಲಿ ಶವ ಪತ್ತೆಯಾಗಿದೆ. ಪ್ರಕರಣ ದಾಖಲಿಸಿಕೊಂಡ ಪೊಲೀಸರು ತನಿಖೆ ಕೈಗೊಂಡಿದ್ದಾರೆ.

## ಟಾಟಾ ಎಸ್ ವಾಹನವೊಂದು ನಿಯಂತ್ರಣ ತಪ್ಪಿ ಪಲ್ಟಿ

• **ಉದಯವಾಹಿನಿ, ತುಮಕೂರು**

ಜಿಲ್ಲೆಯಲ್ಲಿ ಟಾಟಾ ಎಸ್ ವಾಹನವೊಂದು ನಿಯಂತ್ರಣ ತಪ್ಪಿ ಪಲ್ಟಿಯಾದ ಪರಿಣಾಮ ಶಾಲಾ ಮಕ್ಕಳಿಗೆ ಗಾಯವಾಗಿರುವಂತ ಘಟನೆ ನಡೆದಿದೆ. 15ಕ್ಕೂ ಹೆಚ್ಚು ಮಕ್ಕಳು ಗಾಯಗೊಂಡಿದ್ದು ಅವರನ್ನು ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ಕೊಡಿಸಲಾಗುತ್ತಿದೆ. ತುಮಕೂರು ಜಿಲ್ಲೆಯ ಕೊರಟಗೆರೆ ತಾಲ್ಲೂಕಿನ ಗೌಡನಕುಂಟೆ ಬಳಿಯಲ್ಲಿ ಟಾಟಾ ಎಸ್ ವಾಹನ ಪಲ್ಟಿಯಾದ ಪರಿಣಾಮ 15ಕ್ಕೂ ಹೆಚ್ಚು ಶಾಲಾ ಮಕ್ಕಳು ಗಾಯಗೊಂಡಿರುವಂತ ಘಟನೆ ನಡೆದಿದೆ. ಕೊರಟಗೆರೆ ತಾಲ್ಲೂಕು ಚಿಂಪುಗಾನಹಳ್ಳಿ ಶಾಲೆಯ ಶಿಕ್ಷಕ ಕೃಷ್ಣಮೂರ್ತಿ ಎಂಬುವರು 35 ಮಕ್ಕಳನ್ನು ತುಂಬಿಕೊಂಡು ಟಾಟಾ ಏಸ್ ನಲ್ಲಿ ಪ್ರವಾಸಕ್ಕೆ ತಾವೇ ಚಾಲನೆ ಮಾಡಿಕೊಂಡು ಕರೆದೊಯ್ಯುತ್ತಿದ್ದರು. ಈ ವೇಳೆ ಗೌಡನಕುಂಟೆಯ ಬಳಿಯಲ್ಲಿ ವಾಹನ ಪಲ್ಟಿಯಾಗಿದೆ. ಈ ಘಟನೆಯಲ್ಲಿ 15ಕ್ಕೂ ಹೆಚ್ಚು ಮಕ್ಕಳು ಗಾಯಗೊಂಡಿದ್ದು, ಕೊರಟಗೆರೆ, ತುಮಕೂರು ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ಕೊಡಿಸಲಾಗುತ್ತಿದೆ.

## ಪ್ರವಾಸಿಗರಿಂದ ಹಣ ವಸೂಲಿ ಆರೋಪ

• **ಉದಯವಾಹಿನಿ, ಶ್ರೀರಂಗಪಟ್ಟಣ**

ತಾಲ್ಲೂಕಿನ ಕೆ.ಆರ್.ಎಸ್ ಪೊಲೀಸ್ ಠಾಣೆಯ ಮೂವರು ಪೊಲೀಸರನ್ನು ಕರ್ತವ್ಯಲೋಪದ ಆರೋಪದ ಮೇಲೆ ಸೇವೆಯಿಂದ ಅಮಾನತು ಮಾಡಲಾಗಿದೆ. ಠಾಣೆಯ ಹೆಡ್ ಕಾನ್‌ಸ್ಟೆಬಲ್ ಪುರುಷೋತ್ತಮ, ಕಾನ್‌ಸ್ಟೆಬಲ್‌ಗಳಾದ ಅನಿಲ್‌ಕುಮಾರ್, ಪ್ರಭುಸ್ವಾಮಿ ಎಂಬವರನ್ನು ಮಂಡ್ಯ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ ಅಮಾನತು ಮಾಡಿ ಆದೇಶ ಹೊರಡಿಸಿದ್ದಾರೆ. ಕೆ.ಆರ್. ಎಸ್. ಬೃಂದಾವನಕ್ಕೆ ಬಂದ ಪ್ರವಾಸಿಗರ ವಾಹನಗಳಿಂದ ಅಕ್ರಮವಾಗಿ ಹಣ ವಸೂಲಿ ಮಾಡುತ್ತಿದ್ದ ಆರೋಪ ಕೇಳಿಬಂದ ಮೇರೆಗೆ ಅಮಾನತು ಮಾಡಲಾಗಿದೆ ಎನ್ನಲಾಗಿದೆ. ಇದಕ್ಕೆ ಸಂಬಂಧಿಸಿದ ವಿಡಿಯೊಗಳು ಸಾಮಾಜಿಕ ಜಾಲತಾಣದಲ್ಲಿ ಹರಿದಾಡುತ್ತಿವೆ. 'ಸಾರ್ವಜನಿಕರ ದೂರುಗಳಿಗೆ ಸರಿಯಾಗಿ ಸ್ಪಂದಿಸದೇ ಇರುವುದು ಅಶಿಸ್ತಿನ ವರ್ತನೆ ತೋರಿದ ಕಾರಣ ಈ ಮೂವರನ್ನು ಎಸ್ಪಿ ಅಮಾನತು ಮಾಡಿದ್ದಾರೆ' ಎಂದು ಕೆಆರ್‌ಎಸ್ ಠಾಣೆಯ ಸಿಪಿಐ ಟಿ.ಎಂ. ಪುನೀತ್ ತಿಳಿಸಿದ್ದಾರೆ.

## ಮಲೆ ಮಹದೇಶ್ವರ ಬೆಟ್ಟದಲ್ಲಿ ಸಂಪುಟ ಸಭೆ ನಡೆಸಲು ಸರ್ಕಾರ ನಿರ್ಧಾರ

• **ಉದಯವಾಹಿನಿ, ಚಾಮರಾಜನಗರ**

ಮಲೆ ಮಹದೇಶ್ವರ ಬೆಟ್ಟದಲ್ಲಿ ರಾಜ್ಯ ಸಚಿವ ಸಂಪುಟ ಸಭೆ ನಡೆಸಲು ಸರ್ಕಾರ ನಿರ್ಧರಿಸಿದೆ. ಇದೇ ಫೆ.13ಕ್ಕೆ ಸಂಪುಟ ಸಭೆ ನಿಗದಿಯಾಗಿದೆ. ಚಾಮರಾಜನಗರ ಜಿಲ್ಲೆಯ ಹನೂರು ತಾಲ್ಲೂಕಿನ ಮಲೆ ಮಹದೇಶ್ವರ ಬೆಟ್ಟದ ಮಹದೇಶ್ವರ ಪ್ರತಿಮೆ ಇರುವ ಸುಂದರ ಪರಿಸರದಲ್ಲಿ ಸಚಿವ ಸಂಪುಟ ಸಭೆ ನಡೆಯಲಿದೆ. ಇದೇ ಮೊದಲ ಬಾರಿಗೆ ಗಡಿ ಜಿಲ್ಲೆಯಲ್ಲಿ ಸಂಪುಟ ಸಭೆ ನಡೆಯುತ್ತಿದೆ. ಬೆಳಗಾವಿ, ಕಲಬುರಗಿ ನಂತರ ಇದೀಗಾ ಚಾಮರಾಜನಗರ ಜಿಲ್ಲೆಯಲ್ಲಿ ಕ್ಯಾಬಿನೆಟ್ ಮೀಟಿಂಗ್ ನಿಕ್ಕಿಯಾಗಿದೆ. ಗಿರಿಜನರಿಗೆ ವಸತಿ ಸೇರಿದಂತೆ ಜಿಲ್ಲೆಗೆ ವಿಶೇಷ ಪ್ಯಾಕೇಜ್ ಘೋಷಣೆ ಸಾಧ್ಯತೆ ಇದೆ.ಜಿಲ್ಲಾಡಳಿತದಿಂದ ಈಗಾಗಲೇ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಕೆಯಾಗಿದೆ. ಕ್ಯಾಬಿನೆಟ್ ಮೀಟಿಂಗ್‌ಗೆ ಜಿಲ್ಲಾಡಳಿತದಿಂದ ಸಿದ್ಧತೆ ಆರಂಭವಾಗಿದೆ. ಹನೂರು ಶಾಸಕ ಮಂಜುನಾಥ್ ಅವರು ಸ್ಥಳ ಪರಿಶೀಲನೆ ಮಾಡಿದ್ದಾರೆ ಎಂದು ಚಾಮರಾಜನಗರ ಜಿಲ್ಲಾಧಿಕಾರಿ ಶಿಲ್ಪಾನಾಗ್ ತಿಳಿಸಿದ್ದಾರೆ.

## ಬೆಳ್ಳಂಬೆಳಗ್ಗೆ ರಾಮನಗರ ಟೌನ್ ವ್ಯಾಪ್ತಿಯಲ್ಲಿ ಕಾಡಾನೆಗಳು ಪ್ರತ್ಯಕ್ಷ

• **ಉದಯವಾಹಿನಿ, ರಾಮನಗರ**

ಜಿಲ್ಲೆಯಲ್ಲಿ ಕಾಡಾನೆಗಳ ಉಪಟಳ ನಿರಂತರವಾಗಿ ಮುಂದುವರೆದಿದ್ದು, ಬೆಳ್ಳಂಬೆಳಗ್ಗೆ ರಾಮನಗರ ನಗರ ವ್ಯಾಪ್ತಿಯಲ್ಲಿ ಎರಡು ಕಾಡಾನೆಗಳು ಪ್ರತ್ಯಕ್ಷವಾಗಿ ಜನರಲ್ಲಿ ಆತಂಕ ಹೆಚ್ಚಿಸಿವೆ.ರಾಮನಗರ ಟೌನ್ ವ್ಯಾಪ್ತಿಯ ರಂಗರಾಯರ ಕೆರೆ ಸಮೀಪ ಕಾಡಾನೆ ಕಂಡು ಪಕ್ಕದ ಪಾರ್ಕ್‌ನಲ್ಲಿ ವಾಕಿಂಗ್ ಮಾಡುತ್ತಿದ್ದ ಜನ ಎದ್ನೋ ಬಿದ್ನೋ ಎಂದು ಓಡಿದ್ದಾರೆ. ಕೂಡಲೇ ಅರಣ್ಯ ಇಲಾಖೆಗೆ ಮಾಹಿತಿ ನೀಡಿದ ಹಿನ್ನೆಲೆ ಸ್ಥಳಕ್ಕೆ ಬಂದ ಅರಣ್ಯ ಇಲಾಖೆ ಸಿಬ್ಬಂದಿ ಕಾಡಾನೆಗಳನ್ನು ವಾಪಸ್ ಕಾಡಿಗಟ್ಟುವ ಕೆಲಸ ಮಾಡುತ್ತಿದ್ದಾರೆ.ಪಕ್ಕದ ದೊಡ್ಡಮಣ್ಣುಗುಡ್ಡೆ ಅರಣ್ಯ ವ್ಯಾಪ್ತಿಯಿಂದ ನಗರ ಪ್ರದೇಶಕ್ಕೆ ಬಂದಿರುವ ಕಾಡಾನೆಗಳು ರಂಗರಾಯರದೊಡ್ಡಿ ಲೇಔಟ್‌ನಲ್ಲಿ ಓಡಾಡಿ ಬಳಿಕ ಪಕ್ಕದ ಬೆಟ್ಟವನ್ನೇರಿವೆ. ನಿತ್ಯ ಒಂದಲ್ಲ ಒಂದು ಕಡೆ ಕಾಡಾನೆಗಳು ಉಪಟಳ ನೀಡುತ್ತಿರುವುದು ಅರಣ್ಯ ಇಲಾಖೆಗೆ ತಲೆನೋವಾಗಿ ಪರಿಣಮಿಸಿದೆ.

## ಸಹಕಾರ ಸಂಘದ ಅಧ್ಯಕ್ಷರಾಗಿ ಕೆ.ಎನ್ ಅಯ್ಯಪ್ಪ ಆಯ್ಕೆ

• **ಉದಯವಾಹಿನಿ, ವಿರಾಜಪೇಟೆ**

ಸಮೀಪದ ಕೆದಮುಳ್ಳೂರು ಗ್ರಾಮದ ಪ್ರಾಥಮಿಕ ಪತ್ತಿನ ಸಹಕಾರ ಸಂಘದ ಅಧ್ಯಕ್ಷರಾಗಿ ಕರಿನೆರವಂಡ ಎನ್. ಅಯ್ಯಪ್ಪ ಹಾಗೂ ಉಪಾಧ್ಯಕ್ಷರಾಗಿ ಪಟ್ರಪಂಡ ಪ್ರಿನ್ಸ್ ಮೊಣ್ಣಪ್ಪ ಅವರು ಅವಿರೋಧವಾಗಿ ಆಯ್ಕೆಯಾಗಿ ಅಧಿಕಾರ ವಹಿಸಿಕೊಂಡರು. ಕೆ.ಎನ್. ಅಯ್ಯಪ್ಪ ಮಾತನಾಡಿ, ಸಂಘದ ಏಳಿಗೆಗಾಗಿ ಆಡಳಿತ ಮಂಡಳಿಯ ಸರ್ವ ಸದಸ್ಯರ ಸಹಕಾರ ಅಗತ್ಯ. ಸಂಘವನ್ನು ಮಾದರಿ ಸಂಘವಾಗಿಸುವ ನಿಟ್ಟಿನಲ್ಲಿ ಪ್ರತಿಯೊಬ್ಬರೂ ಕೈಜೋಡಿಸಬೇಕೆಂದು ಮನವಿ ಮಾಡಿದರು.

ಅಂತರಾಳದಿಂದ..
EDITORIAL

# ಮಣಿಪುರ: ಕ್ಷಮೆ ಯಾಚನೆಯಿಂದ ಶಾಂತಿ ಸ್ಥಾಪನೆ ಸಾಧ್ಯವೆ?

ಮೂಲಕ ಮಣಿಪುರ ಹಿಂಸಾಚಾರದಲ್ಲಿ ಸರಕಾರದ ವೈಫಲ್ಯವನ್ನು ಬಿಜೆಪಿ ನೇತೃತ್ವದ ಸರಕಾರ ಮೊದಲ ಬಾರಿಗೆ ಒಪ್ಪಿಕೊಂಡಂತಾಗಿದೆ. ಆದರೆ ಮಣಿಪುರದ ಬುಡಕಟ್ಟು ಜನರಿಗಾದ ಅನ್ಯಾಯವನ್ನು ಒಂದು ಕ್ಷಮೆಯಿಂದ ಸರಿಪಡಿಸುವುದಕ್ಕಾಗುವುದಿಲ್ಲ. ಸಂತ್ರಸ್ತರಿಗೆ ನ್ಯಾಯ ಸಿಗದೇ ಮುಖ್ಯಮಂತ್ರಿ ಬಿರೇನ್ ಸಿಂಗ್ ಅವರ ಕ್ಷಮೆಗೆ ಯಾವ ಅರ್ಥವೂ ಇಲ್ಲ. ತನ್ನ ಕ್ಷಮೆಯಾಚನೆಯ ಸಂದರ್ಭದಲ್ಲಿ ಅನ್ಯಾಯಗಳ ಹಿಂದಿರುವ ದುಷ್ಕರ್ಮಿಗಳಿಗೆ ಶಿಕ್ಷೆ ವಿಧಿಸುವ, ಸಂತ್ರಸ್ತರಿಗೆ ಪರಿಹಾರಗಳನ್ನು ನೀಡುವ, ಬುಡಕಟ್ಟು ಸಮುದಾಯಗಳ ಅಭದ್ರತೆಯನ್ನು ನೀಗಿಸುವ ಯಾವ ಭರವಸೆಯನ್ನೂ ಅವರು ನೀಡಿಲ್ಲ. ಅಂದರೆ ಹೊಸ ವರ್ಷದ ಬಗ್ಗೆ ಮಣಿಪುರ ವಿಶೇಷ ನಿರೀಕ್ಷೆಯನ್ನೇನೂ ಇಟ್ಟುಕೊಳ್ಳುವಂತಿಲ್ಲ.ಮಣಿಪುರದಲ್ಲಿ ಸಂಘರ್ಷ ಭುಗಿಲೇಳುವುದಕ್ಕೆ ಮುಖ್ಯ ಕಾರಣವೇ ಸರಕಾರದ ಒಡೆದು ಆಳುವ ನೀತಿ ಸ್ಥಳೀಯ ಬಲಾಢ್ಯ ಸಮುದಾಯವಾಗಿರುವ ಮೈಕ್ಕೆ ಜನರನ್ನು ಓಲೈಸುವ ನಿಟ್ಟಿನಲ್ಲಿ ಸರಕಾರ ತೆಗೆದುಕೊಂಡ ನಿರ್ಧಾರವೇ ಎಲ್ಲಾ ಅನಾಹುತಗಳಿಗೆ ಕಾರಣವಾಯಿತು. ಮೈಕ್ಕೆ ಸಮುದಾಯಕ್ಕೆ ಬುಡಕಟ್ಟು ಸ್ಥಾನಮಾನ ನೀಡುವ ಸರಕಾರದ ನಿರ್ಧಾರ, ಸ್ಥಳೀಯ ಕುಕಿ ಸಮುದಾಯದ ಜನರಲ್ಲಿ ಅಭದ್ರತೆಯನ್ನು ಆತಂಕವನ್ನು ಮೂಡಿಸಿತು. ಅದರ ವಿರುದ್ಧ ಒಂದಾಗುತ್ತಿದ್ದಂತೆಯೇ ಮೈತ್ಯ ಸಮುದಾಯವನ್ನು ಕುಕಿಗಳ ವಿರುದ್ಧ ಸರಕಾರವೇ ಪರೋಕ್ಷವಾಗಿ ಎತ್ತಿಕಟ್ಟಿತು. ಮಣಿಪುರ ಹಿಂಸಾಚಾರದ ಹಿಂದೆ ಸಂಘಪರಿವಾರದ ಕೈವಾಡಗಳಿವೆ ಎನ್ನುವ ಆರೋಪ ಹಿಂದಿನಿಂದಲೂ ಇವೆ. ಸರಕಾರದ ಕೈ ಮೀರಿ ಒಂದೆರಡು ವಾರಗಳು ಹಿಂಸಾಚಾರ ನಡೆಯುವುದಿದೆ. ಆದರೆ ಪರಿಸ್ಥಿತಿ ಕೈ ಮೀರಿದಾಗ ಕೇಂದ್ರದ ಸಹಕಾರದೊಂದಿಗೆ ದುಷ್ಕರ್ಮಿಗಳನ್ನು ನಿಯಂತ್ರಣಕ್ಕೆ ತೆಗೆದುಕೊಳ್ಳುವುದು ಸರಕಾರದ ಕೆಲಸವಾಗಿದೆ. ಸುಮಾರು ಒಂದು ವರ್ಷ ಕಳೆದಿದ್ದರೂ ಪರಿಸ್ಥಿತಿ ನಿಯಂತ್ರಿಸಲು ಸಾಧ್ಯವಾಗಿಲ್ಲ ಎಂದರೆ ಅದರ ಅರ್ಥ, ಸರಕಾರ ಸಂಪೂರ್ಣ ವಿಫಲವಾಗಿದೆ ಎಂದಾಗಿದೆ. ಆದುದರಿಂದ ಮಣಿಪುರದ ಮುಖ್ಯಮಂತ್ರಿ ರಾಜೀನಾಮೆ ನೀಡುವುದು ಇಂದಿನ ಅಗತ್ಯವಾಗಿದೆ. ಅಥವಾ ರಾಷ್ಟ್ರಪತಿಯವರು ಮಧ್ಯ ಪ್ರವೇಶಿಸಿ ಸರಕಾರವನ್ನು ವಜಾಗೊಳಿಸಬೇಕು. ಇದು ಎರಡು ಕೂಡ ಈವರೆಗೆ ನಡೆದಿಲ್ಲ.

**''ಇಡೀ ವರ್ಷವು ಅತ್ಯಂತ ದುರದೃಷ್ಟಕರವಾಗಿತ್ತು ಕಳೆದ ವರ್ಷದ ಮೇ 3ರಿಂದ ಹಿಡಿದು ಈ ದಿನದ ವರೆಗೆ ಹಲವಾರು ಜನರು ತಮ್ಮ ಪ್ರೀತಿ ಪಾತ್ರರನ್ನು ಕಳೆದುಕೊಂಡಿದ್ದಾರೆ. ಹಲವಾರು ಮಂದಿ ಮನೆಮಾರು ತೊರೆದುಹೋಗಿದ್ದಾರೆ. ಇದಕ್ಕೆ ನನಗೆ ವಿಷಾದವಾಗಿದೆ. ಇದಕ್ಕಾಗಿ ನಾನು ಕ್ಷಮೆಯಾಚಿಸುತ್ತೇನೆ ಎಂದು ಅವರು ಹೇಳಿಕೆಯನ್ನು ನೀಡಿದ್ದಾರೆ.**

ಗಲಭೆಯ ಆರಂಭದಲ್ಲೇ ಸೇನೆಯನ್ನು ತಂದು ದುಷ್ಕರ್ಮಿಗಳನ್ನು ಮಟ್ಟ ಹಾಕುವ ಅವಕಾಶ ಸರಕಾರಕ್ಕಿತ್ತು. ಗಲಭೆ ಭುಗಿಲೇಳುತ್ತಿದ್ದ ಹಾಗೆಯೇ ರಾಜ್ಯದಲ್ಲಿ ಇಂಟರ್‌ನೆಟ್‌ನ್ನು ಸಂಪೂರ್ಣವಾಗಿ ಸ್ಥಗಿತಗೊಳಿಸಲಾಯಿತು. ಗಲಭೆಗಳು ಹರಡದಂತೆ ಮುನ್ನೆಚ್ಚರಿಕೆಯ ಕ್ರಮವಾಗಿ ಇಂಟನೆರ್‌ಟ್ ಸ್ಥಗಿತಗೊಳಿಸಲಾಗಿದೆ ಎಂದು ಸರಕಾರ ಸಮಜಾಯಿತಿ ನೀಡಿತು. ಆದರೆ, ನಡೆದ ಗಲಭೆಗಳು, ಹಿಂಸಾಚಾರಗಳನ್ನು ಹೊರಗಿನ ಜಗತ್ತಿನಿಂದ ಸಂಪೂರ್ಣ ಮುಚ್ಚಿಡಲು ಸರಕಾರ ಇಂಟರ್‌ನೆಟ್ ಸ್ಥಗಿತವನ್ನು ಬಳಸಿಕೊಂಡಿತು. ಮಹಿಳೆಯರ ಬೆತ್ತಲೆ ಮೆರವಣಿಗೆ, ಅವರ ಮೇಲೆ ನಡೆದ ಸಾಲು ಸಾಲು ಸಾಮೂಹಿಕ ಅತ್ಯಾಚಾರಗಳೆಲ್ಲ ಘಟನೆಗಳು ನಡೆದ ಸುಮಾರು ಎರಡು ತಿಂಗಳ ಬಳಿಕ ಹೊರ ಜಗತ್ತಿಗೆ ಗೊತ್ತಾಯಿತು. ಮಣಿಪುರದಲ್ಲಿ ನಡೆಯುತ್ತಿರುವ ಹಿಂಸಾಚಾರಗಳ ಬರ್ಬರತೆಯ ಬಗ್ಗೆ ವಿಶ್ವ ಎಚ್ಚೆತ್ತುಕೊಂಡು ಖಂಡಿಸಲು ಶುರುಹಚ್ಚಿದ ಬಳಿಕ, ಸೇನೆ ಚುರುಕಾಯಿತು. ವಿಶ್ವದಲ್ಲಿ ನಡೆಯುವ ಹಿಂಸಾಚಾರದ ಬಗ್ಗೆ ಪದೇ ಪದೇ ಹೇಳಿಕೆಗಳನ್ನು ನೀಡುವ ಪ್ರಧಾನಿ ಮೋದಿಯವರು ಈವರೆಗೆ ಮಣಿಪುರದ ಕುರಿತಂತೆ ಸ್ಪಷ್ಟ ಹೇಳಿಕೆಯನ್ನು ನೀಡಿಲ್ಲ. ಹಿಂಸಾಚಾರ ನಡೆಯುತ್ತಿರುವ ಪ್ರದೇಶಗಳಿಗೆ ಭೇಟಿ ನೀಡಿ ಸಂತ್ರಸ್ತರನ್ನು ಸಂತೈಸಿಲ್ಲ. ರತ್ನ, ಉಕ್ರೇನ್‌ಗೆ ಭೇಟಿ ನೀಡಲು ಸಾಧ್ಯವಾದರೆ, ಮಣಿಪುರಕ್ಕೆ ಭೇಟಿ ನೀಡಲು ಪ್ರಧಾನಿ ಮೋದಿಯವರಿಗೆ ಯಾಕೆ ಸಾಧ್ಯವಾಗಿಲ್ಲ ಎನ್ನುವ ಪ್ರಶ್ನೆಯನ್ನು ವಿರೋಧ ಪಕ್ಷಗಳು ಕೇಳುತ್ತಲೇ ಬಂದಿವೆ. ಆದರೆ ಸರಕಾರ ಮೌನವಾಗಿದೆ. ಒಂದು ರೀತಿಯಲ್ಲಿ ಮಣಿಪುರ ಹಿಂಸಾಚಾರವನ್ನು ಕೇಂದ್ರ ಮತ್ತು ರಾಜ್ಯ ಸರಕಾರ ಜಂಟಿಯಾಗಿ ಪ್ರಾಯೋಜಿಸಿದೆ. ಆದುದರಿಂದ ಮುಖ್ಯಮಂತ್ರಿಯ ಜೊತೆಗೆ ಪ್ರಧಾನ ಮಂತ್ರಿಯೂ ಕ್ಷಮೆಯಾಚಿಸುವುದು ಅತ್ಯಗತ್ಯವಾಗಿದೆ. ಕ್ಷಮೆಯಾಚನೆಯೊಂದಿಗೆ ಮುಖ್ಯಮಂತ್ರಿ ಜವಾಬ್ದಾರಿಯಿಂದ ನುಣುಚಿಕೊಳ್ಳಬಾರದು. ಅಂತಹ ಒಂದು ಬೀಸು ಹೇಳಿಕೆಯಿಂದ ಮಣಿಪುರದಲ್ಲಿ ಶಾಂತಿ ಸ್ಥಾಪಿಸುವುದು ಸಾಧ್ಯವೂ ಇಲ್ಲ. ಮೊತ್ತ ಮೊದಲಾಗಿ, ಸ್ಥಳೀಯ ಬುಡಕಟ್ಟು ಸಮುದಾಯದೊಳಗಿರುವ ಅಭದ್ರತೆ, ಆತಂಕಗಳನ್ನು ಕಿತ್ತೊಗೆಯುವ ಕೆಲಸವನ್ನು ಸರಕಾರ ಮಾಡಬೇಕು. ಮೈಕೈ ಸಮುದಾಯಕ್ಕೆ ಬುಡಕಟ್ಟು ಸ್ಥಾನಮಾನ ನೀಡುವ ನಿರ್ಧಾರದಿಂದ ಸಂಪೂರ್ಣ ಹಿಂದಕ್ಕೆ ಸರಿಯಬೇಕು ಮಾತ್ರವಲ್ಲ, ಕುಕಿ ಬುಡಕಟ್ಟು ಸಮುದಾಯಕ್ಕೆ ಗರಿಷ್ಠ ಭದ್ರತೆಯನ್ನು ನೀಡುವಲ್ಲಿ ಕ್ರಮ ತೆಗೆದುಕೊಳ್ಳಬೇಕು. ಇದೇ ಸಂದರ್ಭದಲ್ಲಿ ಮಣಿಪುರದಲ್ಲಿ ಮೈತೆ ಮತ್ತು ಕುಕಿ ಬುಡಕಟ್ಟುಗಳ ನಡುವಿನ ಸಂಘರ್ಷಕ್ಕೆ ಹಿಂದೂ-ಕ್ರೈಸ್ತರ ನಡುವಿನ ಹಿಂಸಾಚಾರವೆಂದು ವ್ಯಾಖ್ಯಾನ ನೀಡುವುದನ್ನು ನಿಲ್ಲಿಸಬೇಕು. ಈ ನಿಟ್ಟಿನಲ್ಲಿ ಬುಡಕಟ್ಟು ಸಮುದಾಯಗಳ ನಡುವೆ ಹಿಂದುತ್ವವಾದಿ ಸಂಘಟನೆಗಳ ಹಸ್ತಕ್ಷೇವನ್ನು ತಡೆಯಬೇಕು ಈಗಾಗಲೇ ಗಲಭೆಗಳಿಂದ ಸಾವಿರಾರು ಜನರು ನಿರಾಶ್ರಿತ ಶಿಬಿರಗಳಲ್ಲಿ ನೆಲೆಸಿದ್ದಾರೆ. ಅವರಿಗೆ ಭದ್ರತೆಯನ್ನು ನೀಡುವುದು ಮಾತ್ರವಲ್ಲ ಅವರ ಮೂಲಭೂತ ಅಗತ್ಯಗಳಿಗೆ ಬೇಕಾದ ಕ್ರಮವನ್ನು ತೆಗೆದುಕೊಳ್ಳಬೇಕು. ಅವರು ಮತ್ತೆ ತಮ್ಮ ತಮ್ಮ ನಿವಾಸಗಳಿಗೆ ತೆರಳುವಂತಹ ವಾತಾವರಣವನ್ನು ನಿರ್ಮಾಣ ಮಾಡಬೇಕು. ಇದೇ ಸಂದರ್ಭದಲ್ಲಿ ಸಂಘರ್ಷದಲ್ಲಿ ಗುರುತಿಸಿಕೊಂಡಿರುವ ಉಗ್ರವಾದಿ ಸಂಘಟನೆಗಳ ಮುಖಂಡರ ವಿರುದ್ಧ ನಿರ್ದಾಕ್ಷಿಣ್ಯ ಕ್ರಮ ತೆಗೆದುಕೊಳ್ಳಬೇಕು ಹಾಗೆಯೇ ದುಷ್ಕರ್ಮಿಗಳನ್ನು ಬಂಧಿಸುವ ನೆಪದಲ್ಲಿ ದುಷ್ಕರ್ಮಿಗಳ ಜೊತೆ ಸೇರಿ ನಾಗರಿಕರನ್ನು ಹಿಂಸಿಸುವ, ಅವರಿಗೆ ಮಾನಸಿಕ, ದೈಹಿಕ ದೌರ್ಜನ್ಯಗಳನ್ನು ನೀಡುವ ಪೊಲೀಸರ ಕೃತ್ಯಗಳೂ ನಿಲ್ಲಬೇಕು. ಇಂದಿಗೂ ಸ್ಥಳೀಯರಿಗೆ ದುಷ್ಕರ್ಮಿಗಳ ಮೇಲೆ ಇರುವಷ್ಟೇ ಸಿಟ್ಟು ಪರೋಕ್ಷವಾಗಿ ಗಲಭೆಗಳಿಗೆ ಸಹಕರಿಸಿದ ಪೊಲೀಸರು ಮತ್ತು ಸೇನಾ ಸಿಬ್ಬಂದಿಯ ಮೇಲೂ ಇದೆ. ಸರಕಾರದ ಮೇಲಿರುವ ಅಪನಂಬಿಕೆ ಹೋಗದೇ ಮಣಿಪುರದಲ್ಲಿ ಶಾಂತಿ ನೆಲೆಸುವುದು ಅಸಾಧ್ಯವಾಗಿದೆ.

# ರಾಮಾಯಣ



## ಶ್ರೀರಾಮನು ಜನಕರಾಜನ ಬಿಲ್ಲನ್ನು ಮುರಿದದ್ದು

• ಹಿಂದಿನ ಸಂಚಿಕೆಯಿಂದ 64 ನೆಯ ಅಧ್ಯಾಯ

ಮಹಾ ವಿಕ್ರಮವುಳ್ಳದ್ದೂ ಹೆದೆಯನ್ನೇರಿಸುವದಕ್ಕೆ ಅಶಕ್ಯವಾದದ್ದೂ ನಮ್ಮ ಪೂರ್ವದ ಅರಸರಿಂದ ಪೂಜಿಸಲ್ಪಟ್ಟದ್ದೂ ಆದ ಧನಸ್ಸು ಇದು. ಈ ಧನುಸ್ಸಿನ ಹೆದೆಯನ್ನೇರಿಸುವುದಕ್ಕೆ ದೇವತೆಗಳು ಗಂಧರ್ವರು ಯಕ್ಷರಾಕ್ಷಸರು ಕಿನ್ನರಕಿಂಪುರುಷರು ನಾಗರು ಮೊದಲಾದವರೂ ಸಮರ್ಥರಲ್ಲದೆ ಹೋದರು. ಹಾಗಿರುವಲ್ಲಿ ಈ ಬಿಲ್ಲನ್ನು ಎತ್ತುವುದಕ್ಕಾಗಲಿ ಹೆದೆಯನ್ನೇರಿಸುವುದಕ್ಕಾಗಲಿ ಝುಂಕಾರಮಾಡುವುದಕ್ಕಾಗಲಿ ಅಂಬನ್ನು ಹೂಡುವುದಕ್ಕಾಗಲಿ ಮನುಷ್ಯರಿಗೆ ಅಸಾಧ್ಯವೆಂದು

ಹೇಳುವುದೇನು! ಈ ಬಿಲ್ಲನ್ನು ರಾಮಲಕ್ಷ್ಮಣರು ನೋಡಲಿ ಎಂದು ಹೇಳಿದನು. ಆ ಮಾತನ್ನು ಕೇಳಿ ಧರ್ಮಾತ್ಮನಾದ ವಿಶ್ವಾಮಿತ್ರಮುನೀಶ್ವರನು ಶ್ರೀರಾಮನನ್ನು ಕುರಿತು ' ಧನುಸ್ಸನ್ನು ನೋಡು ಎಂದು ನುಡಿದನು. ಶ್ರೀರಾಮನು ಬಿಲ್ಲಿದ್ದ ಪೆಟ್ಟಿಗೆಯ ಸಮೀಪಕ್ಕೆ ಬಂದು ಮುಚ್ಚಳವನ್ನು ತೆಗೆದು ವಿಶ್ವಾಮಿತ್ರ ಮುನಿಯನ್ನು ಕುರಿತು ಮುನೀಂದ್ರರೆ. ಈ ಬಿಲ್ಲನ್ನು ಕೈಯಿಂದತ್ತಿ ನೋಡುತ್ತೇನೆ ಎಂದು ನುಡಿದನು. ವಿಶ್ವಾಮಿತ್ರಮುನೀಂದ್ರನು ಹಾಗೆಯೇ ಮಾಡು ಎಂದು ಅಪ್ಪಣೆ ಕೊಟ್ಟನು. ಆ ಬಳಿಕ ಶ್ರೀರಾಮನು ಆ ಜಿಲ್ಲನ್ನು ಮಧ್ಯದಲ್ಲಿ ಹಿಡಿದು ಲೀಲಾಮಾತ್ರದಿಂದ ಮೇಲಕ್ಕೆ ಎತ್ತಿ ಎಲ್ಲರೂ ನೋಡುತ್ತಿರಲು ಹೆದೆಯನ್ನೇರಿಸಿ ಕಿವಿಯ ಪರ್ಯಂತ ನಾರಿಯನ್ನೆಳೆಯಲು ಹಾಗೆ ಎಳೆದ ರಭಸಕ್ಕೆ ಬಿಲ್ಲು ನರಿಗುಟ್ಟಿಕೊಂಡು ಮುರಿಯಿತು ' ಆ ಧನುಸ್ಸು ಮುರಿದ ಧ್ವನಿಯು ಬರಸಿಡಿಲಿನ ಹಾಗೆ ಅತಿಭಯಂಕರವಾಗಲು ಭೂಮಿಯು ನಡುಗಿತು! ಆ ಧ್ವನಿಯು ಒಡೆದುಬೀಳುವ ಪರ್ವತ ಧ್ವನಿಯ ಮರ್ಯಾದೆಯಲ್ಲಿ ಮಹಾಭಯಂಕರವಾಗಿ ಕೇಳಿಸಲು ಜನಕರಾಜ, ವಿಶ್ವಾಮಿತ್ರಮುನೀಶ್ವರ, ರಾಮಲಕ್ಷ್ಮಣರು...ಈ ನಾಲ್ವರು ಹೊರತಾಗಿ ಮಿಕ್ಕಾದವರೆಲ್ಲರೂ ಸಿಡಿಲಿನಿಂದ ಹೊಡೆಯಲ್ಪಟ್ಟ ಹಾಗೆ ಮೂರ್ಛಿತರಾಗಿ ಬಿದ್ದರು !

ಅನಂತರ ಬಿದ್ದವರೆಲ್ಲರೂ ಎಚ್ಚತ್ತು ಚೇತರಿಸಿಕೊಂಡಮೇಲೆ ಜನಕರಾಯನು ತನ್ನ ಮನಸ್ಸಿನಲ್ಲಿದ್ದ ಚಿಂತೆಯನ್ನು ಬಿಟ್ಟು ಕೈಮುಗಿದುಕೊಂಡು ವಿಶ್ವಾಮಿತ್ರ ಮುನಿಯನ್ನು ಕುರಿತು ★ ಮುನೀಶ್ವರ, ಶ್ರೀರಾಮನ ವಿಕ್ರಮವನ್ನು ಕಂಡೆನು. ಈತನ ಪರಾಕ್ರಮವು ಇಷ್ಟು ಅಷ್ಟೆಂದು ಹೇಳುವುದಕ್ಕೆ ಶಕ್ಯವಲ್ಲ. ನನ್ನ ಮಗಳಾದ ಸೀತಾದೇವಿಯು ದಶರಥರಾಜನ ಕುಮಾರನಾದ ಶ್ರೀರಾಮನನ್ನು ಪತಿಯಾಗಿ ಪಡೆದು ನನ್ನ ವಂಶಕ್ಕೆ ಬಹುಕೀರ್ತಿಯನ್ನುಂಟುಮಾಡುವಳು, ನನ್ನ ಮಗಳಾದ ಸೀತಾದೇವಿಯನ್ನು ಈ ಜಿಲ್ಲನ್ನು ಜಯಿಸಿದ ಪರಾಕ್ರಮಿಗಲ್ಲದೆ ಮತ್ತೊಬ್ಬನಿಗೆ ಕೊಡುವು ದಿಲ್ಲವೆಂಬ ನನ್ನ ಪ್ರತಿಜ್ಞೆಯು ಸಂದಿತು! ಮುನೀಶ್ವರರೆ ನಿಮ್ಮ ಅನುಮತಿಯಿಂದ ನಾನು ತ್ರಿಕರಣ ಶುದ್ಧನಾಗಿ ರಘುನಾಥನಿಗೆ ನನ್ನ ಮಗಳನ್ನು ಕೊಟ್ಟೆನು ನನ್ನ ಮಂತ್ರಿಗಳು ಆಯೋಧ್ಯಾ ಪಟ್ಟಣಕ್ಕೆ ರಥಾರೂಢರಾಗಿ ಹೋಗಿ ದಶರಥರಾಜನಿಗೆ ವಿನಯೋಕ್ತಿಗಳಿಂದ ಈ ವಿಷಯವನ್ನು ತಿಳಿಸಲಿ.

ಮುಂದುವರಿಯುವುದು...

# ಬಾಳಿಗೊಂದು ಬೆಳಕು ಸಿದ್ಧಾರೂಢ ಜ್ಯೋತಿಯಾತ್ರೆ

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ




**ಇದೊಂದು ಅಪೂರ್ವ ದಾಖಲೆ**

ದಿನಕಳೆದಂತೆ ಆಧುನಿಕ ಸೌಕರ್ಯ ಪರಿಶ್ರಮದ ಬದುಕನ್ನು ನುಂಗುತ್ತಿದೆ. ಐಷಾರಾಮಿಯಾಗುವ ತುಡಿತ ಹೆಚ್ಚುತ್ತಿದೆ. ಶ್ರಮವಿಲ್ಲದ ಸುಖದ ಮಾರ್ಗ ಅಡ್ಡದಾರಿ. ಇದರ ಪರಿಣಾಮ ದ್ವೇಷ ಅನಾಹುತ ಅಸಂತೃಪ್ತಿ ಪರಿಶ್ರಮವಿಲ್ಲದ ಬದುಕು ಏರಿಳಿತ ತಾಳದು. ಆಘಾತಕ್ಕೊಳಗಾಗಿ ಕುಡಿಗಳನ್ನು ಹೊಸಕಿ ತಾನೂ ಹೊಸಕಿಕೊಳ್ಳುವುದು. ಇದು ಬದುಕಿನ ಸಂಘರ್ಷ. ಮತ್ತೊಂದು ಧಾರ್ಮಿಕ ಸಂಘರ್ಷ. ಹಿಂದೂ ಮುಸ್ಲಿಂ ಕ್ರೈಸ್ತ ಯಾರೇ ಆಗಿರಲಿ ತಮ್ಮ ತಮ್ಮ ಧರ್ಮವನ್ನು ಯಥಾರ್ಥವಾಗಿ ಅರಿಯುವ ಪ್ರವೃತ್ತಿ ಕಡಿಮೆಯಾಗುತ್ತಿದೆ. ಒಂದಂಶಕ್ಕೆ ಜೋತುಬಿದ್ದ ಕಚ್ಚಾಟ. ಬೆಸೆಯುವ ಬಾಯಿಂದ ಛಿದ್ರಿಸುವ ಮಾತು ! ಜನಾಂಗ ಸಂಘರ್ಷ ಯುದ್ಧ ಸಂಘರ್ಷ ಹತ್ತು ಹಲವು. ಇಂಥ ಸಂಘರ್ಷದ ಬದುಕಿಗೆ ಸಾಂತ್ವನ ನೀಡುವುದು ಸಿದ್ಧಾರೂಢರ ವಿಚಾರಧಾರೆ. ದೇವರು ಒಬ್ಬನೇ. ಆತ ಎಲ್ಲೆಡೆ ಎಲ್ಲರಲ್ಲಿ ಎಲ್ಲವುಗ ಳಲ್ಲಿಯೂ ಹುದುಗಿದ್ದಾನೆ. ಜಾತಿ ಲಿಂಗ ದೇಶ ಭಾಷೆ ಧರ್ಮಗಳ ಭೇದ-ದ್ವೇಷ ಇರದೇ ಸಮಭಾವ ಸಹಬಾಳ್ವೆ ಇರಬೇಕು. ಲೌಕಿಕ ಹಾಗೂ ಆಧ್ಯಾತ್ಮಿಕ ಬದುಕು ಜೊತೆ ಜೊತೆಗೆ ಸಾಗಬೇಕು. ಕರ್ಮ ಭಕ್ತಿ ಉಪಾಸನೆ ತತ್ತ್ವಜ್ಞಾನ ಎಲ್ಲವೂ ಬದುಕಿನ ಸಾಧನೆಗಳು. ಇದು ಸಿದ್ಧಾರೂಢರ ವಿಚಾರಧಾರೆ.

**ಸಾಧನೆ;** 1836 ರಲ್ಲಿ ಬೀದರ್ ಜಿಲ್ಲೆಯ ಚಳಕಾಪುರ ದಲ್ಲಿ ಜನಿಸಿದ ಅವರು ಬಾಲ್ಯದಲ್ಲಿಯೇ ಆಧ್ಯಾತ್ಮಿಕ ಸೆಳೆತಕ್ಕೊಳಗಾದರು. ಎಂಟನೆಯ ವಯಸ್ಸಿನಲ್ಲಿ ಮನೆ ಬಿಟ್ಟು ಗಜದಂಡ ಶಿವಯೋಗಿಗಳ ಬಳಿ 12 ವರ್ಷ ವೇದಾಂತದ ಅಧ್ಯಯನ ಮಾಡಿದರು. ಆಗಲೇ ದ್ವಿಜರು ಮಾತ್ರ ವೇದೋಪನಿಷತ್ತುಗಳನ್ನು ಓದಲು ಅರ್ಹರೆಂಬ ವೈದಿಕರ ನಿಲುವನ್ನು ವಿರೋಧಿಸಿದರು. 20 ವರ್ಷಗಳ ಕಾಲ ಕಾಲ್ನಡಿಗೆಯಲ್ಲಿ ಅಖಂಡ ಭಾರತವನ್ನು ಸುತ್ತಿದರು.

ಅಲ್ಲಲ್ಲಿ ಮೂಢನಂಬಿಕೆ ಜಾತಿ ವ್ಯವಸ್ಥೆಯ ವಿರುದ್ಧ ಧ್ವನಿ ಎತ್ತಿದರು, ಅರಿವು ಮೂಡಿಸಿದರು. ಸಂಚಾರ ಸಮಯ ದಲ್ಲಿ ರಾಮಕೃಷ್ಣಪರಮಹಂಸ ಶಿರಡಿಸಾಯಿಬಾಬಾರಂಥ ವರೊಂದಿಗೆ ಬೆರೆತರು .ಹುಬ್ಬಳ್ಳಿಯಲ್ಲಿ ನೆಲೆ ನಿಂತು ಭಗವದ್ಗೀತೆ ಉಪನಿಷತ್ತು ಬ್ರಹ್ಮಸೂತ್ರಗಳ ಮೇಲೆ ಶಂಕರರ ಅದ್ವೈತ ಸಿದ್ಧಾಂತದ ಹಿನ್ನೆಲೆಯಲ್ಲಿ ಉಪನ್ಯಾಸಗೈದರು. ನಿಜಗುಣಶಿವಯೋಗಿಗಳ ಕನ್ನಡದ ವೇದಾಂತ ಗ್ರಂಥಗಳನ್ನು ಪ್ರಕಟಿಸಿ ಬೆಳಕಿಗೆ ತಂದು ಪ್ರವಚನ ನೀಡಿದರು. ಹಾನಗಲ್ಲ ಕುಮಾರ ಶಿವಯೋಗಿ, ಅಥಣಿಯ ಮುರುಗೇಂದ್ರಶಿವಯೋಗಿ ಯಂಥವರು ಅವರ ಉಪನ್ಯಾಸ ಸವಿದರು ಶಿವಪುತ್ರ ಸ್ವಾಮಿಗಳಂಥವರು ಅವರಿಂದ ಹೊರಹೊಮ್ಮಿದರು.

**ಆರೂಢ ಸ್ಥಿತಿ :** ಆರೂಢ ಎಂದರೆ ಏರಿದವನು, ಕಾಮಾದಿ ಅರಿಷಡ್ವರ್ಗ ಸತ್ತ್ವಾದಿ ಮೂರುಗುಣಗಳನ್ನು ಮೀರಿ ನಿಂತವನು. ಭಕ್ತರು ತಲೆಯ ಮೇಲೆ ಬಂಗಾರದ ಕಿರೀಟವಿಟ್ಟಾಗ ಬೀಗಲಿಲ್ಲ, ಕುಹಕಿಯು ಬೆಂಕಿ ಇಟ್ಟಾಗ ಸಿಟ್ಟಾಗಲಿಲ್ಲ. ಸಂಚಾರದಲ್ಲಿದ್ದಾಗ ಕೈಯೇ ಬಿಕ್ಷಾಪಾತ್ರೆ, ಭೂಮಿಯೇ ಹಾಸಿಗೆ ಆಕಾಶವೇ ಹೊದಿಕೆ. ಹಲವು ಬಾರಿ ಸೂಸಾದ ಮಣ್ಣನ್ನು ನೀರಿನಲ್ಲಿ ಕಲಿಸಿ ಕುಡಿದದ್ದುಂಟು! ಈ ಆರೂಢ ಸ್ಥಿತಿಯೇ ಅವರನ್ನು ಎತ್ತರಕ್ಕೊಯ್ಯಿತು .ಆ ಕಾಲದ ಹಿರಿಯ ಸಂತರಾದ ಗರಗದ ಮಡಿವಾಳ ಶಿವಯೋಗಿ, ನವಲಗುಂದದ ನಾಗಲಿಂಗ ಶೀವಯೋಗಿ, ಗೋಂದಾವಲೆಯ ಬ್ರಹ್ಮಚೈತನ್ಯರು ಅವರನ್ನು ಬಹುಗೌರವದಿಂದ ಕಂಡರು. ಶಿಶುನಾಳ ಷರೀಫರು ಆರೂಢರ ಮೇಲೆ ಹಾಡು ಕಟ್ಟಿದರು. ಸ್ವಾಮಿ ವಿವೇಕಾ ನಂದರು ಭೇಟಿಕೊಟ್ಟರು.

**ಸಯ್ಯದ್ ಕಬೀರನಾದ :** ಹೈದರಾಬಾದ್ನ ನಿಜಾಮನ ಸಂಬಂಧಿ ಸಯ್ಯದ್ ಅಮೀನ್ ಸಿದ್ಧಾರೂಢರ ಬಳಿ ಬಂದು ದೀಕ್ಷೆ ಪಡೆದು ಕಬೀರದಾಸನಾದ.

ಪಟ್ಟದ ಶಿಷ್ಯನೆನಿಸಿ ಸಿದ್ಧಾರೂಢರ ಚರಿತ್ರೆ ಬರೆದು, ಸಂಸ್ಕೃತದ ಹತ್ತು ಉಪನಿಷತ್ತುಗಳ್ನು ಕನ್ನಡಕ್ಕೆ ಅನುವಾದಿಸಿದ!

**ದೇಶಪ್ರೇಮಿ:** ಸಿದ್ಧಾರೂಢರದು ಅನುಪಮ ದೇಶ ಪ್ರೇಮ. 1918ರಲ್ಲಿ ಹುಬ್ಬಳ್ಳಿಯಲ್ಲಿ ನಡೆದ ಲೋಕ ಮಾನ್ಯ ಬಾಲಗಂಗಾಧರ ತಿಲಕರ ಸಮ್ಮುಖದ ರ್ಯಾಲಿಗೆ ಸಿದ್ಧಾರೂಢರ ಅಧ್ಯಕ್ಷತೆ. 1924ರಲ್ಲಿ ಮಹಾತ್ಮಗಾಂಧೀಜಿಯ ಸಮ್ಮುಖದಲ್ಲಿ ಹುಬ್ಬಳ್ಳಿಯಲ್ಲಿ ನಡೆದ ಸ್ವಾತ್ರಂತ್ರ್ಯ ಹೋರಾಟಗಾರರ ಸಭೆಗೂ ಸಿದ್ಧಾರೂಢರ ಅಧ್ಯಕ್ಷತೆ! ಅಂದು ಖಾವಿ ಧರಿಸಿದ್ದ ಅವರು ಸ್ವಾತಂತ್ರ್ಯದ ಭವಿಷ್ಯ ನುಡಿದು ಗಾಂಧೀಜಿಯನ್ನು ಆಶೀರ್ವದಿಸಿದ್ದರು.

**ದೀನದಲಿತಪರ ಕಾಳಜಿ :** ತುಳಿತಕ್ಕೊಳಗಾದವರ ಬಗ್ಗೆ ಸಿದ್ಧಾರೂಢರಿಗೆ ಅಪಾರ ಕಾಳಜಿ .ಸರ್ ಸಿದ್ದಪ್ಪ ಕಂಬಳಿ, ಮೊದಲಿಯಾರ್ ಮುಂತಾದವರ ನೇತೃತ್ವದಲ್ಲಿ ನಡೆದ ಹಿಂದುಳಿದ ವರ್ಗ ಜನಾಂಗದ ಸಭೆಗೆ ಸಿದ್ಧಾರೂಢರು ಸಾನ್ನಿಧ್ಯ ವಹಿಸಿದ್ದರು. ಮಹಾರಾಷ್ಟ್ರದಲ್ಲಿ ಮೊಟ್ಟ ಮೊದಲ ಬಾರಿ ಮೀಸಲಾತಿ ಜಾರಿಗೆ ತಂದ ಶಾಹುಮಹಾ ರಾಜ್ ಸಿದ್ಧಾ ರೂಢರ ಆಪ್ತಶಿಷ್ಯ. ಗುರುನಾಥಾರೂಢರನ್ನು ಉತ್ತರಾಧಿಕಾರಿಯಾಗಿಸಿ 93ನೇ ವಯಸ್ಸಿನಲ್ಲಿ 1929 ರಲ್ಲಿ ಬ್ರಹ್ಮಲೀನರಾದರು. ಗುರುನಾಥಾರೂಢರು 33 ವರ್ಷ ಪೂರ್ಣ ಮೌನವಾಗಿದ್ದು 1962ರಲ್ಲಿ ಬ್ರಹ್ಮ ಲೀನರಾದರು . ಇದೀಗ ಹುಬ್ಬಳ್ಳಿಯ ಸಿದ್ಧಾರೂಢ ಮಠವು ಸಿದ್ಧಾ ರೂಢರ 190ನೇ ಗುರುನಾಥಾರೂಢರ 115ನೇ ಜಯಂತಿ ಪ್ರಯುಕ್ತ, ಅರಿವು ಏಕತೆ ಶಾಂತಿ ಸಹಬಾಳ್ವೆಯ ಸಂದೇಶ ಸಾರಲು, ಸಿದ್ಧಾರೂಢರ ಜನ್ಮಸ್ಥಳ ಬೀದರ ಜಿಲ್ಲೆಯ ಚಳಕಾಪುರದಿಂದ ಸಿದ್ಧಾರೂಢರ ಜ್ಯೋತಿರಥ ಯಾತ್ರೆಯನ್ನು ಕಳೆದ ಡಿಸೆಂಬರ್ 23 ರಿಂದ ಆರಂಭಿಸಿದೆ. 2025ರ ಜನವರಿ 6 ರಂದು ಬೆಂಗಳೂರಿಗೆ ಬಂದು 10ರಂದು ನಿರ್ಗಮಸಲಿದೆ. 58 ದಿನಗಳಕಾಲ ಕರ್ನಟಕ ಮಹಾರಾಷ್ಟ್ರ ಆಂಧ್ರ, ಗೋವಾ ಮುತಾಂದ ಕಡೆ ಸಂಚರಿಸಿ 18-2-2025 ರಂದು ಹುಬ್ಬಳ್ಳಿಯ ಸಿದ್ಧಾರೂಢಮಠವನ್ನು ತಲುಪಲಿದೆ.

**ಅಪೂರ್ವ ದಾಖಲೆ**

**ಜಾತಿ ಧರ್ಮಗಳ ಭೇದ ಅವರಿಗಿರಲಿಲ್ಲ. ಓಂ ನಮಃ ಶಿವಾಯ ಮಂತ್ರವನ್ನು ಬಹಿರಂಗವಾಗಿ ಸಾರ್ವಜನಿಕರಿಗೆ ಉಪದೇಶಿಸಿದರು .ಹುಬ್ಬಳ್ಳಿಯ ಸಿದ್ಧಾರೂಢ ಮಠದಲ್ಲಿ 1929 ರಿಂದ ಇಂದಿಗೂ ಬಿಡುವಿಲ್ಲದೇ ಓಂ ನಮಃ ಶಿವಾಯ ಮಂತ್ರಜಪ ನಡೆಯುತ್ತಲೇ ಇದೆ . ಅಂದು ಹಿಡಿದ ತಂಬೂರಿ ನೆಲಕ್ಕೆ ಕುಳಿತಿಲ್ಲ ! ಇದೊಂದು ಅಪೂರ್ವ ದಾಖಲೆ.**

# ವಿದ್ಯಾರ್ಥಿಗಳಿಂದ ಭರತನಾಟ್ಯ ಪ್ರದರ್ಶನ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಜಯನಗರದ ಐದನೇ ಬಡಾವಣೆ ಯಲ್ಲಿರುವ ನಂಜನ ಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಪರಮ ಪೂಜ್ಯ ಶ್ರೀ1008 ಶ್ರೀ ಸುಬುಧೇಂದ್ರತೀರ್ಥ ಶ್ರೀ ಪಾದಂಗಳವರ ಆದೇಶದಂತೆ ಶ್ರೀಮಠದ ಹಿರಿಯ ವ್ಯವಸ್ಥಾಪಕರಾದ ಶ್ರೀ ಆರ್ ಕೆ ವಾದೀಂದ್ರಾಚಾರ್ಯರ ನೇತೃತ್ವದಲ್ಲಿ ಜನವರಿ 2, ಗುರುವಾರದ ಪ್ರಯುಕ್ತ ಬೆಳಗ್ಗೆ ವಿಶೇಷ ಪೂಜಾ ಕೈಂಕರ್ಯಗಳು ಅನ್ನದಾನ ಸೇವೆ ಜರುಗಿದವು. ಸಂಜೆಯ ಕಾರ್ಯಕ್ರಮದಲ್ಲಿ ರಥೋತ್ಸವ ಪಲ್ಲಕ್ಕಿ ಉತ್ಸವ ಗಜವಾಹನೋತ್ಸವ ತೊಟ್ಟಿಲು ಸೇವೆ ಮತ್ತು ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ವಿದುಷಿ ಶ್ರೀಮತಿ ಪದ್ಮಜಾ ಜಯರಾಮ್ ಅವರ ನಿರ್ದೇಶನದಲ್ಲಿ ನಾಟ್ಯ ಕಲಾರ್ಪಣ ನೃತ್ಯ ಕೇಂದ್ರದ ವಿದ್ಯಾರ್ಥಿಗಳಿಂದ ಭರತನಾಟ್ಯ ಪ್ರದರ್ಶನ ಕಾರ್ಯಕ್ರಮ ಜರುಗಿತು ಎಂದು ಶ್ರೀ ನಂದಕಿಶೋರ್ ಆಚಾರ್ಯರು ತಿಳಿಸಿದರು. ಈ ಸಂದರ್ಭದಲ್ಲಿ ನೂರಾರು ಭಕ್ತರು ಭಾಗವಹಿಸಿ ಕಲಾವಿದರನ್ನು ಪ್ರೋತ್ಸಾಹಿಸಿ ಶ್ರೀ ಗುರುರಾಯರ ದರ್ಶನ ಪಡೆದು ತದನಂತರ ತೀರ್ಥ , ಮಂತ್ರಾಕ್ಷತೆ, ಪ್ರಸಾದ ಸ್ವೀಕರಿಸಿ ಶ್ರೀ ರಾಘವೇಂದ್ರ ಸ್ವಾಮಿಗಳ ಅನುಗ್ರಹಕ್ಕೆ ಪಾತ್ರರಾದ



ವಿಶ್ವಾಸ್.ಡಿ.ಗೌಡ
ಉದಯವಾಹಿನಿ, ವಿಶೇಷ

# ಅಂಕಗಳ ಬೆನ್ನೇರಿ...!

ಎಲ್ಲರೂ ನೂರಕ್ಕೆ ನೂರು ಅಂಕ ತೆಗೆದುಕೊಂಡ ಬಗ್ಗೆಯೇ ಮಾತಾಡುತ್ತಿದ್ದಾರೆ? ಅದು ಖಂಡಿತ ಸಾಧನೆಯೇ, ಜ್ಞಾನದಿಂದ ಬರೆದಿರಲಿ, ಕಂಠಪಾಠ ಮಾಡಿರಲಿ , ಎಲ್ಲದಕ್ಕೂ ಪ್ರಯತ್ನ ಅವಶ್ಯ.. ಮಕ್ಕಳಿಗೆಲ್ಲ ಶುಭಾಷಯಗಳನ್ನು ಹೇಳಲೇಬೇಕು.

ಆದರೆ,ಪಾಲಕರಾಗಿ ನಾವಿಷ್ಟೇ ಮಾಡಿದರೆ ಸಾಕೇ.. ನಾಗರೀಕರಾಗಿ ನಮ್ಮ ಶಿಕ್ಷಣ ವ್ಯವಸ್ಥೆಯನ್ನು ಆಗಾಗ ಒರೆಗೆ ಹಚ್ಚಿ ಪರೀಕ್ಷಿಸುವ ಜವಾಬ್ದಾರಿ ನಮ್ಮದಲ್ಲವೇ, ನಮ್ಮ ಶಿಕ್ಷಣ ಹೇಗಿದೆ ಅಂದರೆ ಬಿ.ಕಾಂ ಮಾಡಿದವನಿಗೆ ಚೆಕ್ ಬುಕ್ ಕೊಟ್ಟು ಪೇಮೆಂಟ್ ರೆಡಿ ಮಾಡು ಅಂದ್ರೆ, ಚೆಕ್ ಬರ್ಯೋಕೆ ಬರಲ್ಲ.ಬ್ಯಾಂಕ್‌ಗೆ ಕಳಿಸಿ ಡಿಡಿ ತಗೊಂಬಾ ಅಂದ್ರೆ, ಡಿಡಿ ಪಾರಂ ಪಿಲಪ್ ಮಾಡೋಕೆ ಅಲ್ಲಿಗೆ ಬಂದಿರೋರ ಹೆಲ್ಪ ತಗೊತಾನೆ? ಇಂಡಸ್ಟ್ರಿಯಲ್ ಪ್ರೊಡಕ್ಶನ್ ಇಂಜಿನಿಯರ್ ಒಬ್ಬನಿಗೆ quote to cash process ಹೇಳೊ ಅಂದ್ರೆ, ಖರೀದಿ, ಬಟವಡೆ, ಮಾರಾಟ, ವಸೂಲಿ ಅಂತ ಮಾತು ಮುಗಿಸ್ತಾನೆ? ಬಿ.ಎಡ್ ಮಾಡಿ ಬಂದಿರೊ ವಿಜ್ಞಾನ ಶಿಕ್ಷಕ ಪೆಂಡೂಲಮ್ ತಯಾರಿಸಲು ಬೇಕಾದ ವಸ್ತುಗಳಿಗಾಗಿ ಪೇಟೆಗೆ ಹೊಗ್ತಾನೆ? ಮನೇಲಿ ಸುಟ್ಟ ಬಲ್ಬ ಚೇಂಜ್ ಮಾಡೊಕೂ ಯೂಟ್ಯೂಬ್ ವಿಡಿಯೊ ನೋಡೊ ಕಾಲ ಇದು. ಎಲ್ಲಿಯವರೆಗೆ ಸಾಮಾನ್ಯ ಜ್ಞಾನಕ್ಕೆ, ಜೀವನ ಕೌಶಲ್ಯಗಳಿಗೆ ಶಾಲೆಗಳಲ್ಲಿ ಜಾಗವಿಲ್ಲವೊ ಅಲ್ಲಿವರೆಗೆ ನೂರು ಬಂದರೂ ಅಷ್ಟೇ, ಸಾವಿರ ಬಂದರೂ ಅಷ್ಟೇ.ನನ್ನ ಪ್ರಕಾರ ನಿಮ್ಮ ಮಕ್ಕಳು ಹತ್ತನೇ ತರಗತಿ ತೇರ್ಗಡೆಯಾಗುವುದರೊಳಗೆ ಈ ಕೆಳಗಿನ ಕೆಲಸ ಮಾಡಲು ಬರುತ್ತಾ ಅಂತ ಪಾಲಕರು ಖಚಿತಪಡಿಸಿಕೊಳ್ಳಲೇಬೇಕು ಹೆಣ್ಣು -ಗಂಡು ಬೇಧವಿಲ್ಲದೇ, ಅವರವರ ಶೂ, ಬಟ್ಟೆಯನ್ನು ಅವರೇ ಕೈಯಲ್ಲಿ ಒಗೆದು, ಒಣಗಿಸಿ, ಇಸ್ತ್ರಿ ಮಾಡಿಟ್ಟು ಕೊಳ್ತಾರಾ.. ವಾಶಿಂಗ್ ಮಶೀನ್ (ಇದ್ದರೆ) ಉಪಯೋಗಿಸೊಕೆ ಬರುತ್ತಾ? - ಮನೆಯಲ್ಲಿ ಒಂದೆರಡು ದಿನ ಒಬ್ಬರನ್ನೇ ಬಿಟ್ಟು ಹೋದರೆ (ಸುರಕ್ಷತಾ ವಿಷಯ ಹೊರತಾಗಿ) ತನಗೆ ಬೇಕಾದ ಅನ್ನ, ಸಾರು, ಮೊಸರು (ಹಾಲು ಹೆಪ್ಪಾಕಿ) ಮಾಡಿಕೊಳ್ತಾರಾ? (ಪಾರ್ಸಲ್ ತಂದ್ಕೊಂಡು ತಿನ್ನೊದಲ್ಲ).. ಕುಕರ್, ಕೂಗ್ಸೊಕೆ, ಮಿಕ್ಸರ್ ನಲ್ಲಿ ರುಬ್ಬೊಕೆ ಬರುತ್ತಾ? ಪಾತ್ರೆ ತೊಳೆದು ತೆಗೆದಿಡ್ತಾರಾ?



- ಕಸ ಗುಡಿಸೊದು, ನೆಲ ಒರೆಸೊದು, ವ್ಯಾಕ್ಯೂಮ್ ಕ್ಲೀನರ್ (ಇದ್ದರೆ) ಉಪಯೋಗಿಸೋದು ಮಾಡಲು ಬರುತ್ತಾ?

- ಮನೇಲಿ ಬಲ್ಬ ಚೇಂಜ್, ಹ್ಯಾಂಡ್ ಶವರ್ ಚೇಂಜ್, ಸಣ್ಣಗೆ ಲೀಕಾಗ್ತಿರೊ ನೀರಿನ ಪೈಪ್ ಸೀಲ್, ಗಡಿಯಾರದ ಸೆಲ್ ಚೇಂಜ್, ಮುಂತಾದ ಸಣ್ಣ ಪುಟ್ಟ ರಿಪೇರಿ ಕೆಲಸ ಮಾಡೊಕೆ ಬರುತ್ತಾ?

# ಬಿಬಿಎಂಪಿ ನೌಕರರ ಸಹಕಾರ ಸಂಘದ 111ನೇ ಸಂಸ್ಥಾಪನಾ ದಿನಾಚರಣೆ, ಪ್ರತಿಭಾ ಪುರಸ್ಕಾರ ಸಮಾರಂಭ

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

**ಪುಟ್ಟಣ್ಣ ಚೆಟ್ಟಿ ಪುರಭವನ:** ಬೃಹತ್ ಬೆಂಗಳೂರು ಮಹಾ ನಗರ ಪಾಲಿಕೆ ನೌಕರರ ಸಹಕಾರ ಸಂಘ ನಿಯಮಿತದ ವತಿಯಿಂದ 111ನೇ ಸಂಸ್ಥಾಪನಾ ದಿನಾಚರಣೆ ಮತ್ತು ಪ್ರತಿಭಾ ಪುರಸ್ಕಾರ ಪ್ರತಿಭಾವಂತ ಮಕ್ಕಳಿಗೆ ಪ್ರೋತ್ಸಹ ಕಾರ್ಯಕ್ರಮ. ವಿಶೇಷ ಆಯುಕ್ತರಾದ ಅವಿನಾಶ್ ಮೆನನ್ ರಾಜೇಂದ್ರನ್, ವಲಯ ಆಯುಕ್ತರಾದ ಶ್ರೀಮತಿ ಸ್ನೇಹಲ್ ಆರ್ ಮತ್ತು ಹಿರಿಯ ಚಲನಚಿತ್ರ ನಟ ಶ್ರೀನಾಥ್, ಹಿರಿಯ ಚಲನಚಿತ್ರ ನಟಿ ಶ್ರೀಮತಿ ವಿನಯ



ಪ್ರಸಾದ್,ಆಡಳಿತ ಮಂಡಳಿ ಅಧ್ಯಕ್ಷರಾದ ಎ. ಅಮೃತ್ ರಾಜ್ ರವರು, ಉಪಾಧ್ಯಕ್ಷರಾದ ರವಿ ಕೆ.ಜಿ.ರವರು ದೀಪ ಬೆಳಗಿಸಿ ಉದ್ಘಾಟನೆ ಮಾಡಿದರು.

ಪ್ರಣಯರಾಜ ನಟ ಶ್ರೀನಾಥ್ ರವರು ಮಾತನಾಡಿ ನಮ್ಮ ನೀತಿ ಬದುಕು ಆದರ್ಶವಾಗಿರಬೇಕು. ವಿಶ್ವಾಸ ಪ್ರೀತಿ ಬೆಳಸಿಕೊಳ್ಳಬೇಕು. ಯುವ ಸಮುದಾಯ ಒಂದೇ ಗುರಿ ಇಟ್ಟುಕೊಳ್ಳಿ, ಏನಾಗಬೇಕು ಎಂದು ನಿರ್ಧಾರ ಮಾಡಿದರೆ ಯಶ್ವಸಿಯಾಗಲು ಸಾಧ್ಯ. ನಾನು ಶಾಲೆಯಲ್ಲಿ ಶೇಕಡ 90ರಷ್ಟು ಗೈರುಹಾಜರಿಯಾಗಿದ್ದೆ, ನಾನು ಶಿಕ್ಷಣ ಪಡೆದಿದ್ದರೆ ಉನ್ನತ ಅಧಿಕಾರಿಯಾಗಬಹುದಿತ್ತು. ಮಕ್ಕಳು ಗಮನಿಸಬೇಕು ತಂದೆ, ತಾಯಿ ನಿಮ್ಮ ಮೇಲೆ ಬಹಳ ಆಸೆಯಿಟ್ಟುಕೊಂಡಿರುತ್ತಾರೆ ಅದನ್ನ ಪೂರ್ಣಗೊಳಿಸಿ, ಜೀವನದಲ್ಲಿ ಮುಂದೆ ಬನ್ನಿ ಎಂದು ಹೇಳಿದರು. ವಿನಯ ಪ್ರಸಾದ್ ಎಲ್ಲದಕ್ಕೂ ಪ್ರಚಾರ ಸಿಗುವ ಕಾಲವಾಗಿದೆ. ನನ್ನ ಕೆಲಸ ಮುಖ್ಯ ಎಂದು ಶ್ರದ್ದೆ ಭಕ್ತಿಯಿಂದ ಕೆಲಸ ಮಾಡಿದರೆ ಸಾಕು ಅಧಿಕಾರ ಕೀರ್ತಿ ತಾನಗೆ ಹುಡುಕಿಕೊಂಡು ಬರುತ್ತದೆ. ಗುರಿಯಿಟ್ಟುಕೊಂಡು ಕೆಲಸ ಮಾಡಬೇಕು, ಇಂದಿನ ವಿದ್ಯಾರ್ಥಿಗಳ ಮೇಲೆ ಹೆಚ್ಚಿನ ಒತ್ತಡವಿದೆ, ಆದರೆ ಶಿಕ್ಷಕರು ವಿದ್ಯಾರ್ಥಿಗಳ ಮೇಲೆ ಒತ್ತಡವಾಗಲಿ, ಶಿಕ್ಷೆ ಕೊಡಲು ಬರುವುದಿಲ್ಲ ಇಂದಿನ ದಿನಗಳಲ್ಲಿ. ಗುರು, ಹಿರಿಯರು ಮತ್ತು ತಂದೆ,ತಾಯಿಯ ಮಾತನ್ನು ವಿದ್ಯಾರ್ಥಿಗಳು ಹೇಳಬೇಕು. ಯುವಕ, ಯುವತಿಯರಿಗೆ ಶಿಕ್ಷಣದ ಜೊತೆಯಲ್ಲಿ ವಿಧೇಯತೆ ಬೆಳಸಿಕೊಳ್ಳಿ, ಸೌಹರ್ದತೆಯಿಂದ ಎಲ್ಲರು ಬದುಕು ಸಾಗಿಸಬೇಕು ಎಂದು ಹೇಳಿದರು.

ಎಸ್.ಎಸ್.ಎಲ್.ಸಿ ಮತ್ತು ಪಿಯುಸಿ ಹಾಗೂ ಮಾಸ್ಟರ್ ಪದವಿಯಲ್ಲಿ ಪ್ರತಿಭಾವಂತ 172 ವಿದ್ಯಾರ್ಥಿ, ವಿದ್ಯಾರ್ಥಿನಿಯರಿಗೆ ನಗದು ಪುರಸ್ಕಾರ ನೀಡಿ ಸನ್ಮಾನಿಸಲಾಯಿತು. ಭಾಗ್ಯ ಶ್ರೀ ಗೌಡರವರಿಂದ ಸಂಗೀತ ಸಂಜೆ ಮತ್ತು ಮಿಮಿಕ್ರಿ, ಗೋಪಿರವರಿಂದ ಹಾಸ್ಯ ಸಂಜೆ ಹಾಗೂ ಶುಭಲಕ್ಷ್ಮಿರವರಿಂದ ಸ್ಯಾಕ್ಸ್ ಫೋನ್ ವಾದನ ಕಾರ್ಯಕ್ರಮ ಏರ್ಪಡಿಸಲಾಗಿತ್ತು. ಗೌರವ ಸಲಹೆಗಾರರಾದ ಸಾಯಿಶಂಕರ್, ಎ.ಜೆ.ಬಾಬಣ್ಣ, ಸಮಿತಿ ಸದಸ್ಯರುಗಳಾದ ಗಂಗಾಧರ್ (ಲಾಲಿ), ವಿನಯ್‌ಕುಮಾರ್ ಕೆ.ಎನ್. ಮಹೇಶ್ ಎಂ.,ಹರೀಶ್ ಕುಮಾರ್ ಎನ್.ಸಿ.ಎಂ. ಮುನಿರಾಜು ಮಂಜುನಾಥ್ ಎಲ್.ಆರ್, ಶ್ರೀಮತಿ ಆರ್.ಪಿ. ವಾಣಿ, ಶ್ರೀಮತಿ ಅಕ್ಕಮಹಾದೇವಿ ಎನ್., ಶ್ರೀಮತಿ ಮಹಾದೇವಿ ಸಂಗಪ್ಪಗಾಣಿಗೇರ,ರಾಜಶೇಖರ್ ಡಿ.,ಮಂಜುನಾಥ್ ಜಿ.

**ಬಿಬಿಎಂಪಿಯಲ್ಲಿ ಅಧಿಕಾರಿ ಮತ್ತು ನೌಕರರ ಮಕ್ಕಳು ಐ.ಎ.ಎಸ್.ಮತ್ತು ಇಂಜನಿಯರ್, ವೈದ್ಯರು, ಸಮಾಜದ ಉನ್ನತಸ್ಥಾನಗಳಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ .ಈ ಸಾಧನೆಗೆಲ್ಲ ಕಾರಣ ಬಿಬಿಎಂಪಿ ಎಂದು ಹೇಳಬಹುದು. ಒಂದು ಸಂಘ 111ವರ್ಷವಾಗಿದೆ ಎಂದರೆ ಇದರೆ ಹಿಂದೆ ಹಲವಾರು ಮಹನೀಯರುಗಳು ಶ್ರಮವಿದೆ. ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಗೌರವಿಸಿ, ಸನ್ಮಾನಿಸುವ ಮೂಲಕ ಅವರು ಇನ್ನು ಹೆಚ್ಚು ಉತ್ತಮ ಸ್ಥಾನಗಳಿಸಲಿ ಎಂದು ಪ್ರೋತ್ಸಹಿಸುವ ಕಾರ್ಯಕ್ರಮವಾಗಿದೆ ಎಂದು ಹೇಳಿದರು.**

**ಎ.ಅಮೃತ್ ರಾಜ್**

# ಪತ್ರಕರ್ತರ ಸಂಘಕ್ಕೆ ಕಾಯಕಲ್ಪ ನೀಡಿದ ಹೆಚ್.ಎಸ್.ಸುಧೀಂದ್ರ ಕುಮಾರ್

■ ಎಸ್.ಎಸ್.ಕಶ್ಯಪ್

• ಉದಯವಾಹಿನಿ, ಬೆಂಗಳೂರು



**ಪತ್ರಕರ್ತರ ಸಂಘದ ದತ್ತಿ ಪ್ರಶಸ್ತಿಗೆ ಆಯ್ಕೆ**

ಕರ್ನಾಟಕ ರಾಜ್ಯ ಕಾರ್ಯನಿರತ ಪತ್ರಕರ್ತರ ಸಂಘಕ್ಕೆ ಕಾಯಕಲ್ಪ ನೀಡಿದ ಪತ್ರಕರ್ತ ಸ್ನೇಹಿ ಸುಧೀಂದ್ರ ಕುಮಾರ್ ಅವರಿಗೆ 2024ರ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ದತ್ತಿ ಪ್ರಶಸ್ತಿ, ಕರ್ನಾಟಕ ಸರ್ಕಾರದ ಕರ್ನಾಟಕ ಮಾಧ್ಯಮ ಅಕಾಡೆಮಿ ಘೋಷಿಸಿದೆ. ಸುದ್ದಿ ಮೃದಂಗ ಪತ್ರಿಕೆಯನ್ನ ಆರಂಭಿಸಿದ ಹೆಚ್‌ಎಸ್ ಸುಧೀಂದ್ರ ಕುಮಾರ್ ಮೂಲತಹ ಚಿತ್ರದುರ್ಗ ಜಿಲ್ಲೆಯ ಹಿರಿಯೂರಿನವರಾದರು ಕೂಡ ಹರಿಹರದಲ್ಲಿ ಪತ್ರಿಕೋದ್ಯಮವನ್ನು ಪ್ರವೇಶಿಸಿ ಹರಿಹರ ತಾಲೂಕು ಕಾರ್ಯನಿರತ ಪತ್ರಕರ್ತರ ಸಂಘದ ಸ್ಥಾಪಕ ಖಜಾಂಚಿಯಾಗಿ, ಚಿತ್ರದುರ್ಗ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಖಜಾಂಚಿಯಾಗಿ ಸೇವೆ ಸಲ್ಲಿಸಿ ಬೆಂಗಳೂರು ನಗರಕ್ಕೆ ಆಗಮಿಸಿ ವಿವಿಧ ಪತ್ರಿಕೆಗಳಲ್ಲಿ ಕಾರ್ಯನಿರ್ವಹಿಸಿ ತಮ್ಮ ಪತ್ರಿಕೆಯನ್ನು ಆರಂಭಿಸಿದರು.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಹಾಗೂ ಕರ್ನಾಟಕ ರಾಜ್ಯ ಜಿಲ್ಲಾ ಪತ್ರಿಕಾ ಸಂಪಾದಕರ ಸಂಘದ ಕಾರ್ಯಕಾರಿ ಸಮಿತಿ ಸದಸ್ಯ ಸ್ಥಾನದಿಂದ ಹಿಡಿದು ಅಧ್ಯಕ್ಷ ಸ್ಥಾನದವರೆಗೆ ಆಯ್ಕೆಯಾಗಿ ವಿಶೇಷ ಸೇವೆಯನ್ನು ಸಲ್ಲಿಸಿರುವ ಸುಧೀಂದ್ರ ಕುಮಾರ್ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಕೆಲವೊಂದು ಗೊಂದಲಗಳಿಂದ ನ್ಯಾಯಾಲಯದ ಮೆಟ್ಟಿಲೇರಿ ತೊಂದರೆಯಲ್ಲಿದ್ದಾಗ ಹಿರಿಯರ ಮಾರ್ಗದರ್ಶನದೊಂದಿಗೆ ನಡೆದ ಚುನಾವಣೆಯಲ್ಲಿ ಅಧ್ಯಕ್ಷರಾಗಿ ಅತಿ ಹೆಚ್ಚು ಮತ ಪಡೆದು ಆಯ್ಕೆಯಾಗಿ ತಮ್ಮ ಅವಧಿಯಲ್ಲಿ ಹಲವಾರು ವಿಶೇಷ ಯೋಜನೆಗಳ ಮೂಲಕ ರಾಜ್ಯದಲ್ಲಿಯೇ ಕೆ. ಯು. ಡಬ್ಲ್ಯೂ. ಜೆ.ಯನ್ನ ಶಕ್ತಿಶಾಲಿ ಸಂಘವಾಗಿ ರೂಪಿಸಿದರು. ಸುಧೀಂದ್ರ ಕುಮಾರ್ ಅಧ್ಯಕ್ಷರಾಗಿದ್ದಾಗ ಮಡಕೇರಿ ಯಲ್ಲಿ ಅತ್ಯುತ್ತಮವಾದ ರಾಜ್ಯ ಸಮ್ಮೇಳನ ಬೆಂಗಳೂರಿನ ವಿಧಾನಸೌಧದ ಬಾಂಕ್ವೆಟ್ ಹಾಲ್ ನಲ್ಲಿ ಅಮೃತ ಮಹೋತ್ಸವ, ಬೆಂಗಳೂರಿನ ಅರಮನೆಯ ಆವರಣದಲ್ಲಿ ರಾಜ್ಯ ಸಮ್ಮೇಳನವನ, ಸಿಂಗಾಪುರ ದಲ್ಲಿ ಅಮೃತ ಮಹೋತ್ಸವ ಆಯೋಜಿಸುವ ಮೂಲಕ ಹಲವು ಬೇಡಿಕೆಗಳನ್ನ ಈಡೇರಿಸುವತ್ತ ಮುನ್ನುಗ್ಗಿದರು. ಗ್ರಾಮೀಣ ಪತ್ರಕರ್ತರ ಬಸ್ ಪಾಸ್, ಜಿಲ್ಲಾ ಪತ್ರಕರ್ತರ ಸಂಘಗಳ ಕಟ್ಟಡ ನಿರ್ಮಾಣಕ್ಕೆ 25 ಲಕ್ಷ ರೂಗಳ ಅನುದಾನ, ನಿರ್ಮಾಣಗೊಂಡ ಕಟ್ಟಡಗಳಿಗೆ 12.5 ಲಕ್ಷ ಅನುದಾನ, ಮಾನ್ಯತೆ ಪಡೆದ ಪತ್ರಕರ್ತರಿಗೆ ಉಚಿತ ಬಸ್ ಟಿಕೆಟ್ ಬದಲಿಗೆ ಸ್ಥಳದಲ್ಲಿಯೇ ಕಾರ್ಡ್ ತೋರಿಸಿದರೆ ರಿಯಾಯಿತಿ ದರದಲ್ಲಿ ಪ್ರಯಾಣಕ್ಕೆ ಅವಕಾಶ, ಪತ್ರಕರ್ತರ ಸಂಘದ ಗುರುತಿನ ಚೀಟಿ ವಿಧಾನಸೌಧದ ಪ್ರವೇಶಕ್ಕೆ ಅನುಮತಿ, ಪತ್ರಕರ್ತರ ಕ್ಷೇಮ ನಿಧಿ ಸ್ಥಾಪನೆ, ಪತ್ರಕರ್ತರ ಪಿಂಚಣಿಗೆ ಇದ್ದ ವಾರ್ಷಿಕ ವರಮಾನ ಬದಲಾವಣೆ ಯಶಸ್ವಿ, ಪಿಂಚಣಿ ಹೆಚ್ಚಳ ಹಾಗೂ ಕುಟುಂಬ ಪಿಂಚಣಿ ಹೆಚ್ಚಳಕ್ಕೂ ಒತ್ತಾಯ ಯಶಸ್ವಿ, ಜಿಲ್ಲಾಮಟ್ಟದ ಪತ್ರಕರ್ತರ ಜಾಹೀರಾತು

**ಅದೇ ರೀತಿ ಕರ್ನಾಟಕ ರಾಜ್ಯ ಜಿಲ್ಲಾ ಪತ್ರಿಕಾ ಸಂಪಾದಕರ ಸಂಘದಲ್ಲಿ ಕೂಡ ಜಿಲ್ಲಾ ಸಂಪಾದಕರ ಸಮಸ್ಯೆ ಕುರಿತಂತೆ ಕೆ.ಯು. ಡಬ್ಲ್ಯು.ಜೆ ಯ ಹೊಂದಾಣಿಕೆಯೊಂದಿಗೆ ಹೋರಾಟ, ಮನವಿ ಮಾಡುವಲ್ಲಿ ಯಶಸ್ವಿಯಾಗಿದ್ದರು.**

ಕುರಿತಂತೆ ರಾಜ್ಯ ವಾರ್ತಾ ಇಲಾಖೆಯ ಮುಂಭಾಗ ಹಾಗೂ ಮುಖ್ಯಮಂತ್ರಿಗಳ ಮನೆ ಮುತ್ತಿಗೆ ಸೇರಿದಂತೆ ಹಲವು ಬೃಹತ್ ಪ್ರತಿಭಟನೆಗೆ ಮುಂದಾಗಿದ್ದು ,ಸಂಘದಲ್ಲಿ ಕ್ಷೇಮ ನಿಧಿ ಸೇರಿದಂತೆ ಅತ್ಯುತ್ತಮ ಕಾರ್ಯಗಳನ್ನ ನಿರ್ವಹಿಸಿದ್ದಲ್ಲದೆ ಜಿಲ್ಲಾ ಸಂಘಗಳಲ್ಲಿದ್ದ ಗುಂಪುಗಾರಿಕೆಯನ್ನು ದೂರ ಮಾಡಿ ಒಂದಾಗುವಂತೆ ಮಾಡುವಲ್ಲಿ ಯಶಸ್ವಿಯಾಗಿ ಕಾರ್ಯನಿರ್ವಹಿಸಿದ್ದಾರೆ.

ಕರ್ನಾಟಕ ಮಾಧ್ಯಮ ಅಕಾಡೆಮಿ ಹಾಗೂ ಕರ್ನಾಟಕ ಪತ್ರಿಕ ಮಾನ್ಯತಾ ಸಮಿತಿಯ ಸದಸ್ಯರಾಗಿಯೂ ಕೂಡ ಸೇವೆ ಸಲ್ಲಿಸಿರುವ ಎಚ್‌ಎಸ್ ಸುಧೀಂದ್ರ ಕುಮಾರ್ ಸುದ್ದಿ ಮೃದಂಗ ಪತ್ರಿಕೆಯ ಸಂಪಾದಕರ ಜೊತೆಗೆ ಸುದ್ದಿಮೃದಂಗ ನ್ಯೂಸ್ ಚಾನೆಲ್ನ ಪ್ರಧಾನ ಸಂಪಾದಕರಾಗಿಯೂ ಸೇವೆ ಸಲ್ಲಿಸುತ್ತಿದ್ದಾರೆ. ಪತ್ರಿಕೋದ್ಯಮದ ಜೊತೆಗೆ ಕನ್ನಡಪರ ಹೋರಾಟ, ಧಾರ್ಮಿಕ ಕಾರ್ಯಗಳಲ್ಲಿಯೂ ಸಾಕಷ್ಟು ಹುದ್ದೆಗಳನ್ನು ನಿರ್ವಹಿಸಿರುವ ಸುಧೀಂದ್ರ ಕುಮಾರ್ ಇಂಚರ ಟಿವಿಯ ಅತಿಥಿ ಕಾರ್ಯಕ್ರಮದಲ್ಲಿ 150ಕ್ಕೂ ಹೆಚ್ಚು ಸಾಧಕರನ್ನು ಸಂದರ್ಶಿಸುವ ಮೂಲಕ ಅಭಿನಂದನೆಗೆ ಪಾತ್ರರಾಗಿದ್ದಾರೆ. ಪತ್ರಕರ್ತರ ಸಂಘದ ಪ್ರಧಾನ ಕಾರ್ಯದರ್ಶಿ ಹಾಗೂ ಅಧ್ಯಕ್ಷರಾಗಿದ್ದಾಗ ನೂರಾರು ಕಾರ್ಯಕ್ರಮಗಳನ್ನ ಸಂಘಟಿಸುವುದರ ಜೊತೆಗೆ ಪಕ್ಷಾತೀತವಾಗಿ ಹಲವರನ್ನು ಕರೆಸಿ ಪತ್ರಿಕಾ ಸಂದರ್ಶನ ಪತ್ರಿಕಾ ಸಂವಾದವನ್ನು ಏರ್ಪಡಿಸಿದ್ದಾರೆ . ಬೆಂಗಳೂರಿನ ಕೆಂಗೇರಿ ಉಪನಗರದ ಗಾಯತ್ರಿ ಮಂದಿರದ ಅಧ್ಯಕ್ಷರಾಗಿ ನಿರಂತರ 15 ವರ್ಷಗಳ ಸೇವೆ, ಸ್ವತಹ ಬೇರೆಯವರಿಗೆ ಅವಕಾಶ ಕಲ್ಪಿಸಬೇಕು ಎನ್ನುವ ದೃಷ್ಟಿಯಿಂದ ಇದೀಗ ಪದತ್ಯಾಗ ಮಾಡಿರುವುದು ವಿಶೇಷಗಳಲ್ಲಿ ಒಂದು.

ಕೆಂಗೇರಿ ಉಪನಗರದ ಶ್ರೀ ರಾಘವೇಂದ್ರ ಸ್ವಾಮಿಗಳವರ ಮಠದ ಅಧ್ಯಕ್ಷರಾಗಿ ಗುರುತರವಾದ ಕಾರ್ಯನಿರ್ವಹಣೆ ಯಶವಂತಪುರ ವಿಧಾನಸಭಾ ಕ್ಷೇತ್ರ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾಗಿ ಎರಡನೇ ಅವಧಿಯಲ್ಲಿ ಕಾರ್ಯನಿರ್ವಹಣೆ ಮೂರು ಕನ್ನಡ ಸಾಹಿತ್ಯ ಸಮ್ಮೇಳನಗಳ ಆಯೋಜನೆ ಹೀಗೆ ಹಲವಾರು ಕಾರ್ಯಕ್ರಮಗಳನ್ನು ನಿರ್ವಹಿಸಿರುವ ಹೆಚ್. ಎಸ್. ಸುಧೀಂದ್ರ ಕುಮಾರ್ ಅವರು ಹಲವು ಪ್ರಶಸ್ತಿಗಳಿಗೆ ಪಾತ್ರರಾಗಿದ್ದಾರೆ. ಬೆಂಗಳೂರು ಬೃಹತ್ ಮಹಾನಗರ ಪಾಲಿಕೆ ಕೂಡ ಮಾಡುವ ಪ್ರತಿಷ್ಠಿತ ಪ್ರಶಸ್ತಿಗಳಲ್ಲಿ ಒಂದಾದ ನಾಡಪ್ರಭು ಕೆಂಪೇಗೌಡ ಪ್ರಶಸ್ತಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ನೀಡುವ ಖಾದ್ರಿ ಶಾಮಣ್ಣ ಪ್ರಶಸ್ತಿ ವಿವಿಧ ಸಂಘಟನೆಗಳು ನೀಡಿರುವ ಶ್ರೀ ರಾಮಾನುಜ ಪ್ರಶಸ್ತಿ, ನೇತಾಜಿ ರತ್ನ ಪ್ರಶಸ್ತಿ, ಹೂಗಾರ ಮಾಧ್ಯಮ ಪ್ರಶಸ್ತಿ, ಡಿವಿಜಿ ಸದ್ಭಾವನಾ ಪ್ರಶಸ್ತಿ, ಚಾಣಕ್ಯ ರತ್ನ ಪ್ರಶಸ್ತಿ, ಸಮಾಜ ಸೇವಾ ರತ್ನ ಪ್ರಶಸ್ತಿ, ಜನಮನ ಪ್ರಶಸ್ತಿ, ಸೇರಿದಂತೆ ಹಲವು ಪ್ರಶಸ್ತಿಗಳಿಗೆ ಭಾಜನರಾಗಿದ್ದಾರೆ. ಇದೀಗ ಕರ್ನಾಟಕ ರಾಜ್ಯ ಮಾಧ್ಯಮ ಅಕಾಡೆಮಿ ನೀಡುವ 2024ರ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ದತ್ತಿ ಪ್ರಶಸ್ತಿಗೆ ಆಯ್ಕೆಯಾಗಿದ್ದಾರೆ.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಬೆಳಿಗ್ಗೆ | 09:00 ರಿಂದ 10:30 |
| ಗುಳಿಕ ಕಾಲ | ಬೆಳಿಗ್ಗೆ | 06:00 ರಿಂದ 07:30 |
| ಯಮಗಂಡ ಕಾಲ | ಮಧ್ಯಾಹ್ನ | 01:30 ರಿಂದ 10:03 |

**ಮೇಷ** ನೀವು ಪರಿಸ್ಥಿತಿಯ ನಿಯಂತ್ರಣ ಹೊಂದುತ್ತಿದ್ದಂತೆ ನಿಮ್ಮ ಆತಂಕ ಕಣ್ಮರೆಯಾಗುತ್ತದೆ. ಇದು ಧೈರ್ಯದ ಮೊದಲ ಸ್ಪರ್ಶದಲ್ಲಿ ಕುಸಿದುಹೋಗುವ ಸಾಬೂನಿನ ಗುಳ್ಳೆಯಷ್ಟೇ ಗಟ್ಟಿಯೆಂದು ನೀವು ಅರ್ಥ ಮಾಡಿಕೊಳ್ಳುತ್ತೀರಿ. ಪ್ರಾಚೀನ ವಸ್ತುಗಳು ಮತ್ತು ಆಭರಣಗಳಲ್ಲಿ ಹೂಡಿಕೆ ಲಾಭ ಮತ್ತು ಸಮೃದ್ಧಿ ತರುತ್ತದೆ.

**ವೃಷಭ** ನಿಮ್ಮ ದೈಹಿಕ ಬಲವನ್ನು ನಿರ್ವಹಿಸಲು ನೀವು ಕ್ರೀಡೆಯಲ್ಲಿ ಸಮಯ ಕಳೆಯುವ ಸಾಧ್ಯತೆಗಳಿವೆ. ರಿಯಲ್ ಎಸ್ಟೇಟ್ ನಲ್ಲಿ ಹೂಡಿಕೆ ಲಾಭದಾಯಕವಾಗಬಹುದು. ನೀವು ಸ್ನೇಹಿತರೊಂದಿಗೆ ಒಳ್ಳೆಯ ಸಮಯ ಹೊಂದಿದ್ದರೂ ವಾಹನ ಚಾಲನೆ ಮಾಡುವಾಗ ಹೆಚ್ಚುವರಿ ಆರೈಕೆಯನ್ನು ಹೊಂದಿಕೊಳ್ಳಿ.

**ಮಿಥುನ** ಪತ್ನಿಯ ವ್ಯವಹಾರಗಳಲ್ಲಿ ಮೂಗು ತೂರಿಸುವುದು ಅವಳಿಗೆ ಕೋಪ ತರಬಹುದಾದ್ದರಿಂದ ಹಾಗೆ ಮಾಡಬೇಡಿ. ನಿಮ್ಮ ಕೆಲಸ ನೋಡಿಕೊಳ್ಳುವುದು ಉತ್ತಮ. ಆದಷ್ಟು ಕಡಿಮೆ ಹಸ್ತಕ್ಷೇಪ ಮಾಡಿ, ಇಲ್ಲದಿದ್ದರೆ ಅದು ಅವಲಂಬನೆಯನ್ನು ಉಂಟುಮಾಡಬಹುದು. ಬುದ್ಧಿವಂತಿಕೆಯಿಂದ ಹೂಡಿಕೆ ಮಾಡಿ.

**ಕರ್ಕಾಟಕ** ನಿಮ್ಮ ಬಗ್ಗೆ ನಿಮಗೇ ಉತ್ತಮ ಅಭಿಪ್ರಾಯ ಬರಲು ಕೆಲಸಗಳನ್ನು ಮಾಡಲು ಒಂದು ಅದ್ಭುತ ದಿನ. ನಿಮ್ಮ ಹಣವನ್ನು ಸಂಗ್ರಹಿಸಿದಾಗ ಮಾತ್ರ ಹಣ ನಿಮ್ಮ ಕೆಲಸಕ್ಕೆ ಬರುತ್ತದೆ. ಇದನ್ನು ನೀವು ಚೆನ್ನಾಗಿ ಅರ್ಥಮಾಡಿಕೊಳ್ಳಿ ಇಲ್ಲದಿದ್ದರೆ ನೀವು ಮುಂಬರುವ ಸಮಯದಲ್ಲಿ ವಿಷಾದಿಸಬೇಕಾಗುತ್ತದೆ.

**ಸಿಂಹ** ನಿಮ್ಮ ಮಗುವಿನಂಥ ಸ್ವಭಾವ ಕಾಣಿಸಿಕೊಳ್ಳುತ್ತದೆ ಮತ್ತು ನೀವು ಒಂದು ಆಹ್ಲಾದಕಾರಿ ಮನಸ್ಥಿತಿಯಲ್ಲಿರುತ್ತೀರಿ. ಇಂದು ನಿಮಗೆ ಹಣದ ಲಾಭವಾಗುವ ಪೂರ್ತಿ ಸಾಧ್ಯತೆ ಇದೆ, ಆದರೆ ಇದರೊಂದಿಗೆ ನೀವು ದಾನವನ್ನು ಸಹ ಮಾಡಬೇಕು ಏಕೆಂದರೆ ಇದರಿಂದ ನಿಮಗೆ ಮಾನಸಿಕ ಶಾಂತಿ ಸಿಗುತ್ತದೆ.

**ಕನ್ಯಾ** ಕಿಕ್ಕಿರಿದ ಬಸ್‌ನಲ್ಲಿ ಪ್ರಯಾಣಿಸುವಾಗ ರಕ್ತದೊತ್ತಡವಿರುವ ರೋಗಿಗಳು ಅವರ ಆರೋಗ್ಯದ ಬಗ್ಗೆ ಹೆಚ್ಚು ಎಚ್ಚರಿಕೆ ವಹಿಸಬೇಕು. ನಿಮ್ಮ ಹಳೆಯ ಯಾವುದೇ ರೋಗ ಇಂದು ನಿಮ್ಮನ್ನು ಕಾಡಬಹುದು. ಇದರ ಕಾರಣದಿಂದ ನೀವು ಆಸ್ಪತ್ರೆಗೂ ಹೋಗಬೇಕಾಗಬಹುದು, ನಿಮ್ಮ ಸಾಕಷ್ಟು ಹಣವು ಸಹ ಖರ್ಚು ಆಗಬಹುದು.

**ತುಲಾ** ಒಬ್ಬ ಸ್ನೇಹಿತ ನಿಮ್ಮ ಮುಕ್ತ ಮನಸ್ಸು ಮತ್ತು ಸಹಿಷ್ಣುತೆಯ ಪರಮಾವಧಿಯನ್ನು ಪರೀಕ್ಷಿಸಬಹುದು. ನೀವು ನಿಮ್ಮ ಮೌಲ್ಯಗಳೊಂದಿಗೆ ರಾಜಿಯಾಗದಿರುವಂತೆ ಮತ್ತು ಸಕಾರಣವಾದ ನಿರ್ಧಾರಗಳನ್ನು ಕೈಗೊಳ್ಳುವಂತೆ ಎಚ್ಚರಿಕೆ ವಹಿಸಬೇಕು. ನೀವು ತ್ವರಿತ ಹಣ ಪಡೆಯುವ ಬಯಕೆ ಹೊಂದಿರುತ್ತೀರಿ.

**ವೃಶ್ಚಿಕ** ಪತ್ನಿ ನೀವು ಹುರಿದುಂಬಿಸಬಹುದು. ಆರ್ಥಿಕವಾಗಿ ಇಂದು ನೀವು ಸಾಕಷ್ಟು ಬಲವಾಗಿ ಕಾಣುವಿರಿ, ಗ್ರಹ ಮತ್ತು ನಕ್ಷತ್ರಗಳ ಚಲನೆಯಿಂದ ಇಂದು ನಿಮಗಾಗಿ ಹಣವನ್ನು ಸಂಪಾದಿಸುವ ಅನೇಕ ಅವಕಾಶಗಳು ಉಂಟಾಗುತ್ತವೆ. ನೀವು ಬಯಸುವ ಲ್ಲಾಗಮನವನ್ನೂ ನೀವು ಪಡೆಯುವ ಒಳ್ಳೆಯ ದಿನ.

**ಧನಸ್ಸು** ನೀವು ಸುತ್ತಲಿರುವವರು ನಿಮಗೆ ಬೆಂಬಲ ನೀಡುವುದರಿಂದ ನೀವು ಸಂತೋಷವಾಗಿರುವಿರಿ. ಇಂದು ನೀವು ಭೂಮಿ, ವಸತಿ, ಅಥವಾ ಸಾಂಸ್ಕೃತಿಕ ಯೋಜನೆಗಳಿಗೆ ಸಂಬಂಧಿಸಿದ ಸಮಸ್ಯೆಗಳಿಗೆ ಗಮನ ನೀಡಬೇಕು. ಇತರರ ವ್ಯವಹಾರಗಳಲ್ಲಿ ನಿಮ್ಮ ಮೂಗುತೂರಿಸುವಿಕೆಯನ್ನು ಇಂದು ತಡೆಯಬೇಕು.

**ಮಕರ** ಪ್ರತಿ ವ್ಯಕ್ತಿಯನ್ನೂ ಆಲಿಸಿ ನಿಮ್ಮ ಸಮಸ್ಯೆಗಳಿಗೆ ಪರಿಹಾರ ದೊರಕಬಹುದು. ಸಂಬಂಧಿಕರಿಂದ ಹಣದ ಸಾಲವನ್ನು ತೆಗೆದುಕೊಂಡಿರುವ ಜನರು, ಯಾವುದೇ ಪರಿಸ್ಥಿತಿಯಲ್ಲಿಯೂ ಸಾಲವನ್ನು ಮರುಪಾವತಿ ಮಾಡಬೇಕಾಗುತ್ತದೆ. ಸ್ನೇಹಿತರು ಜೊತೆಗಿನ ಚಟುವಟಿಕೆಗಳು ಆಹ್ಲಾದಕರವಾಗಿರುತ್ತವೆ.

**ಕುಂಭ** ಹೆಚ್ಚು ಆಶಾವಾದಿಗಳಾಗಿರಲು ನಿಮ್ಮನ್ನು ನೀವೇ ಪ್ರೇರೇಪಿಸಿಕೊಳ್ಳಿ. ಇದು ವಿಶ್ವಾಸ ಮತ್ತು ನಮ್ಯತೆಯನ್ನು ಹೆಚ್ಚಿಸುತ್ತದಾದರೂ ಅದೇ ಸಮಯದಲ್ಲಿ ಭಯ, ದ್ವೇಷ, ಅಸೂಯೆ, ಸೇಡಿನಂಥ ನಕಾರಾತ್ಮಕ ಭಾವನೆಗಳನ್ನು ಹಿಂದೆ ಬಿಡಲು ಸಿದ್ಧವಾಗಿ. ಸಮಯ ಮತ್ತು ಹಣದ ಕಾತರ ನೀವು ಮಾಡಬೇಕು.

**ಮೀನ** ಒಬ್ಬ ಸಂತನ ಆಶೀರ್ವಾದದಿಂದ ಮನಶ್ಶಾಂತಿ. ವ್ಯಾಪರದಲ್ಲಿ ಪ್ರಯೋಜನ ಅನೇಕ ವ್ಯಾಪಾರಿಗಳ ಮುಖದ ಮೇಲೆ ಸಂತೋಷವನ್ನು ತರಬಹುದು. ಹೊಸ ನೋಟ– ಹೊಸ ಉಡುಪು– ಹೊಸ ಸ್ನೇಹಿತರು ನೀವು ನಿಮಗಾಗಿರಬಹುದು. ಪ್ರೀತಿಯ ಸಂಗೀತವನ್ನು ಯಾವಾಗಲೂ ಅದರಲ್ಲೇ ಮುಳುಗಿರುವವರು ಕೇಳಬಹುದು.

# ಎರೆಹುಳು ಗೊಬ್ಬರದಿಂದ ಆರೋಗ್ಯಕರ ಫಸಲು

## ಆರ್ಥಿಕ ಸ್ವಾವಲಂಬಿ ಆಗುವುದರ ಜೊತೆಗೆ ಭೂಮಿಯ ಫಲವತ್ತತೆ ಹೆಚ್ಚುತ್ತದೆ ಎಂದು ವಕೀಲ ವೀರೇಶ ಬೆನಹಾಳ ಅಭಿಪ್ರಾಯ

• ಉದಯವಾಹಿನಿ, ಗಜೇಂದ್ರಗಡ

ಸಮೀಪದ ಮುಶಿಗೇರಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ನೆಲ್ಲೂರ ಗ್ರಾಮದ ಪ್ರಗತಿಪರ ರೈತರಾದ ಕೂಡ್ಲೆಪ್ಪ ಗುಡಿಮನಿ ಅವರು ಸಾವಯವ ಗೊಬ್ಬರ ಬಳಸಿ ಮಿಶ್ರ ಬೆಳೆ ಬೆಳೆದು ಯಶಸ್ಸು ಕಂಡಿದ್ದಾರೆ. ಸಾವಯವ ಕೃಷಿಯನ್ನು ಲಾಭದಾಯಕ ಮಾಡಿಕೊಂಡಿದ್ದಾರೆ. ಗ್ರಾಮದಲ್ಲಿರುವ ತಮ್ಮ 4 ಎಕರೆ ತೋಟದಲ್ಲಿ ಗೋವಿನಜೋಳ, ತೊಗರಿ, ಅಲಸಂದಿ, ಶೇಂಗಾ, ನಿಂಬು, ಹೆಬ್ಬೇವು, ಸಾಗವಾನಿ, ನುಗ್ಗೆ, ಹೀಗೆ ವಿವಿಧ ಬೆಳೆಗಳನ್ನು ಬೆಳೆಯುತ್ತಿದ್ದಾರೆ.

2022–23ರ ಸಾಲಿನ ನರೇಗಾ ಯೋಜನೆ ಅಡಿಯಲ್ಲಿ 27,000 ಸಹಾಯಧನ ಪಡೆದು 27 ಮೀ. ಉದ್ದ, 3 ಮೀ. ಅಗಲ ಮತ್ತು 1 ಮೀ. ಅಂತರದ ಎರೆಹುಳು ತೊಟ್ಟಿ ನಿರ್ಮಿಸಿಕೊಂಡು ಸ್ವತಃ ತಾವೇ ಸಾವಯವ ಗೊಬ್ಬರ ತಯಾರಿಸಿ ಬೆಳೆಗಳಿಗೆ ಹಾಕುತ್ತಿದ್ದಾರೆ. ಮಿಶ್ರ ಬೆಳೆಯಲ್ಲಿ ಒಂದಲ್ಲ ಒಂದು ಉತ್ಪನ್ನದಿಂದ ಆದಾಯ ಬರುವಂತೆ ಬೇಸಾಯ ಮಾಡುತ್ತಿದ್ದಾರೆ.

2022–23ರ ಸಾಲಿನ ನರೇಗಾ ಯೋಜನೆ ಅಡಿಯಲ್ಲಿ 27,000 ಸಹಾಯಧನ ಪಡೆದು 27 ಮೀ. ಉದ್ದ, 3 ಮೀ. ಅಗಲ ಮತ್ತು 1 ಮೀ.


☛ ಉದಯವಾಹಿನಿ ಚಿತ್ರ

ಅಂತರದ ಎರೆಹುಳು ತೊಟ್ಟಿ ನಿರ್ಮಿಸಿಕೊಂಡು ಸ್ವತಃ ತಾವೇ ಸಾವಯವ ಗೊಬ್ಬರ ತಯಾರಿಸಿ ಬೆಳೆಗಳಿಗೆ ಹಾಕುತ್ತಿದ್ದಾರೆ.

ಇದರಿಂದ ರಾಸಾಯನಿಕ ಗೊಬ್ಬರಕ್ಕೆ ಖರ್ಚಾಗುತ್ತಿದ್ದ ಹಣ ಉಳಿತಾಯವಾಗುತ್ತಿದೆ. ಅಲ್ಲದೇ ಎರೆಹುಳು ಗೊಬ್ಬರ ಬಳಕೆಯಿಂದ ಬೆಳೆಗಳಿಗೆ ರೋಗ ತಗಲುವುದು ವಿರಳ. ಫಸಲು ಮನುಷ್ಯನ ಆರೋಗ್ಯಕ್ಕೂ ಪೂರಕ ಎಂಬುವುದನ್ನು ಮನಗಂಡಿದ್ದಾರೆ.ಎರೆಹುಳು ತೊಟ್ಟಿಗೆ ಕಸ, ಕಡ್ಡಿ, ಮೇವಿನ ದಂಟು, ಕಟ್ಟಿಗೆಗಳನ್ನು ಹಾಕಿ ಮೇಲೆ ನೀರನ್ನು ಹಾಯಿಸಿದ ನಂತರ ಪ್ರತಿ ದಿನ ದನಕರುಗಳ ಸಗಣಿಯನ್ನು ಅದರ ಮೇಲೆ ಹಾಕುವುದರಿಂದ ತೇವಾಂಶ ಕಾಯ್ದುಕೊಳ್ಳಲು ಮತ್ತು ಎರೆಹುಳುಗಳಿಗೆ ಬೇಗ ಗೊಬ್ಬರ ತಯಾರಿಸಲು ಸಹಕಾರಿಯಾಗುತ್ತದೆ. ಎರೆಹುಳುಗಳಿಗೆ ಗೊಬ್ಬರ ತಯಾರಿಸಲು ಇನ್ನಷ್ಟು ಪುಷ್ಟಿ ನೀಡಲು ಪ್ರತಿದಿನ ಜಾನುವಾರುಗಳ

> ನರೇಗಾ ಸದ್ಬಳಕೆ ಮಾಡಿಕೊಳ್ಳಿ ನೆಲ್ಲೂರು ಗ್ರಾಮದ ಪ್ರಗತಿಪರ ರೈತ ಕೂಡ್ಲೆಪ್ಪ ಗುಡಿಮನಿ ಅವರು ನರೇಗಾ ಯೋಜನೆಯ ಅಡಿಯಲ್ಲಿ ತಮ್ಮ ಜಮೀನಿನಲ್ಲಿ ಎರೆಹುಳು ತೊಟ್ಟಿ ನಿರ್ಮಿಸಿಕೊಂಡು ಸ್ವತಃ ತಾವೇ ಸಾವಯವ ಗೊಬ್ಬರ ತಯಾರಿಸಿ ಹೊಲಕ್ಕೆ ಬಳಕೆ ಮಾಡಿಕೊಂಡು ಉತ್ತಮ ಇಳುವರಿ ಪಡೆದು ಇತರ ರೈತರಿಗೆ ಮಾದರಿಯಾಗಿದ್ದಾರೆ. ನರೇಗಾ ಯೋಜನೆಯ ಅಡಿಯಲ್ಲಿ ರೈತರಿಗೆ ಎರೆಹುಳು ತೊಟ್ಟಿ ನಿರ್ಮಿಸಿಕೊಳ್ಳಲು ಅವಕಾಶವಿದೆ. ರೈತರು ಯೋಜನೆಯ ಸದ್ಬಳಕೆ ಮಾಡಿಕೊಳ್ಳಬೇಕು
> –ಮಂಜುಳಾ ಹಕಾರಿ, ಇಒ ತಾಲ್ಲೂಕು ಪಂಚಾಯಿತಿ ಗಜೇಂದ್ರಗಡ

ಸಗಣಿ, ಇತರ ಪದಾರ್ಥಗಳನ್ನು ಒಟ್ಟುಗೂಡಿಸಿ ನೀರಿನ ಡ್ರಮ್‌ನಲ್ಲಿ ಮಿಶ್ರಣ ಮಾಡಿ ಪ್ರತಿದಿನ ಕಟ್ಟಿಗೆಯಿಂದ ಮೇಲೆ ಕೆಳಗೆ ಮಾಡಿ ಅದನ್ನು ಎರೆಹುಳು ತೊಟ್ಟಿಯಲ್ಲಿ ಸಿಂಪಡಿ ಸುತ್ತಿದ್ದಾರೆ.

ಎರೆಹುಳು ತೊಟ್ಟಿಯಲ್ಲಿ ಮೊದಲ ಬಾರಿಗೆ 2 ತಿಂಗಳಿಗೆ ಗೊಬ್ಬರ ಸಿದ್ಧವಾಗುತ್ತದೆ. ಬಳಿಕ 45 ದಿನಗಳಲ್ಲಿ ಗೊಬ್ಬರ ತಯಾರಾಗುತ್ತದೆ. ರೈತರು ಕಡಿಮೆ ಖರ್ಚಿನ ಎರೆಹುಳು ತೊಟ್ಟಿ ನಿರ್ಮಿಸಿಕೊಂಡು ಅದರಿಂದ ಬರುವ ಗೊಬ್ಬರವನ್ನು ಕೃಷಿಗೆ ಬಳಕೆ ಮಾಡಿಕೊಳ್ಳುವುದರಿಂದ ಭೂಮಿ ಫಲವತ್ತತೆ ಉಳಿಯುವುದರ ಜೊತೆಗೆ ಉತ್ತಮ, ಆರೋಗ್ಯಕರ ಫಸಲು ಲಭಿಸುತ್ತದೆ. ಇದರಿಂದ ರಾಸಾಯನಿಕ ಗೊಬ್ಬರಕ್ಕೆ ಬಳಕೆಯಾಗುತ್ತಿದ್ದ ಹಣ ಉಳಿದು ಸಾಲದ ಸುಳಿಯಲ್ಲಿ ಸಿಲುಕುವುದು ತಪ್ಪುತ್ತದೆ ಎನ್ನುತ್ತಾರೆ ಕೂಡ್ಲೆಪ್ಪ ಗುಡಿಮನಿ.ಆಧುನಿಕ ಜಗತ್ತಿನಲ್ಲಿ ಬೆಳೆಗಳಿಗೆ ಮಿತಿ ಮೀರಿದ ರಾಸಾಯನಿಕದ ಬಳಕೆಯಿಂದ ಆರೋಗ್ಯದ ಮೇಲೆ ದುಷ್ಪರಿಣಾಮ ಉಂಟಾಗುತ್ತಿದೆ. ಪ್ರತಿಯೊಬ್ಬ ರೈತ ಎರೆಹುಳು ಗೊಬ್ಬರ, ಸಾವಯವ ಗೊಬ್ಬರ ಬಳಕೆ ಮಾಡಿ ಕೃಷಿ ಮಾಡಿದಲ್ಲಿ ಆರ್ಥಿಕ ಹೊರೆ ಕಡಿಮೆಯಾಗಿ ಆರೋಗ್ಯಯುತ ಫಸಲು ಪಡೆದು ಸ್ವಸ್ಥ ಸಮಾಜ ನಿರ್ಮಾಣಕ್ಕೆ ಸಹಕಾರಿಯಾಗುತ್ತದೆ ಎಂದು ಅವರು ಅಭಿಪ್ರಾಯಪಡುತ್ತಾರೆ.

ರಾಸಾಯನಿಕ ಗೊಬ್ಬರ ಬಳಕೆಯಿಂದ ಭೂಮಿ ಬಂಜರಾಗುವುದರ ಜೊತೆಗೆ ಮನುಷ್ಯನ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತದೆ.

**ರಾಸಾಯನಿಕ ಗೊಬ್ಬರ ಬಳಕೆ**

ಮಿಶ್ರ ಬೆಳೆಯಲ್ಲಿ ಒಂದಲ್ಲ ಒಂದು ಉತ್ಪನ್ನದಿಂದ ಆದಾಯ ಬರುವಂತೆ ಬೇಸಾಯ ಮಾಡುತ್ತಿದ್ದಾರೆ.ಆರಂಭದಲ್ಲಿ ರಾಸಾಯನಿಕ ಗೊಬ್ಬರ ಬಳಕೆ ಮಾಡಿ ಕೃಷಿ ಮಾಡಿದಾಗ ಭೂಮಿ ಫಲವತ್ತತೆ ಕಳೆದುಕೊಂಡಿರುವುದು ಸ್ವತಃ ಅನುಭವಕ್ಕೆ ಬಂದ ಮೇಲೆ ಬೇರೆ ಬೇರೆ ಮಾಧ್ಯಮಗಳ ಮೂಲಕ ಸಾವಯವ ಕೃಷಿ, ಎರೆಹುಳು ಗೊಬ್ಬರದ ಕುರಿತು ಸಾಕಷ್ಟು ತಿಳಿದುಕೊಂಡು ಅದನ್ನು ಕೃಷಿಯಲ್ಲಿ ಅಳವಡಿಸಿಕೊಂಡು ಯಶಸ್ವಿಯಾಗಿದ್ದಾರೆ.

ಫಸಲು ಸಮರ್ಪಕವಾಗಿ ಬರದಿದ್ದಾಗ ರೈತರು ಸಾಲಗಾರರಾಗುತ್ತಾರೆ. ಹೀಗಾಗಿ ಸಾವಯವ ಕೃಷಿ ಮಾಡುವುದರಿಂದ ಆರ್ಥಿಕ ಸ್ವಾವಲಂಬಿ ಆಗುವುದರ ಜೊತೆಗೆ ಭೂಮಿಯ ಫಲವತ್ತತೆ ಹೆಚ್ಚುತ್ತದೆ' ಎಂದು ನಲ್ಲೂರ ಗ್ರಾಮದ ವಕೀಲ ವೀರೇಶ ಬೆನಹಾಳ ಅಭಿಪ್ರಾಯಪಟ್ಟರು.

## ಬೀದಿ ವ್ಯಾಪಾರಸ್ಥರಿಗೆ ನ್ಯಾಯಯುತವಾಗಿ ಬೇಡಿಕೆ ಈಡೇರಿಸಬೇಕು

• ಉದಯವಾಹಿನಿ, ಸಿಂಧನೂರು

ಬೀದಿಬದಿ ವ್ಯಾಪಾರಿಗಳಿಗೆ ನ್ಯಾಯ ದೊರಕಿಸುವಂತೆ ಒತ್ತಾಯಿಸಿ ನಡೆಸುತ್ತಿರುವ ಹೋರಾಟದಲ್ಲಿ ಗುರುವಾರ ಕರ್ನಾಟಕ ಪ್ರಗತಿಪರ ಬೀದಿಬದಿ ವ್ಯಾಪಾರಸ್ಥರ ಸಂಘದ ರಾಜ್ಯ ನಾಯಕಿ ಲೇಖಾ ಅಡವಿ ವಕೀಲೆ ಮಾತನಾಡಿದರು.

ನಗರದ ರಸ್ತೆ ಬದಿಗಳಲ್ಲಿ ಡಬ್ಬಾ ಅಂಗಡಿ, ಶೆಡ್ ಗಳನ್ನು ತೆರವುಗೊಳಿಸಿದ್ದರಿಂದ ಸಾವಿರಾರು ಸಣ್ಣಪುಟ್ಟ ವ್ಯಾಪಾರಸ್ಥರು ನಿರಾಶ್ರಿತರಾಗಿದ್ದು, ಅವರಿಗೆ ಕೂಡಲೇ ಪರ್ಯಾಯ ವ್ಯವಸ್ಥೆ ಕಲ್ಪಿಸುವಂತೆ ಆಗ್ರಹಿಸಿ ಬೀದಿ ವ್ಯಾಪಾರಸ್ಥರ ಹೋರಾಟ ಸಮಿತಿಯಿಂದ ತಹಸಿಲ್ ಕಚೇರಿ ಮುಂದೆ ಆರಂಭಿಸಿರುವ ಉಪವಾಸ ಸತ್ಯಾಗ್ರಹ ನಾಲ್ಕನೇ ದಿನವೂ ಮುಂದುವರಿದಿದೆ.

ಬೀದಿ ಬದಿ ವ್ಯಾಪಾರ ಮಾಡಿಕೊಂಡು ಕಳೆದ ಹತ್ತಾರು ವರ್ಷಗಳಿಂದ ಜೀವನ ಸಾಗಿಸುತ್ತಿದ್ದೆವು. ಏಕಾಏಕಿ ಕಾರ್ಯಾಚರಣೆ ನಡೆಸಿ ಅಂಗಡಿಗಳನ್ನು ತೆರವುಗೊಳಿಸಿದ್ದರಿಂದ ದೈನಂದಿನ ಜೀವನ ನಡೆಸಲು ಕಷ್ಟವಾಗಿದೆ. ಅಂದಂದಿನ ಆದಾಯದಿಂದ ಕುಟುಂಬ ನಿರ್ವಹಣೆ ಮಾಡುತ್ತಿದ್ದ


☛ ಉದಯವಾಹಿನಿ ಚಿತ್ರ

ನಮಗೆ ಬರಸಿಡಿಲು ಬಡಿದಂತಾಗಿದೆ.

ಸರಕಾರ ಮತ್ತು ಜಿಲ್ಲಾಡಳಿತ ಬಡವರ ಹೊಟ್ಟೆಯ ಮೇಲೆ ಹೊಡೆಯದೇ ಈ ಕೂಡಲೇ ಪರ್ಯಾಯ ವ್ಯವಸ್ಥೆ ಕಲ್ಪಿಸಲು ಮುಂದಾಗಬೇಕು ಎಂದು ಒತ್ತಾಯಿಸಲಾಗಿದೆ. ಹೋರಾಟದ ಸ್ಥಳಕ್ಕೆ ಕರ್ನಾಟಕ ಪ್ರಗತಿಪರ ಬೀದಿಬದಿ ವ್ಯಾಪಾರಸ್ಥರ ಸಂಘದ ರಾಜ್ಯ ನಾಯಕಿ ಲೇಖಾ ಅಡವಿ ವಕೀಲೆ ಭೇಟಿ ನೀಡಿ, ವ್ಯಾಪಾರಸ್ಥರ ಸಮಸ್ಯೆ ಆಲಿಸಿದರು. ವ್ಯಾಪಾರಿಗಳಿಗೆ ನ್ಯಾಯಯುತವಾಗಿ ಬೇಡಿಕೆ ಈಡೇರಿಸಬೇಕು ಎಂದು ಆಗ್ರಹಿಸಿದರು.

ಇದೆ ಸಂದರ್ಭದಲ್ಲಿ ಬಾಬು ಅಧ್ಯಕ್ಷರು ಕರ್ನಾಟಕ ಪ್ರಗತಿಪರ ಬೀದಿಬದಿ ವ್ಯಾಪಾರಸ್ಥ ಸಂಘ (ಎಐಸಿಸಿಟಿಯು) ಮಾತನಾಡಿದರು

**ಕುಟುಂಬಗಳು ಬೀದಿಪಾಲು**

ಬೀದಿ ಬದಿ ವ್ಯಾಪಾರಸ್ಥರನ್ನು ತೆರವುಗೊಳಿಸುವ ಮುನ್ನ ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಸುಪ್ರೀಂ ಕೋರ್ಟ್ ಹಲವು ಮಾರ್ಗದರ್ಶಿಗಳನ್ನು ನೀಡಿದೆ. ಆದರೆ ಜಿಲ್ಲಾಡಳಿತ ಮತ್ತು ತಾಲ್ಲೂಕು ಆಡಳಿತದ ಅಧಿ ಕಾರಿಗಳು ಅವುಗಳನ್ನು ಪಾಲಿಸಿಲ್ಲ. ಇದರಿಂದ ರಸ್ತೆ ಬದಿ ವ್ಯಾಪಾರವನ್ನೇ ಜೀವನ ನಿರ್ವಹಣೆಗೆ ಆಧರಿಸಿದ್ದ ಕುಟುಂಬಗಳು ಬೀದಿಪಾಲಾಗಿವೆ.

ಹೋರಾಟದ ಸಂಚಾಲಕರಾದ ನಾಗರಾಜ ಪೂಜಾರ್,ವಿಜಯ್ ದೊರರಾಜ್, ಪರುಶುರಾಮ ಗಂಗಾವತಿ, ಕೇಶವ ನಾಯಕ್ ಗೊರಬಾಳ, ಬಸವರಾಜ ಬಾದರ್ಲಿ,ಬಿ.ಎನ್. ಯರದಿಹಾಳ, ಬಸವಂತರಾಯಗೌಡ ಕಲ್ಲೂರು, ಚಿಟ್ಟಿಬಾಬು ಸೇರಿದಂತೆ ಹಲವರು ಪಾಲ್ಗೊಂಡಿದ್ದರು.

## ಭರವಸೆ ತುಂಬಲು ಶಿಕ್ಷಣದಿಂದ ಮಾತ್ರ ಸಾಧ್ಯ

• ಉದಯವಾಹಿನಿ, ಕೆಂಭಾವಿ

ಸಾರ್ಥಕ ಬದುಕಿನ ಸಾಧಕಿ, ಕವಿ ಲೇಖಕಿ, ಸ್ತ್ರೀವಾದಿ, ಸಮಾಜ ಸುಧಾರಕಿ, ಸಾವಿತ್ರಿಬಾಯಿ ಫುಲೆ ಅವರ ಆದರ್ಶಗಳು, ಬದುಕು, ಬರಹಗಳನ್ನು ವಿದ್ಯಾರ್ಥಿಗಳು ಮೈಗೂಡಿಸಿಕೊಳ್ಳಬೇಕು ಎಂದು ಡಾ ಸಿದ್ಧಲಿಂಗ ರಾಠೋಡ್ ಹೇಳಿದರು.

ಪಟ್ಟಣದ ಶ್ರೀಮತಿ ಗಂಗೂಬಾಯಿ ಶಾಂತಗೌಡ ಪೋಲೀಸ್ ಪಾಟೀಲ್ ಮೆಮೋರಿಯಲ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಮಾನವ ಬಂಧುತ್ವ ವೇದಿಕೆ ಸಹಯೋಗದಲ್ಲಿ ಶುಕ್ರವಾರ ಆಯೋಜಿಸಿದ್ದ 194 ನೇ ಜನ್ಮದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು ದಮನಿತ ಮಹಿಳೆಯರ ಧ್ವನಿಯಾಗಿ, ಮಹಿಳಾ ಶಿಕ್ಷಣಕ್ಕೆ ಒತ್ತು ನೀಡಿ ಶೈಕ್ಷಣಿಕ ಕ್ರಾಂತಿಗೆ ನಾಂದಿ ಹಾಡುವ ಮೂಲಕ, ವಿಧವೆಯರ, ಆರ್ಥಿಕ ದುರ್ಬಲ ಮಹಿಳೆಯರ ಬಲವರ್ಧನೆ ಅವಿರತ ಶ್ರಮಿಸಿ, ಅಕ್ಷರದ್ವನೆಂದು ಕೀರ್ತಿಗೆ ಭಾಜನಳಾದ ಭಾರತದ ಮೊದಲ ಮಹಿಳಾ ಶಿಕ್ಷಕಿ ಎಂದವರು, ಮಹಿಳೆಯರು ಮುಖ್ಯವಾಹಿನಿಗೆ ಬರಲು, ಅವರ ಬದುಕಿನಲ್ಲಿ ಭರವಸೆ ತುಂಬಲು ಶಿಕ್ಷಣದಿಂದ ಮಾತ್ರ ಸಾಧ್ಯ ಎಂದರು.


☛ ಉದಯವಾಹಿನಿ ಚಿತ್ರ

ಪ್ರಾಸ್ತಾವಿಕವಾಗಿ ಮಾತನಾಡಿದ ಮಾನವ ಬಂಧುತ್ವ ವೇದಿಕೆಯ ಅಧ್ಯಕ್ಷ, ವಿಠ್ಠಲ ಎಸ್ ಭಜಂತ್ರಿ, ಮಹಿಳೆಯರು ಹಕ್ಕುಗಳ ಬಗ್ಗೆ ಜಾಗೃತಿ ಮೂಡಿಸಿ, ಮಹಿಳೆಯರ ಏಳಿಗೆಗಾಗಿ ಹಲವು ಆಶ್ರಮಗಳನ್ನು ಸ್ಥಾಪಿಸಿ ಅವರ ಸ್ವಾವಲಂಬಿ ಬದುಕಿಗೆ ಸ್ಫೂರ್ತಿಯಾದ ಶ್ರೇಷ್ಠ ಸಮಾಜ ಸೇವಕಿ ಎಂದರು.

ಉಪನ್ಯಾಸಕರಾದ ಮಲ್ಲಿಕಾರ್ಜುನ ಮರಡ್ಡಿ, ನಸ್ರೀನ್ ತಾಜ್, ಸುಮಾ ಎಚ್ ಮಾತನಾಡಿದರು ಡಾ ಬಸಮ್ಮ ಎಸ್ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಇದೇ ವೇಳೆ ಡಾ ಪೂಜಾ ಹೊನ್ನುಟಗಿ, ಶಶಿಕುಮಾರ್, ಡಾ ಯಂಕನಗೌಡ ಎಸ್ ಪಾಟೀಲ, ಡಾ ಮಲ್ಲಣ್ಣ ಬಿಳೇಬಾವಿ, ಡಾ ಶರಣಪ್ಪ ನಡಕೂರ, ಪವನ ಕುಲ್ಕರ್ಣಿ, ಶರಣಬಸವ ಅಂಗಡಿ, ಬಸವರಾಜ ಹೋಳಿಕಟ್ಟಿ, ಮಾಸುಮಲಿ ನಾಶಿ, ಸೋಮನಾಥ ಭಜಂತ್ರಿ, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಸಾವಿತ್ರಿಬಾಯಿ ಪುಲೆ ಅವರ 193ನೇ ಜನ್ಮ ದಿನ ಆಚರಣೆ


☛ ಉದಯವಾಹಿನಿ ಚಿತ್ರ

• ಉದಯವಾಹಿನಿ, ಕೆಂಭಾವಿ

ಪಟ್ಟಣದಲ್ಲಿ ಮಹಾನಾಯಕ ಬಿ.ಆರ್.ಅಂಬೇಡ್ಕರ್ ಅವರ ಮೂರ್ತಿಯ ಮುಂದೆ ಸಾವಿತ್ರಿಬಾಯಿ ಪುಲೆ ಅವರ 193ನೇ ಜನ್ಮ ದಿನವನ್ನು ಆಚರಣೆಯನ್ನು ಮಾಡಲಾಯಿತು. ಇದೇ ಸಂಧರ್ಭದಲ್ಲಿ ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿಯ ರಾಜ್ಯ ಸಂಚಾಲಕರಾದ ಲಕ್ಷ್ಮೀನಾರಾಯಣ ನಾಗವಾರ ಅವರಗೆ ಸಾಮೂಹಿಕ ದಲಿತ್ ಸಂಘಟನೆಗಳ ವತಿಯಿಂದ ನುಡಿ ನಮನವನ್ನು ಸಲ್ಲಿಸಲಾಯಿತು.

ಈ ಸಂಧರ್ಭದಲ್ಲಿ ಮಡಿವಾಳಪ್ಪ ಕಟ್ಟಿಮನಿ ಕಿರ್ದಳಿ,ದರ್ಮಣ ಪತ್ತಾ ್ಯಪುರ್ ,ಗೋಪಾಲ ಬಡಿಗೇರ್ ಕರಡ್ಕಲ್,ಬಸವಣ್ಣಪ್ಪ ಆರ್ ಮಾಳಳ್ಳಿಕರ್,ಮರೆಪ್ಪ ಮಲ್ಲಾ,ಭೀಮಶಂಕರ್ ಸೋಮನಾಹಳಕರ್,ಯಲ್ಲಪ್ಪ ಭಾವಿಮನಿ,ರಾಯಪ್ಪ ಬಡಿಗೇರ್,ಮಲ್ಲಿಕಾರ್ಜುನ ಕಟ್ಟಿಮನಿ,ಮುದಕಪ್ಪ ಕಿರದಳಿ,ಚಂದ್ರಪ್ಪ ಯಾಳಿಗಿ ,ಮಾಂತೇಶ ಯಾಳಿಗಿ,ಚನ್ನಪ್ಪ ಮಾಳಳ್ಳಿಕರ್,ಮಾನಪ್ಪ ಬಮ್ಮನಹಳ್ಳಿ,ಇತರರು ಇದ್ದರು.

## ಹೆದ್ದಾರಿ ಪಕ್ಕದ ಮಳಿಗೆಗಳ ತೆರವಿಗೆ ಪ್ರತಿಭಟನೆ

• ಉದಯವಾಹಿನಿ, ಹುಮನಾಬಾದ್

ತಾಲ್ಲೂಕಿನ ದುಬಲಗುಂಡಿ ಗ್ರಾಮದ ಬಳಿ ಹುಮನಾಬಾದ್–ಭಾಲ್ಕಿ ರಾಜ್ಯ ಹೆದ್ದಾರಿ ಬದಿಯ ಸರ್ವೆ ನಂ.228ರ ಪಕ್ಕದಲ್ಲಿನ ಅನಧಿಕೃತ ಕಟ್ಟಡಗಳನ್ನು ತೆರವುಗೊಳಿಸುವಂತೆ ಒತ್ತಾಯಿಸಿ ಗ್ರಾಮದ ಕೆಲವು ಮುಖಂಡರು ಗ್ರಾಮ ಪಂಚಾಯಿತಿ ಎದುರು ಪ್ರತಿಭಟನೆ ನಡೆಸಿದರು. ಗ್ರಾಮದ ಸರ್ವೆ ನಂ.228ರ ಬದಿಯಲ್ಲಿ ಹುಮನಾಬಾದ್–ಭಾಲ್ಕಿ ರಾಜ್ಯ ಹೆದ್ದಾರಿ ಹಾದುಹೋಗಿದ್ದು, ಈ ರಸ್ತೆಯ 40 ಮೀಟರ್ ಅಂತರದಲ್ಲಿ ಯಾವುದೇ ಕಟ್ಟಡ ನಿರ್ಮಾಣ ಮಾಡಬಾರದು ಎಂಬ ಆದೇಶವಿದ್ದರೂ ರಸ್ತೆಯ ಪಕ್ಕದಲ್ಲೇ ಅಕ್ರಮವಾಗಿ ಮಳಿಗೆಗಳನ್ನು ನಿರ್ಮಾಣ ಮಾಡುತ್ತಿದ್ದು, ಅವುಗಳ ನಿರ್ಮಾಣ ಕಾರ್ಯವನ್ನು ತಡೆಗಟ್ಟಬೇಕು ಎಂದು ಈಚೆಗೆ ಗ್ರಾಮ ಪಂಚಾಯಿತಿ ಅಧ್ಯಕ್ಷ ಹಾಗೂ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗೆ ಮನವಿ ಪತ್ರ ಸಲ್ಲಿಸಿದ್ದರೂ ಸ್ಥಳೀಯ ಪಂಚಾಯಿತಿ ಕ್ರಮ ಕೈಗೊಳ್ಳದ ಹಿನ್ನೆಲೆಯಲ್ಲಿ ಪ್ರತಿಭಟನೆ ನಡೆಸುತ್ತಿರುವುದಾಗಿ ಗ್ರಾಮದ ಮುಖಂಡರು ತಿಳಿಸಿದರು. ಈ ಘಟನೆಯ ವಿಷಯ ತಿಳಿದು ಸ್ಥಳಕ್ಕೆ ಭೇಟಿ ನೀಡಿದ್ದ ಸಿಪಿಐ ಗುರುಪಾಟೀಲ, ಪ್ರಮುಖರೊಂದಿಗೆ ಸಭೆ ನಡೆಸಿ ಪರಿಸ್ಥಿತಿ ತಿಳಿಸಿಗೊಳಿಸಿದರು. 'ಹುಮನಾಬಾದ್– ಭಾಲ್ಕಿ ರಾಜ್ಯ ಹೆದ್ದಾರಿಯಲ್ಲಿ ಒತ್ತುವರಿ ಮಾಡಿರುವ ಎರಡು ಬದಿಯ ಅನಧಿಕೃತ ಮಳಿಗೆಗಳನ್ನು ತೆರವು ಮಾಡುವಂತೆ ಪಂಚಾಯಿತಿಯಲ್ಲಿ ಸರ್ವಾನುಮತದಿಂದ ನಿರ್ಣಯ ಕೈಗೊಳ್ಳಲಾಗಿದೆ ಎಂದು ದುಬಲಗುಂಡಿ ಗ್ರಾ. ಪಂ. ಅಧ್ಯಕ್ಷ ನಾಗರಾಜ್ ಭೋಜಗುಂಡಿ ತಿಳಿಸಿದರು.

## ಔತಣಕೂಟ ರಾಜಕೀಯಕ್ಕಾಗಿ ಅಲ್ಲ: ಸಚಿವ

• ಉದಯವಾಹಿನಿ, ಬೆಳಗಾವಿ

ನಾವು ಔತಣಕೂಟ ನಡೆಸುತ್ತಿರುವುದು ಇದೇ ಮೊದಲೇನಲ್ಲ. ಕಳೆದ 20 ತಿಂಗಳಲ್ಲಿ ಹತ್ತು ಬಾರಿ ಸೇರಿ ಚರ್ಚಿಸಿದ್ದೇವೆ. ಹೀಗಿರುವಾಗ ಈ ಸಭೆಗೆ ಮಹತ್ವ ನೀಡಬೇಕಿಲ್ಲ' ಎಂದು ಲೋಕೋಪಯೋಗಿ ಸಚಿವ ಸತೀಶ ಜಾರಕಿಹೊಳಿ ಹೇಳಿದರು. ಬೆಂಗಳೂರಿನಲ್ಲಿರುವ ತಮ್ಮ ನಿವಾಸದಲ್ಲಿ ಗುರುವಾರ ರಾತ್ರಿ ಆಯೋಜಿಸಿದ್ದ ಔತಣಕೂಟದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಕೆಲವು ಸಚಿವರು, ಶಾಸಕರು ಭಾಗಿಯಾದ ಕುರಿತ ಪ್ರಶ್ನೆಗೆ, ಇಲ್ಲಿ ಶುಕ್ರವಾರ ಸುದ್ದಿಗಾರರಿಗೆ ಹೀಗೆ ಪ್ರತಿಕ್ರಿಯಿಸಿದರು. 'ಮುಖ್ಯಮಂತ್ರಿ ನಮ್ಮ ಮನೆಗೆ ಬರುವುದು ಹೊಸತಲ್ಲ. ನಾವು ಅವರ ಮನೆಗೆ ಹೋಗುತ್ತೇವೆ. ಅವರೂ ನಮ್ಮ ಮನೆಗೆ ಬರುತ್ತಾರೆ. ಸಿ.ಎಂ ಜತೆಗೆ ಎಲ್ಲಾ ಸಚಿವರು ಮಾತನಾಡಬೇಕು ಅಂದಿದ್ದರು. ಹಾಗಾಗಿ ಹೊಸ ವರ್ಷದ ಸಂದರ್ಭದಲ್ಲಿ ಸೇರಿದ್ದೇವೆ ಎಂದರು.

## ಆಯುಷ್ ಚಿಕಿತ್ಸಾಲಯಗಳ ಸೌಲಭ್ಯ ಪಡೆಯುವಂತೆ ಕರೆ

• ಉದಯವಾಹಿನಿ, ಚಿತ್ರದುರ್ಗ



> ಜಿಲ್ಲಾಸ್ಪತ್ರೆಯ ಆಯುಷ್ ವಿಭಾ ಗವು ಚಿತ್ರದುರ್ಗದ ಚಳ್ಳಕೆರೆ ರಸ್ತೆಯ ಆದಿಶಕ್ತಿನಗರ, ಮೂರನೇ ತಿರುವಿನಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಇಲ್ಲಿ ಆಯುರ್ವೇದ, ಯುನಾನಿ ಹಾಗು ಹೊಮಿಯೋಪಥಿ ಪದ್ಧತಿಗಳಲ್ಲಿ ಚಿಕಿತ್ಸೆ ಲಭ್ಯವಿರುತ್ತದೆ, ಆಯುರ್ವೇದದ ವಿಶೇಷ ಚಿಕಿತ್ಸೆಯಾದ ಪಂಚಕರ್ಮದ ತಜ್ಞರು ಇಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದು ಸಾರ್ವಜನಿಕರಿಗೆ ಪಮುಚಕರ್ಮ ಸೇವೆಗಳು ಇಲ್ಲಿ ಲಭ್ಯವಿವೆ.

ಜಿಲ್ಲೆಯಲ್ಲಿ ನಾಲ್ಕು ಆಯುರ್ವೇದ ಆಸ್ಪತ್ರೆಗಳು ಕಾರ್ಯನಿರ್ವಹಿಸುತ್ತಿದ್ದು ಇಲ್ಲಿ ಮುಂದುವರೆದ ಹಾಗೂ ಆಯುರ್ವೇದ ವಿಶೇಷ ಚಿಕಿತ್ಸೆಗಳಾದ ಅಭ್ಯಂಗ, ಕಟಿ ಬಸ್ತಿ, ಜಾನುಬಸ್ತಿ, ಪಂಚಕರ್ಮ ಇತ್ಯಾದಿ ಚಿಕಿತ್ಸೆಗಳು ಉಚಿತವಾಗಿ ಲಭ್ಯವಿವೆ.

ಜಿಲ್ಲೆಯ, ಹೊಸದುರ್ಗ, ದೊಡ್ಡತೇಕಲವಟ್ಟಿ, ಚಳ್ಳಕೆರೆ ಹಾಗೂ ಹಿರಿಯೂರು ಇಲ್ಲಿ ಸರ್ಕಾರಿ ಆಯುರ್ವೇದ ಆಸ್ಪತ್ರೆಗಳು ಕಾರ್ಯ ನಿರ್ವಹಿಸುತ್ತಿವೆ. ಇವುಗಳಲ್ಲಿ ಹಿರಿಯೂರು ಹಾಗೂ ಚಳ್ಳಕೆರೆಯಲ್ಲಿ ಮೂಲವ್ಯಾಧಿಗೆ ಸಮರ್ಪಕ ಆಯುರ್ವೇದ ಚಿಕಿತ್ಸೆಯಾದ ಕ್ಷಾರಸೂತ್ರ ತಜ್ಞರು ಲಭ್ಯವಿದ್ದು ಚಳ್ಳಕೆರೆಯಲ್ಲಿ ಇದಕ್ಕೆ ಸಂಬಂದಿಸಿದ ಮಹಿಳಾ ತಜ್ಞವೈದ್ಯರು ಲಭ್ಯವಿರುತ್ತಾರೆ. ಕಿವಿ ಮೂಗು, ಗಂಟಲಿನ ಆಯುರ್ವೇದ ತಜ್ಞರು ಚಳ್ಳಕೆರೆಯ ಆಯುರ್ವೇದ ಆಸ್ಪತ್ರೆಯಲ್ಲಿ ಲಭ್ಯವಿರುತ್ತಾರೆ.

ಈ ಎಲ್ಲಾ ಸೌಲಭ್ಯಗಳು ಉಚಿತ ವಾಗಿದ್ದು ಸಾರ್ವಜನಿಕರು ಆಯುಷ್ ಪದ್ಧತಿಯ ಚಿಕಿತ್ಸೆ ಹಾಗೂ ಜೀವಶೈಲಿ ಯನ್ನು ಅಳವಡಿಸಿಕೊಂಡು ಆರೋಗ್ಯಕರ ಜೀವನ ವನ್ನು ತಮ್ಮದಾಗಿಸಿಕೊಳ್ಳಬೇಕೆಂದು ಜಿಲ್ಲಾ ಆಯುಷ್ ಅಧಿಕಾರಿಗಳಾದ ಡಾ.ಚಂದ್ರಕಾಂತ್ ಎಸ್ ನಾಗಸಮುದ್ರ ಅವರು ಕೋರಿದ್ದಾರೆ.

## ಕೃಷಿ ಕಾಯ್ದೆ ರದ್ದುಪಡಿಸಲು ಆಗ್ರಹಿಸಿ ಪ್ರಧಾನಿಗೆ ಮನವಿ

• ಉದಯವಾಹಿನಿ, ಸಿಂಧನೂರು

ಕೇಂದ್ರ ಸರ್ಕಾರ ರೈತ ವಿರೋಧಿ ಕೃಷಿ ಕಾಯ್ದೆಗಳನ್ನು ರದ್ದು ಪಡಿಸಲು ಆಗ್ರಹಿಸಿ ಸಂಯುಕ್ತ ಕಿಸಾನ್ ಮೋರ್ಚಾ ತಾಲ್ಲೂಕು ಘಟಕದಿಂದ ತಹಶೀಲ್ದಾರ್ ಮುಖಾಂತರ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಮನವಿ ಪತ್ರ ರವಾನಿಸಲಾಯಿತು.

ಸಂಯುಕ್ತಾ ಕಿಸಾನ್ ಮೋರ್ಚಾದಿಂದ ಶಂಭುಗಡಿಯಲ್ಲಿ ರೈತರು ನಡೆಸುತ್ತಿರುವ ಚಳವಳಿಯನ್ನು ಕೇಂದ್ರ ಸರ್ಕಾರ ನಿರ್ಲಕ್ಷಿಸದೇ ರೈತ ಮುಖಂಡರೊಂದಿಗೆ ಚರ್ಚಿಸಿ ಬೇಡಿಕೆಗಳನ್ನು ಈಡೇರಿಸಬೇಕು ಎಂದು ಕರ್ನಾಟಕ ರೈತ ಸಂಘದ ತಾಲ್ಲೂಕು ಘಟಕದ ಅಧ್ಯಕ್ಷ ರಮೇಶ ಪಾಟೀಲ ಬರಿ ಮತ್ತು ರಾಜ್ಯ ರೈತ ಸಂಘದ ರಾಜ್ಯ ಘಟಕದ ಪ್ರಧಾನ ಕಾರ್ಯದರ್ಶಿ ಅಮಿನ್‌ಪಾಶಾ ದಿದ್ದಗಿ ಒತ್ತಾಯಿಸಿದರು.

ಎಂಎಸ್‌ಪಿ ಜಾರಿ ಮಾಡುವುದಾಗಿ ಕೇಂದ್ರ ಸರ್ಕಾರ ಎರಡು ವರ್ಷದ ಹಿಂದೆಯೇ ಲಿಖಿತ ಭರವಸೆ ನೀಡಿ ಇಲ್ಲಿಯ ವರೆಗೆ ಜಾರಿ ಮಾಡಿಲ್ಲ ಇದರಿಂದ ಎಂಟು ತಿಂಗಳಿಂದ ಹರಿಯಾಣದ ಶಂಭುಗಡಿಯಲ್ಲಿ ರೈತರು ಉಪವಾಸ ಸತ್ಯಾಗ್ರಹ ಕೈಗೊಂಡಿದ್ದಾರೆ ಅವರ ಆರೋಗ್ಯ ಹದಗಟ್ಟಿದೆ ಈಗಾಗಲೇ ದೇಶದ ಸರ್ವೋಚ್ಚ ನ್ಯಾಯಾಲಯ ಪಂಜಾಬ್, ಹರಿಯಾಣ ಸರ್ಕಾರಗಳಿಗೆ ಕ್ರಮವಹಿಸಲು ಸೂಚಿಸಿದ. ಆದರೂ, ಏನೂ ಪ್ರಯೋಜನವಾಗಿಲ್ಲ' ಎಂದು ದೂರಿದರು.

## ಕಂದಕಕ್ಕೆ ಬಿದ್ದ ಮಹಿಳೆ ರಕ್ಷಿಸಿದ ದೇವಸ್ಥಾನ ಸಿಬ್ಬಂದಿ

• ಉದಯವಾಹಿನಿ, ಗಂಗಾವತಿ


☛ ಉದಯವಾಹಿನಿ ಚಿತ್ರ

ತಾಲ್ಲೂಕಿನ ಚಿಕ್ಕರಾಂಪುರ ಸಮೀಪದ ಅಂಜನಾದ್ರಿ ಬೆಟ್ಟ ದಿಂದ ಕಂದಕಕ್ಕೆ ಬಿದ್ದಿದ್ದ ಮಹಿಳೆಯನ್ನು ದೇವಾಲಯ ಸಿಬ್ಬಂದಿ ರಕ್ಷಿಸಿದ್ದು, ಗುರುವಾರ ಸಂಜೆ ಕೊಪ್ಪಳದ ಜಿಲ್ಲಾ ಆಸ್ಪತ್ರೆಗೆ ದಾಖಲಿಸಲಾಗಿದೆ.ಅರೆಪ್ರಜ್ಞಾವಸ್ಥೆಯಲ್ಲಿರುವ ಮಹಿಳೆ ವಿಚಾರಿಸಲಾಗಿದ್ದು, ರಾಯಚೂರು ಮೂಲದ ಅಶ್ವಿನಿ ಎಂದು ಹೇಳುತ್ತಿದ್ದು ಬೇರೆ ಏನನ್ನು ಹೇಳುತ್ತಿಲ್ಲ. ಎಡಗಾಲಿಗೆ ಒಳ ಪೆಟ್ಟಾಗಿದ್ದು, ಹುಳುಗಳು ಕಡಿದಿದ್ದರಿಂದ ಕೈ, ಕಾಲು ಮತ್ತು ಕುತ್ತಿಗೆ ಭಾಗದಲ್ಲಿ ತುರಿಸಿದ ಕಲೆಗಳಿವೆ.

ಬೆಟ್ಟದ ಮೇಲಿನ ದೇವಾಲಯದ ಹಿಂಭಾಗದಲ್ಲಿ ಸನ್‌ಸೆಟ್ ಪ್ರದೇಶವಿದ್ದು, ಅದರ ಕೆಳಭಾಗದಲ್ಲಿರುವ 40 ಅಡಿ ಆಳದ ಕಂದಕದಲ್ಲಿ ಮಹಿಳೆ ಪತ್ತೆಯಾಗಿದ್ದಾಳೆ. ಸೆಲ್ಫಿಗಾಗಿ ಸನ್ ಸೆಟ್ ಹತ್ತಿರ ಹೋಗಿದ್ದ ಪ್ರವಾಸಿಗರಿಗೆ, ಕಂದಕದಿಂದ ಮಹಿಳೆ ಕೂಗುತ್ತಿರುವುದನ್ನು ನೋಡಿ, ದೇವಾ ಲಯ ಸಿಬ್ಬಂದಿಗೆ ತಿಳಿಸಿದ್ದಾರೆ.ಸಿಬ್ಬಂದಿ ನೆರವಿನೊಂದಿಗೆ ಮಹಿಳೆಯನ್ನು ರಕ್ಷಿಸಿ, ನಗರದ ಉಪವಿಭಾಗ ಆಸ್ಪತ್ರೆಗೆ ದಾಖಲಿಸಲಾಗಿದ್ದು, ಯಾವುದೇ ಮಾಹಿತಿ ನೀಡುತ್ತಿಲ್ಲ. ಆಸ್ಪತ್ರೆಗೆ ದೇವಾಲಯ ಸಿಇಒ ಪ್ರಕಾಶ ರಾವ್, ಡಿವೈಎಸ್‌ಪಿ ಸಿದ್ದಲಿಂಗಪ್ಪಗೌಡ ಪಾಟೀಲ, ಗ್ರಾಮೀಣ ಪಿಐ ಸೋಮಶೇಖರ ಗೌಡ ಜುತ್ತಲ್ ಭೇಟಿ ನೀಡಿ ಮಾಹಿತಿ ಪಡೆದುಕೊಂಡರು ಮಾನಸಿಕ ಅಸ್ವಸ್ಥಳಂತೆ ವರ್ತಿಸುತ್ತಿದ್ದು, ಚಿಕಿತ್ಸೆಗೆ ಸ್ಪಂದಿಸಿದ್ದಾಳೆ.

ಅರೆ ಪ್ರಜ್ಞಾಸ್ಥಿತಿಯಲ್ಲಿದ್ದರಿಂದ ಕೊಪ್ಪಳ ಜಿಲ್ಲಾಸ್ಪತ್ರೆಗೆ ದಾಖಲಿಸಲಾಗಿದೆ ಎಂದು ಚಿಕಿತ್ಸೆ ನೀಡಿದ ಸಿಬ್ಬಂದಿ ತಿಳಿಸಿದ್ದಾರೆ.

ಒಬ್ಬಳೆ ಬೆಟ್ಟಕ್ಕೆ ಬಂದಿದ್ದಳು ಅಥವಾ ಯಾರ ಜತೆಗಾದರೂ ಬಂದಿದ್ದರು ಎಂಬುದನ್ನು ಬೆಟ್ಟದ ಮೇಲಿನ ಸಿಸಿಟಿವಿ ಪರಿಶೀಲಿಸಲಾಗುವುದು ಎಂದು ಪೊಲೀಸರು ತಿಳಿಸಿದ್ದಾರೆ. ಜಿಲ್ಲಾ ಆಸ್ಪತ್ರೆಗೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ರಾಮ್ ಎಲ್.ಅರಸಿದ್ದಿ ಭೇಟಿ ನೀಡಿ, ಪರಿಶೀಲಿಸಿ ಮಾಹಿತಿ ಪಡೆದರು.

## ಬಾಣಂತಿಯರ ಸರಣಿ ಸಾವು: ಮಹಿಳಾ ಮೋರ್ಚಾ ಖಂಡನೆ

• ಉದಯವಾಹಿನಿ ಮಂಗಳೂರು

ರಾಜ್ಯದಲ್ಲಿ ಬಾಣಂತಿಯರ ಮತ್ತು ನವಜಾತ ಶಿಶುಗಳ ಸರಣಿ ಸಾವು ಸಂಭವಿಸುತ್ತಿದ್ದರೂ, ತಡೆಗಟ್ಟಲು ಸರ್ಕಾರ ಕ್ರಮ ಕೈಗೊಳ್ಳುತ್ತಿಲ್ಲ ಎಂದು ದಕ್ಷಿಣ ಕನ್ನಡ ಜಿಲ್ಲಾ ಮಹಿಳಾ ಮೋರ್ಚಾ ಆರೋಪಿಸಿದೆ.

ಈ ಕುರಿತು ಇಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತ ನಾಡಿದ ಮಹಿಳಾ ಮೋರ್ಚಾದ ದಕ್ಷಿಣ ಕನ್ನಡ ಜಿಲ್ಲಾ ಘಟಕದ ಅಧ್ಯಕ್ಷೆ ಮಂಜುಳಾ ರಾವ್, ಆರೋಗ್ಯ ಇಲಾಖೆಯಲ್ಲಿ ಭ್ರಷ್ಟಾಚಾರ ವ್ಯಾಪಕವಾಗಿದೆ. ಬಾಣಂತಿಯರ ಸಾವಿಗೆ ಕಳಪೆ ದರ್ಜೆಯ ಔಷಧಗಳೂ ಕಾರಣ. ಇನ್ನೊಂದೆಡೆ, ಕೇಂದ್ರ ಸರ್ಕಾರದ ಮಾತ್ರ ವಂದನಾ, ಪೋಷಣ್ ಅಭಿಯಾನಗಳೂ ರಾಜ್ಯದಲ್ಲಿ ಸಮರ್ಪಕವಾಗಿ ಜಾರಿಯಾಗುತ್ತಿಲ್ಲ.


☛ ಉದಯವಾಹಿನಿ ಚಿತ್ರ

ಸರ್ಕಾರಿ ಆಸ್ಪತ್ರೆಗಳಲ್ಲಿ ಬಾಣಂತಿಯರ, ನವಜಾತ ಶಿಶುಗಳ ಸಾವುಗಳ ಹೊಣೆ ಹೊತ್ತು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ಹಾಗೂ ಮಹಿಳಾ, ಮಕ್ಕಳ ಅಭಿವೃದ್ಧಿ ಸಚಿವ ಲಕ್ಷ್ಮೀ ಹೆಬ್ಬಾಳ್ಕರ್ ರಾಜೀನಾಮೆ ನೀಡಬೇಕು' ಎಂದು ಆಗ್ರಹಿಸಿದರು.

ಸಾವಿಗೀಡಾದ ಬಾಣಂತಿಯರ ಕುಟುಂಬ ಗಳಿಗೆ ತಲಾ 25 ಲಕ್ಷ ಪರಿಹಾರವನ್ನು ರಾಜ್ಯ ಸರ್ಕಾರ ನೀಡಬೇಕು. ತಾಯಿಯನ್ನು ಕಳೆದುಕೊಂಡು ಅನಾಥರಾದ ಮಕ್ಕಳನ್ನು ದತ್ತು ತೆಗೆದುಕೊಂಡು, ಅವರಿಗೆ ಬದುಕು ಕಟ್ಟಿಕೊಡಲು ವ್ಯವಸ್ಥೆ ಮಾಡಬೇಕು. ಇದರ ನಿರ್ವಹಣೆಗೆ ಸಮಿತಿಯನ್ನು ರಚಿಸಬೇಕು' ಎಂದರು.

**ಸಮರ್ಪಕವಾಗಿ ಆಗುತ್ತಿಲ್ಲ**

ದಕ್ಷಿಣ ಕನ್ನಡ ಜಿಲ್ಲೆಯಲ್ಲೂ 2023– 24ನೇ ಸಾಲಿನಲ್ಲಿ 9 ಬಾಣಂತಿಯರು ಸತ್ತಿದ್ದಾರೆ. ಇಲ್ಲಿನ ಪ್ರಾಥಮಿಕ ಆರೋಗ್ಯ ಕೇಂದ್ರಗಳ ವ್ಯವಸ್ಥೆ ಹದಗೆಟ್ಟಿದೆ. ಸಿಬ್ಬಂದಿ ಕೊರತೆ, ಔಷಧ ಕೊರತೆ ಇದೆ. ಆಂಬುಲೆನ್ಸ್ ನಿರ್ವಹಣೆಯೂ ಸಮರ್ಪಕವಾಗಿ ಆಗುತ್ತಿಲ್ಲ' ಎಂದು ಆರೋಪಿಸಿದರು.

# ಅಪರಾಧ ಕೃತ್ಯ ತಡೆಗೆ ಪಟ್ಟಣದಲ್ಲಿ ಮೌನ ಮೆರವಣಿಗೆ

## ಕೆಲಹೊತ್ತು ವಾಹ ನಗಳ ಸಂಚಾರ ಬಂದ್ ಆಗಿತ್ತು, ಸ್ಥಳಕ್ಕೆ ಆಗಮಿಸಿದ ತಹಶೀಲ್ದಾರ್ ರೇಣುಕಾ ಎಸ್., ಅವರಿಗೆ ವೇದಿಕೆಯಿಂದ ಮನವಿ

• ಉದಯವಾಹಿನಿ, ಹಾನಗಲ್

ತಾಲ್ಲೂಕಿನಲ್ಲಿ ಎಗ್ಗಿಲ್ಲದೇ ನಡೆಯುತ್ತಿರುವ ಅಪರಾಧ ಕೃತ್ಯಗಳನ್ನು ಮಟ್ಟಹಾಕಬೇಕು. ಈ ಬಗ್ಗೆ ಸಂಬಂಧಿತ ಇಲಾಖೆಗಳು ಕ್ರಮ ಕೈಗೊಳ್ಳಬೇಕು. ಸಾರ್ವಜನಿಕರು ಕೂಡ ಅಪರಾಧದ ಮನಸ್ಥಿತಿಯವರನ್ನು ವಿರೋಧಿಸುವ ಬದ್ಧತೆ ಪ್ರದರ್ಶಿಸಬೇಕು ಎಂದು ಆಗ್ರಹಿಸಿ ಸಮಾನ ಮನಸ್ಕರ ಜಾಗೃತಿ ವೇದಿಕೆ ವತಿಯಿಂದ ಪಟ್ಟಣದಲ್ಲಿ ಮೌನ ಮೆರವಣಿಗೆ ನಡೆಸಲಾಯಿತು.

**ವಾಹನಗಳ ಸಂಚಾರ ಬಂದ್**


☛ ಉದಯವಾಹಿನಿ ಚಿತ್ರ


ತಾಲ್ಲೂಕಿನಲ್ಲಿ ಈಚೆಗೆ ನಡೆದ ಕೊಲೆ, ಕ್ರೌರ್ಯ, ವಿಕೃತಿಗಳ ಪ್ರದರ್ಶನದ ಘಟನೆಗಳ ವಿರುದ್ಧ ವಿವಿಧ ಸಂಘಟನೆಗಳು ಸಮಾನ ಮನಸ್ಕರ ಜಾಗೃತ ವೇದಿಕೆಯಡಿ ಒಂದಾಗಿ ಪ್ರತಿಭಟನೆ ನಡೆಸಿದರು. ಸಣ್ಣಪುಟ್ಟ ಗಲಾಟೆಗಳು ದೊಡ್ಡ ಮಟ್ಟದಲ್ಲಿ ಹೊಡೆದಾಟವಾಗಿ, ವೈಷಮ್ಯಗಳು ಕೊಲೆಯಲ್ಲಿ ಅಂತ್ಯವಾಗುವುದು ತಾಲ್ಲೂಕಿನಲ್ಲಿ ಸಾಮಾನ್ಯ ಎನ್ನುವಂತಾಗಿದೆ. ಕೆಲಹೊತ್ತು ವಾಹ ನಗಳ ಸಂಚಾರ ಬಂದ್ ಆಗಿತ್ತು. ಸ್ಥಳಕ್ಕೆ ಆಗಮಿಸಿದ ತಹಶೀಲ್ದಾರ್ ರೇಣುಕಾ ಎಸ್., ಅವರಿಗೆ ವೇದಿಕೆ ಯಿಂದ ಮನವಿ ಸಲ್ಲಿಸಲಾಯಿತು.

ಕಳೆದ ವರ್ಷದ ಆರಂಭದಲ್ಲಿಯೇ ಗ್ಯಾಂಗ್ ರೇಪ್, ನೈತಿಕ ಪೊಲೀಸ್‌ಗಿರಿ ಪ್ರಕರಣ ನಡೆದು ರಾಜ್ಯಮಟ್ಟದಲ್ಲಿ ಸುದ್ದಿಯಾಗಿತ್ತು ತಾಲ್ಲೂಕಿನ ಅಲ್ಲಲ್ಲಿ ವೈಷಮ್ಯ, ಕ್ಷುಲ್ಲಕ ವಿಚಾರಗಳಿಗಾಗಿ ಕೊಲೆ ಪ್ರಕರಣಗಳು ನಡೆದವು. ಯಳ್ಳೂರ ಗ್ರಾಮದ ಒಂದೇ ಮನೆಯಲ್ಲಿ ಮೂವರ ದಾರುಣ ಹತ್ಯೆ ಘಟನೆಗಳು ಈ ಮಣ್ಣಿನ ಗುಣದ ವಿರುದ್ಧವಾಗಿ ನಡೆಯುತ್ತಿವೆ ಎಂಬುದನ್ನು ಬಿಂಬಿಸುತ್ತಿವೆ.

> ಮನವಿ ಸ್ವೀಕರಿಸಿದ ತಹಶೀಲ್ದಾರ್ ರೇಣುಕಾ ಎಸ್, 'ಆರೋಗ್ಯಪೂರ್ಣ ಸಮಾಜ ನಿರ್ಮಾಣಕ್ಕಾಗಿ ಸಮಾನ ಮನಸ್ಕರ ಜಾಗೃತ ವೇದಿಕೆಯಡಿ ವಿವಿಧ ಸಂಘಟನೆಗಳು ತೋರುತ್ತಿರುವ ಕಾಳಜಿ ಪ್ರಶಂಸನೀಯ. ಎಲ್ಲರ ಸಹಕಾರದಿಂದ ಶಾಂತಿ, ಸಹಬಾಳ್ವೆ, ಸಾಮರಸ್ಯ ಮರುಕಳಿಸಲು ಸಾಧ್ಯವಿದೆ' ಎಂದರು.

ಈ ಘಟನೆಗಳನ್ನು ಪೊಲೀಸ್ ಇಲಾಖೆ, ಜನಸಂಪರ್ಕ ಹೊಂದಿರುವ ಸರ್ಕಾರಿ ಇಲಾಖೆಗಳು ಗಂಭಿರವಾಗಿ ಪರಿಗಣಿಸಬೇಕು. ಅಗತ್ಯವಿರುವ ಕಡೆ ಶಾಂತಿ ಸಭೆ, ಜನರಲ್ಲಿ ತಿಳಿವಳಿಕೆ ಮೂಡಿಸುವ ಮೂಲಕ ಶಾಂತಿಯ ವಾತಾವರಣ ನಿರ್ಮಾಣಕ್ಕೆ ಶ್ರಮಿಸಬೇಕು ಎಂದು ಮನವಿ ಯಲ್ಲಿ ಒತ್ತಾಯಿಸಲಾಗಿದೆ. ಪಟ್ಟಣ ವ್ಯಾಪ್ತಿಯಲ್ಲಿ ದ್ವಿಚಕ್ರ ವಾಹನಗಳ ಹಾವಳಿ, ಮಹಿಳೆಯರು, ವಿದ್ಯಾರ್ಥಿನಿಯರನ್ನು ಚುಡಾಯಿಸುವ ಪ್ರಸಂಗ ಗಳನ್ನು ತಡೆಯಬೇಕು. ಇದಕ್ಕಾಗಿ ಆಯ್ತ ಸ್ಥಳಗಳಲ್ಲಿ ನೂತನವಾಗಿ ಅಳವಡಿಸಿರುವ ಸಿಸಿ ಕ್ಯಾಮೆರಾ ಬಳಕೆಯಾಗಬೇಕು.

**ಮಾನವ ಸರಪಳಿ**

ಕಳೆದ ವಾರ ಕೊಪ್ಪರಸಿಕೊಪ್ಪ ಗ್ರಾಮದಲ್ಲಿ ನಡೆದ ವ್ಯಕ್ತಿಯೊಬ್ಬನ ಬರ್ಬರ ಹತ್ಯೆಯಂತ ಅಮಾನವೀಯ ಕೃತ್ಯಗಳಿಂದ ಬೆಚ್ಚಿಬಿದ್ದ ತಾಲ್ಲೂಕಿನ ಜನರು ಭಯದ ವಾತಾವರಣದಲ್ಲಿದ್ದಾರೆ ಎಂದು ಮೌನ ಮೆರವಣಿಗೆ ಮೂಲಕ ಪ್ರತಿಭಟನೆ ವ್ಯಕ್ತಪಡಿಸಿದರು. ಇಲ್ಲಿನ ಪ್ರವಾಸಿ ಮಂದಿರದಿಂದ ಹೊರಟ ಮೌನ ಮೆರವಣಿಗೆ ಗಾಂಧಿ ವೃತ್ತದಲ್ಲಿ ಮಾನವ ಸರಪಳಿಯಾಗಿ ಬದಲಾಯಿತು.

ಅಪರಾಧ ಕೃತ್ಯಗಳಿಗೆ ಮೂಲವಾಗಿರುವ ಗಾಂಜಾ ಮಾರಾಟ, ದಾಬಾ, ಹೋಟೆಲ್‌ಗಳಲ್ಲಿ ಮದ್ಯ ಮಾರಾಟ ತಡೆಗಟ್ಟಬೇಕು. ತಾಲ್ಲೂಕಿನಲ್ಲಿ ಶಾಂತಿ ಸುವ್ಯವಸ್ಥೆ ಕಾಯ್ದುಕೊಳ್ಳಲು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದ್ದಾರೆ. ಸಮಾನ ಮನಸ್ಕರ ಜಾಗೃತಿ ವೇದಿಕೆಯ ಮೌನ ಮೆರವಣಿಗೆಗೆ ಮಾನವ ಹಕ್ಕುಗಳ ಸಮಿತಿ, ರೋಶನಿ ಸಂಸ್ಥೆ, ಅಂಜುಮನ್ ಇಸ್ಲಾಂ ಸಂಸ್ಥೆ, ಪತ್ರಕರ್ತರ ಸಂಘ, ಪೋಟೋಗ್ರಾಫರ್ ಸಂಘ, ದಲಿತ ಸಂಘರ್ಷ ಸಮಿತಿ, ರೈತ ಸಂಘಟನೆಗಳು, ಕನ್ನಡ ಪರ ಸಂಘಟನೆಗಳು, ಕನ್ನಡ ರಕ್ಷಣಾ ವೇದಿಕೆ, ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಘ, ಜನ ವೇದಿಕೆ, ಲೋಯಲಾ ವಿಕಾಸ ಕೇಂದ್ರ, ಬೀದಿ ಬದಿ ವ್ಯಾಪಾರಸ್ಥರ ಸಂಘ, ವಕೀಲರ ಸಂಘ, ಕಾರ್ಮಿಕರ ಸಂಘ, ಸ್ತ್ರೀ ಶಕ್ತಿ ಸಂಘಟನೆ, ಜೈ ಕರ್ನಾಟಕ ಸಂಘಟನೆ, ವಿವಿಧ ರಾಜಕೀಯ ಪಕ್ಷಗಳ ಮುಖಂಡರು, ನಿವೃತ್ತ ನೌಕರರ ಸಂಘ ಬೆಂಬಲ ನೀಡಿದ್ದವು.

# ಚೀನಾದಲ್ಲಿ ಆರ್ಭಟಿಸುತ್ತಿರುವ ಕೊರೋನಾ ಮಾದರಿಯ ವೈರಸ್

## ರಾಯ್ಟರ್ಸ್ ಸುದ್ದಿಸಂಸ್ಥೆಯ ಪ್ರಕಾರ, ಚೀನಾದಲ್ಲಿ HMPV ವೇಗವಾಗಿ ಹರಡುತ್ತಿದೆ, ಮೆಡಿಕಲ್ ಎಮರ್ಜೆನ್ಸಿಯನ್ನು ಘೋಷಿಸಿಲ್ಲ

**ಬೀಜಿಂಗ್:** ಐದು ವರ್ಷಗಳ ಹಿಂದೆ ಕೊರೋನಾ ವೈರಸ್ ಎಲ್ಲಿಂದ ಹುಟ್ಟಿತ್ತೋ, ಅಲ್ಲಿಂದಲೇ ಇನ್ನೊಂದು ಪ್ರಳಯಾಂತಕ ವೈರಸ್ ಹುಟ್ಟಿಕೊಂಡಿದೆ ಜೊತೆಗೆ ವೇಗವಾಗಿ ಹರಡಲು ಆರಂಭಿಸಿದೆ. ಅದುವೇ, ಎಚ್ ಎಂಪಿವಿ ಅಂದರೆ ಹ್ಯೂಮನ್ ಮೆಟಾನ್ಯುಮೊವೈರಸ್. ಇದು ಎಲ್ಲಾ ವಯಸ್ಸಿನವರ ಮೇಲೆ ಪರಿಣಾಮ ಬೀರುವ ವೈರಸ್ ಎಂದು ವೈದ್ಯಲೋಕದವರು ಒತ್ತಿ ಹೇಳಿದ್ದಾರೆ. ಕೋವಿಡ್ 19ನ ಅಡ್ಡ ಪರಿಣಾಮಗಳು ನಿಧಾನವಾಗಿ ತಗ್ಗುತ್ತಿರುವ ಹೊತ್ತಿನಲ್ಲಿ ಹೊಸ ವೈರಸ್ ಹುಟ್ಟಿಕೊಂಡಿರುವುದು ಇಡೀ ವಿಶ್ವಕ್ಕೆ ತಲೆನೋವಾಗಿ ಪರಿಣಮಿಸುತ್ತಿದೆ. ಚೀನಾದ ಆಸ್ಪತ್ರೆಗಳು ತುಂಬಿರುವ ವಿಡಿಯೋಗಳು ಸಾಮಾಜಿಕ ತಾಣದಲ್ಲಿ ಹರಿದಾಡುತ್ತಿರುವುದು ಭಯವನ್ನು ಹುಟ್ಟಿಸುವಂತಿದೆ.

ಕೊರೋನಾ ಮಾದರಿಯ ಲಕ್ಷಣಗಳನ್ನೇ ಈ ವೈರಸ್ ಕೂಡಾ ಹೊಂದಿದ್ದು, ಪ್ರಮುಖವಾಗಿ ಮಕ್ಕಳಿಗೆ ಮತ್ತು ರೋಗ ನಿರೋಧಕ ಶಕ್ತಿ ಕಮ್ಮಿ ಇರುವವರಿಗೆ ವೇಗವಾಗಿ ಹರಡುತ್ತದೆ. ಈ ಹೊಸ ವೈರಸ್ ಅನ್ನು ಎದುರಿಸಲು ತೆಗೆದುಕೊಳ್ಳಬೇಕಾದ ವೈದ್ಯಕೀಯ ಕ್ರಮಗಳ ಬಗ್ಗೆ ಚೀನಾ ಸರ್ಕಾರ, ತನ್ನ ಆರೋಗ್ಯ ಇಲಾಖೆಗೆ ಸೂಚಿಸಿದೆ ಎಂದು ವರದಿಯಾಗಿದೆ.

ಚೀನಾದಲ್ಲಿ ಈ ಹೊಸ ವೈರಸ್ ಹರಡಲು ಆರಂಭಿಸುತ್ತಿದ್ದಂತೆಯೇ, ಅಕ್ಕಪಕ್ಕದ ಕೆಲವು ರಾಷ್ಟ್ರಗಳು ವಿಮಾನ ನಿಲ್ದಾಣದಲ್ಲಿ ಸ್ಕ್ರೀನಿಂಗ್ ಮತ್ತು ಪ್ರತ್ಯೇಕ ಪ್ರೊಟೋಕಾಲ್ ಘೋಷಿಸಲು ಮುಂದಾಗಿದೆ. ಚೀನಾದ ಉತ್ತರ ಭಾಗದಲ್ಲಿ 15 ವರ್ಷಕ್ಕಿಂತ ಕಮ್ಮಿ ವಯಸ್ಸಿನ ಮಕ್ಕಳ ಮೇಲೆ ಈ ವೈರಸಿನ ಅಟ್ಯಾಕ್ ಹೆಚ್ಚಾಗುತ್ತಿದೆ.



ರಾಯ್ಟರ್ಸ್ ಸುದ್ದಿಸಂಸ್ಥೆಯ ಪ್ರಕಾರ, ಚೀನಾದಲ್ಲಿ HMPV ವೇಗವಾಗಿ ಹರಡುತ್ತಿದೆ. ಕೋವಿಡ್ ಆರಂಭದ ಹಂತದಲ್ಲಿ ಅದನ್ನು ಎದುರಿಸಲು ವಿಫಲವಾಗಿದ್ದದ್ದು ಮತ್ತು ಕೊರೋನಾ ತನ್ನ ದೇಶದಿಂದ ವಿಶ್ವದ ಇತರ ರಾಷ್ಟ್ರಗಳಿಗೆ ಹರಡಿತು ಎನ್ನುವ ಆಪಾದನೆಯಿಂದ ತಪ್ಪಿಸಲು ಸೂಕ್ತ ಕ್ರಮವನ್ನು ಚೀನಾ ಸರ್ಕಾರ ತುರ್ತಾಗಿ ತೆಗೆದುಕೊಳ್ಳಲು ನಿರ್ಧರಿಸಿದೆ. ಚೀನಾದ ರೋಗ ನಿಯಂತ್ರಣ ಪ್ರಾಧಿಕಾರುವ ಡಿಸೆಂಬರ್ 27ರಂದು, ಅಪರಿಚಿತ HMPV ವೈರಸ್ ಪ್ರಕರಣ ಹೆಚ್ಚುತ್ತಿರುವ ಬಗ್ಗೆ ಮಾಹಿತಿಯನ್ನು ಹಂಚಿಕೊಂಡಿತ್ತು.

ಉಸಿರಾಟದ ತೊಂದರೆ ಎದುರಾಗಬಹುದು, ಸಾರ್ವಜನಿಕರು ಸರ್ಕಾರ ಹೊರಡಿಸುವ ಮಾರ್ಗಸೂಚಿಯನ್ನು ಪಾಲಿಸಬೇಕೆಂದು ಆರೋಗ್ಯ ಪ್ರಾಧಿಕಾರ ಹೇಳಿದೆ. ವೈರಸ್ ಹಾವಳಿ ಹೆಚ್ಚಾಗುತ್ತಿರುವುದು, ಆಸ್ಪತ್ರೆ ತುಂಬಿ ತುಳುಕುತ್ತಿರುವ ವಿಡಿಯೋಗಳು ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗುತ್ತಿದೆ. ಆದರೆ, ಚೀನಾ ಅಧಿಕಾರಿಗಳಾಗಲಿ ಅಥವಾ ವಿಶ್ವ ಆರೋಗ್ಯ ಸಂಸ್ಥೆ ಇನ್ನೂ ಮೆಡಿಕಲ್ ಎಮರ್ಜೆನ್ಸಿಯನ್ನು ಘೋಷಿಸಿಲ್ಲ.

**ತಡೆಯುವುದು ಹೇಗೆ?**

- ಜನಸಂದಣಿ ಜಾಸ್ತಿ ಇರುವ ಜಾಗದಲ್ಲಿ ಮಾಸ್ಕ್ ಬಳಸುವುದನ್ನು ಕಡ್ಡಾಯ ಮಾಡುವುದು.
- ಯಾವುದೇ ಆಹಾರ ಸೇವಿಸುವ ಮುನ್ನ ಸೋಪಿನಿಂದ ಚೆನ್ನಾಗಿ ಕೈಯನ್ನು ತೊಳೆಯುವುದು.
- ಕೈಯನ್ನು ತೊಳೆಯದೇ ಬಾಯಿ, ಕಣ್ಣು, ಮೂಗನ್ನು ಮುಟ್ಟದೇ ಇರುವುದು.
- ಈ ವೈರಸ್ ಹರಡಿದವರನ್ನು ಸಂಪರ್ಕಿಸದೇ ಇರುವುದು.
- ಸೋಂಕಿತ ವ್ಯಕ್ತಿಗಳು ಬಳಸಿದ ಪ್ಲೇಟ್, ಕಪ್ ಮತ್ತು ಇತರ ಪಾತ್ರೆಗಳನ್ನು ಹಂಚಿಕೊಳ್ಳದೇ ಇರುವುದು.
- ಸೋಂಕಿತರು ಸೀನುವಾಗ ಅಥವಾ ಕೆಮ್ಮುವಾಗ ಬಾಯಿ ಮುಚ್ಚಿಕೊಳ್ಳುವಂತೆ ಅವರಿಗೆ ಸೂಚಿಸುವುದು.

**ಚಿಕಿತ್ಸೆ ಏನು?**

ಈ ವೈರಸ್ ದಾಳಿಗೆ ನಿರ್ದಿಷ್ಟ ಚಿಕಿತ್ಸೆಯ ಮಾಹಿತಿಯನ್ನು ವಿಶ್ವ ಆರೋಗ್ಯ ಸಂಸ್ಥೆಯಾಗಲಿ, ಭಾರತದ ಆರೋಗ್ಯ ಇಲಾಖೆಯು ಇನ್ನೂ ಸೂಚಿಸಿಲ್ಲ. ಇದಕ್ಕೆ ಸಂಬಂಧ ಪಟ್ಟ, ಯಾವುದೇ ಮೆಡಿಸಿನ್ ತೆಗೆದುಕೊಳ್ಳುವ ಮುನ್ನ ವೈದ್ಯರ ಜೊತೆ ಚರ್ಚಿಸಿ, ಲಸಿಕೆ ತೆಗೆದುಕೊಳ್ಳುವುದು ಸೂಕ್ತ.

**ಎಚ್ಎಂಪಿವಿ ಅಂದರೇನು?:** ಹ್ಯೂಮನ್ ಮೆಟಾನ್ಯುಮೊವೈರಸ್ ಡಿಸೆಂಬರ್ ಮಧ್ಯಭಾಗದಲ್ಲಿ ಚೀನಾದ ಉತ್ತರದ ಪ್ರಾಂತ್ಯದಲ್ಲಿ ಕಾಣಿಸಿಕೊಂಡ ಭಯಾನಕ ವೈರಸ್ ಆಗಿದೆ. ಕೋವಿಡ್ ವೈರಸ್ ರೀತಿಯಲ್ಲೇ, ಎಲ್ಲಾ ವಯಸ್ಸಿನವರಿಗೆ ಶ್ವಾಸಕೋಶ ಸಂಬಂಧ ಸಮಸ್ಯೆಯಾಗುವ ಸಾಧ್ಯತೆಯಿದೆ.

ವಿಶೇಷವಾಗಿ ಮಕ್ಕಳಿಗೆ ಅದರಲ್ಲೂ 15 ವರ್ಷಕ್ಕಿಂತ ಕಮ್ಮಿ ವಯಸ್ಸಿನ ಮಕ್ಕಳಿಗೆ ಈ ವೈರಸ್ ಬೇಗ ಹರಡುವ ಸಾಧ್ಯತೆ ಹೆಚ್ಚು. ಇನ್ನು ವಯಸ್ಕರು ಮತ್ತು ರೋಗ ನಿರೋಧಕ ಶಕ್ತಿ ಕಮ್ಮಿ ಇರುವವರಿಗೆ ಇದು ವೇಗವಾಗಿ ಹರಡಬಹುದು. 2001ರಲ್ಲಿ ಇದನ್ನು ಮೊದಲ ಬಾರಿಗೆ ಡೆನ್ಮಾರ್ಕ್ ದೇಶದ ಸಂಶೋಧಕರು ಈ ವೈರಸ್ ಅನ್ನು ಪತ್ತೆ ಹಚ್ಚಿದ್ದರು.

**ಎಚ್ಎಂಪಿವಿ ವೈರಸಿನ ರೋಗ ಲಕ್ಷಣಗಳು:** ಚೀನಾ ದೇಶದ ಸಿಡಿಸಿ ಪ್ರಕಾರ ಈ ವೈರಸಿನ ಪ್ರಮುಖ ರೋಗ ಲಕ್ಷಣಗಳು ಎಂದರೆ, ಉಬ್ಬಸ, ಮೂಗು ಕಟ್ಟುವುದು, ಕೆಮ್ಮು, ಜ್ವರ. ಉಸಿರಾಟದ ತೊಂದರೆ ಎದುರಾಗಬಹುದು ಮತ್ತು ಇದು ಗಂಭೀರವಾದರೆ ನ್ಯೂಮೋನಿಯಾಗೆ ತಿರುಗುವ ಸಾಧ್ಯತೆಯಿದೆ.

ಅಸ್ತಮಾ ಮುಂತಾದ ಉಸಿರಾಟಕ್ಕೆ ಸಂಬಂಧಿಸಿದ ಕಾಯಿಲೆಯಿಂದ ಬಳಲುವವರಿಗೆ ಹೆಚ್ಚಿನ ಸಮಸ್ಯೆ ಆಗಲಿದೆ. ರೋಗದ ತೀವ್ರತೆಯ ಆಧಾರದ ಮೇಲೆ ಇದು ಎಷ್ಟು ದಿನದ ವರೆಗೆ ಇರಲಿದೆ ಎನ್ನುವುದು ಗೊತ್ತಾಗಲಿದೆ.

**ವೈರಸ್ ಹೇಗೆ ಹರಡುತ್ತದೆ ಮತ್ತು ತಡೆಯುವುದು ಹೇಗೆ?:** ಹೇಗೆ ಹರಡುತ್ತದೆ: ಕೆಮ್ಮು, ಶೀತ, ಸೀನು ಈ ವೈರಸ್ ಅಟ್ಯಾಕ್ ಮಾಡಲು ಮೂಲ ಕಾರಣವಾಗಿರುತ್ತದೆ. ಇದರ ಜೊತೆಗೆ, ಕಲುಷಿತ ನೀರು ಸೇವನೆ, ಕಲುಷಿತ ವಾತಾವರಣದಿಂದಲೂ ಈ ವೈರಸ್ ಹರಡುತ್ತದೆ.

# ಅದಾನಿ ವಿರುದ್ಧದ ಪ್ರಕರಣಗಳ ಜಂಟಿ ವಿಚಾರಣೆಗೆ ನ್ಯಾಯಾಲಯ ತೀರ್ಮಾನ

**ನ್ಯೂಯಾರ್ಕ್:** ಪ್ರಮುಖ ಬೆಳವಣಿಗೆಯೊಂದರಲ್ಲಿ, 265 ಮಿಲಿಯನ್ ಅಮೆರಿಕನ್ ಡಾಲರ್ ಲಂಚದ ಆರೋಪದ ಮೇಲೆ ಕೈಗಾರಿಕೋದ್ಯಮಿ ಗೌತಮ್ ಅದಾನಿ ಮತ್ತು ಇತರರ ವಿರುದ್ಧ ನಡೆಯುತ್ತಿರುವ ಮೂರು ಪ್ರಕರಣಗಳನ್ನು ಕ್ಲಬ್ ಮಾಡಲು ನ್ಯೂಯಾರ್ಕ್ ನ್ಯಾಯಾಲಯ ಆದೇಶಿಸಿದೆ. ಜಂಟಿ ವಿಚಾರಣೆಯಲ್ಲಿ ಪ್ರಕರಣಗಳನ್ನು ಒಟ್ಟಿಗೆ ವಿಚಾರಣೆ ನಡೆಸಲಾಗುವುದು ಎಂದು ನ್ಯಾಯಾಲಯ ತೀರ್ಪು ನೀಡಿದೆ.



ಪ್ರಕರಣಗಳು ಇದೇ ರೀತಿಯ ಆರೋಪಗಳು, ವಹಿವಾಟುಗಳಿಂದ ಉಂಟಾಗುತ್ತವೆ ಎಂದು ನ್ಯಾಯಾಲಯವು ಗಮನಿಸಿದ್ದರಿಂದ ಈ ತೀರ್ಪು ಬಂದಿದೆ. ಒಟ್ಟಿಗೆ ಟ್ಯಾಗ್ ಮಾಡಲಾದ ಪ್ರಕರಣಗಳಲ್ಲಿ ಯುಎಸ್ ವಿರುದ್ಧ ಅದಾನಿ ಮತ್ತು ಇತರರು (ಅದಾನಿ ವಿರುದ್ಧ ಕ್ರಿಮಿನಲ್ ಪ್ರಕರಣ), ಸೆಕ್ಯುರಿಟೀಸ್ ಮತ್ತು ಎಕ್ಸ್ಚೇಂಜ್ ಕಮಿಷನ್ (ಎಸ್ಇಸಿ) ವಿರುದ್ಧ ಅದಾನಿ ಮತ್ತು ಇತರರು (ಅದಾನಿ ವಿರುದ್ಧ ಸಿವಿಲ್ ಕೇಸ್), ಮತ್ತು ಎಸ್ಇಸಿ ವಿರುದ್ಧ ಕ್ಯಾಬನ್ಸ್ (ಇತರ ಆರೋಪಿಗಳ ವಿರುದ್ಧ ಸಿವಿಲ್ ಕೇಸ್) ಸೇರಿವೆ. ನ್ಯಾಯಾಂಗ ದಕ್ಷತೆಯನ್ನು ಉತ್ತೇಜಿಸಲು ಮತ್ತು ಸಂಘರ್ಷದ ವೇಳಾಪಟ್ಟಿಗಳನ್ನು ತಪ್ಪಿಸಲು ಈ ನಿರ್ಧಾರವನ್ನು ತೆಗೆದುಕೊಳ್ಳಲಾಗಿದೆ ಎಂದು ನ್ಯಾಯಾಲಯ ಹೇಳಿದೆ. ಇದು ಎಲ್ಲಾ ಪ್ರಕರಣಗಳನ್ನು ಜಿಲ್ಲಾ ನ್ಯಾಯಾಧೀಶ ನಿಕೋಲಸ್ ಜಿ ಗರೌಫಿಸ್ ಅವರಿಗೆ ವಹಿಸುತ್ತದೆ, ಅವರು ಅದಾನಿ ವಿರುದ್ಧದ ಕ್ರಿಮಿನಲ್ ಮೊಕದ್ದಮೆಯ ಮೇಲುಸ್ತುವಾರಿಯನ್ನೂ ವಹಿಸುತ್ತಾರೆ. ಪ್ರಕರಣಗಳ ಮರು ನಿಯೋಜನೆ ಕೈಗೊಳ್ಳುವಂತೆ ನ್ಯಾಯಾಲಯದ ಸಿಬ್ಬಂದಿಗೆ ಸೂಚಿಸಲಾಗಿದೆ.

> ಅದಾನಿ ಗ್ರೂಪ್ ಆರೋಪಗಳನ್ನು ಆಧಾರರಹಿತ ಎಂದು ತಳ್ಳಿಹಾಕಿದೆ, ನಾವು ಕಾನೂನು ಪಾಲಿಸುವ ಸಂಸ್ಥೆಯಾಗಿದೆ, ಎಲ್ಲಾ ಕಾನೂನುಗಳನ್ನು ಸಂಪೂರ್ಣ ವಾಗಿ ಅನುಸರಿಸುತ್ತೇವೆ ಎಂದು ಹೇಳಿದೆ.

ರಾಜ್ಯ ವಿದ್ಯುತ್ ವಿತರಣಾ ಕಂಪನಿಗಳೊಂದಿಗೆ ಸೌರಶಕ್ತಿ ಒಪ್ಪಂದಗಳನ್ನು ಪಡೆಯಲು ಅದಾನಿ ಮತ್ತು ಇತರರು 265 ಮಿಲಿಯನ್ (ಸುಮಾರು 2,029 ಕೋಟಿ ರೂ.) ಡಾಲರ್ ಲಂಚವನ್ನು ಪಾವತಿಸಿದ್ದಾರೆ ಎಂದು ಆರೋಪಿಸಲಾಗಿದೆ.

ಈ ಹಿಂದೆ, ಯುಎಸ್ ಬ್ಯಾಂಕ್‌ಗಳು ಮತ್ತು ಸೌರಶಕ್ತಿ ಯೋಜನೆಗಳಿಗೆ ಅದಾನಿ ಗ್ರೂಪ್ ಹಣವನ್ನು ಸಂಗ್ರಹಿಸಿದ ಹೂಡಿಕೆದಾರರಿಂದ ಸತ್ಯವನ್ನು ಮರೆಮಾಡಲಾಗಿದೆ ಎಂದು ಯುಎಸ್ ಪ್ರಾಸಿಕ್ಯೂಟರ್‌ಗಳು ಆರೋಪಿಸಿದ್ದರು.

# ಸೈಬರ್ ಟ್ರಕ್ ಸ್ಫೋಟಕ್ಕೆ ಮುನ್ನ ಆತ್ಮಹತ್ಯೆಗೆ ಶರಣು

**ಲಾಸ್ ವೇಗಾಸ್:** ಅಮೆರಿಕಾದ ಲಾಸ್ ವೇಗಾಸ್‌ನ ಟ್ರಂಪ್ ಹೋಟೆಲ್‌ನ ಹೊರಗೆ ಸ್ಫೋಟಗೊಂಡ ಟೆಸ್ಲಾ ಸೈಬರ್ ಟ್ರಕ್ ಓಡಿಸಿದ ವ್ಯಕ್ತಿ ಅಮೆರಿಕಾದ ಸೇನಾಪಡೆಯಲ್ಲಿ ಕರ್ತವ್ಯ ನಿರ್ವಹಿಸಿದ್ದ ಎನ್ನುವ ಸಂಗತಿ ಬಹಿರಂಗವಾಗಿದ್ದು ಸ್ಫೋಟಕ್ಕೂ ಮುನ್ನ ಗುಂಡು ಹಾರಿಸಿಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.



ಕೊಲೊರಾಡೋದ ಸ್ಪ್ರಿಂಗ್ಸ್‌ನ ಮ್ಯಾಥ್ಯೂ ಅಲನ್ ಲಿವೆಲ್ಸ್‌ಬರ್ಗರ್ (37) ವಾಹನದ ಚಾಲಕ ಎಂದು ಗುರುತಿಸಿದ್ದಾರೆ, ಟ್ರಕ್ ಸ್ಫೋಟ ಮಾಡುವ ಮುನ್ನ ತಾನೂ ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ಹೇಳಿದ್ದಾರೆ.

ಕ್ಲಾರ್ಕ್ ಕೌಂಟಿ ಕರೋನರ್ ಕಚೇರಿಯ ಪ್ರಕಾರ, ಲಿವೆಲ್ಸ್‌ಬರ್ಗರ್ ತಾವಾಗಿಯೇ ಗುಂಡು ಹಾರಿಸಿಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ಮಾಹಿತಿ ನೀಡಿದ್ದಾರೆ. ಹೊಸ ವರ್ಷದ ದಿನದಂದು ಇಂಧನ ಡಬ್ಬಿಗಳು ಮತ್ತು ಪಟಾಕಿ ತುಂಬಿದ ವಾಹನ ಸ್ಫೋಟಗೊಂಡು ಏಳು ಮಂದಿ ಗಾಯಗೊಂಡಿದ್ದಾರೆ. ಎಲ್ಲಾ ಗಾಯಗಳನ್ನು ಆಸ್ಪತ್ರೆಗೆ ದಾಖಲು ಮಾಡಲಾಗಿದೆ ಎಂದ ಅಧಿಕಾರಿಗಳು ತಿಳಿಸಿದ್ದಾರೆ.

ಸ್ಫೋಟಕ್ಕೆ ಎರಡು ಗಂಟೆಗಳ ಮೊದಲು, ಹೋಟೆಲ್ ಮುಂಭಾಗದಲ್ಲಿ ನಿಲ್ಲಿಸಿದ ವಾಹನದ ಬಳಿ ಧೂಮಪಾನ ಮಾಡುತ್ತಿದ್ದ ಸಿಸಿಟಿವಿಯ ದೃಶ್ಯಗಳನ್ನು ಬಿಡುಗಡೆ ಮಾಡಲಾಗಿದೆ. ಸೈಬರ್ ಸ್ಫೋಟ ನಿಯಂತ್ರಿಸಲು ಪೊಲೀಸರು ಅಧಿಕಾರಿಗಳು ಹರಸಾಹಸ ಮಾಡಿದ್ದಾರೆ .ಸ್ಫೋಟದಲ್ಲಿ ಹೋಟೆಲ್‌ನ ಹತ್ತಿರದ ಗಾಜಿನ ಬಾಗಿಲುಗಳು ಮತ್ತು ಕಿಟಕಿಗಳು ಒಡೆದು ಹೋಗಿವೆ ,ಘಟನೆಯ ಹಿಂದಿನ ಯಾವುದೇ ಉದ್ದೇಶವನ್ನು ಇನ್ನೂ ನಿರ್ಧರಿಸಬೇಕಾಗಿದೆ ಎಂದು ಹೇಳಿದ್ದಾರೆ.

ಪೊಲೀಸ್ ಮುಖ್ಯಸ್ಥ ಶೆರಿಫ್ ಮೆಕ್‌ಮಹಿಲ್ ಮಾತನಾಡಿ, ಘಟನೆಯ ಬಗ್ಗೆ ಎಲ್ಲಾ ಆಯಾಮಗಳಲ್ಲಿ ತನಿಖೆ ನಡೆಯುತ್ತಿದೆ. ಆ ನಂತರವೇ ನಿಖರ ಕಾರಣ ತಿಳಿಯಲಿದೆ ಎಂದಿದ್ದಾರೆ.

# ಗಾಜಾ ಪಟ್ಟಿಯಲ್ಲಿ ಇಸ್ರೇಲ್ ವೈಮಾನಿಕ ದಾಳಿ, ಮಕ್ಕಳು ಸೇರಿ ಕನಿಷ್ಠ 50 ಮಂದಿ ಬಲಿ

**ದೇರ್ ಅಲ್-ಬಲಾಹ್:** ಇಸ್ರೇಲಿ ನಡೆಸಿದ ವೈಮಾನಿಕ ದಾಳಿಯಲ್ಲಿ ಗಾಜಾ ಪಟ್ಟಿಯಾದ್ಯಂತ ಹಲವಾರು ಮಕ್ಕಳು ಸೇರಿದಂತೆ ಕನಿಷ್ಠ 50 ಜನರು ಸಾವನ್ನಪ್ಪಿದ್ದಾರೆ.

ಬಾಂಬ್ ದಾಳಿ ಮುಂದುವರಿದಂತೆ, ಇಸ್ರೇಲಿ ಪ್ರಧಾನಿ ಬೆಂಜಮಿನ್ ನೆತನ್ಯಾಹು ಅವರ ಕಚೇರಿ ಅವರು ಮೊಸಾದ್ ಗುಪ್ತಚರ ಸಂಸ್ಥೆ ಶಿನ್ ಬೆಟ್ ಆಂತರಿಕ ಭದ್ರತಾ ಸಂಸ್ಥೆ ಮತ್ತು ಮಿಲಿಟರಿಯ ನಿಯೋಗಕ್ಕೆ ಕತಾರ್‌ನಲ್ಲಿ ಕದನ ವಿರಾಮ ಒಪ್ಪಂದದ ಬಗ್ಗೆ ಮಾತುಕತೆಗಳನ್ನು ಮುಂದುವರಿಸಲು ಅಧಿಕಾರ ನೀಡಿದ್ದಾರೆ ಎಂದು ವರದಿಯಾಗಿದೆ. ನಿಯೋಗ ಇಂದು ಕತಾರ್‌ಗೆ ಹೊರಡಲಿದೆ ಎಂದು ಇಸ್ರೇಲಿ ಮಾಧ್ಯಮಗಳು ತಿಳಿಸಿವೆ. ಯಾವುದೇ ತಕ್ಷಣದ ಹಮಾಸ್ ಕಾಮೆಂಟ್ ಇಲ್ಲ. 15 ತಿಂಗಳ ಯುದ್ಧದಲ್ಲಿ ಅಮೆರಿಕ ನೇತತ್ವದ ಮಾತುಕತೆಗಳು ಪದೇ ಪದೇ ಸ್ಥಗಿತಗೊಂಡಿವೆ. ಮುವಾಸಿ ಎಂದು ಕರೆಯಲ್ಪಡುವ ಕಡಲ ತೀರದ ಮಾನವೀಯ ವಲಯದಲ್ಲಿ ಇಸ್ರೇಲಿ ಮುಷ್ಕರ ಸಂಭವಿಸಿದ್ದು, ನೂರಾರು ಸಾವಿರ ಸ್ಥಳಾಂತರಗೊಂಡ ಪ್ಯಾಲೆಸ್ಟೀನಿಯಾದವರು ತೇವವಾದ ಚಳಿಗಾಲದ ವಾತಾವರಣದಲ್ಲಿ ಕೂಡಿಹಾಕಲಾಗುತ್ತಿದೆ.

ಎಲ್ಲರೂ ಚಳಿಯಿಂದ ತಮ ತಮ ಟೆಂಟ್‌ಗಳಲ್ಲಿ ಆಶ್ರಯ ಪಡೆಯುತ್ತಿದ್ದರು ಮತ್ತು ಇದ್ದಕ್ಕಿದ್ದಂತೆ ಜಗತ್ತು ತಲೆಕೆಳಗಾಗುವುದನ್ನು ನಾವು ಕಂಡುಕೊಂಡಿದ್ದೇವೆ. ಏಕೆ, ಮತ್ತು ಯಾವುದಕ್ಕಾಗಿ ಗಾಜಾ ನಗರದಿಂದ ಸ್ಥಳಾಂತರಗೊಂಡ ಜಿಯಾದ್ ಅಬು ಜಬಲ್ ಹೇಳಿದರು.



ಮುಂಜಾನೆ ಮುಷ್ಕರದಲ್ಲಿ ಮೂರು ಮಕ್ಕಳು ಮತ್ತು ಇಬ್ಬರು ಹಿರಿಯ ಹಮಾಸ್ ಪೊಲೀಸ್ ಅಧಿಕಾರಿಗಳು ಸೇರಿದಂತೆ ಕನಿಷ್ಠ 10 ಜನರು ಸಾವನ್ನಪ್ಪಿದರು.

ಇಸ್ರೇಲ್ ಪಡೆಗಳ ಮೇಲಿನ ದಾಳಿಯಲ್ಲಿ ಹಮಾಸ್‌ನ ಸಶಸ್ತ್ರ ವಿಭಾಗವು ಬಳಸಿದ ಗುಪ್ತಚರವನ್ನು ಸಂಗ್ರಹಿಸುವಲ್ಲಿ ಅವರು ತೊಡಗಿಸಿಕೊಂಡಿದ್ದಾರೆ ಎಂದು ಹೇಳುವ ಮೂಲಕ ಹಿರಿಯ ಪೊಲೀಸ್ ಅಧಿಕಾರಿಯನ್ನು ಗುರಿಯಾಗಿಸಿಕೊಂಡಿರುವುದಾಗಿ ಇಸ್ರೇಲ್‌ನ ಮಿಲಿಟರಿ ಹೇಳಿದೆ.

ಮತ್ತೊಂದು ಇಸ್ರೇಲಿ ದಾಳಿಯು ಸೆಂಟ್ರಲ್ ಗಾಜಾದ ಡೀರ್ ಅಲ್- ಬಾಲಾಹ್‌ನಲ್ಲಿ ಕನಿಷ್ಠ ಎಂಟು ಜನರನ್ನು ಕೊಂದಿತು. ಮತದೇಹಗಳನ್ನು ಸ್ವೀಕರಿಸಿದ ಅಲ್-ಅಕ್ಸಾ ಹುತಾತರ ಆಸ್ಪತ್ರೆಯ ಪ್ರಕಾರ, ಪುರುಷರು ಸಹಾಯ ಬೆಂಗಾವಲುಗಳನ್ನು ಸುರಕ್ಷಿತಗೊಳಿಸಲು ಸಹಾಯ ಮಾಡುವ ಸ್ಥಳೀಯ ಸಮಿತಿಗಳ ಸದಸ್ಯರಾಗಿದ್ದರು. ಅಲ್ಲಿನ ಅಸೋಸಿಯೇಟೆಡ್ ಪ್ರೆಸ್ ಪತ್ರಕರ್ತರೊಬ್ಬರು ಸಾವಿನ ಸಂಖ್ಯೆಯನ್ನು ಖಚಿತಪಡಿಸಿದ್ದಾರೆ.

# ಕಡಲಾಚೆಯ ವಿದ್ಯಾರ್ಥಿ ವೀಸಾ ನಿಯಮ ಬದಲು

**ನವದೆಹಲಿ:** ಆಸ್ಟ್ರೇಲಿಯಾದಲ್ಲಿ ಕಡಲಾಚೆಯ ವಿದ್ಯಾರ್ಥಿ ವೀಸಾ ನಿಯಮಗಳಲ್ಲಿ ಪ್ರಮುಖ ಬದಲಾವಣೆಯಾಗಿದೆ. ಕಡಲಾಚೆಯ ವಿದ್ಯಾರ್ಥಿ ವೀಸಾ ಅರ್ಜಿದಾರರು ತಮ್ಮ ಅರ್ಜಿಯೊಂದಿಗೆ ದಾಖಲಾತಿ ದೃಢೀಕರಣವನ್ನು (ಸಿಒಇ) ಲಗತ್ತಿಸಬೇಕು ಎಂದು ಆಸ್ಟ್ರೇಲಿಯಾ ಸ್ಪಷ್ಟಪಡಿಸಿದೆ.

ಈ ನಿಬಂಧನೆಯು ಇದೇ ತಿಂಗಳ 1 ರಿಂದ ಜಾರಿಗೆ ಬರಲಿದೆ ಎಂದು ಹೇಳಿದೆ. 1 ಜನವರಿ 2025 ರಂದು ಅಥವಾ ನಂತರ ತಮ್ಮ ಅರ್ಜಿಗಳನ್ನು ಸಲ್ಲಿಸುವ ಅಭ್ಯರ್ಥಿಗಳು ಅರ್ಜಿಯ ಸಮಯದಲ್ಲಿ ದಾಖಲಾತಿಯ ದೃಢೀಕರಣವನ್ನು ಸಲ್ಲಿಸಬೇಕಾಗುತ್ತದೆ.

ಈ ಹಿಂದೆ ಅರ್ಜಿ ಸಲ್ಲಿಸಿದವರಿಗೆ ಸಿಒಇ ಅಗತ್ಯವಿಲ್ಲ ಎಂದು ಹೇಳಿದೆ. ಇದು ಸಿಒಇ ಇಲ್ಲದೆ ಬ್ರಿಡ್ಜಿಂಗ್ ವೀಸಾಗೆ ಅರ್ಜಿ ಸಲ್ಲಿಸುವ ಆಯ್ಕೆಯನ್ನು ರದ್ದುಗೊಳಿಸಿದೆ. ಕಡಲಾಚೆಯ ವಿದ್ಯಾರ್ಥಿ ವೀಸಾ ಪ್ರಕ್ರಿಯೆಗಳನ್ನು ಸುಗಮಗೊಳಿಸಲು ಈ ನಿಯಮಗಳನ್ನು ಜಾರಿಗೆ ತರಲಾಗುತ್ತಿದೆ ಎಂದು ಆಸ್ಟ್ರೇಲಿಯನ್ ಗೃಹ ವ್ಯವಹಾರಗಳ ಇಲಾಖೆ ತಿಳಿಸಿದೆ. ಆಸ್ಟ್ರೇಲಿಯಾದಲ್ಲಿ ಉಳಿದುಕೊಂಡಿರುವಾಗ ವಿದ್ಯಾರ್ಥಿ ವೀಸಾಕ್ಕೆ ಬದಲಾಯಿಸಲು ಪ್ರಯತ್ನಿಸುವ ವೀಸಾ ಹೊಂದಿರುವವರಿಗೆ ಕೆಲವು ಹೆಚ್ಚುವರಿ ನಿರ್ಬಂಧಗಳನ್ನು ವಿಧಿಸಬಹುದು ಎಂದು ಅದು ಹೇಳಿದೆ. ಆಸ್ಟ್ರೇಲಿಯನ್ ಗೃಹ ವ್ಯವಹಾರಗಳ ಇಲಾಖೆಯು ಅಧಿಕೃತ ಸೂಚನೆಯಲ್ಲಿ ವಿದ್ಯಾರ್ಥಿ ವೀಸಾ ಅರ್ಜಿಗಳಿಗೆ ದೇಶದಲ್ಲಿ ಅಧ್ಯಯನ ಮಾಡಲು ಉದ್ದೇಶಿಸಿರುವ ವಿದ್ಯಾರ್ಥಿಗಳಿಂದ ಆಫರ್‌ಗಳ ಪತ್ರಗಳನ್ನು ವಿದ್ಯಾರ್ಥಿ ವೀಸಾಗಳ ಪ್ರಕ್ರಿಯೆಗೆ ಇನ್ನು ಮುಂದೆ ಸ್ವೀಕರಿಸಲಾಗುವುದಿಲ್ಲ ಎಂದು ಘೋಷಿಸಿದೆ ಬದಲಿಗೆ, ವಿದ್ಯಾರ್ಥಿಗಳು ಈಗ ಅರ್ಜಿ ಸಲ್ಲಿಸುವ ಸಮಯದಲ್ಲಿ ದಾಖಲಾತಿ ದೃಢೀಕರಣ ಅಗತ್ಯವಿದೆ ಎಂದು ತಿಳಿಸಿದೆ.

ಆಸ್ಟ್ರೇಲಿಯ ವೀಸಾ ವ್ಯವಸ್ಥೆಯ ವಿಶ್ವಾಸಾರ್ಹತೆಯನ್ನು ಕಾಪಾಡಿಕೊಳ್ಳಲು ಮತ್ತು ಸರಿಯಾದ ವಿದ್ಯಾರ್ಥಿಗಳು ವೀಸಾಗಳನ್ನು ಪಡೆಯಲು ಈ ಬದಲಾವಣೆಯನ್ನು ಮಾಡಲಾಗಿದೆ.

1 ಜನವರಿ 2025 ರಿಂದ, ಎಲ್ಲಾ ವಿದ್ಯಾರ್ಥಿ ವೀಸಾ ಅರ್ಜಿಗಳು ದಾಖಲಾತಿ ದೃಢೀಕರಣ ಒಳಗೊಂಡಿರಬೇಕು. ದಾಖಲಾತಿ ದೃಢೀಕರಣ ಇಲ್ಲದ ಅರ್ಜಿಗಳನ್ನು ಅಮಾನ್ಯವೆಂದು ಪರಿಗಣಿಸಲಾಗುತ್ತದೆ. ಅಂತಹ ಅರ್ಜಿಗಳ ಮೇಲೆ ವೀಸಾ ಅಧಿಕಾರಿಗಳು ಯಾವುದೇ ಕ್ರಮ ತೆಗೆದುಕೊಳ್ಳಲು ಸಾಧ್ಯವಾಗುವುದಿಲ್ಲ ಎಂದು ತಿಳಿಸಿದೆ.

# ವಿದೇಶಿ ನಾಯಕರಿಂದ ಬಿಡೆನ್‌ಗೆ ಭಾರಿ ಉಡುಗೊರೆ

**ವಾಷಿಂಗ್ಟನ್:** ಅಧ್ಯಕ್ಷ ಜೋ ಬಿಡೆನ್ ಮತ್ತು ಅವರ ಕುಟುಂಬಕ್ಕೆ 2023ರಲ್ಲಿ ವಿದೇಶಿ ನಾಯಕರಿಂದ ಹತ್ತಾರು ಸಾವಿರ ಡಾಲರ್ ಉಡುಗೊರೆಯಾಗಿ ನೀಡಲಾಯಿತು. ಇದರ ನಡುವೆ ಭಾರತದ ಪ್ರಧಾನಿ ನರೇಂದ್ರ ಮೋದಿ ಅವರಿಂದ 20,000 ಡಾಲರ್ ಮೌಲ್ಯದ ವಜ್ರವನ್ನು ಸ್ವೀಕರಿಸಿದ್ದಾರೆ ಎಂಬುದು ಚರ್ಚೆಗೆ ಗ್ರಾಸವಾಗಿದೆ. ಮೋದಿಯವರಿಂದ 7.5-ಕ್ಯಾರೆಟ್ ವಜ್ರವನ್ನು ಪಡೆದಿರುವುದು ಆ ವರ್ಷದಲ್ಲಿ ಅಧ್ಯಕ್ಷರು ಪಡೆದ ಅತ್ಯಂತ ದುಬಾರಿ ಉಡುಗೊರೆಯಾಗಿದೆ. ಆದರೂ ಅವರು ಯುನೈಟೆಡ್ ಸ್ಟೇಟ್ಸ್ ನಲ್ಲಿರುವ ಉಕ್ರೇನಿಯನ್ ರಾಯಭಾರಿಯಿಂದ 14,063 ಡಾಲರ್ ಮೌಲ್ಯದ ಬ್ರೂಚ್ ಮತ್ತು ಬ್ರೇಸ್ಲೆಟ್, ಬ್ರೂಚ್ ಪಡೆದರು ಎಂದು ರಾಜ್ಯ ಇಲಾಖೆ ಪ್ರಕಟಿಸಿದ ವಾರ್ಷಿಕ ಲೆಕ್ಕಪತ್ರದಲ್ಲಿ ಬಹಿರಂಗ ಪಡಿಸಲಾಗಿದೆ.

ಈಜಿಪ್?ಟನ ಅಧ್ಯಕ್ಷರು 4,510 ರೂ ಮೌಲ್ಯದ ಉಡುಗೊರೆ ನೀಡಿದ್ದಾರೆ. ಪ್ರಸ್ತುತ 20,000 ಡಾಲರ್ ಮೌಲ್ಯದ ವಜ್ರವನ್ನು ವೈಟ್ ಹೌಸ್ ಈಸ್ಟ್ ವಿಂಗ್‌ನಲ್ಲಿ ಅಧಿಕೃತ ಬಳಕೆಗಾಗಿ ಉಳಿಸಿಕೊಳ್ಳಲಾಗಿದೆ. ರಾಜ್ಯ ಇಲಾಖೆಯ ದಾಖಲೆಯ ಪ್ರಕಾರ, ಅಧ್ಯಕ್ಷ ಮತ್ತು ಅವರ ಪತ್ನಿ ಪ್ರಥಮ ಮಹಿಳೆಗೆ ಇತರ ಉಡುಗೊರೆಗಳನ್ನು ಆರ್ಕೈವ್‌ಗಳಿಗೆ ಕಳುಹಿಸಲಾಗಿದೆ. ವಜ್ರದ ಬಳಕೆಯ ಕುರಿತು ಪ್ರತಿಕ್ರಿಯೆ ವಿನಂತಿಗೆ ಪ್ರಥಮ ಮಹಿಳೆಯ ಕಚೇರಿ ತಕ್ಷಣವೇ ಪ್ರತಿಕ್ರಿಯಿಸಲಿಲ್ಲ.



ಇತ್ತೀಚೆಗೆ ರಾಜಕೀಯ ಸಂಕಷ್ಟದಲ್ಲಿ ಸಿಲುಕಿರುವ ದಕ್ಷಿಣ ಕೊರಿಯಾದ ಅಧ್ಯಕ್ಷ ಸುಕ್ ಯೋಲ್ ಯೂನ್ ಅವರಿಂದ 7,100 ಡಾಲರ್ ಮೌಲ್ಯದ ಫೋಟೋ ಆಲ್ಬಮ್, ಮಂಗೋಲಿಯನ್ ಪ್ರಧಾನಿಯಿಂದ 3,495 ಡಾಲರ್ ಮಂಗೋಲಿಯನ್ ಯೋಧರ ಪ್ರತಿಮೆ, 3,300 ಬೆಳ್ಳಿಯ ಬಟ್ಟಲು ಸೇರಿದಂತೆ ಅಧ್ಯಕ್ಷರು ಸ್ವತಃ ಹಲವಾರು ದುಬಾರಿ ಉಡುಗೊರೆಗಳನ್ನು ಪಡೆದರು. ಬ್ರೂನಿ ಸುಲ್ತಾನ್ 3,160 ಡಾಲರ್ ಸ್ಟರ್ಲಿಂಗ್ ಸಿಲ್ವರ್ ಟ್ರೇ, ಇಸ್ರೇಲ್ ಅಧ್ಯಕ್ಷರು ಮತ್ತು ಉಕ್ರೇನಿಯನ್ ಅಧ್ಯಕ್ಷ ವೊಲೊಡಿಮಿರ್ ಝೆಲೆನ್ಸಿ ಕಯಿಂದ 2,400 ಮೌಲ್ಯದ ಡಾಲರ್ ಕೊಲಾಜ್ ಬಂದಿದೆ.

ಫೆಡರಲ್ ಕಾನೂನು ಕಾರ್ಯನಿರ್ವಾಹಕ ಶಾಖೆಯ ಅಧಿಕಾರಿಗಳು ವಿದೇಶಿ ನಾಯಕರು 480ಕ್ಕಿಂತ ಹೆಚ್ಚು ಉಡುಗೊರೆಗಳನ್ನು ಘೋಷಿಸಬೇಕು. ಆ ಮಿತಿಯನ್ನು ಪೂರೈಸುವ ಅನೇಕ ಉಡುಗೊರೆಗಳು ತುಲನಾತ್ಮಕವಾಗಿ ಸಾಧಾರಣವಾಗಿರುತ್ತವೆ. ಮತ್ತು ಹೆಚ್ಚು ದುಬಾರಿಯಾಗಿರುತ್ತವೆ. ಅದು ನ್ಯಾಷನಲ್ ಆರ್ಕೈವ್ಸ್‌ಗೆ ವರ್ಗಾಯಿಸಲಾಗುತ್ತದೆ ಅಥವಾ ಅಧಿಕೃತ ಪ್ರದರ್ಶನಗಳಲ್ಲಿ ಇರಿಸಲಾಗುತ್ತದೆ. ಫೆಡರಲ್ ರಿಜಿಸ್ಟರ್‌ನ ಆವೃತ್ತಿಯಲ್ಲಿ ಪ್ರಕಟವಾಗುವ ಪಟ್ಟಿಯಲ್ಲಿ ವೈಟ್ ಹೌಸ್ ಮತ್ತು ಹಿರಿಯ ಅಧಿಕಾರಿಗಳು ಹಲವಾರು ಉದ್ಯೋಗಿಗಳು ಕೈಗಡಿಯಾರಗಳು, ಸುಗಂಧ ದ್ರವ್ಯಗಳು ಮತ್ತು ಆಭರಣಗಳ ಅದ್ದೂರಿ ಉಡುಗೊರೆಗಳನ್ನು ಸ್ವೀಕರಿಸಿದ್ದಾರೆಂದು ವರದಿ ಮಾಡಿದ್ದಾರೆ. ಬಹುತೇಕ ಎಲ್ಲವನ್ನೂ ನಾಶಪಡಿಸಲಾಗಿದೆ. ನಾಶವಾದ ಉಡುಗೊರೆಗಳಲ್ಲಿ, ಅವು 132,000 ಡಾಲರ್‌ಕ್ಕಿಂತ ಹೆಚ್ಚು ಮೌಲ್ಯದ್ದಾಗಿವೆ.

ಸಿಐಎ ನಿರ್ದೇಶಕ ವಿಲಿಯಂ ಬರ್ನ್ಸ್ ಅವರು ಆಸ್ಟ್ರೋಗ್ರಾಫ್ ಪಡೆದರು. ಇದು ದೂರದರ್ಶಕ ಮತ್ತು ಜ್ಯೋತಿಷ್ಯ ಕ್ಯಾಮರಾ, ಒಮೆಗಾ ಗಡಿಯಾರವನ್ನು ಸ್ವೀಕರಿಸಿ ನಾಶಪಡಿಸಿದರು ಎಂದು ವರದಿಯಾಗಿದೆ.

# ಅತಿ ಹೆಚ್ಚು ಪ್ರಮಾಣದಲ್ಲಿ ಆಸ್ತಿ ಖರೀದಿಗೆ ಮುಂದಾದ ಭಾರತೀಯರು

## ಅರ್ಧದಷ್ಟು ಲಂಡನ್ ಭಾರತೀಯರ ಜೇಬಿನಲ್ಲಿ; ಶಬ್ಧ ಜೋರಾಗಿತ್ತು ನೆಟ್ಟಿಗರ ಕರ್ಮ ರಿಟರ್ನ್ಸ್ ಹೊಡೆತ

**ಲಂಡನ್:** ಇಂಗ್ಲೆಂಡ್ ರಾಜಧಾನಿ ಲಂಡನ್‌ನಲ್ಲಿ ಭಾರತೀಯರು ಭಾರೀ ಪ್ರಮಾಣದಲ್ಲಿ ಆಸ್ತಿ ಖರೀದಿಸುತ್ತಿದ್ದು, ಇದಕ್ಕೆ ನೆಟ್ಟಿಗರಿಂದ ತಮಾಷೆಯ ಪ್ರತಿಕ್ರಿಯೆಗಳು ವ್ಯಕ್ತವಾಗುತ್ತಿವೆ. ಬ್ರಿಟನ್‌ನ ವಸಾಹತುಶಾಹಿ ನೀತಿ ಭಾರತವನ್ನು ಹಿಂಡಿ ಹಿಪ್ಪಿ ಮಾಡಿತ್ತು. ಈಗ ಭಾರತೀಯರು ಅದರ ಹೃದಯ ಭಾಗದಲ್ಲೇ ಹೆಚ್ಚು ಪ್ರಮಾಣದಲ್ಲಿ ಆಸ್ತಿ ಖರೀದಿಸಿ ಕರ್ಮ ಯಾವತ್ತಿದ್ದರೂ ಮರಳಿ ಕೊಡುತ್ತದೆ. ಎಂದು ಸಾಬೀತು ಮಾಡಿದ್ದಾರೆ ಎಂದು ನೆಟ್ಟಿಗರು ಆಂಗ್ಲರ ಕಾಲೆಳೆದಿದ್ದಾರೆ.



**ಕರ್ಮ ರಿಟರ್ನ್ಸ್ ಪ್ರತಿಕ್ರಿಯೆ**

ಹೌದು, ಲಂಡನ್‌ನಲ್ಲಿ ಆಸ್ತಿ ಖರೀದಿ ಮಾಡುತ್ತಿರುವ ಭಾರತೀಯರ ಸಂಖ್ಯೆ ದಿನದಿಂದ ದಿನಕ್ಕೆ ಹೆಚ್ಚುತ್ತಿದೆ. ಲಂಡನ್‌ನ ಪ್ರಮುಖ ಪ್ರಾಪರ್ಟಿ ಡೆವಲಪರ್ 'ಬ್ಯಾರಟ್ ಲಂಡನ್'ನ ಇತ್ತೀಚಿನ ವರದಿಯು, ಅನಿವಾಸಿ ಭಾರತೀಯರು ಆಸ್ತಿ ಖರೀದಿಯಲ್ಲಿ ಸ್ಥಳೀಯ ಬ್ರಿಟಿಷ್ ನಿವಾಸಿಗಳನ್ನು ಮೀರಿಸಿದ್ದಾರೆ. ಈ ಮೂಲಕ ಅನಿವಾಸಿ ಭಾರತೀಯರು ಲಂಡನ್‌ನ ಅತಿದೊಡ್ಡ ಆಸ್ತಿ ಮಾಲೀಕರಾಗಿದ್ದಾರೆ. ಎಂದು ತಿಳಿಸಿದೆ. ಈ ವರದಿಯು ಲಂಡನ್ ನಲ್ಲಿರುವ ಅನಿವಾಸಿ ಭಾರತೀಯ ಆಸ್ತಿ ಖರೀದಿದಾರರನ್ನು ವಿವಿಧ ವರ್ಗಗಳಾಗಿ ವಿಂಗಡಿಸಿದೆ. ತಲೆಮಾರುಗಳಿಂದ ಯುನೈಟೆಡ್ ಕಿಂಗ್‌ಡಮ್‌ನಲ್ಲಿ ವಾಸಿಸುತ್ತಿರುವ ಭಾರತೀಯ ಮೂಲದ ನಿವಾಸಿಗಳು, ಅನಿವಾಸಿಗಳು (ಎನ್‌ಆರ್‌ಐಗಳು), ವಿದೇಶಿ ಹೂಡಿಕೆದಾರರು ಮತ್ತು ಶೈಕ್ಷಣಿಕ ಉದ್ದೇಶಗಳಿಗಾಗಿ ಸ್ಥಳಾಂತರಗೊಳ್ಳುವವರು ಎಂದು ಈ ಆಸ್ತಿ ಖರೀದಿದಾರರನ್ನು ವಿಂಗಡನೆ ಮಾಡಲಾಗಿದೆ. ಈ ಕುರಿತು ತನ್ನ ಅಧಿಕೃತ 'ಎಕ್ಸ್' ಅಕೌಂಟ್‌ನಲ್ಲಿ ಪೋಸ್ಟ್ ಮಾಡಿರುವ ಬ್ರಿಕ್ಸ್, ಲಂಡನ್ ನಗರದಲ್ಲಿ ಆಸ್ತಿ ಖರೀದಿ ಮಾಡುತ್ತಿರುವ ಭಾರತೀಯರ ಸಂಖ್ಯೆ ಅಧಿಕವಾಗಿದೆ.. ಎಂದು ಹೇಳಿದೆ. ಈ ಪೋಸ್ಟ್‌ಗೆ ಕೇವಲ ಎರಡು ದಿನಗಳಲ್ಲಿ 15 ಮಿಲಿಯನ್ ವೀಕ್ಷಣೆ ದೊರೆತಿದ್ದು, ನೆಟಿಜನ್‌ಗಳು ಹೆಚ್ಚಿನ ಸಂಖ್ಯೆಯಲ್ಲಿ ಕಾಮೆಂಟ್ ಮಾಡುತ್ತಿದ್ದಾರೆ. ಭಾರತ-ಬ್ರಿಟನ್ ವಸಾಹತುಶಾಹಿ ಇತಿಹಾಸವನ್ನು ನೆನೆಪಿಸಿರುವ ನೆಟಿಜನ್‌ಗಳು, ಬ್ರಿಟಿಷ್ ಮ್ಯೂಸಿಯಂನಲ್ಲಿರುವ ಶೇ.90ಕ್ಕೂ ಹೆಚ್ಚಿನ ಕಲಾಕೃತಿಗಳು ಭಾರತಕ್ಕೆ ಸೇರಿವೆ. ಈ ಎಲ್ಲಾ ಕಲಾಕೃತಿಗಳನ್ನು ಬ್ರಿಟಿಷರು ಭಾರತದಿಂದ ಕದ್ದು ಸಾಗಿಸಿದ್ದಾರೆ. ಈಗ ಕರ್ಮ ಅವರ ಬೆನ್ನು ಹತ್ತಿದೆ.. ಎಂದು ನೆಟ್ಟಿಗರು ಪ್ರತಿಕ್ರಿಯೆ ನೀಡಿದ್ದಾರೆ.

**'ಅತ್ತೆಗೊಂದು ಕಾಲ, ಸೊಸೆಗೊಂದು ಕಾಲ..?**

ಎಂಬ ನಾಣ್ಣುಡಿಯಂತೆ, ಶತಮಾನಗಳ ಕಾಲ ಭಾರತದಲ್ಲಿ ಅಕ್ರಮ ಆಡಳಿತ ನಡೆಸಿದ ಬ್ರಿಟಿಷರಿಗೆ ಈಗ ಭಾರತೀಯರು ಮುಟ್ಟಿ ನೋಡಿಕೊಳ್ಳುವಂತ ಪ್ರತಿಕ್ರಿಯೆ ನೀಡುತ್ತಿದ್ದಾರೆ. ಇದಕ್ಕೆ ಪೂರಕವಾಗಿ ಲಂಡನ್ ನಗರದಲ್ಲಿ ಅನಿವಾಸಿ ಭಾರತೀಯರು ಅತಿ ಹೆಚ್ಚಿನ ಸಂಖ್ಯೆಯಲ್ಲಿ ಆಸ್ತಿ ಖರೀದಿ ಮಾಡುತ್ತಿದ್ದು, ಸಂಶೋಧನಾ ವರದಿಯೊಂದರ ಪ್ರಕಾರ ಸ್ಥಳೀಯ ಆಂಗ್ಲರಿಗಿಂತಲೂ ಅನಿವಾಸಿ ಭಾರತೀಯರು ಲಂಡನ್ ನಗರದಲ್ಲಿ ಹೆಚ್ಚಿನ ಆಸ್ತಿ ಹೊಂದಿದ್ದಾರೆ.

ಇಂಗ್ಲಿಷರು ಭಾರತದಿಂದ ಕದ್ದ 45 ಟ್ರಿಲಿಯನ್ ಮೌಲ್ಯದ ಸಂಪತ್ತನ್ನು ಹಿಂದಿರುಗಿಸಬೇಕು. ಅವರ ರಾಜನ ಕಿರೀಟದಲ್ಲಿರುವ ಕೊಹಿನೂರ್ ವಜ್ರವು ಭಾರತಕ್ಕೆ ಸೇರಿದ್ದು..''ಎಂದೂ ಕೆಲವರು ಪ್ರತಿಕ್ರಿಯೆ ನೀಡಿದ್ದಾರೆ. ಇನ್ನೋರ್ವ 'ಎಕ್ಸ್' ಬಳಕೆದಾರ ಕನಿಷ್ಠ ಭಾರತೀಯರು ಲಂಡನ್‌ನಲ್ಲಿ ಕಾನೂನುಬದ್ಧವಾಗಿ ಆಸ್ತಿ ಖರೀದಿಸುತ್ತಿದ್ದಾರೆ.. ಎಂದು ಹೇಳುವ ಮೂಲಕ ಬ್ರಿಟಿಷರು ಭಾರತದಿಂದ ಅಕ್ರಮವಾಗಿ ಸಂಪತ್ತನ್ನು ಲೂಟಿ ಮಾಡಿದ ಇತಿಹಾಸವನ್ನು ನೆನಪಿಸಿದ್ದಾರೆ.

200 ವರ್ಷಗಳ ಕಾಲ ಭಾರತವನ್ನು ಅಕ್ರಮವಾಗಿ ಆಳಿದ ಬ್ರಿಟಿಷರು, ಈಗ ಭಾರತೀಯರು ಬ್ರಿಟನ್ ಮೇಲೆ ಕಾನೂನುಬದ್ಧವಾಗಿ ಅಧಿಕಾರ ಸ್ಥಾಪಿಸಿರುವುದನ್ನು ನೋಡಿ ದಂಗಾಗಿದ್ದಾರೆ. ಎಂದು ಮತ್ತೋರ್ವ ನೆಟ್ಟಿಗ ಕಾಲೆಳೆದಿದ್ದಾರೆ. ಬ್ರಿಟಿಷರು ಹಿಂದೊಮ್ಮೆ ಪ್ರಪಂಚದ ಅರ್ಧದಷ್ಟು ಭೂಭಾಗದ ಮೇಲೆ ಮಾಲೀಕತ್ವ ಹೊಂದಿದ್ದರು. ಈಗ ಅನಿವಾಸಿ ಭಾರತೀಯರ ಕಾರಣದಿಂದಾಗಿ ಲಂಡನ್ ನಗರದ ಅರ್ಧದಷ್ಟು ಮಾಲೀಕತ್ವವನ್ನು ಕಳೆದುಕೊಂಡಿದ್ದಾರೆ.. ಎಂದು ಮತ್ತೋರ್ವ ನೆಟ್ಟಿಗ ಕಿಚಾಯಿಸಿದ್ದಾರೆ.

ಆದಾಗ್ಯೂ, ಭಾರತೀಯರು ಲಂಡನ್‌ನಲ್ಲಿ ಹೆಚ್ಚಿನ ಸಂಖ್ಯೆಯ ಆಸ್ತಿ ಹೊಂದಿರಬಹುದು. ಆದರೆ ಅವರು ಈ ಆಸ್ತಿಯ ಹೆಚ್ಚಿನ ಮೌಲ್ಯ ಮತ್ತು ಹೆಚ್ಚಿನ ಒಟ್ಟಾರೆ ಚದರ್ ಮೀಟರ್ ಪ್ರಮಾಣ ಹೊಂದಿದ್ದಾರಾ?.. ಎಂದು ಆಂಗ್ಲ ಬಳಕೆದಾರನೋರ್ವ ಪ್ರಶ್ನೆ ಮಾಡಿದ್ದಾನೆ. ಲಂಡನ್‌ನ ರಿಯಲ್ ಎಸ್ಟೇಟ್ ಮಾರುಕಟ್ಟೆಯು ದೀರ್ಘಕಾಲದವರೆಗೆ ಭಾರತೀಯ ಹೂಡಿಕೆದಾರರಿಗೆ ಆದ್ಯತೆಯ ಆಯ್ಕೆಯಾಗಿದೆ. ಸ್ಥಿರತೆ ಮತ್ತು ದೀರ್ಘಾವಧಿಯ ಆದಾಯದ ಸಾಮರ್ಥ್ಯ, ಅನಿವಾಸಿ ಭಾರತೀಯರು ಹೆಚ್ಚಿನ ಸಂಖ್ಯೆಯಲ್ಲಿ ಆಸ್ತಿ ಖರೀದಿಸುವಂತೆ ಪ್ರೇರೇಪಿಸಿದೆ. ಬಾಲಿವುಡ್ ನಟ, ನಟಿಯರಾದ ಶಾರುಖ್ ಖಾನ್, ಸೋನಮ್ ಕಪೂರ್, ಅಜಯ್ ದೇವಗನ್, ಶಿಲ್ಪಾ ಶೆಟ್ಟಿ, ಮತ್ತು ಕ್ರಿಕೆಟ್ ಐಕಾನ್ ಸೌರವ್ ಗಂಗೂಲಿ ಅವರಂತಹ ಪ್ರಮುಖ ಭಾರತೀಯ ಸೆಲೆಬ್ರಿಟಿಗಳು ಕೂಡ, ಲಂಡನ್ ನಗರದಲ್ಲಿ ಸ್ವಂತ ಮನೆ ಹೊಂದಿದ್ದಾರೆ ಎಂಬುದು ಇಲ್ಲಿ ಉಲ್ಲೇಖನೀಯ.

## ಮಿನಿ ನ್ಯೂಸ್

### ಹವಾಮಾನ ವೈಪರೀತ್ಯದಿಂದ 100 ವಿಮಾನಗಳ ಹಾರಾಟದಲ್ಲಿ ವ್ಯತ್ಯಯ

**ನವದೆಹಲಿ:** ಹವಾಮಾನ ವೈಪರೀತ್ಯದಿಂದಾಗಿ ಶುಕ್ರವಾರ ಬೆಳಿಗ್ಗೆ ದೆಹಲಿ ವಿಮಾನ ನಿಲ್ದಾಣದಲ್ಲಿ 100 ಕ್ಕೂ ಹೆಚ್ಚು ವಿಮಾನ ಯಾನಗಳು ವಿಳಂಬವಾಗಿವೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ರಾಷ್ಟ್ರ ರಾಜಧಾನಿಯು ದಟ್ಟವಾದ ಮಂಜಿನಿಂದಾಗಿ ಕಡಿಮೆ ಗೋಚರತೆಯನ್ನು ಕಂಡಿತು. 100 ಕ್ಕೂ ಹೆಚ್ಚು ವಿಮಾನಗಳು ವಿಳಂಬವಾಗಿವೆ ಆದರೆ ಇಲ್ಲಿಯವರೆಗೆ ಯಾವುದೇ ತಿರುವುಗಳಿಲ್ಲ ಎಂದು ಅಧಿಕಾರಿ ಹೇಳಿದರು. ನವೀಕರಿಸಿದ ವಿಮಾನ ಮಾಹಿತಿಗಾಗಿ ಸಂಬಂಧಿಸಿದ ವಿಮಾನಯಾನ ಸಂಸ್ಥೆಯನ್ನು ಸಂಪರ್ಕಿಸಲು ಪ್ರಯಾಣಿಕರಿಗೆ ವಿನಂತಿಸಲಾಗಿದೆ.

ಉಂಟಾದ ಯಾವುದೇ ಅನಾನುಕೂಲತೆಗಾಗಿ ತೀವ್ರವಾಗಿ ವಿಷಾದಿಸುತ್ತೇವೆ ಎಂದು ದೆಹಲಿ ಇಂಟರ್‌ನ್ಯಾಶನಲ್ ಏರ್ಪೋರ್ಟ್ ಲಿಮಿಟೆಡ್ ಎಕ್ಸ್ ಮಾಡಿದೆ. ಕ್ಯಾಟ್ 111 ಸೌಲಭ್ಯವು ವಿಮಾನವು ಕಡಿಮೆ ಗೋಚರತೆಯ ಪರಿಸ್ಥಿತಿಗಳಲ್ಲಿ ಕಾರ್ಯನಿರ್ವಹಿಸಲು ಅನುವು ಮಾಡಿಕೊಡುತ್ತದೆ. ಡಯಲ್ ನಿಂದ ನಿರ್ವಹಿಸಲ್ಪಡುವ ಇಂದಿರಾಗಾಂಧಿ ಅಂತರಾಷ್ಟ್ರೀಯ ವಿಮಾನ ನಿಲ್ದಾಣವು ಪ್ರತಿದಿನ ಸುಮಾರು 1,300 ವಿಮಾನ ಸಂಚಾರಗಳನ್ನು ನಿರ್ವಹಿಸುತ್ತದೆ.

### ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲಿಗೆ ಕಲ್ಲು

**ಸೊಲ್ಲಾಪುರ:** ಮಹಾರಾಷ್ಟ್ರದ ಸೋಲಾಪುರದಲ್ಲಿ ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲಿಗೆ ಕಲ್ಲು ತೂರಾಟ ನಡೆಸಿದ ಘಟನೆ ಜರುಗಿದೆ. ಶುಕ್ರವಾರ ಸೊಲ್ಲಾಪುರದಲ್ಲಿ ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲಿಗೆ ಅಪರಿಚಿತ ವ್ಯಕ್ತಿಯೊಬ್ಬ ಕಲ್ಲು ತೂರಾಟ ನಡೆಸಿದ್ದಾನೆ. ಈ ಬಗ್ಗೆ ಪೊಲೀಸರು ತನಿಖೆ ನಡೆಸುತ್ತಿದ್ದಾರೆ ಎನ್ನಲಾಗಿದೆ.



ಮುಂಬೈನಿಂದ ಸೊಲ್ಲಾಪುರಕ್ಕೆ ತೆರಳುತ್ತಿದ್ದ ವಂದೇ ಭಾರತ್ ರೈಲಿನ ಮೇಲೆ ಜುರ್ ರೈಲು ನಿಲ್ದಾಣದ ಬಳಿ ಈ ಘಟನೆ ಜರುಗಿದೆ. ಕಲ್ಲು ತೂರಾಟದಲ್ಲಿ ವಂದೇ ಭಾರತ್ ಎಕ್ಸ್‌ಪ್ರೆಸ್‌ನ ಸಿ-11 ಕೋಚ್‌ನ ಗಾಜು ಒಡೆದಿದೆ. ಅದೃಷ್ಟವಶಾತ್ ಯಾವುದೇ ಪ್ರಯಾಣಿಕರಿಗೆ ಗಾಯಗಳಾಗಿಲ್ಲ ಈ ಬಗ್ಗೆ ರೈಲ್ವೆ ಮತ್ತು ಆಡಳಿತದಿಂದ ತನಿಖೆ ನಡೆಯುತ್ತಿದೆ. ಹಿಮಾಚಲ ಪ್ರದೇಶದ ಉನಾ ಜಿಲ್ಲೆಯಲ್ಲಿ ದೆಹಲಿ-ಉನಾ ವಂದೇ ಭಾರತ್ ರೈಲಿನ ಬೋಗಿಗಳ ಮೇಲೆ ಕಲ್ಲು ತೂರಾಟದ ಘಟನೆಗಳ ನಂತರ, ಭದ್ರತಾ ಪಡೆ ಸಿಬ್ಬಂದಿಯನ್ನು ರೈಲಿನಲ್ಲಿ ನಿಯೋಜಿಸಲಾಗಿದೆ .

### ಉಕ್ರೇನ್ ನಿರಾಶ್ರಿತರಿಗೆ ಹಣಕಾಸು ನೆರವು ಸ್ಥಗಿತ

**ಕೈವ್:** ರಷ್ಯಾದ ಅನಿಲ ಕೊಳವೆ ಮಾರ್ಗವನ್ನು ತನ್ನ ದೇಶದಲ್ಲಿ ಬಂದ್ ಮಾಡಿರುವ ಉಕ್ರೇನ್ ಸರ್ಕಾರದ ನಿರ್ಧಾರಕ್ಕೆ ಅಸಮ್ಮತಿ ವ್ಯಕ್ತಪಡಿಸಿರುವ ಸ್ಲೋವಾಕಿಯಾದ ಪ್ರಧಾನಿ ರಾಬರ್ಟ್ ಫಿಕೊ, ತನ್ನ ದೇಶದಲ್ಲಿರುವ ಸರಿ ಸುಮಾರು 1,30,000 ಕ್ಕೂ ಹೆಚ್ಚು ಉಕ್ರೇನ್ ನಿರಾಶ್ರಿತರಿಗೆ ಹಣಕಾಸಿನ ನೆರವು ಕಡಿತಗೊಳಿಸುವುದಾಗಿ ಬೆದರಿಕೆ ಹಾಕಿದ್ದಾರೆ. ಜನವರಿ 1 ರಂದು, ಉಕ್ರೇನ್, ತನ್ನ ದೇಶದಲ್ಲಿ ಹಾದುಹೋಗಿರುವ ಅನಿಲ ಕೊಳವೆ ಮಾರ್ಗವನ್ನು ಒಪ್ಪಂದ ಮುಗಿದಿದೆ ಎನ್ನುವ ಕಾರಣ ನೀಡಿ ಉಕ್ರೇನ್ ಅಧ್ಯಕ್ಷ ವಲೋಡಿಮಿರ್ ಝೆಲೆನ್ಸಿ ಬಂದ್ ಮಾಡಿದ್ದಾರೆ. ಈ ಮೂಲಕ ಕಳೆದ ಮೂರು ವರ್ಷಗಳಿಂದ ನಡೆಯುತ್ತಿರುವ ರಷ್ಯಾ ಯುದ್ಧಕ್ಕೆ ಪ್ರತೀಕಾರ ತೀರಿಸಿಕೊಳ್ಳುವ ಪ್ರಯತ್ನ ಮಾಡಿದ್ದಾರೆ.

ಅನಿಲ ಕೊಳವೆ ಮಾರ್ಗ ಬಂದ್ ಮಾಡಿರುವ ಹಿನ್ನೆಲೆಯಲ್ಲಿ ಯುರೋಪಿಯನ್ ಒಕ್ಕೂಟದ ದೇಶಗಳಿಗೆ ರಷ್ಯಾದಿಂದ ಸರಬರಾಜಾಗುತ್ತಿದ್ದ ಅನಿಲ ಸ್ಥಗಿತಗೊಂಡಿದೆ,ಇದರಿಂದ ಸ್ಲೋವಾಕಿಯಾದ ಮೇಲೂ ಪರಿಣಾಮ ಬೀರಿದೆ. ಈ ಹಿನ್ನೆಲೆಯಲ್ಲಿ ಉಕ್ರೇನ್ ವಿರುದ್ಧ ಸ್ಲೋವಾಕಿಯಾ ಸೇಡು ತೀರಿಸಿಕೊಳ್ಳುವ ಪ್ರಯತ್ನ ಮಾಡಿದೆ. ಹಲವಾರು ದಶಕಗಳಿಂದ ಮಧ್ಯ ಯುರೋಪ್‌ಗೆ ರಷ್ಯಾದ ನೈಸರ್ಗಿಕ ಅನಿಲವನ್ನು ಉಕ್ರೇನ್ ಮೂಲಕ ಪೂರೈಸಲು ಬಳಸಲಾಗುತ್ತಿತ್ತು. ಈಗ ಒಪ್ಪಂದ ಮುಗಿದಿದೆ ಎನ್ನುವ ನೆಪವೊಡ್ಡಿ ಅನಿಲ ಮಾರ್ಗ ಬಂದ್ ಮಾಡಿರುವ ಹಿನ್ನೆಲೆಯಲ್ಲಿ ಸ್ಲೋವಾಕಿಯಾ ಸೇರಿದಂತೆ ಯುರೋಪಿಯನ್ ಒಕ್ಕೂಟದ ಹಲವು ದೇಶಗಳಿಗೆ ತೊಂದರೆ ಆಗಿದೆ.

ಜಾಗತಿಕವಾಗಿ 6,813,900 ಪೈಕಿ 1.30,530 ಉಕ್ರೇನಿಯನ್ ನಿರಾಶ್ರಿತರು ಸ್ಲೋವಾಕಿಯಾದಲ್ಲಿದ್ದಾರೆ.ಇದೀಗ ಉಕ್ರೇನ್ ಅಧ್ಯಕ್ಷರು ತೆಗೆದುಕೊಂಡಿರುವ ನಿರ್ಧಾರ ಅಲ್ಲಿನ ಉಕ್ರೇನ್ ನಿರಾಶ್ರಿತರ ಮೇಲೆ ಪರಿಣಾಮ ಬೀರಿದೆ. ರಷ್ಯಾದ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರೊಂದಿಗೆ ಮಾತುಕತೆಗಾಗಿ ಡಿಸೆಂಬರ್‌ನಲ್ಲಿ ಮಾಸ್ಕೋಗೆ ಅನಿರೀಕ್ಷಿತ ಭೇಟಿ ನೀಡಿದ ಸ್ಲೋವಾಕಿಯಾದ ಪ್ರಧಾನಿ ರಾಬರ್ಟ್ ಫಿಕೊ, ಉಕ್ರೇನ್ ಅಧ್ಯಕ್ಷರ ಕ್ರಮವನ್ನು ''ವಿಧ್ವಂಸಕ'' ಎಂದು ಬಣ್ಣಿಸಿದ್ದಾರೆ.

ನಿರಾಶ್ರಿತರಿಗೆ ಹಣಕಾಸಿನ ನೆರವು ನಿಲ್ಲಿಸುವ ಜೊತೆಗೆ ಉಕ್ರೇನ್‌ಗೆ ವಿದ್ಯುತ್ ರಫ್ತುಗಳನ್ನು ನಿಲ್ಲಿಸಲು ಮುಂದಾಗಿರುವುದಾಗಿ ಸ್ಲೋವಾಕಿಯಾದ ಪ್ರಧಾನಿ ರಾಬರ್ಟ್ ಫಿಕೊ ಹೇಳಿದ್ದು ಮುಂದಿನ ದಿನಗಳಲ್ಲಿ ಯಾವ ಸ್ವರೂಪ ಪಡೆದುಕೊಳ್ಳಲಿದೆ ಎನ್ನುವುದನ್ನು ಕಾದುನೋಡಬೇಕಾಗಿದೆ

### ಕ್ಷಮೆ ವಿಚಾರ; ರಾಜ್ಯದಲ್ಲಿ ಅಸ್ಥಿರತೆ ಬಯಸುವವರಿಂದ ರಾಜಕೀಯ

**ಇಂಫಾಲ್:** ಜನಾಂಗೀಯ ಸಂಘರ್ಷ ಕುರಿತಂತೆ ನಾನು ಜನರ ಕ್ಷಮೆ ಕೋರಿದ್ದ ವಿಚಾರವಾಗಿ ರಾಜಕೀಯ ಮಾಡುತ್ತಿರುವವರು ರಾಜ್ಯದಲ್ಲಿ ಅಸ್ಥಿರತೆ ಮುಂದುವರಿಯಬೇಕು ಎಂಬುದಾಗಿ ಬಯಸುತ್ತಿದ್ದಾರೆ' ಎಂದು ಮಣಿಪುರ ಮುಖ್ಯಮಂತ್ರಿ ಎನ್.ಬಿರೇನ್ ಸಿಂಗ್ ಶುಕ್ರವಾರ ಹೇಳಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 'ರಾಜ್ಯದಲ್ಲಿ ಶಾಂತಿ ಮರುಸ್ಥಾಪನೆ ನನ್ನ ಸರ್ಕಾರದ ಆದ್ಯತೆಯಾಗಿದೆ' ಎಂದರು.



ಆಗಿದ್ದು ಆಗಿ ಹೋಯಿತು. ಎರಡೂ ಸಮುದಾಯದವರು ಒಟ್ಟಿಗೆ ಕುಳಿತು ಮಾತನಾಡಿ, ಈ ಸಂಘರ್ಷಕ್ಕೆ ಶಾಶ್ವತ ಪರಿಹಾರ ಕಂಡುಕೊಳ್ಳಬೇಕು' ಎಂದು ರಾಜ್ಯದ ವಿವಿಧ ಸಮುದಾಯಗಳಿಗೆ ಅವರು ಮನವಿ ಮಾಡಿದರು. ವಿರೋಧ ಪಕ್ಷಗಳಿಗೆ ಸಿದ್ಧಾಂತವೆಂಬುದೇ ಇಲ್ಲ. ನಾನು ದುಃಖಿತನಾಗಿರುವ ಬಗ್ಗೆ ಹೇಳಿದ್ದೆ. ತಮ್ಮವರನ್ನು ಕಳೆದು ಕೊಂಡವರಿಗೆ ಹಾಗೂ ಜನಾಂಗೀಯ ಸಂಘರ್ಷದಿಂದಾಗಿ ನೋವು ಅನುಭವಿಸುತ್ತಿರುವವರಲ್ಲಿ ಕ್ಷಮೆ ಯಾಚಿಸಿದ್ದೆ' ಎಂದ ಅವರು, 'ಉಗ್ರರಲ್ಲಿ ನಾನೇಕೆ ಕ್ಷಮೆ ಯಾಚಿಸಲಿ' ಎಂದು ಪ್ರಶ್ನಿಸಿದರು. 'ರಾಜ್ಯದಲ್ಲಿರುವ ವಿವಿಧ ಸಮುದಾಯಗಳ ಜನರಿಗೆ ನಾನು ಶಾಂತಿಯ ಸಂದೇಶ ರವಾನಿಸಿದ್ದೇನೆ. ಹಳೆಯದನ್ನು ಮರೆಯಬೇಕು ಹಾಗೂ ಕ್ಷಮಿಸಬೇಕು. ಮಾತುಕತೆ ಮೂಲಕ ಶಾಶ್ವತ ಪರಿಹಾರ ಕಂಡುಕೊಳ್ಳಬೇಕು' ಎಂದರು.

ಬಾಲಿವುಡ್‌ನತ್ತ ನಟಿ-



# ಕಾರ್ತಿಕ್ ಆರ್ಯನ್‌ಗೆ ಶ್ರೀಲೀಲಾ ಜೋಡಿ



ಕನ್ನಡದ ನಟಿ ಶ್ರೀಲೀಲಾ ಸೌತ್‌ನಲ್ಲಿ ಬೇಡಿಕೆಯ ನಟಿಯರಲ್ಲಿ ಒಬ್ಬರಾಗಿದ್ದಾರೆ. 'ಕಿಸ್ಸಿಕ್' ಹೀರೋಯಿನ್ ಆಗಿ ಮಿಂಚಿದ್ಮೇಲೆ ಬಾಲಿವುಡ್‌ನಿಂದಲೂ ಬುಲಾವ್ ಬಂದಿದೆ. ನಟ ಕಾರ್ತಿಕ್ ಆರ್ಯನ್ ನಟನೆಯ ಹೊಸ ಸಿನಿಮಾದಲ್ಲಿ ಶ್ರೀಲೀಲಾ ನಾಯಕಿ ಎಂದು ಎನ್ನಲಾದ ಸುದ್ದಿಯೊಂದು ಸೋಶಿಯಲ್ ಮೀಡಿಯಾದಲ್ಲಿ ಚರ್ಚೆಗೆ ಗ್ರಾಸವಾಗಿದೆ.

ಕರಣ್ ಜೋಹರ್ ನಿರ್ಮಾಣದ ಹೊಸ ಸಿನಿಮಾದಲ್ಲಿ ಕಾರ್ತಿಕ್ ಆರ್ಯನ್ ಪ್ರಮುಖ ಪಾತ್ರಕ್ಕೆ ಆಯ್ಕೆಯಾಗಿದ್ದು, ಅವರಿಗೆ ಜೋಡಿಯಾಗಿ ನಟಿಸಲು ಶ್ರೀಲೀಲಾರನ್ನು ಚಿತ್ರತಂಡ ಸಂಪರ್ಕಿಸಿದೆ ಎನ್ನಲಾಗಿದೆ. ಹೀಗೊಂದು ಸುದ್ದಿ ಸೋಶಿಯಲ್ ಮೀಡಿಯಾದಲ್ಲಿ ಇದೀಗ ಹರಿದಾಡುತ್ತಿದೆ. ಈ ವಿಚಾರ ನಿಜನಾ ಎಂಬುದನ್ನು ಚಿತ್ರತಂಡ ಅಧಿಕೃತವಾಗಿ ತಿಳಿಸುವವರೆಗೂ ಕಾಯಬೇಕಿದೆ.

ಇನ್ನೂ ಬಾಲಿವುಡ್‌ನಲ್ಲಿ ಕಾರ್ತಿಕ್ ಆರ್ಯನ್ ನಟಿಸಿದ ಬ್ಯಾಕ್ ಟು ಬ್ಯಾಕ್ ಸಿನಿಮಾಗಳು ಹಿಟ್ ಆಗಿವೆ. ಇನ್ನೂ ಶ್ರೀಲೀಲಾ ಮೇಲೆ ಫ್ಯಾನ್ಸ್‌ಗೆ ಭಾರೀ ಕ್ರೇಜ್ ಇದೆ. ಹೀಗಾಗಿ ಹಿಂದಿ ಚಿತ್ರದಲ್ಲಿ ಇಬ್ಬರೂ ಜೊತೆಯಾಗಿ ನಟಿಸಿದ್ರೆ, ಕಾಂಬಿನೇಷನ್ ಚೆನ್ನಾಗಿರುತ್ತದೆ ಎಂಬುದು ಪ್ರೇಕ್ಷಕರ ಲೆಕ್ಕಾಚಾರ. ಅಂದಹಾಗೆ, ಶ್ರೀಲೀಲಾ ಲಿಸ್ಟ್‌ನಲ್ಲಿ 5ಕ್ಕೂ ಹೆಚ್ಚು ಸಿನಿಮಾಗಳಿವೆ.

# ಸಿದ್ಧಗಂಗಾ ಮಠಕ್ಕೆ ಡಾಲಿ ಭೇಟಿ

ಶ್ರೀಗಳಿಗೆ ಡಾಲಿ ಆಹ್ವಾನ

ತುಮಕೂರಿನ ಸಿದ್ದಗಂಗಾ ಮಠಕ್ಕೆ ನಟ ಡಾಲಿ ಧನಂಜಯ್ ಭೇಟಿ ನೀಡಿದ್ದಾರೆ. ವಿವಾಹ ಸಮಾರಂಭಕ್ಕೆ ಆಗಮಿಸುವಂತೆ ಸಿದ್ದಗಂಗಾ ಶ್ರೀಗಳಿಗೆ ಡಾಲಿ ಆಹ್ವಾನ ನೀಡಿದ್ದಾರೆ.ಮಠಕ್ಕೆ ಭೇಟಿ ನೀಡಿದ ನಟ, ಮೊದಲು ಶಿವಕುಮಾರ ಶ್ರೀಗಳ ಗದ್ದಿಗೆಗೆ ಪೂಜೆ ಸಲ್ಲಿಸಿದರು. ಲಗ್ನ ಪತ್ರಿಕೆ ಪೂಜೆ ಮಾಡಿಸಿದರು. ಬಳಿಕ ಸಿದ್ದಗಂಗಾ ಮಠಾಧ್ಯಕ್ಷ ಸಿದ್ದಲಿಂಗ ಸ್ವಾಮಿಗಳ ಆಶೀರ್ವಾದ ಪಡೆದರು. ಈ ವೇಳೆ ಸ್ನೇಹಿತರು ಜೊತೆಗಿದ್ದರು. ಇದೇ ಫೆ.16ಕ್ಕೆ ವೈದ್ಯೆ, ಧನ್ಯತಾ ಅವರೊಂದಿಗೆ ಸ್ಯಾಂಡಲ್‌ವುಡ್ ನಟ ಡಾಲಿ ಧನಂಜಯ್ ಹಸೆಮಣೆ ಏರಲಿದ್ದಾರೆ.

ಕಳೆದ ವರ್ಷ ನ.17 ರಂದು ವೈದ್ಯೆಯೊಂದಿಗೆ ಸರಳವಾಗಿ ನಟ ನಿಶ್ಚಿತಾರ್ಥ ಮಾಡಿಕೊಂಡಿದ್ದರು. ಮಾಜಿ ಪಿಎಂ ಹೆಚ್.ಡಿ.ದೇವೇಗೌಡ, ಮಾಜಿ ಸಿಎಂ ಯಡಿಯೂರಪ್ಪ, ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ.ಶಿವಕುಮಾರ್ ಸೇರಿದಂತೆ ಅನೇಕ ಗಣ್ಯರಿಗೆ ನಟ ವಿವಾಹಕ್ಕೆ ಆಹ್ವಾನ ನೀಡಿದ್ದಾರೆ. ಮೈಸೂರಿನಲ್ಲಿ ಮದುವೆ ಸಮಾರಂಭ ನಡೆಯಲಿದೆ.

# ಮೀರ್ ಖಾನ್ ಪುತ್ರನ ಜೊತೆ ಖುಷಿ ಕಪೂರ್ ಡ್ಯುಯೆಟ್



ಬಾಲಿವುಡ್ ನಟ ಆಮೀರ್ ಖಾನ್ ಪುತ್ರ ಜುನೈದ್‌ಮತ್ತು ಶ್ರೀದೇವಿ ಪುತ್ರಿ ಖುಷಿ ಕಪೂರ್ ಡ್ಯುಯೆಟ್ ಮೂಡ್‌ಗೆ ಜಾರಿದ್ದಾರೆ. ಹೊಸ ಸಿನಿಮಾದಲ್ಲಿ ಜೋಡಿಯಾಗಿ ನಟಿಸಿದ್ದು, ನೋಡುಗರಿಗೆ ಪ್ರೇಮ ಪಾಠ ಮಾಡಿದ್ದಾರೆ. 'ಲವ್ಯಾಪಾ' ಸಿನಿಮಾದ ಲವ್ಲಿ ಸಾಂಗ್‌ವೊಂದು ರಿಲೀಸ್ ಆಗಿದೆ. ಈ ಸಿನಿಮಾದ ಮೂಲಕ ಜುನೈದ್ ಖಾನ್ ಮತ್ತು ಖುಷಿ ಕಪೂರ್ ಬಣ್ಣದ ಬದುಕಿಗೆ ಪಾದಾರ್ಪಣೆ ಮಾಡುತ್ತಿದ್ದಾರೆ. 'ಲವ್ಯಾಪಾ ಹೋ ಗಯಾ' ಎಂಬ ರೊಮ್ಯಾಂಟಿಕ್ ಸಾಂಗ್ ರಿಲೀಸ್ ಆಗಿದ್ದು, ಪ್ರೇಕ್ಷಕರ ಮೆಚ್ಚುಗೆ ಗಳಿಸಿದೆ. ಕಲರ್‌ಫುಲ್ ಸೆಟ್‌ನಲ್ಲಿ ಜುನೈದ್ ಮತ್ತು ಖುಷಿ ಮಸ್ತ್ ಆಗಿ ಹೆಜ್ಜೆ ಹಾಕಿದ್ದಾರೆ. ಇನ್ನೂ ಈ ಸಿನಿಮಾವನ್ನು ಅದ್ವೈತ್ ಚಂದನ್ ನಿರ್ದೇಶನ ಮಾಡಿದ್ದಾರೆ. ಈ ವರ್ಷ ಫೆ.7ರಂದು ರಿಲೀಸ್ ಆಗಲಿದೆ. ಹಾಡಿನ ಮೂಲಕ ಗಮನ ಸೆಳೆದಿರುವ ಈ ಜೋಡಿ, ಸಿನಿಮಾದಿಂದ ಕಮಾಲ್ ಮಾಡಿ ಗೆದ್ದು ಬೀಗ್ತಾರಾ ಎಂದು ಕಾದುನೋಡಬೇಕಿದೆ.

ಬಲರಾಮನ ಅಡ್ಡಾಗೆ ಎಂಟ್ರಿ



# ಕನ್ನಡದ ಹೊಸ ಸಿನಿಮಾದಲ್ಲಿ 'ಜೇಮ್ಸ್' ನಟಿ ಪ್ರಿಯಾ ಆನಂದ್

ಸೌತ್ ಬ್ಯೂಟಿ ಪ್ರಿಯಾ ಆನಂದ್ ಕನ್ನಡದ ಸಿನಿಮಾಗಳಲ್ಲಿ ನಟಿಸುತ್ತಾ ಕನ್ನಡವರಾಗಿ ಪ್ರೇಕ್ಷಕರ ಮನಗೆದ್ದಿದ್ದಾರೆ. ಇದೀಗ ಕನ್ನಡ ಸಿನಿ ಪ್ರೇಕ್ಷಕರಿಗೆ ಅವರು ಗುಡ್ ನ್ಯೂಸ್ ಕೊಟ್ಟಿದ್ದಾರೆ. ಸ್ಯಾಂಡಲ್‌ವುಡ್‌ನಲ್ಲಿ ನಟಿಸಲು ಮತ್ತೆ 'ಜೇಮ್ಸ್' ನಟಿ ಪ್ರಿಯಾ ಗ್ರೀನ್ ಸಿಗ್ನಲ್ ಕೊಟ್ಟಿದ್ದಾರೆ. ರಾಜಕುಮಾರ, ಜೇಮ್ಸ್, ಆರೆಂಜ್, ಕರಟಕ ದಮನಕ ಸಿನಿಮಾಗಳಲ್ಲಿ ನಟಿಸಿ ಪ್ರಿಯಾ ಸೈ ಎನಿಸಿಕೊಂಡಿದ್ದಾರೆ. ಇದೀಗ ವಿನೋದ್ ಪ್ರಭಾಕರ್‌ಗೆ ನಾಯಕಿಯಾಗಿ ಬಲರಾಮನ ಅಡ್ಡಾಗೆ ಅವರು ಎಂಟ್ರಿ ಕೊಟ್ಟಿದ್ದಾರೆ. ಪವರ್‌ಫುಲ್ ಪಾತ್ರದಲ್ಲಿ ಅವರು ಕಾಣಿಸಿಕೊಳ್ಳಲಿದ್ದಾರೆ. ವಿನೋದ್ ಪ್ರಭಾಕರ್ ನಟನೆಯ 25ನೇ ಚಿತ್ರಕ್ಕೆ 'ಬಲರಾಮನ ದಿನಗಳು' ಎಂದು ಟೈಟಲ್ ಫಿಕ್ಸ್ ಆಗಿದೆ. ಈ ಚಿತ್ರದಲ್ಲಿ ಪ್ರಿಯಾ ನಾಯಕಿಯಾಗಿದ್ದು, ಈಗಾಗಲೇ ಚಿತ್ರೀಕರಣ ಶುರುವಾಗಿದೆ. ಈ ಕುರಿತು ಚಿತ್ರತಂಡ ಕೂಡ ಅಧಿಕೃತವಾಗಿ ತಿಳಿಸಿದೆ. 80ರ ಕಾಲಘಟ್ಟದ ಭೂಗತಲೋಕದ ಹಿನ್ನೆಲೆಯುಳ್ಳ ವಿಭಿನ್ನ ಕಥೆ ಇದಾಗಿದೆ. ಇದಕ್ಕೆ 'ಆ ದಿನಗಳು' ನಿರ್ದೇಶಕ ಕೆ.ಎಂ ಚೈತನ್ಯ ನಿರ್ದೇಶನ ಮಾಡಲಿದ್ದಾರೆ. ಅಂದಹಾಗೆ, 'ರಾಜಕುಮಾರ' ಮತ್ತು 'ಜೇಮ್ಸ್' ಈ ಎರಡು ಸಿನಿಮಾಗಳಲ್ಲಿ ಪುನೀತ್ ರಾಜ್‌ಕುಮಾರ್‌ಗೆ ಪ್ರಿಯಾ ನಾಯಕಿಯಾಗಿದ್ರು. ಈ ಹಿಂದೆ ಹಲವು ಸಂದರ್ಶನಗಳಲ್ಲಿ ನನ್ನ ನೆಚ್ಚಿನ ನಟ ಅಪ್ಪು ಎಂದು ನಟಿ ಹೇಳಿದ್ದರು. ಅಪ್ಪು ಮೇಲಿನ ಅವರು ತೋರೋ ಗೌರವ ಮತ್ತು ಕನ್ನಡ ಸಿನಿಮಾ ಮೇಲಿನ ಅವರ ಪ್ರೀತಿಗೆ ಫ್ಯಾನ್ಸ್ ಮೆಚ್ಚುಗೆ ವ್ಯಕ್ತಪಡಿಸಿದ್ದರು.

# ಧುರಂಧರ ಚಿತ್ರದ ರಣವೀರ್ ಸಿಂಗ್ ಲುಕ್ ಲೀಕ್

ರಣವೀರ್ ಸಿಂಗ್ ಅವರ ಹೊಸ ಲುಕ್ ಇತ್ತೀಚೆಗೆ ಆನ್‌ಲೈನ್‌ನಲ್ಲಿ ಲೀಕ್ ಆಗಿದ್ದು, ಮನರಂಜನಾ ಜಗತ್ತಿನಲ್ಲಿ ತೀವ್ರ ಕುತೂಹಲ ಮೂಡಿಸಿದೆ. ಉದ್ದನೆಯ ಕೂದಲು, ದಪ್ಪ ಗಡ್ಡ ಮತ್ತು ಪೇಟವನ್ನು ಧರಿಸಿರುವ ರಣವೀರ್ ಅವರನ್ನು ನೋಡಿದ ಅಭಿಮಾನಿಗಳು ತಕ್ಷಣವೇ 2018ರ ಪದ್ಮಾವತ್ ಚಲನಚಿತ್ರದಲ್ಲಿ ಅವರು ನಿರ್ವಹಿಸಿದ ಅಲಾವುದ್ದೀನ್ ಖಿಲ್ಜಿ ಪಾತ್ರವನ್ನು ನೆನಪಿಸಿಕೊಳ್ಳಲು ಪ್ರಾರಂಭಿಸಿದ್ದಾರೆ .ಸೋರಿಕೆಯಾದ ಚಿತ್ರಗಳಲ್ಲಿ, ಆದಿತ್ಯ ಧರ್ ನಿರ್ದೇಶನದ ಚಿತ್ರದ ಸೆಟ್‌ಗಳಲ್ಲಿ ರಣವೀರ್ ಸಾಹಸ ದೃಶ್ಯಗಳಲ್ಲಿ ಪಾಲ್ಗೊಂಡಿದ್ದಾರೆ. ಈ ಚಿತ್ರಗಳು ಆದಿತ್ಯ ಧರ್ ಅವರ ಧುರಂಧರ ಚಿತ್ರಕ್ಕೆ ಸಂಬಂಧಿಸಿವೆ ಎನ್ನಲಾಗಿದೆ. ಚಿತ್ರದ ಸೆಟ್‌ಗಳಿಂದ ಸೋರಿಕೆಯಾದ ಚಿತ್ರಗಳು ಪ್ರೇಕ್ಷಕರನ್ನು ರೋಮಾಂಚನಗೊಳಿಸಿವೆ.



ರಣವೀರ್ ಸಿಂಗ್ ಉದ್ದನೆಯ ಕುರ್ತಾವನ್ನು ಧರಿಸಿ ತನ್ನ ಗ್ಯಾಂಗ್ ನೊಂದಿಗೆ ನಿಂತಿದ್ದಾರೆ. ರಣವೀರ್ ಅವರ ಲುಕ್ ನೋಡಿದ ಅಭಿಮಾನಿಗಳು ತಮ್ಮ ಪ್ರತಿಕ್ರಿಯೆಗಳನ್ನು ನೀಡುತ್ತಿದ್ದಾರೆ. ರಣವೀರ್ ಅವರ ಖಿಲ್ಜಿ ಲುಕ್ ಹಿಂತಿರುಗಿದೆ, ಅವರು ಅದ್ಭುತವಾಗಿ ಕಾಣುತ್ತಿದ್ದಾರೆ ಅವರ ಶಕ್ತಿಯನ್ನು ಮತ್ತೆ ನೋಡಲು ಉತ್ಸುಕವಾಗಿದೆ ಎಂದಿದ್ದಾರೆ. ಸಂಜಯ್ ದತ್, ಆರ್ ಮಾಧವನ್, ಅಕ್ಷಯ್ ಖನ್ನಾ ಮತ್ತು ಅರ್ಜುನ್ ರಾಂಪಾಲ್ ಅವರಂತಹ ದೊಡ್ಡ ತಾರೆಯರನ್ನು ಒಳಗೊಂಡಿರುವ ಚಿತ್ರದ ಪಾತ್ರವರ್ಗದ ಕಪ್ಪು-ಬಿಳುಪು ಚಿತ್ರವನ್ನು ರಣವೀರ್ ತಮ್ಮ ಜಾಲತಾಣದಲ್ಲಿ ಪೋಸ್ಟ್ ಮಾಡಿದ್ದಾರೆ. ಇದು ನನ್ನ ಅಭಿಮಾನಿಗಳಿಗೆ ಒಂದು ದೊಡ್ಡ ಮೋಷನ್ ಪಿಕ್ಚರ್ ಸಾಹಸವಾಗಿದೆ, ಉತ್ಸಾಹ ಮತ್ತು ಶುದ್ಧ ಮನೋರಂಜನೆ ತುಂಬಿದೆ ಎಂದು ರಣವೀರ್ ಪೋಸ್ಟ್‌ನಲ್ಲಿ ಬರೆದಿದ್ದಾರೆ. ವರದಿಗಳ ಪ್ರಕಾರ, ಅವರು ಈ ಚಿತ್ರದಲ್ಲಿ ರಾ ಏಜೆಂಟ್ ಪಾತ್ರವನ್ನು ನಿರ್ವಹಿಸುತ್ತಿದ್ದಾರೆ ಮತ್ತು ಚಿತ್ರವು ಸತ್ಯ ಘಟನೆಗಳನ್ನು ಆಧರಿಸಿದೆ. ಇದರೊಂದಿಗೆ, ಅಕ್ಷಯ್ ಖನ್ನಾ ಅವರ ಲುಕ್ ಕೂಡ ಸೋರಿಕೆಯಾಗಿದೆ, ಇದರಲ್ಲಿ ಅವರು ಜೀಪಿನೊಳಗೆ ಕುಳಿತುಕೊಂಡಿದ್ದಾರೆ ಮತ್ತು ಅವರ ಹಣೆಯ ಮೇಲೆ ರಕ್ತದ ಗುರುತುಗಳಿವೆ. ಚಿತ್ರದ ಎರಡನೇ ಶೆಡ್ಯೂಲ್ ಪ್ರಾರಂಭವಾಗುವ ಮೊದಲು, ರಣವೀರ್ ಸಿಂಗ್ ಆದಿತ್ಯ ಧರ್ ಜೊತೆಗೆ ಅಮೃತಸರದ ಗೋಲ್ಡನ್ ಟೆಂಪಲ್‌ಗೆ ಪೂಜೆ ಸಲ್ಲಿಸಿದರು. ರಣವೀರ್ ಜೊತೆಗೆ ಸಂಜಯ್ ದತ್, ಅಕ್ಷಯ್ ಖನ್ನಾ, ಆರ್ ಮಾಧವನ್ ಮತ್ತು ಅರ್ಜುನ್ ರಾಂಪಾಲ್ ಅವರಂತಹ ದೊಡ್ಡ ತಾರೆಯರು ಧುರಂಧರ ಚಿತ್ರದಲ್ಲಿ ಪ್ರಮುಖ ಪಾತ್ರಗಳಲ್ಲಿ ಕಾಣಿಸಿಕೊಳ್ಳಲಿದ್ದಾರೆ.

# ಗಂಭೀರ್‌ಗೂ ತಂಡದಿಂದ ಗೇಟ್‌ಪಾಸ್; ಲಕ್ಷ್ಮಣ್‌ಗೆ ಸಾರಥ್ಯ



ಆಸ್ಟ್ರೇಲಿಯಾ ಪ್ರವಾಸದಲ್ಲಿ ಭಾರತ ತಂಡದ ಕಳಪೆ ಪ್ರದರ್ಶನದಿಂದಾಗಿ ರೋಹಿತ್ ಶರ್ಮಾ ಅವರನ್ನು ತಂಡದಿಂದ ಕೈಬಿಡಲಾಗಿದೆ. ಇದೀಗ ಮುಖ್ಯ ಕೋಚ್ ಗೌತಮ್ ಗಂಭೀರ್ ಅವರನ್ನು ತೆಗೆದು ವಿವಿಎಸ್ ಲಕ್ಷ್ಮಣ್ ಅವರನ್ನು ನೇಮಿಸುವ ಸಾಧ್ಯತೆಗಳಿವೆ. ಗಂಭೀರ್ ಅವರ ಕೋಚಿಂಗ್ ಶೈಲಿ ಮತ್ತು ತಂಡದ ಪ್ರದರ್ಶನದಲ್ಲಿನ ಕುಸಿತ ಇದಕ್ಕೆ ಕಾರಣ ಎನ್ನಲಾಗುತ್ತಿದೆ. ಚಾಂಪಿಯನ್ಸ್ ಟ್ರೋಫಿ ನಂತರ ಈ ಬದಲಾವಣೆ ಸಂಭವಿಸುವ ಸಾಧ್ಯತೆ ಇದೆ. ಆಸ್ಟ್ರೇಲಿಯಾ ಪ್ರವಾಸದಲ್ಲಿ ಕಳಪೆ ಪ್ರದರ್ಶನದಿಂದ ಹೈರಾಣಾಗಿರುವ ಟೀಂ ಇಂಡಿಯಾದಲ್ಲಿ ಅಲ್ಲೋಲ ಕಲ್ಲೋಲ ಸೃಷ್ಟಿಯಾಗಿದೆ. ತಂಡದ ನಾಯಕ ರೋಹಿತ್ ಶರ್ಮಾರನ್ನೇ ತಂಡದಿಂದ ಕೈಬಿಡಲಾಗಿದೆ. ಇದೀಗ ತಂಡದ ಮುಖ್ಯ ಕೋಚ್ ಗೌತಮ್ ಗಂಭೀರ್‌ಗೂ ಮುಖ್ಯ ಕೋಚ್ ಹುದ್ದೆಯಿಂದ ಗೇಟ್ ಪಾಸ್ ನೀಡುವ ಸಾಧ್ಯತೆಗಳಿವೆ ಎಂದು ವರದಿಯಾಗಿದೆ. ವರದಿಗಳ ಪ್ರಕಾರ, ಮುಂದಿನ ತಿಂಗಳು ನಡೆಯಲಿರುವ ಚಾಂಪಿಯನ್ಸ್ ಟ್ರೋಫಿ ನಂತರ ಗೌತಮ್ ಗಂಭೀರ್ ಅವರನ್ನು ಮುಖ್ಯ ಕೋಚ್ ಹುದ್ದೆಯಿಂದ ತೆಗೆದುಹಾಕಬಹುದು. ಗೌತಮ್ ಗಂಭೀರ್ ಬದಲಿಗೆ ವಿವಿಎಸ್ ಲಕ್ಷ್ಮಣ್ ತಂಡದ ಜವಬ್ದಾರಿಯನ್ನು ವಹಿಸಿಕೊಳ್ಳಲಿದ್ದಾರೆ ಎಂದು ಹೇಳಲಾಗುತ್ತಿದೆ. ಮುಂಬರುವ ಇಂಗ್ಲೆಂಡ್ ಪ್ರವಾಸದಲ್ಲಿ ವಿವಿಎಸ್ ಲಕ್ಷ್ಮಣ್ ತಂಡದ ಮುಖ್ಯ ಕೋಚ್ ಆಗಲಿದ್ದು, ಗೌತಮ್ ಗಂಭೀರ್ ಅವರನ್ನು ಟೆಸ್ಟ್ ತಂಡದ ಕೋಚಿಂಗ್‌ನಿಂದ ತೆಗೆದುಹಾಕುವ ಚಿಂತನೆಯಲ್ಲಿ ಬಿಸಿಸಿಐ ಇದೇ ಎಂದು ಹೇಳಲಾಗುತ್ತಿದೆ. ಅಂದರೆ ಗಂಭೀರ್ ಅವರನ್ನು ಸೀಮಿತ ಓವರ್‌ಗಳ ಸ್ವರೂಪಕ್ಕೆ ಮುಖ್ಯ ಕೋಚ್ ಆಗಿ ಮುಂದುವರೆಸಲು ಬಿಸಿಸಿಐ ತೀರ್ಮಾನಿಸಿದೆ ಎಂದು ಹೇಳಲಾಗುತ್ತಿದೆ.

**ವಿವಾದದಲ್ಲಿ ಗೌತಮ್ ಗಂಭೀರ್**

ಗೌತಮ್ ಗಂಭೀರ್ ಮುಖ್ಯ ಕೋಚ್ ಆಗಿ ತಂಡಕ್ಕೆ ಸೇರಿದಾಗಿನಿಂದ ಒಂದಿಲ್ಲೊಂದು ವಿವಾದಗಳಲ್ಲಿ ಸಿಲುಕಿದ್ದಾರೆ. ಅವರ ತರಬೇತಿಯಲ್ಲಿ ತಂಡದ ಪ್ರದರ್ಶನ ಸುಧಾರಿಸುವ ಬದಲು ಸಾಕಷ್ಟು ಹದಗೆಟ್ಟಿದೆ. ಮೊದಲಿಗೆ, ಅವರ ಕೋಚಿಂಗ್‌ನಲ್ಲಿ ತಂಡವು ಶ್ರೀಲಂಕಾ ವಿರುದ್ಧ ಏಕದಿನ ಸರಣಿಯನ್ನು ಕಳೆದುಕೊಂಡಿತು. ಆ ಬಳಿಕ ನ್ಯೂಜಿಲೆಂಡ್ ವಿರುದ್ಧ ತವರಿನಲ್ಲಿ 0-3 ಅಂತರದ ಸೋಲು ಕಂಡಿತ್ತು. ಇದೀಗ ಬಾರ್ಡರ್ ಗವಾಸ್ಕರ್ ಟ್ರೋಫಿ ಕೂಡ ಕೈ ತಪ್ಪಲಿದೆ. ಇಷ್ಟೇ ಅಲ್ಲ, ಗಂಭೀರ್ ಮತ್ತು ರೋಹಿತ್ ಶರ್ಮಾ ನಡುವೆ ವೈಮನಸು ಮೂಡಿದೆ ಎಂಬ ವರದಿಗಳಿವೆ. ಇದಲ್ಲದೆ ಅನೇಕ ಆಟಗಾರರು ಗೌತಮ್ ಗಂಭೀರ್ ಅವರ ಕೋಚಿಂಗ್ ಶೈಲಿಯನ್ನು ಇಷ್ಟಪಡುತ್ತಿಲ್ಲ ಎಂತಲೂ ಹೇಳಲಾಗುತ್ತಿದೆ. ಇದೆಲ್ಲದರ ನಡುವೆ ರೋಹಿತ್ ಶರ್ಮಾ ಅವರನ್ನೂ ಟೆಸ್ಟ್ ತಂಡದಿಂದ ಕೈಬಿಡಲಾಗಿದೆ. ರೋಹಿತ್ ನಾಯಕರಾಗಿದ್ದರೂ ಸಿಡ್ನಿ ಟೆಸ್ಟ್‌ನಲ್ಲಿ ಆಡುವ ಹನ್ನೊಂದರ ಬಳಗದಲ್ಲಿ ಆಯ್ಕೆಯಾಗಿಲ್ಲ. ರೋಹಿತ್ ಅವರೇ ವಿಶ್ರಾಂತಿ ತೆಗೆದುಕೊಂಡಿದ್ದಾರೆ ಎಂದು ಹೇಳಲಾಗುತ್ತಿದೆಯಾದರೂ, ಇದು ಎಷ್ಟು ಸತ್ಯ ಎಂಬುದು ಕೂಡ ದೊಡ್ಡ ಪ್ರಶ್ನೆಯಾಗಿದೆ.

**ವಿವಿಎಸ್ ಲಕ್ಷ್ಮಣ್ ಕೋಚ್**

ಆಸ್ಟ್ರೇಲಿಯಾ ಪ್ರವಾಸದ ನಂತರ ಟೀಂ ಇಂಡಿಯಾ ಈಗ ಜೂನ್‌ನಲ್ಲಿ ಟೆಸ್ಟ್ ಸರಣಿಯನ್ನು ಆಡಬೇಕಾಗಿದೆ. ಭಾರತ ತಂಡ ಐದು ಟೆಸ್ಟ್‌ಗಳ ಸರಣಿಗಾಗಿ ಇಂಗ್ಲೆಂಡ್‌ಗೆ ತೆರಳಲಿದೆ. ಇದೇ ಸರಣಿಯಿಂದ ಟೀಂ ಇಂಡಿಯಾ ನಾಲ್ಕನೇ ಆವೃತ್ತಿಯ ವಿಶ್ವ ಟೆಸ್ಟ್ ಚಾಂಪಿಯನ್‌ಶಿಪ್ ಅಭಿಯಾನವನ್ನು ಆರಂಭಿಸಲಿದೆ. ಇಂತಹ ಪರಿಸ್ಥಿತಿಯಲ್ಲಿ ಲಕ್ಷ್ಮಣ್ ಅವರಿಗೆ ಟೆಸ್ಟ್ ತಂಡದ ಕೋಚಿಂಗ್ ನೀಡುವುದು ಖಚಿತ ಎಂದು ಪರಿಗಣಿಸಲಾಗಿದೆ. ಲಕ್ಷ್ಮಣ್ ಪ್ರಸ್ತುತ ರಾಷ್ಟ್ರೀಯ ಕ್ರಿಕೆಟ್ ಅಕಾಡೆಮಿಯ ಮುಖ್ಯಸ್ಥರಾಗಿದ್ದಾರೆ. ಇದರ ಜೊತೆಗೆ ಅವರು ಆಗಾಗ್ಗೆ ಟೀಂ ಇಂಡಿಯಾದ ಮುಖ್ಯ ಕೋಚ್ ಆಗಿಯೂ ಕೆಲಸ ಮಾಡುತ್ತಿದ್ದಾರೆ. ಹೀಗಾಗಿ ಲಕ್ಷ್ಮಣ್ ಶೀಘ್ರದಲ್ಲೇ ಮುಖ್ಯ ಕೋಚ್ ಹುದ್ದೇಗರಬಹುದು ಎಂದು ಹೇಳಲಾಗುತ್ತಿದೆ.

# ಆರಂಭಿಕನಾಗಿ ರಾಹುಲ್ ಕೂಡ ವಿಫಲ

ಟೀಂ ಇಂಡಿಯಾದ ನಿಯಮಿತ ನಾಯಕ ರೋಹಿತ್ ಶರ್ಮಾ ಸಿಡ್ನಿಯಲ್ಲಿ ನಡೆಯುತ್ತಿರುವ ಬಾರ್ಡರ್-ಗವಾಸ್ಕರ್ ಟ್ರೋಫಿಯ ಐದನೇ ಟೆಸ್ಟ್ ಪಂದ್ಯದಲ್ಲಿ ಆಡುತ್ತಿಲ್ಲ.

ಪಂದ್ಯದ ಆರಂಭಕ್ಕೆ ಒಂದು ದಿನ ಮೊದಲೇ ಪ್ಲೇಯಿಂಗ್ ಇಲೆವೆನ್ ಬಗ್ಗೆ ಮಾತನಾಡಿದ್ದ ಮುಖ್ಯ ಕೋಚ್ ಗೌತಮ್ ಗಂಭೀರ್, ರೋಹಿತ್ ಆಡುವ ಬಗ್ಗೆ ಅಡ್ಡಗೋಡೆಯ ಮೇಲೆ ದೀಪವಿಟ್ಟಿದ್ದರು. ಇದೀಗ ಐದನೇ ಟೆಸ್ಟ್‌ನಿಂದ ರೋಹಿತ್‌ನ್ನು ಹೊರಗಿಟ್ಟಿರುವುದು ಖಚಿತವಾಗಿದೆ. ವಾಸ್ತವವಾಗಿ ಟೆಸ್ಟ್ ಮಾದರಿಯಲ್ಲಿ ಹಲವು ದಿನಗಳಿಂದ ರನ್ ಬರ ಎದುರಿಸುತ್ತಿರುವ ರೋಹಿತ್, ಆಸ್ಟ್ರೇಲಿಯಾ ಪ್ರವಾದಲ್ಲೂ ಫಾರ್ಮ್ ಕಂಡುಕೊಳ್ಳುವಲ್ಲಿ ವಿಫಲರಾಗಿದ್ದಾರೆ. ಹೀಗಾಗಿ ಅವರನ್ನು ತಂಡದಿಂದ ಕೈಬಿಡಬೇಕು ಎಂಬುದು ಹಲವರ ಅಭಿಪ್ರಾಯವಾಗಿತ್ತು.

ಅದರಂತೆ ಇದೀಗ ಅವರನ್ನು ತಂಡದಿಂದ ಕೈಬಿಟ್ಟು ಬೇರೆಯವರಿಗೆ ಅವಕಾಶ ಕೊಡಲಾಗಿದೆ. ಆದರೆ ರೋಹಿತ್ ಬದಲಿಯಾಗಿ ತಂಡ ಸೇರಿಕೊಂಡಿರುವ ಶುಭ್‌ಮನ್ ಗಿಲ್ ಕೂಡ ಐದನೇ ಟೆಸ್ಟ್ ಪಂದ್ಯದಲ್ಲಿ ಯಾವುದೇ ಪ್ರಭಾವ ಬೀರಲು ಸಾಧ್ಯವಾಗಿಲ್ಲ. ಇತ್ತ ರೋಹಿತ್ ಶರ್ಮಾ ಅನುಪಸ್ಥಿತಿಯಲ್ಲಿ ಮತ್ತೆ ಆರಂಭಿಕನಾಗಿ ಕಣಕ್ಕಿಳಿದಿದ್ದ ಕೆಎಲ್ ರಾಹುಲ್‌ಗೂ ಕೂಡ ಒಂದಂಕಿ ದಾಟಲು ಸಾಧ್ಯವಾಗಲಿಲ್ಲ. ಇದರರ್ಥ ರೋಹಿತ್‌ರನ್ನು ಹೊರಗಿಟ್ಟು ಬೇರೆಯವರನ್ನು ಆಡಿಸಿದರೂ ಯಾವುದೇ ವ್ಯತ್ಯಾಸವಾಗಿಲ್ಲ. ಐದನೇ ಟೆಸ್ಟ್‌ನಿಂದ ರೋಹಿತ್ ಅವರನ್ನು ಹೊರಗಿಟ್ಟಿದ್ದರಿಂದ ಕೆಎಲ್ ರಾಹುಲ್‌ಗೆ ಮತ್ತೆ ಆರಂಭಿಕ ಜವಬ್ದಾರಿಯನ್ನು ನೀಡಲಾಯಿತು.

ಆದರೆ ಈ ಹಿಂದೆ ಆರಂಭಿಕನಾಗಿ ಯಶಸ್ವಿಯಾಗಿದ್ದ ರಾಹುಲ್, ಈ ಪಂದ್ಯದಲ್ಲಿ ಕೇವಲ 4 ರನ್‌ಗಳಿಗೆ ಸುಸ್ತಾದರು. ಅಂದರೆ ರೋಹಿತ್ ಪ್ರದರ್ಶನವನ್ನೇ ಇಲ್ಲಿ ರಾಹುಲ್ ಕೂಡ ಮತ್ತೊಮ್ಮೆ ಪುನರಾವರ್ತಿಸದರು ಎಂದರೆ ತಪ್ಪಾಗಲಾರದು.

ಹಾಗೆಯೇ ರೋಹಿತ್ ಅವರನ್ನು ತಂಡದಿಂದ ಕೈಬಿಟ್ಟ ಕಾರಣ ಕೊನೆಯ ಟೆಸ್ಟ್‌ನ ಆಡುವ ಹನ್ನೊಂದರ ಬಳಗಕ್ಕೆ ಆಯ್ಕೆಯಾಗಿದ್ದ ಶುಭ್‌ಮನ್ ಗಿಲ್ ಕೂಡ ಬಿಗ್ ಇನ್ನಿಂಗ್ಸ್ ಆಡುವಲ್ಲಿ ವಿಫಲರಾಗಿದ್ದಾರೆ. ಮೂರನೇ ಕ್ರಮಾಂಕದಲ್ಲಿ ಬ್ಯಾಟಿಂಗ್‌ಗೆ ಬಂದ ಗಿಲ್ ತಮ್ಮ ಇನ್ನಿಂಗ್ಸ್‌ನಲ್ಲಿ 64 ಎಸೆತಗಳನ್ನು ಎದುರಿಸಿ 20 ರನ್ ಗಳಿಸಲಷ್ಟೇ ಶಕ್ತರಾದರು. ಅಂದರೆ ರೋಹಿತ್ ಬದಲಿಯಾಗಿ ಬಂದ ಗಿಲ್ ಕೂಡ ತಂಡದ ನಂಬಿಕೆಯನ್ನು ಉಳಿಸಿಕೊಳ್ಳುವಲ್ಲಿ ಯಶಸ್ವಿಯಾಗಲಿಲ್ಲ.

# 185 ರನ್‌ಗಳಿಗೆ ಮೊದಲ ಇನ್ನಿಂಗ್ಸ್ ಮುಗಿಸಿದ ಭಾರತ



ಸಿಡ್ನಿ ಟೆಸ್ಟ್‌ನ ಮೊದಲ ಇನ್ನಿಂಗ್ಸ್‌ನಲ್ಲಿ ಭಾರತ ತಂಡ 185 ರನ್‌ಗಳಿಗೆ ಆಲೌಟ್ ಆಗಿದೆ. 17 ಎಸೆತಗಳಲ್ಲಿ 22 ರನ್ ಗಳಿಸಿ ಔಟಾದ ಜಸ್ಪ್ರೀತ್ ಬುಮ್ರಾ ರೂಪದಲ್ಲಿ ಭಾರತದ ಕೊನೆಯ ವಿಕೆಟ್ ಪತನವಾಯಿತು. ಮೊದಲ ಇನ್ನಿಂಗ್ಸ್‌ನಲ್ಲಿ ಭಾರತದ ಯಾವುದೇ ಬ್ಯಾಟ್ಸ್‌ಮನ್ ಅರ್ಧಶತಕ ಗಳಿಸಲಿಲ್ಲ ಎಂಬುದು ಕಳಪೆ ಬ್ಯಾಟಿಂಗ್‌ಗೆ ಹಿಡಿದ ಕೈಗನ್ನಡಿಯಾಗಿದೆ. ಸಿಡ್ನಿಯಲ್ಲಿ ನಡೆಯುತ್ತಿರುವ ಆಸ್ಟ್ರೇಲಿಯಾ ವಿರುದ್ಧದ ಕೊನೆಯ ಟೆಸ್ಟ್ ಪಂದ್ಯದಲ್ಲಿ ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಆರಂಭಿಸಿದ ಟೀಂ ಇಂಡಿಯಾ ಮೊದಲ ದಿನದಾಟದಲ್ಲೇ ಕೇವಲ 185 ರನ್‌ಗಳಿಗೆ ಆಲೌಟ್ ಆಗುವುದರೊಂದಿಗೆ ತನ್ನ ಮೊದಲ ಇನ್ನಿಂಗ್ಸ್ ಮುಗಿಸಿದೆ. ಈ ಇನ್ನಿಂಗ್ಸ್‌ನಲ್ಲಿ ಭಾರತ ತಂಡಕ್ಕೆ ಕೇವಲ 72.2 ಓವರ್‌ಗಳಷ್ಟೇ ಬ್ಯಾಟಿಂಗ್ ಮಾಡಲು ಸಾಧ್ಯವಾಯಿತು. ತಂಡದ ಪರ ರಿಷಬ್ ಪಂತ್ ಗರಿಷ್ಠ 40 ರನ್ ಗಳಿಸಿದರೆ, ರವೀಂದ್ರ ಜಡೇಜಾ 26 ರನ್, ನಾಯಕ ಜಸ್ಪ್ರೀತ್ ಬುಮ್ರಾ 22 ರನ್, ಶುಭ್‌ಮನ್ ಗಿಲ್ 20 ರನ್, ವಿರಾಟ್ ಕೊಹ್ಲಿ 17 ರನ್ ಮತ್ತು ಯಶಸ್ವಿ ಜೈಸ್ವಾಲ್ 10 ರನ್‌ಗಳ ಕಾಣಿಕೆ ನೀಡಿದರು. ಇವರನ್ನು ಬಿಟ್ಟರೆ ಇತರ ಬ್ಯಾಟ್ಸ್‌ಮನ್‌ಗಳಿಗೆ ಎರಡಂಕಿ ಮುಟ್ಟಲು ಸಾಧ್ಯವಾಗಲಿಲ್ಲ. ಕೆಎಲ್ ರಾಹುಲ್ ನಾಲ್ಕು ರನ್, ಪ್ರಸಿದ್ಧ್ ಕೃಷ್ಣ ಮೂರು ರನ್ ಮತ್ತು ಮೊಹಮ್ಮದ್ ಸಿರಾಜ್ ಮೂರು ರನ್ ಕಲೆಹಾಕಿದರೆ, ನಿತೀಶ್ ರೆಡ್ಡಿಗೆ ಖಾತೆ ತೆರೆಯಲು ಸಾಧ್ಯವಾಗಲಿಲ್ಲ. ಆಸ್ಟ್ರೇಲಿಯಾ ಪರ ಸ್ಕಾಟ್ ಬೋಲ್ಯಾಂಡ್ ನಾಲ್ಕು ವಿಕೆಟ್ ಪಡೆದರೆ, ಮಿಚೆಲ್ ಸ್ಟಾರ್ಕ್ ಮೂರು ವಿಕೆಟ್ ಪಡೆದರು. ಪ್ಯಾಟ್ ಕಮಿನ್ಸ್ ಎರಡು ವಿಕೆಟ್ ಪಡೆದರೆ, ನಾಥನ್ ಲಿಯಾನ್ ಒಂದು ವಿಕೆಟ್ ಪಡೆದರು. ತಂಡದ ಪರ ಇನ್ನಿಂಗ್ಸ್ ಆರಂಭಿಸಿದ ಕೆಎಲ್ ರಾಹುಲ್ ಕೇವಲ 4 ರನ್‌ಗಳಿಗೆ ಸುಸ್ತಾದರು. ರಾಹುಲ್ ಔಟಾದ ಬೆನ್ನಲ್ಲೇ ಸ್ಕಾಟ್ ಬೋಲ್ಯಾಂಡ್ ಬೌಲಿಂಗ್‌ನಲ್ಲಿ 10 ರನ್ ಕಲೆಹಾಕಿದ್ದ ಯಶಸ್ವಿ ಜೈಸ್ವಾಲ್ ಕೂಡ ವಿಕೆಟ್ ಒಪ್ಪಿಸಿದರು. ಹೀಗಾಗಿ ತಂಡಕ್ಕೆ ಆರಂಭದಲ್ಲೇ ಆಘಾತ ಎದುರಾಯಿತು.

# ವಿಕೆಟ್ ಉರುಳಿಸಿ ತಿರುಗೇಟು ಕೊಟ್ಟ ಬುಮ್ರಾ

ಸಿಡ್ನಿಯಲ್ಲಿ ನಡೆಯುತ್ತಿರುವ ಐದನೇ ಟೆಸ್ಟ್ ಪಂದ್ಯದಲ್ಲಿ ಟೀಂ ಇಂಡಿಯಾವನ್ನು 185 ರನ್‌ಗಳಿಗೆ ಆಲೌಟ್ ಮಾಡಿ ತನ್ನ ಮೊದಲ ಇನ್ನಿಂಗ್ಸ್ ಆರಂಭಿಸಿರುವ ಆತಿಥೇಯ ಆಸ್ಟ್ರೇಲಿಯಾ ಕೂಡ ಮೊದಲ ದಿನದಾಟದಂತ್ಯಕ್ಕೆ 1 ವಿಕೆಟ್ ಕಳೆದುಕೊಂಡು 9 ರನ್ ಕಲೆಹಾಕಿದೆ. ತಂಡದ ಪರ ಆರಂಭಿಕನಾಗಿ ಕಣಕ್ಕಿಳಿದಿದ್ದ ಉಸ್ಮಾನ್ ಖವಾಜಾ ಕೇವಲ 2 ರನ್ ಕಲೆಹಾಕಲಷ್ಟೇ ಶಕ್ತರಾಗಿ ಜಸ್ಪ್ರೀತ್ ಬುಮ್ರಾ ಬೌಲಿಂಗ್‌ನಲ್ಲಿ ಸ್ಲಿಪ್‌ನಲ್ಲಿ ನಿಂತಿದ್ದ ರಾಹುಲ್‌ಗೆ ಕ್ಯಾಚಿತ್ತು ವಿಕೆಟ್ ಒಪ್ಪಿಸಿದರು. ಆದರೆ ಖವಾಜಾ ಅವರ ವಿಕೆಟ್ ಪತನಕ್ಕೂ ಮುನ್ನ ಮೈದಾನದಲ್ಲಿ ನಡೆದ ಅದೊಂದು ಘಟನೆ ಇಡೀ ದಿನದ ಹೈಲೆಟ್ ಆಗಿತ್ತು. ಸುಖಾಸುಮ್ಮನೆ ಬುಮ್ರಾ ಜೊತೆಗೆ ಕಾಲ್ಕೆರೆದು ಜಗಳಕ್ಕೆ ಹೋದ ಆಸೀಸ್ ಯುವ ಆಟಗಾರ ಸ್ಯಾಮ್ ಕೊನ್‌ಸ್ಟಾಸ್‌ಗೆ ಬುಮ್ರಾ ತಕ್ಕ ತಿರುಗೇಟು ನೀಡಿದ್ದಾರೆ. ಇದೀಗ ಅದರ ವಿಡಿಯೋ ಎಲ್ಲೆಡೆ ಸಖತ್ ವೈರಲ್ ಆಗುತ್ತಿದೆ.

**ಕೊನೆಯ ಓವರ್‌ನಲ್ಲಿ ಘಟನೆ**

ವಾಸ್ತವವಾಗಿ ಮೊದಲ ದಿನದಾಟ ಮುಗಿಯುವುದಕ್ಕೆ ಇನ್ನೊಂದು ಓವರ್ ಬಾಕಿ ಇರುವಾಗ ಕೊನೆಯ ಓವರ್ ಬೌಲ್ ಮಾಡುವ ಜವಬ್ದಾರಿಯನ್ನು ನಾಯಕ ಬುಮ್ರಾ ತೆಗೆದುಕೊಂಡರು. ಈ ವೇಳೆ ಓವರ್‌ನ ಮೊದಲ ಮೂರು ಎಸೆತಗಳನ್ನು ಎದುರಿಸಿದ ಕೊನ್‌ಸ್ಟಾಸ್ ಮೂರನೇ ಎಸೆತದಲ್ಲಿ ಸಿಂಗಲ್ ತೆಗೆದುಕೊಳ್ಳುವ ಮೂಲಕ ನಾನ್ ಸ್ಟ್ರೈಕ್‌ಗೆ ಬಂದರು. 4ನೇ ಎಸೆತವನ್ನು ಎದುರಿಸಿದ ಖವಾಜಾಗೆ ಯಾವುದೇ ರನ್ ಕದಿಯಲು ಸಾಧ್ಯವಾಗಲಿಲ್ಲ. ಈ ವೇಳೆ ಐದನೇ ಎಸೆತವನ್ನು ಬೌಲ್ ಮಾಡಲು ಬುಮ್ರಾ ಮುಂದಾದರು. ಆದರೆ ಸ್ಟ್ರೈಕ್‌ನಲ್ಲಿದ್ದ ಖವಾಜಾ ಇನ್ನು ಬ್ಯಾಟಿಂಗ್‌ಗೆ ಸಿದ್ದರಿರಲಿಲ್ಲ.



ಹೀಗಾಗಿ ಸ್ವಲ್ಪ ಸಮಯ ಕಾಯ್ದ ಬುಮ್ರಾ ಮತ್ತೆ ಬೌಲಿಂಗ್ ಮಾಡಲು ಮುಂದಾದರು. ಆಗಲೂ ಖವಾಜಾ ಸಿದ್ದರಿರಲಿಲ್ಲ. ಇದರಿಂದ ಕೋಪಗೊಂಡ ಬುಮ್ರಾ, ನೀನು ಸಿದ್ದನಾಗಲು ಎಷ್ಟು ಸಮಯ ಬೇಕಪ್ಪ ಎಂಬರ್ಥದಲ್ಲಿ ಸನ್ನೆ ಮಾಡುವ ಮೂಲಕ ಅಸಮಾಧಾನ ಹೊರಹಾಕಿದ್ದರು. ಈ ವೇಳೆ ನಾನ್ ಸ್ಟ್ರೈಕ್‌ನಲ್ಲಿ ನಿಂತಿದ್ದ ಕೊನ್‌ಸ್ಟಾನ್ ಸುಮ್ಮನೆ ತನ್ನ ಪಾಡಿಗೆ ತಾನು ಇರದೆ, ಬುಮ್ರಾ ಜೊತೆಗೆ ಜಗಳಕ್ಕೆ ಹೋದರು. ಇದನ್ನು ನೋಡಿದ ಬುಮ್ರಾ ಕೂಡ ಬೌಲಿಂಗ್ ಮಾಡುವುದನ್ನು ಬಿಟ್ಟು ಕೊನ್‌ಸ್ಟಾನ್ ಬಳಿಗೆ ಬಂದು ಮಾತನಾಡಲಾರಂಭಿಸಿದರು. ಬುಮ್ರಾಗೆ ತಂಡದ ಇತರ ಆಟಗಾರರು ಸಾಥ್ ನೀಡಿದರು. ಅಷ್ಟರಲ್ಲಿ ಮಧ್ಯ ಪ್ರವೇಶಿಸಿದ ಅಂಪೈರ್‌ಗಳು ವಾತಾವರಣನ್ನು ತಿಳಿಗೊಳಿಸಿ ಮತ್ತೆ ಆಟವನ್ನು ಆರಂಭಿಸಿದರು.



Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA,
No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966